ಸಂಪುಟ: 05 ಸಂಚಿಕೆ: 221 ಪುಟಗಳು: 08 ಭಾನುವಾರ 26 ಅಕ್ಟೋಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ನೀವು ಉತ್ತಮವಾಗಿ ಕಾರ್ಯನಿರ್ವಹಿಸಬೇಕೆಂದು ಜನರು ಬಯಸುತ್ತಾರೆ. ಆದರೆ ನೀವು ಅವರಿಗಿಂತ ಉತ್ತಮವಾಗಿ ಕಾರ್ಯನಿರ್ವಹಿಸಬೇಕೆಂದು ಅವರು ಎಂದಿಗೂ ಬಯಸುವುದಿಲ್ಲ

# ಉದಯ ವಾಹಿನಿ

ಸರ್ವ ಸಮಾನತೆಯ
ಕನ್ನಡ ದಿನಪತ್ರಿಕೆ

ಉದಯ ವಾಹಿನಿ
ವರದಿಗಾರರು ಬೇಕಾಗಿದ್ದಾರೆ
ಎಂಎ., ಜರ್ನಲಿಸಂ ಮಾಡಿರುವಂತಹ ಉತ್ಸಾಹಿ ಯುವಕ ಯುವತಿಯರು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟಗಳಲ್ಲಿ ಕೆಲಸ ಮಾಡುವಂತಹ
ರಾಜ್ಯದಾದ್ಯಂತ ವರದಿಗಾರರು ಬೇಕಾಗಿದ್ದಾರೆ
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
9448225696
+91 8035841833
#: 1230 'JAYAMAHAL 13th cross, 2nd phase, Girinagar, Bangalore-560085. (Near to Bangalore one park, opposite mandya medical)
udayavahininews@gmail.com

## ಚಾಮುಂಡಿ ತಾಯಿಯ ಕ್ಷಮೆ ಕೇಳು: ಪ್ರತಾಪ್ ಸಿಂಹಗೆ ಪ್ರದೀಪ್ ಈಶ್ವರ್ ಆಗ್ರಹ

• ಉದಯವಾಹಿನಿ, ಬೆಂಗಳೂರು

ಮೈಸೂರಿನ ಮಾಜಿ ಸಂಸದ ಪ್ರತಾಪ್ ಸಿಂಹ ನನ್ನ ತಾಯಿಯ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ್ದಾರೆ. ಅವರು ಕ್ಷಮೆ ಕೇಳಬೇಕು ಎಂದು ಶಾಸಕ ಪ್ರದೀಪ್ ಈಶ್ವರ್ ಆಗ್ರಹಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಮೈಸೂರು ಮಾಜಿ ಎಂಪಿ ನನ್ನ ತಾಯಿಗೆ ಅವಮಾನ ಮಾಡಿದ್ದಾರೆ. ನನ್ನ ತಾಯಿ ಸ್ವರ್ಗದಲ್ಲಿ ಇದ್ದಾರೆ. ನೀನು ಅಲ್ಲಿಗೆ ಹೋಗಿ ಕ್ಷಮೆ ಕೇಳಬೇಡ. ಅಲ್ಲಿಯೇ ನಿಮ್ಮ ಮನೆಯಿಂದ ಹೊರ ಬಂದರೆ ಚಾಮುಂಡಿ ತಾಯಿ ದೇವಸ್ಥಾನ ಇದೆ. ಅಲ್ಲಿಗೆ ಹೋಗಿ ಕ್ಷಮೆ ಕೇಳು. ಇಲ್ಲ ಅಂದ್ರೆ, ನಿಮ್ಮ ಮನೆಯಲ್ಲಿ ಸೀತಾದೇವಿ




ಫೋಟೋ ಇದ್ರೆ, ಅಲ್ಲಿಯೇ ಕ್ಷಮೆ ಕೇಳು. ನನ್ನ ತಾಯಿ ಸೀತೆಯಷ್ಟೆ ಶ್ರೇಷ್ಠಳು ಎಂದಿದ್ದಾರೆ. ಪ್ರತಾಪ್ ಸಿಂಹ ನನ್ನ ಬಗ್ಗೆ

**ಹೆಣ್ಣುಮಗಳಿಗೆ ಮಾಡಿದ ಅಪಮಾನ**

ಏನೇನೋ ಮಾತನಾಡ್ತಾರೆ. ಅಪ್ಪಂದು ಬಗ್ಗೆ ಮಾತನಾಡ್ತಾರೆ. ನೀನು ತ್ರಿಪುರ ಸುಂದರನಾ ಗುರು. ಕತ್ತಲಲ್ಲಿ ಅವನು ಕಾಣಿಸಲ್ಲ ಅಂದ. ನಾನು ಅದಕ್ಕೆ ಏನೂ ಹೇಳಿಲ್ಲ. ನಿಮಗೆ ನನ್ನನ್ನು ಹುಡುಕವಷ್ಟು ಬರನಾ ಅಂದೆ. ಚಾಟ್ ಜಿಪಿಟಿಯಲ್ಲಿ ಹಾಕು ಬೇಕಾದ್ರೆ. ನೀನು ನನ್ನ ತಾಯಿ ಬಳಿ ಕ್ಷಮೆ ಕೇಳು ಅವರು ಕ್ಷಮಿಸಿಸುತ್ತಾರೆ ಎಂದು ಟಾಂಗ್ ಕೊಟ್ಟಿದ್ದಾರೆ.

ನಾನು ನಮ್ಮ ಊರಿಗೆ ಏನೆಲ್ಲ ಮಾಡಿದೀನಿ. ಇವರ ತರಹ ಟೀ-ಕಾಪಿ ಹೋಗಿ ಕುಡಿಯಲ್ಲ, ದಿನಗಟ್ಲೆ ಹಳ್ಳಿಯಲ್ಲಿ ಇರುತ್ತೇನೆ. ನೀವು ಒಂದು ಕಲ್ಲು ಹಾಕಿದ್ರೆ, ನಾವು ಎರಡು ಕಲ್ಲು ಹಾಕ್ತೇವೆ. ಕರ್ನಾಟಕ ತಾಯಂದಿರೇ ನೀವು ಪ್ರತಾಪ್ ಕ್ಲಿಪ್ಪಿಂಗ್ ಮತ್ತು ನನ್ನ ಕ್ಲಿಪ್ಪಿಂಗ್ ನೋಡಿ. ಅವರು ಎಲ್ಲಾ ತಾಯಂದಿರಿಗೆ, ಒಬಿಸಿ ಹೆಣ್ಣುಮಗಳಿಗೆ ಮಾಡಿದ ಅಪಮಾನ. ಕೂಡಲೇ ನನ್ನ ತಾಯಿ ಮಂಜುಳಾಗೆ ತಕ್ಷಣ ಕ್ಷಮೆ ಕೇಳು ಪ್ರತಾಪ್ ಸಿಂಹ ಎಂದು ಆಕ್ರೋಶ ಹೊರಹಾಕಿದ್ದಾರೆ.



ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚರ್ಚೆ, ವಾದ - ವಿವಾದ ಇರಬೇಕು. ಹಿಟ್ ಅಂಡ್ ರನ್, ಬ್ಲ್ಯಾಕ್ ಮೇಲ್ ಮಾಡುವುದಲ್ಲ. ಕುಮಾರಸ್ವಾಮಿ ನನ್ನ ವಿರುದ್ಧ ಇರುವ ದಾಖಲೆ ತಂದು ಬಹಿರಂಗ ಚರ್ಚೆಯಲ್ಲಿ ಭಾಗವಹಿಸಲಿ ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ತಿರುಗೇಟು ನೀಡಿದ್ದಾರೆ.



# ಏಟು ಎದುರೇಟು ಉಭಯ ನಾಯಕರ ತಿರುಗೇಟು

**ಎ ಖಾತೆ ಸ್ಕೀಂಗೆ ಮರುಳಾಗಬೇಡಿ**

**ಹಿಟ್ ಅಂಡ್ ರನ್, ಬ್ಲ್ಯಾಕ್ ಮೇಲ್ ಮಾಡುವುದಲ್ಲ , ಬಹಿರಂಗ ಚರ್ಚೆಗೆ ಬಂದು ದಾಖಲೆ ಸಮೇತ ಮಾತನಾಡಲಿ**

• ಉದಯವಾಹಿನಿ, ಬೆಂಗಳೂರು

ಕುಮಾರಸ್ವಾಮಿ ಬಳಿ ಸಾಕ್ಷಿಗುಡ್ಡೆ ಇದ್ದರೆ, ಜನಕ್ಕೆ, ರಾಜ್ಯಕ್ಕೆ ಒಳ್ಳೆಯದು ಮಾಡಿದ್ದರೆ ಅದನ್ನು ದಾಖಲೆ ಸಮೇತ ಬಂದು ಹೇಳಲಿ. ಜನ ಅವರಿಗೆ ಮತ ಕೊಟ್ಟು ದೊಡ್ಡ ಹುದ್ದೆ ನೀಡಿದ್ದಾರೆ. ಸಾರ್ವಜನಿಕವಾಗಿ ಬಂದು ಉತ್ತರ ನೀಡಲಿ. ಕೇವಲ ಸುಳ್ಳು ಆರೋಪ ಮಾಡುತ್ತಾ, ಬೇರೆಯವರಿಗೆ ಹೆದರಿಸುತ್ತಾ ಹೋಗುವುದಲ್ಲ. ಸದನದಲ್ಲಿ ಜೇಬು ತೋರಿಸಿ ಪೆನ್ ಡ್ರೈವ್ ತೆಗೆಯುತ್ತೇನೆ, ತೆಗೆಯುತ್ತೇನೆ ಎಂದು ಹೇಳಿದಂತೆ ಅಲ್ಲ. ಬಹಿರಂಗ ಚರ್ಚೆಗೆ ಬರಲಿ. ಇದರಲ್ಲಿ ಅವಮಾನ ಆಗುವಂತದ್ದು ಏನೂ ಇಲ್ಲ ಎಂದರು.

**ಎರಡು ವರ್ಷಗಳ ಬಳಿಕ ನಮ್ಮ ಸರ್ಕಾರ ಬರಲಿದೆ**

**ಎರಡು ವರ್ಷಗಳ ಬಳಿಕ ನಮ್ಮ ಸರ್ಕಾರ ಬರಲಿದೆ. ಇನ್ನು ಎರಡು ವರ್ಷ ಕಾಯಿರಿ. ರಾಜ್ಯದ ಜನರು ಯಾವಾಗ ಚುನಾವಣೆ ಬರುತ್ತದೆ ಎಂದು ಜನ ಕಾಯುತ್ತಿದ್ದಾರೆ. ಯಾರ ಸರ್ಕಾರ ಬರುತ್ತದೆ ಅಂತ ಜನರು ನಿರ್ಧಾರ ಮಾಡುತ್ತಾರೆ. ನಾನು ಯಾವ ಕ್ರಾಂತಿ ಬಗ್ಗೆ ಮಾತಾಡಿಲ್ಲ. ನನಗೆ ಕ್ರಾಂತಿ- ವಾಂತಿ -ಬ್ರಾಂತಿ ಯಾವುದೂ ಇಲ್ಲ. ಕುಮಾರಸ್ವಾಮಿ ಮುಗಿದೇ ಹೋದ್ರು ಅಂತ ತುಂಬಾ ಜನ ಅಂದುಕೊಂಡಿದ್ರು. ಆದರೆ ನಾನು ಆರೋಗ್ಯವಾಗಿ ಮರಳಿ ಬಂದಿದ್ದೇನೆ. ಜನರ ಆಶೀರ್ವಾದ ನನ್ನ ಮೇಲಿದೆ. ಜನ ಚುನಾವಣೆಗೆ ಕಾಯ್ತಾ ಇದ್ದಾರೆ. ಇನ್ನೆರಡು ವರ್ಷದಲ್ಲಿ ಇದಕ್ಕೆ ಉತ್ತರ ಸಿಗುತ್ತೆ. ಬಿಜೆಪಿ ಜೆಡಿಎಸ್ ಮೈತ್ರಿಯಲ್ಲಿ ಯಾವುದೇ ಬಿರುಕಿಲ್ಲ. ಸಮಸ್ಯೆಯೂ ಇಲ್ಲ. ಅಬಾಧಿತವಾಗಿ ಮೈತ್ರಿ ಮುಂದುವರಿಯಲಿದೆ ಎಂದು ತಿಳಿಸಿದರು.**

ಅವರು ಸಿಎಂ ಆಗಿದ್ದಾಗ ನಾನು ಸಾತನೂರಿಗೆ ಚರ್ಚೆಗೆ ಹೋಗಲಿಲ್ಲವೇ?, ನಾನು ಏನು ಮಾಡಿದ್ದೇನೆ, ನನ್ನ ಹುಳುಕು ಏನಿದೆ ಎಂಬುದನ್ನು ನೀನು ಹೇಳು, ನಿನ್ನದು ಏನಿದೆ ಎಂದು ನಾನು ಹೇಳುತ್ತೇನೆ. ನಂತರ ಜನ ತೀರ್ಮಾನ ಮಾಡುತ್ತಾರೆ. ಅವರು ನನ್ನ ಯಾವ ವಿಚಾರ ಬಿಚ್ಚಿಡುತ್ತಾರೋ ಬಿಚ್ಚಿಡಲಿ. ಅವರ ಬಳಿಯೇ ಕೇಂದ್ರ ಸರ್ಕಾರ ಇದೆಯಲ್ಲ. ಈ ಡಿ. ಕೆ. ಶಿವಕುಮಾರ್ ಅದಕ್ಕೆಲ್ಲಾ ಹೆದರುವ ಮಗ ಅಲ್ಲ ಎಂದು ಪುನರುಚ್ಚರಿಸಿದರು.

ಜೆಡಿಎಸ್ 8-9 ಸ್ಥಾನಕ್ಕೆ ಕುಸಿಯುತ್ತೆ: ಎರಡೂವರೆ ವರ್ಷಗಳ ನಂತರ ನಮ್ಮ ಸರ್ಕಾರ ಬರುತ್ತದೆ ಎಂಬ ಕುಮಾರಸ್ವಾಮಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, ಈ ಡೈಲಾಗ್ ಎಷ್ಟು ಸಾರಿ ಹೇಳಿ ಆಗಿದೆ. ಕೇಳಿ, ಕೇಳಿ ಸಾಕಾಗಿದೆ. ಇವರ ನಾಯಕತ್ವದಲ್ಲಿ ಇವರ ಪಕ್ಷ 18 ಸ್ಥಾನಕ್ಕೆ ಇಳಿದಿದೆ. ಮುಂದಿನ ಬಾರಿ 8 ಅಥವಾ 9 ಸ್ಥಾನಗಳಿಗೆ ಕುಸಿಯಲಿದೆ ಎಂದು ತಿರುಗೇಟು ನೀಡಿದರು.

ಎ ಖಾತಾ ಹಾಗೂ ಬಿ ಖಾತಾ ಪರಿವರ್ತನೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂಬ ಜೆಡಿಎಸ್ ಆರೋಪದ ಬಗ್ಗೆ ಹೇರೋಹಳ್ಳಿಯ ಭರತ್ ನಗರ ಗಾಂಧಿ ಉದ್ಯಾನವನದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಹಿರಂಗ ಚರ್ಚೆಗೆ ಬನ್ನಿ ಎಂದು ನಾನು ಕರೆಯುತ್ತಲೇ ಇದ್ದೇನೆ. ಎ ಖಾತಾ, ಬಿ ಖಾತಾ ವಿಚಾರದಲ್ಲಿ ಯಾವ ಭ್ರಷ್ಟಾಚಾರ ನಡೆಯುತ್ತಿದೆ..? ಬೆಂಗಳೂರು ನಾಗರಿಕರ ಆಸ್ತಿ ದಾಖಲೆ ಸರಿಪಡಿಸಿಕೊಳ್ಳಲು, ಅವರಿಗೆ ಮುಂದೆ ಬ್ಯಾಂಕ್ ಸಾಲ ಹಾಗೂ ಇತರೆ ಸೌಲಭ್ಯ ಸಿಗಬೇಕು. ಜನರಿಗೆ ಉತ್ತಮ ಸೌಕರ್ಯ ಒದಗಿಸಬೇಕು, ಜನರು ತೆರಿಗೆ ಪಾವತಿಸುವಂತಾಗಬೇಕು ಎಂಬ ಉದ್ದೇಶದಿಂದ ನಾವು ಈ ಯೋಜನೆ ಮಾಡುತ್ತಿದ್ದೇವೆ ಎಂದಿದ್ದಾರೆ.

**ಸುರಂಗ ರಸ್ತೆ ಮಾಡುತ್ತಿರುವುದೇಕೆ..?**

**ಸಾವಿರಾರು ವರ್ಷದ ಇತಿಹಾಸವಿರುವ ಜಾಗ ಎಂಬ ತೇಜಸ್ವಿ ಸೂರ್ಯ ಹೇಳಿಕೆಗೆ ಪ್ರತಿಕ್ರಿಯಿಸುತ್ತಾ, ಸುರಂಗ ರಸ್ತೆಯನ್ನು ಭೂಮಿಯ ಒಳಗೆ ಕೊರೆಯಲಾಗುವುದು. ಹೊರಗೆ ಮಾಡಲು ಆಗುವುದಿಲ್ಲ. ಅವರ ಮಾತು ಕೇಳಿಕೊಂಡು ಯೋಜನೆ ನಿಲ್ಲಿಸಲು ಆಗುವುದಿಲ್ಲ. ಹಾಗಿದ್ದರೆ ಮುಂಬೈನಲ್ಲಿ ಏಕೆ ಭೂಮಿ ಕೊರೆದು ಸುರಂಗ ರಸ್ತೆ ಮಾಡುತ್ತಿದ್ದಾರೆ. ದೆಹಲಿಯಲ್ಲಿ ಯಾಕೆ ಮಾಡುತ್ತಿದ್ದಾರೆ. ಯಾವುದೇ ಸಂದರ್ಭದಲ್ಲಿ ನಾನು ಆತನ ಮಾತಿಗೆ ಬಾಗುವುದಿಲ್ಲ. ಹೋರಾಟ ಮಾಡುವವರು ಮಾಡುತ್ತಾರೆ. ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ. ನಾವು ಜನರಿಗಾಗಿ ಕೆಲಸ ಮಾಡುತ್ತಿದ್ದೇವೆ. ಅವರ ಕಾಲದಲ್ಲಿ ಬೆಂಗಳೂರಿಗಾಗಿ ಯಾವುದೇ ಒಳ್ಳೆಯ ಕೆಲಸ ಮಾಡಲು ಆಗಲಿಲ್ಲ. ತೇಜಸ್ವಿ ಸೂರ್ಯ ಎಂದರೆ ಖಾಲಿ ಟ್ರಂಕ್ ಎಂದು ಡಿಸಿಎಂ ಟೀಕಿಸಿದರು.**

**ಜಿಬಿಎ ರದ್ದುಗೊಳಿಸುವುದು ಬಿಜೆಪಿ ಹಣೆಯಲ್ಲಿ ಬರೆದಿಲ್ಲ**

**ಬಿಜೆಪಿ ಅಧಿಕಾರಕ್ಕೆ ಬಂದರೆ ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು ರದ್ದು ಮಾಡುವುದಾಗಿ ಹೇಳುತ್ತಿದೆ ಎಂದಾಗ, ಅವರು ಅಧಿಕಾರಕ್ಕೆ ಬಂದಾಗ, ಏನು ಬೇಕಾದರೂ ಮಾಡಲಿ. ಅಧಿಕಾರಕ್ಕೆ ಬರುವುದು, ಜಿಬಿಎ ರದ್ದುಗೊಳಿಸುವುದು ಅವರ ಹಣೆಯಲ್ಲಿ ಬರೆದಿಲ್ಲ. ಇದು ಹೀಗೆ ಮುಂದುವರಿಯಲಿದೆ. ಅವರಿಗೆ ಜಿಬಿಎ ಬೇಡವಾದರೆ ಅವರು ಮುಂಬರುವ ಪಾಲಿಕೆಗಳ ಚುನಾವಣೆಯನ್ನು ಬಹಿಷ್ಕರಿಸಲಿ. ಚುನಾವಣೆಯಿಂದ ಹಿಂದೆ ಸರಿಯಲಿ ನೋಡೋಣ. ಅವರ ಕಾರ್ಯಕರ್ತರೆಲ್ಲರೂ ಚುನಾವಣೆಯಲ್ಲಿ ಸ್ಪರ್ಧಿಸಲು ಸಿದ್ಧರಾಗುತ್ತಿದ್ದಾರೆ ಎಂದರು. ಸುರಂಗ ರಸ್ತೆಗೆ ಸಂಸದ ತೇಜಸ್ವಿ ಸೂರ್ಯ ಅವರ ವಿರೋಧದ ಬಗ್ಗೆ ಪ್ರತಿಕ್ರಿಯಿಸುತ್ತಾ, ಯಾರೂ ಏನಾದರೂ ವಿರೋಧ ಮಾಡಿಕೊಳ್ಳಲಿ. ನಾನು ತಲೆಕೆಡಿಸಿಕೊಳ್ಳುವುದಿಲ್ಲ. ಅವರು ನ್ಯಾಯಾಲಯದಲ್ಲಿ ಅರ್ಜಿ ಹಾಕಿದ್ದಾರೆ. ಸರ್ಕಾರ ಉತ್ತಮ ಕೆಲಸ ಮಾಡಿ ಹೆಸರು ಮಾಡಬಾರದು ಎಂಬುದು ಅವರ ಉದ್ದೇಶ. ನಾನು ಈ ಯೋಜನೆಗೆ ಯಾವುದೇ ಜಮೀನನ್ನು ಸ್ವಾಧೀನಪಡಿಸಿಕೊಳ್ಳುತ್ತಿಲ್ಲ. ಒಂದು ಸಣ್ಣ ಭಾಗದಲ್ಲಿ ಈ ರಸ್ತೆ ಹಾದುಹೋಗುತ್ತದೆ. ಇದನ್ನು ಪರಿಶೀಲನೆ ಮಾಡುತ್ತೇನೆ.**

**ಇದು ಮತ್ತೊಂದು ಟೋಪಿ ಹಾಕುವ ಕೆಲಸ**

ರಾಜ್ಯ ಸರ್ಕಾರ ಆರನೇ ಗ್ಯಾರಂಟಿಯಾಗಿ ಆಸ್ತಿಗೆ ಎ ಖಾತೆ ಕೊಡುವ ಮೂಲಕ ನಾಗರೀಕರಿಗೆ ದೀಪಾವಳಿಯ ಉಡುಗೊರೆಯಾಗಿ ನೀಡಿದ್ದೇವೆ ಎಂದು ಡಿಸಿಎಂ, ಸಿಎಂ ಜಾಹೀರಾತು ನೀಡುತ್ತಿದ್ದಾರೆ. ಇದು ಮತ್ತೊಂದು ನಾಡಿನ ಜನತೆಗೆ ಟೋಪಿ ಹಾಕುವ ಕೆಲಸವಾಗಿದೆ. 1995ರಿಂದ ಬಿ ಖಾತೆ ಸಮಸ್ಯೆಯನ್ನು ಬೆಂಗಳೂರಿಗರು ಅನುಭವಿಸುತ್ತಿದ್ದಾರೆ. 2003ರಲ್ಲಿ ಏಳು ನಗರಸಭೆ ಮಾಡಲು ತೀರ್ಮಾನ ಆಯ್ತು. ಅಭಿವೃದ್ಧಿ ಕಂಡಿಲ್ಲ ಅಂತ ಈ ತೀರ್ಮಾನ ಮಾಡಲಾಯಿತು. ವ್ಯವಸಾಯೇತರ ಯೋಜನೆಗೆ ಪರಿವರ್ತನೆ ಮಾಡಲು ಈ ಕ್ರಮ ಕೈಗೊಳ್ಳಲಾಯಿತು. 1997ರಲ್ಲಿ ನಮ್ಮ ಸರ್ಕಾರ ಇದ್ದಾಗ ಪ್ರತಿ ಚದರ್ ಅಡಿಗೆ 110 ರೂ. ಬೆಟರ್ ಮೆಂಟ್ ಶುಲ್ಕ ನಿಗದಿ ಮಾಡಿ ಖಾತೆ ವಿತರಣೆ ಮಾಡಲಾಗುತ್ತಿತ್ತು. ಅದರಂತೆ 30ಫ40 ನಿವೇಶನ ಸಕ್ರಮಕ್ಕೆ ಸುಮಾರು 12,260 ರೂ. ಆಗುತ್ತಿತ್ತು. ಭೂ ಪರಿವರ್ತನೆ ಶುಲ್ಕವಾಗಿ 1500 ರೂ. ವಿಧಿಸಲಾಗುತ್ತಿತ್ತು ಎಂದರು.2007ರಲ್ಲಿ ಏಳು ನಗರ ಸಭೆಗಳಲ್ಲಿ ಸ್ವೇಚ್ಛಾಚಾರವಾಗಿ ನಕ್ಷೆ ಮಂಜೂರಾತಿ ನೀಡಲಾಗುತ್ತಿತ್ತು. ನಗರಸಭೆಗಳಲ್ಲಿ ಇಷ್ಟ ಬಂದ ಹಾಗೇ ಪ್ಲಾನ್ ಮಂಜೂರಾತಿ ಮಾಡಲಾಗುತ್ತಿತ್ತು.

## ಕುಕ್ಕೆ ಸುಬ್ರಹ್ಮಣ್ಯ ದೇಗುಲ: ವೇತನ ಪರಿಷ್ಕರಣೆಗೆ ಹೈಕೋರ್ಟ್ ನಿರ್ದೇಶನ

• ಉದಯವಾಹಿನಿ, ಬೆಂಗಳೂರು

ದ. ಕನ್ನಡ ಜಿಲ್ಲೆಯ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ 2018ರ ಏಪ್ರಿಲ್‌ನಿಂದ ಅನ್ವಯವಾಗುವಂತೆ ಆರನೇ ವೇತನ ಆಯೋಗದ ಶಿಫಾರಸಿಗೆ ಅನುಗುಣವಾಗಿ ವೇತನ ಪರಿಷ್ಕರಣೆ ಮಾಡುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ. ಈ ಸಂಬಂಧ ಏಕಸದಸ್ಯ ನ್ಯಾಯಪೀಠದ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿ ಮತ್ತು ಏಕಸದಸ್ಯ ನ್ಯಾಯಪೀಠದ ಆದೇಶ ಜಾರಿ ಮಾಡದಿರುವ ಸರ್ಕಾರದ ಕ್ರಮವನ್ನು ಪ್ರಶ್ನಿಸಿ ಕುಕ್ಕೆ ಸುಬ್ರಹ್ಮಣ್ಯ ದೇವಾಲಯದಲ್ಲಿ ಎಂಜಿನಿಯರ್ ಆಗಿ ಸೇವೆ ಸಲ್ಲಿಸುತ್ತಿರುವ ಕೆ.ಸಿ.ಉದಯ್ ಕುಮಾರ್ ಮತ್ತಿತರರು ಸಲ್ಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಅನು ಶಿವರಾಮನ್ ಮತ್ತು ನ್ಯಾಯಮೂರ್ತಿ ವಿಜಯ್ ಕುಮಾರ್ ಎ.ಪಾಟೀಲ್ ಅವರಿದ್ದ ವಿಭಾಗೀಯ ನ್ಯಾಯಪೀಠ ಈ ಕುರಿತಂತೆ ಆದೇಶಿಸಿದೆ.

## ರಾಜಕೀಯವಾಗಿ ಬೆಳೆಸಿದವರು ಯಾರೆಂದು ಛಲವಾದಿ ಹೇಳಲಿ

• ಉದಯವಾಹಿನಿ, ಬೆಂಗಳೂರು

ತಮ್ಮನ್ನು ರಾಜಕೀಯವಾಗಿ ಬೆಳೆಸಿದ್ದು ಯಾರು ಎಂಬುದನ್ನು ಛಲವಾದಿ ನಾರಾಯಣ ಸ್ವಾಮಿ ಹೇಳಬೇಕು' ಎಂದು ಕೆಪಿಸಿಸಿ ಮಾಧ್ಯಮ ವಿಭಾಗದ ಮುಖ್ಯಸ್ಥ ರಮೇಶ್ ಬಾಬು ಹೇಳಿದರು. ಸುದ್ದಿಗಾರರ ಜೊತೆ ಶನಿವಾರ ಮಾತನಾಡಿದ ರಮೇಶ್ ಬಾಬು, ಅವರು ಮಲ್ಲಿಕಾರ್ಜುನ ಖರ್ಗೆಯವರಿಂದ ಬೆಳೆದರೋ, ಬೇರೆಯವರಿಂದ ಬೆಳೆದರೋ ಎಂದು ತಿಳಿಸಬೇಕು' ಎಂದರು.

ಆರ್‌ಎಸ್‌ಎಸ್ ಕುರಿತು ಸಚಿವ ಪ್ರಿಯಾಂಕ್ ಖರ್ಗೆ ಅವರು ಮುಖ್ಯಮಂತ್ರಿಗೆ ಪತ್ರ ಬರೆದ ವಿಚಾರ ರಾಜ್ಯದಲ್ಲಿ ಅನೇಕ ಚರ್ಚೆಗಳಿಗೆ ಅವಕಾಶ ಮಾಡಿಕೊಟ್ಟಿದೆ. ಆರೋಗ್ಯಕರ ಚರ್ಚೆಗೆ ಕಾಂಗ್ರೆಸ್‌ನ ವಿರೋಧ ಇಲ್ಲ. ಆದರೆ, ವ್ಯಕ್ತಿಗತ ಟೀಕೆ, ತೇಜೋವಧೆ ಮಾಡಲಾಗುತ್ತಿದೆ. ಇದರ ಮುಂದುವರಿದ ಭಾಗವಾಗಿ ಛಲವಾದಿ ನಾರಾಯಣ ಸ್ವಾಮಿ ಅವರು ಪ್ರಿಯಾಂಕ್ ಖರ್ಗೆ ಅವರ ಬಗ್ಗೆ ಮಾತನಾಡಿದ್ದಾರೆ' ಎಂದರು. ಪ್ರಿಯಾಂಕ್ ಖರ್ಗೆ ಅಥವಾ ಮಲ್ಲಿಕಾರ್ಜುನ ಖರ್ಗೆ ಅವರು ಯಾವುದಾದರೂ ದಲಿತ ನಾಯಕರನ್ನು ಬೆಳೆಸಿದ್ದಾರೆಯೇ ಎಂದು ಛಲವಾದಿ ನಾರಾಯಣ ಸ್ವಾಮಿ ಪ್ರಶ್ನೆ ಕೇಳಿದ್ದಾರೆ. ಯಲಹಂಕದಲ್ಲಿ ಸೈಕಲ್ ತುಳಿದುಕೊಂಡಿದ್ದ ಅವರಿಗೆ ರಾಜಕೀಯವಾಗಿ ಆಶ್ರಯ ಕೊಟ್ಟವರು ಯಾರು ಎಂಬುದನ್ನು ಮೊದಲು ಹೇಳಲಿ' ಎಂದರು.

## ಸಂಪತ್ತಿನ ಸಣ್ಣ ಪಾಲು ಸಮಾಜಕ್ಕೆ ಬಳಸಿ: ಸಿಎಂ ಸಿದ್ದರಾಮಯ

• ಉದಯವಾಹಿನಿ, ಬೆಂಗಳೂರು

ವೈದ್ಯಕೀಯ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು, ಸಮಾಜಮುಖಿಯಾಗಿ ಕೆಲಸ ಮಾಡಬೇಕು. ಗಳಿಸುವ ಸಂಪತ್ತಿನ ಸಣ್ಣ ಪಾಲನ್ನು ಸಮಾಜದ ಒಳಿತಿಗಾಗಿ ಸದ್ಬಳಕೆ ಮಾಡಬೇಕು' ಎಂದು ಭವಿಷ್ಯದ ವೈದ್ಯರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಿವಿಮಾತು ಹೇಳಿದರು.

2025ರ ಶೈಕ್ಷಣಿಕ ಸಾಲಿನ ನೀಟ್ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದು ಸರ್ಕಾರಿ ಕೋಟಾದಲ್ಲಿ ವೈದ್ಯಕೀಯ ಕೋರ್ಸ್‌ಗೆ ಪ್ರವೇಶ ಪಡೆದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಸಂತ ನಗರದಲ್ಲಿರುವ ದೇವರಾಜ ಅರಸು ಭವನದಲ್ಲಿ ಕಾಳಿದಾಸ ಹೆಲ್ತ್ ಎಜುಕೇಶನ್ ಮತ್ತು ಅಹಿಲ್ಯಾ ಟ್ರಸ್ಟ್ ವತಿಯಿಂದ ಶನಿವಾರ ನಡೆದ ಪ್ರೇರಣಾ ಸಮಾರಂಭದಲ್ಲಿ ಅವರು ಮಾತನಾಡಿದರು. 'ವೈದ್ಯಕೀಯ ಶಿಕ್ಷಣಕ್ಕೆ ಪ್ರವೇಶ ಪಡೆದ ಪ್ರತಿಭಾವಂತ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುತ್ತಿರುವುದು ಉತ್ತಮ ಕಾರ್ಯ. ಎಂಬಿಬಿಎಸ್ ಶಿಕ್ಷಣಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡಿ ಪ್ರೋತ್ಸಾಹ ನೀಡಲಾಗುತ್ತಿದೆ. ಸಂಸ್ಥೆಯ ರೂವಾರಿಗಳು, ಉತ್ತಮ ಸಾಮಾಜಿಕ ಕೆಲಸದಲ್ಲಿ ತೊಡಗಿಕೊಂಡಿರುವುದು ಅನುಕರಣೀಯ' ಎಂದು ಪ್ರಶಂಸಿದರು.

## ರಾಜ್ಯ ಕಾಂಗ್ರೆಸ್‌ನಲ್ಲಿ ಮುಗಿಯುತ್ತಿಲ್ಲ ನಾಯಕತ್ವ ಬದಲಾವಣೆ ರಾದ್ಧಾಂತ!

# ಸಮಸ್ಯೆ ಬಗೆಹರಿಸಲು ಹೈಕಮಾಂಡ್ ಏಕಿಲ್ಲ ಧಾವಂತ?

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ಚರ್ಚೆ, ರಾದ್ದಾಂತ ಮುಗಿಯೋ ಲಕ್ಷಣಗಳು ಗೋಚರಿಸುತ್ತಿಲ್ಲ. ನಾಯಕತ್ವ ಬದಲಾವಣೆ ವಿಚಾರವಾಗಿ ನಾಯಕರು, ಶಾಸಕರು, ಸಚಿವರು ದಿನಕ್ಕೊಂದು ಹೇಳಿಕೆ ನೀಡುತ್ತಿದ್ದಾರೆ. ಸರ್ಕಾರ ಅಧಿಕಾರಕ್ಕೆ ಬಂದು ಎರಡುವರೆ ವರ್ಷಗಳು ಸಂದರೂ ನಾಯಕತ್ವ ಬದಲಾವಣೆ ಚರ್ಚೆಗೆ ಬ್ರೇಕ್ ಬಿದ್ದಿಲ್ಲ. ಹೀಗಿದ್ದರೂ ಕಾಂಗ್ರೆಸ್ ಹೈಕಮಾಂಡ್ ಮೌನ ನಡೆ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಸಮಸ್ಯೆ ಬಗೆಹರಿಸಲು ಹೈಕಮಾಂಡ್ ಏಕಿಲ್ಲ ಧಾವಂತ ತೋರಿಸುತ್ತಿಲ್ಲ ಎಂಬ ಪ್ರಶ್ನೆಯನ್ನು ಕಾಂಗ್ರೆಸ್ ಕಾರ್ಯಕರ್ತರು ಕೇಳುತ್ತಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಸಂದರ್ಭದಲ್ಲಿ ಸಿಎಂ ಯಾರು ಎಂಬ ಪ್ರಶ್ನೆ ಉದ್ಭವಿಸಿತ್ತು.

ಡಿಕೆ ಶಿವಕುಮಾರ್ ಅವರು ಸಿಎಂ ಸ್ಥಾನದ ರೇಸ್ ನಲ್ಲಿ ಇದ್ದರು. ಆದರೆ ಅಂತಿಮವಾಗಿ ಸಿದ್ದರಾಮಯ್ಯ ಅವರಿಗೆ ಹೈಕಮಾಂಡ್ ಪಟ್ಟ ಕಟ್ಟಿತ್ತು. ಆದರೆ ಡಿಕೆಶಿ ಸಿಎಂ ಆಗುವ ಕನಸು ಕೈಬಿಟ್ಟಿಲ್ಲ. ಇದೀಗ ಸರ್ಕಾರಕ್ಕೆ ಎರಡುವರೆ ವರ್ಷ ಆಗುತ್ತಿದೆ. ಈಗಲೂ ಡಿಕೆ ಶಿವಕುಮಾರ್ ರಾಜ್ಯದ ಮುಂದಿನ ಸಿಎಂ ಆಗಬೇಕು ಎಂಬ ನಿಟ್ಟಿನಲ್ಲಿ ಆಗ್ರಹಗಳು ಕೇಳಿಬರುತ್ತಿವೆ.



**ಹೈಕಮಾಂಡ್ ನಡೆ ಕುತೂಹಲ**

**ಸಚಿವರು, ಶಾಸಕರ ಹೇಳಿಕೆ ಗೊಂದಲ**

ಸಿಎಂ ಬದಲಾವಣೆಯ ಬಗ್ಗೆ ಸಚಿವರು ಹಾಗೂ ಶಾಸಕರು ನೀಡುತ್ತಿರುವ ಹೇಳಿಕೆಗಳು ಪಕ್ಷದ ಕಾರ್ಯಕರ್ತರಲ್ಲಿ ಗೊಂದಲಕ್ಕೆ ಎಡೆಮಾಡಿಕೊಟ್ಟಿದೆ. ಅಲ್ಲದೆ, ವಿಪಕ್ಷಗಳಿಗೆ ಇದು ಆಹಾರವಾಗಿದೆ. ಕೆಲವು ಸಚಿವರು ಸಿಎಂ ಆಗಿ ಸಿದ್ದರಾಮಯ್ಯ ಅವರು ಮುಂದುವರಿಯಬೇಕು ಎಂದು ಹೇಳುತ್ತಾರೆ. ಮತ್ತೆ ಕೆಲವು ಸಚಿವರು, ಶಾಸಕರು ಡಿಕೆ ಶಿವಕುಮಾರ್ ಅವರು ಸಿಎಂ ಆಗಬೇಕು ಎಂಬ ಆಗ್ರಹವನ್ನು ಮಾಡುತ್ತಿದ್ದಾರೆ.

**ಹೈಕಮಾಂಡ್ ಎಚ್ಚರಿಕೆಗೆ ಕ್ಯಾರೇ ಅಲ್ಲ**

ನಾಯಕತ್ವ ಬದಲಾವಣೆಯ ಬಗ್ಗೆ ಯಾರೂ ಮಾತನಾಡಬಾರದು ಎಂದು ಹೈಕಮಾಂಡ್ ಎಚ್ಚರಿಕೆ ನೀಡಿದೆ. ಈ ಹಿಂದೆ ಈ ಚರ್ಚೆ ತೀವ್ರ ಸ್ವರೂಪ ಪಡೆದುಕೊಂಡಾಗ ಹೈಕಮಾಂಡ್ ನಾಯಕತ್ವ ಮಧ್ಯಪ್ರವೇಶ ಮಾಡಿತ್ತು. ಆ ಸಂದರ್ಭದಲ್ಲಿ ತಕ್ಕಮಟ್ಟಿಗೆ ಈ ಚರ್ಚೆಗೆ ಬ್ರೇಕ್ ಬಿದ್ದಿತ್ತು. ಇದೀಗ ಮತ್ತೊಮ್ಮೆ ಅದು ತೀವ್ರ ಸ್ವರೂಪವನ್ನು ಪಡೆದುಕೊಂಡಿದೆ. ತಿಂಗಳ ಹಿಂದೆ ಹೈಕಮಾಂಡ್ ನಾಯಕರು ರಾಜ್ಯ ಕಾಂಗ್ರೆಸ್‌ಗೆ ಈ ಬಗ್ಗೆ ಯಾವುದೇ ಹೇಳಿಕೆಗಳು ನೀಡದಂತೆ ಎಚ್ಚರಿಕೆ ನೀಡಿದ್ದರು. ಹಾಗಿದ್ದರೂ ಇದಕ್ಕೆ ಬ್ರೇಕ್ ಬಿದ್ದಿಲ್ಲ. ಹೈಕಮಾಂಡ್ ಎಚ್ಚರಿಕೆಗೂ ಕೆಲವು ನಾಯಕರು ಕ್ಯಾರೇ ಅನ್ನುತ್ತಿಲ್ಲ. ಈ ಹಿನ್ನೆಲೆಯಲ್ಲಿ ಇಬ್ಬರು ಶಾಸಕರಿಗೆ ಈಗಾಗಲೇ ನೋಟಿಸ್ ಜಾರಿಗೊಳಿಸಲಾಗಿದೆ. ಹೀಗಿದ್ದರೂ ಸಿಎಂ ಬದಲಾವಣೆ ಚರ್ಚೆ ಮುಂದುವರಿದಿದೆ. ಇಷ್ಟೆಲ್ಲಾ ಆದರೂ ಹೈಕಮಾಂಡ್ ನಡೆ ಅಚ್ಚರಿ ಮತ್ತು ಕುತೂಹಲಕ್ಕೆ ಕಾರಣವಾಗಿದೆ. ಯಾವುದೇ ಹೇಳಿಕೆ ಕೊಡದಂತೆ ಎಚ್ಚರಿಕೆ ನೀಡುತ್ತಿದ್ದರೂ ಇದಕ್ಕೆ ಪೂರ್ಣ ವಿರಾಮ ಹಾಕಲು ಹೈಕಮಾಂಡ್ ನಾಯಕರು ಮನಸ್ಸು ಮಾಡುತ್ತಿಲ್ಲ.

ಯಾಕೆ ಹೈಕಮಾಂಡ್ ಈ ಕುರಿತಾಗಿ ಮೌನ ನಡೆಯನ್ನು ಅನುಸರಿಸಿದೆ ಎಂಬ ಪ್ರಶ್ನೆಗೆ ಉತ್ತರ ಸಿಕ್ಕಿಲ್ಲ. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಆಗುತ್ತೋ ಇಲ್ಲವೋ ಎಂಬುವುದು ಸ್ಪಷ್ಟಪಡಿಸಬೇಕಾದ ಜವಾಬ್ದಾರಿ ಹೈಕಮಾಂಡ್ ನಾಯಕರಿಗೆ ಇದೆ. ಹೀಗಾಗಿ ಹೈಕಮಾಂಡ್ ನಾಯಕರು ಏನು ನಿರ್ಧಾರವನ್ನು ಕೈಗೊಳ್ಳುತ್ತಾರಾ? ಎಂಬ ಕುತೂಹಲ ಇದೆ. ಇದಕ್ಕೆ ಕಾಲ ಉತ್ತರ ನೀಡಲಿದೆ.

# ರಾಜ್ಯ ರಾಜಕಾರಣದ ಇಂದ್ರಿಯದ ಮೇಲೆ ಯತೀಂದ್ರ ಸಿದ್ದರಾಮಯ್ಯ ಪ್ರಹಾರ

## ■ ಡಿಕೆಶಿಗೆ ಬಿಗ್ ಚಾಲೆಂಜ್ ಹಾಕಿದ ಬಿಜೆಪಿ! ■ ಯತೀಂದ್ರಗೆ ನೋಟೀಸ್ ಕೊಡಿಸುವಂತೆ ಬಿಜೆಪಿ ಚಾಲೆಂಜ್

• ಉದಯವಾಹಿನಿ ಬೆಂಗಳೂರು

ಸಿದ್ದರಾಮಯ್ಯ ಅವರ ಉತ್ತರಾಧಿಕಾರಿ ವಿಚಾರವಾಗಿ, ಅವರ ಪುತ್ರ ಮತ್ತು ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ನೀಡಿರುವ ಹೇಳಿಕೆ, ರಾಜ್ಯ ರಾಜಕಾರಣದಲ್ಲಿ ಭಾರೀ ಸಂಚಲನ ಮೂಡಿಸಿದೆ. ಸಿದ್ದರಾಮಯ್ಯ ಅವರು ಸತೀಶ್ ಜಾರಕಿಹೊಳಿ ಅವರ ಮಾರ್ಗದರ್ಶಕರಾಗಬೇಕು ಎಂಬ ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ, ಮುಖ್ಯಮಂತ್ರಿ ಉತ್ತರಾಧಿಕಾರಿ ಕುರಿತ ಚರ್ಚೆಗಳನ್ನು ಹುಟ್ಟುಹಾಕಿದೆ. ಇದೇ ವಿಚಾರವಾಗಿ ಪ್ರತಿಪಕ್ಷ ಬಿಜೆಪಿ ಇದೀಗ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಸವಾಲು ಹಾಕಿದೆ.



ಮುಖ್ಯಮಂತ್ರಿ ಬದಲಾವಣೆ ಕುರಿತು ಮಾತನಾಡಿರುವ ಯತೀಂದ್ರ ಸಿದ್ದರಾಮಯ್ಯ ಅವರಿಗೆ ನೋಟೀಸ್ ಕೊಡಿಸುವ ತಾಕತ್ತು ಡಿಕೆ ಶಿವಕುಮಾರ್ ಅವರಿಗೆ ಇದೆಯೇ? ಎಂದು ಸವಾಲು ಹಾಕಿರುವ ಪ್ರತಿಪಕ್ಷ ಬಿಜೆಪಿ, ಉಪಮಂತ್ರಿಯವರ ಮುಖ್ಯಮಂತ್ರಿಯಾಗುವ ಕನಸು, ಕನಸಾಗಿಯೇ ಉಳಿಯಲಿದೆಯೇ? ಎಂದು ವ್ಯಂಗ್ಯಭರಿತ ಧಾಟಿಯಲ್ಲಿ ಪ್ರಶ್ನಿಸಿದೆ. ಈ ಕುರಿತು ತನ್ನ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ಸಿಎಂ ಸಿದ್ದರಾಮಯ್ಯನವರು ಮಗನಿಂದ ಶುರು ಮಾಡಿಸಿದ ಕುರ್ಚಿ ಕಾಳಗವನ್ನು ಡಿಸಿಎಂ ಡಿಕೆ ಶಿವಕುಮಾರ್ ಅವರು ಹೈಕಮಾಂಡ್ ಅಂಗಳಕ್ಕೆ ಎಳೆದೊಯ್ದಿದ್ದಾರೆ. ನಿಮ್ಮ ಬೆಂಬಲಿಗ ಇಕ್ಬಾಲ್ ಹುಸೇನ್‌ಗೆ ಸಿದ್ದರಾಮಯ್ಯನವರು ನೋಟೀಸ್ ಕೊಡಿಸಿದಂತೆ ಯತೀಂದ್ರ ಸಿದ್ದರಾಮಯ್ಯ ಅವರಿಗೆ ನೋಟೀಸ್ ಕೊಡಿಸುವ ತಾಕತ್ತು ಇದೆಯೇ ಡಿಕೆ ಶಿವಕುಮಾರ್ ಅವರೇ? ಎಂದು ಸವಾಲು ಹಾಕಿದೆ. ಡಿಕೆ ಶಿವಕುಮಾರ್ ಅವರ ಈ ಹೇಳಿಕೆಯನ್ನು ಬಿಜೆಪಿ, ಕಾಂಗ್ರೆಸ್ ಹೈಕಮಾಂಡ್ ಮಧ್ಯಪ್ರವೇಶ ಎಂದು ವಿಶ್ಲೇಷಿಸಿದೆ.



**ನೋಟೀಸ್ ಇದುವರೆಗೂ ಜಾರಿ ಮಾಡಿಲ್ಲ**

ಡಿಕೆಶಿ ಮುಖ್ಯಮಂತ್ರಿಯಾಗಲಿ ಎಂದಿದ್ದ ಇಕ್ಬಾಲ್ ಹುಸೇನ್ ಅವರಿಗೆ ನೋಟೀಸ್ ಜಾರಿ ಮಾಡಲಾಗಿತ್ತು. ಆದರೆ ಯತೀಂದ್ರ ಸಿದ್ದರಾಮಯ್ಯ ಅವರಿಗೆ ಇಂತಹ ಯಾವುದೇ ನೋಟೀಸ್ ಇದುವರೆಗೂ ಜಾರಿ ಮಾಡಿಲ್ಲ. ಇದೇ ವಿಚಾರವನ್ನು ಕೆದಕಿರುವ ಬಿಜೆಪಿ, ಯತೀಂದ್ರ ಸಿದ್ದರಾಮಯ್ಯ ಅವರಿಗೆ ನೋಟೀಸ್ ಕೊಡಿಸುವಂತೆ ಡಿಕೆ ಶಿವಕುಮಾರ್ ಅವರಿಗೆ ಚಾಲೆಂಜ್ ಮಾಡಿದೆ. ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆ ಕುರಿತು ಮಾಧ್ಯಮಗಳಿಗೆ ಪ್ರತಿಕ್ರಿಯಿಸುತ್ತಾ, ನಾನು ಈ ಹೇಳಿಕೆಗಳಿಗೆ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ಆದರೆ ಈ ವಿಚಾರವನ್ನು ಯಾರ ಬಳಿ ಚರ್ಚಿಸಬೇಕೋ ಅವರ ಬಳಿ ಚರ್ಚಿಸುತ್ತೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಸ್ಪಷ್ಟಪಡಿಸಿದ್ದರು.

ಅಲ್ಲದೇ ಈ ವಿಚಾರದಲ್ಲಿ ಯತೀಂದ್ರ ಸಿದ್ದರಾಮಯ್ಯ ಅವರಿಗೆ ನೋಟೀಸ್ ಕೊಡಿಸುವ ತಾಕತ್ತು ಡಿಕೆಶಿ ಅವರಿಗೆ ಇಲ್ಲ ಎಂಬರ್ಥದಲ್ಲಿ ವ್ಯಂಗ್ಯವಾಡಿದೆ. ಬಿಜೆಪಿ ಹಾಕಿರುವ ಸವಾಲಿಗೆ ಡಿಸಿಎಂ ಪ್ರತಿಕ್ರಿಯೆ ನೀಡುವರೇ ಎಂಬುದನ್ನು ಕಾದು ನೋಡಬೇಕಿದೆ. ಇನ್ನು ತಮ್ಮ ಪುತ್ರ ಯತೀಂದ್ರ ಸಿದ್ದರಾಮಯ್ಯ ಅವರ ಹೇಳಿಕೆಗೆ ಸ್ಪಷ್ಟನೆ ನೀಡಿರುವ ಸಿಎಂ ಸಿದ್ದರಾಮಯ್ಯ, ಸೈದ್ಧಾಂತಿಕ ನಾಯಕತ್ವದ ಚರ್ಚೆಗೆ ಬೇರೆ ಅರ್ಥ ಕಲ್ಪಿಸುವ ಅವಶ್ಯಕತೆ ಇಲ್ಲ ಎಂದಿದ್ದರು. ಇಂತಹವರೇ ಸಿಎಂ ಆಗಬೇಕು ಎಂದು ಯತೀಂದ್ರ ಹೇಳಿಲ್ಲ ಎಂದು ಹೇಳುವ ಮೂಲಕ, ಸಿದ್ದರಾಮಯ್ಯ ಅವರು ಈ ಕುರಿತ ಚರ್ಚೆಗಳಿಗೆ ಅಂತ್ಯ ಹಾಡಲು ಪ್ರಯತ್ನಿಸಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹12,562/Gram24ct ₹11,515/Gram22ct ಬೆಳ್ಳಿ: ₹157.00/Gram

## ಎಲೆಕ್ಟ್ರಿಕ್ ಬಸ್‌ಗಳಿಗೆ ಖಾಸಗಿ ಚಾಲಕರ ನೇಮಕ ರದ್ದು ಕೋರಿ ಕೇಂದ್ರಕ್ಕೆ ಪತ್ರ ಬರೆಯಲು ಸಾರಿಗೆ ಸಚಿವ ನಿರ್ಧಾರ

# ಇವಿ ಬಸ್‌ಗಳಲ್ಲಿ ಖಾಸಗಿ ಚಾಲಕರ ನೇಮಕಕ್ಕೆ ಬೀಳುತ್ತಾ ಕಡಿವಾಣ?

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಇತ್ತೀಚೇಗೆ ಎಲೆಕ್ಟ್ರಿಕ್ ಬಸ್‌ಗಳಿಂದ ಒಂದಲ್ಲ ಒಂದು ಅವಘಡಗಳು ಸಂಭವಿಸುತ್ತಲೇ ಇದೆ. ಇದಕ್ಕೇ ಕಡಿವಾಣ ಹಾಕಲು ಈಗ ಇವಿ ಬಸ್‌ಗಳಿಗೆ ಖಾಸಗಿ ಚಾಲಕರನ್ನು ನೇಮಿಸುವ ವ್ಯವಸ್ಥೆ ರದ್ದು ಮಾಡುವಂತೆ ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ನಿರ್ಧರಿಸಿದ್ದಾರೆ.

**ಎಲೆಕ್ಟ್ರಿಕ್ ಬಸ್ ಚಾಲಕರ ಮುಷ್ಕರ:** ವೇತನ, ಭತ್ಯೆ, ಹೆಚ್ಚಳ, ಬೋನಸ್ ಸೇರಿದಂತೆ ವಿವಿಧ ಕಾರಣ ನೀಡಿ ಖಾಸಗಿ ಸಂಸ್ಥೆಯಿಂದ ನೇಮಕವಾಗಿರುವ ಬಿಎಂಟಿಸಿ ಎಲೆಕ್ಟ್ರಿಕ್ ಬಸ್ ಚಾಲಕರು ಕಳೆದ ಎರಡು ದಿನಗಳಿಂದ ಮುಷ್ಕರ ಹಮ್ಮಿಕೊಂಡಿದ್ದಾರೆ. ಇದರಿಂದ 2 ದಿನಗಳಿಂದ 140ಕ್ಕೂ ಹೆಚ್ಚಿನ ಎಲೆಕ್ಟ್ರಿಕ್ ವಾಹನಗಳು ಡಿಪೋಗಳಲ್ಲೇ ನಿಂತಿದ್ದು, ಕಾರ್ಯಾಚರಣೆ ಸ್ಥಗಿತಗೊಂಡಿದೆ. ಅಲ್ಲದೆ, ಈ ಸಮಸ್ಯೆ ಬಗೆಹರಿಸುವಂತೆ ಖಾಸಗಿ ಸಂಸ್ಥೆಗಳಿಗೆ ಬಿಎಂಟಿಸಿ ಸೂಚನೆ ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ.

ಹಾಗಾಗಿ ಬಿಎಂಟಿಸಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಎಲೆಕ್ಟ್ರಿಕ್ ಬಸ್ ಗಳಲ್ಲಿ ನಡೆಯುತ್ತಿರುವ ಅವಘಡಗಳಿಗೆ ಕಾರಣಗಳ ಕುರಿತು

> **ಬೆಂಗಳೂರಿನಲ್ಲಿ ಎಲೆಕ್ಟ್ರಿಕ್ ಬಸ್ ಅವಘಡಗಳು ಹೆಚ್ಚಾಗುತ್ತಿವೆ. ಇದಕ್ಕೆ ಇವಿ ಬಸ್ ಗಳಲ್ಲಿ ಖಾಸಗಿ ಚಾಲಕರ ನೇಮಕವೇ ಕಾರಣ, ಈ ವ್ಯವಸ್ಥೆಯನ್ನು ರದ್ದುಗೊಳಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲು ನಿರ್ಧರಿಸಿದ್ದಾರೆ. ಜಿ.ಸಿ.ಸಿ ಮಾದರಿಯ ಗುತ್ತಿಗೆಯಿಂದ ಸಮಸ್ಯೆ ಉಂಟಾಗುತ್ತಿದೆ, ಈ ಬಗ್ಗೆ ಕೇಂದ್ರಕ್ಕೆ ವಿವರವಾದ ಪತ್ರ ಬರೆಯಲಾಗುವುದು. ಸಮಸ್ಯೆ ಬಗೆಹರಿಸುವಂತೆ ಮನವಿ ಮಾಡಲಾಗುವುದು.**
> **-ರಾಮಲಿಂಗರೆಡ್ಡಿ, ಸಾರಿಗೆ ಸಚಿವ**



ಚರ್ಚೆ ನಡೆಸಿದ್ದಾರೆ. ಈ ವೇಳೆ ಅಧಿಕಾರಿಗಳು ಬಿಎಂಟಿಸಿಗೆ ಗ್ರಾಸ್ ಕಾಸ್ಟ್ ಕಾಂಟ್ರ್ಯಾಕ್ಟ್ ಮಾದರಿಯಲ್ಲಿ ಎಲೆಕ್ಟ್ರಿಕ್ ಬಸ್‌ಗಳನ್ನು ಪಡೆಯಲಾಗುತ್ತಿದೆ. ಅದರಂತೆ ಬಸ್‌ಗಳನ್ನು ಪೂರೈಸುವ ಸಂಸ್ಥೆಯೇ ಅವುಗಳನ್ನು ನಿರ್ವಹಣೆ ಮಾಡುತ್ತಾರೆ



ಉದಯವಾಹಿನಿ ಚಿತ್ರ

ಹಾಗೂ ಅವುಗಳಿಗೆ ಚಾಲಕರನ್ನು ನೇಮಿಸುತ್ತಿದ್ದಾರೆ. ಈ ವ್ಯವಸ್ಥೆಯು ಸಮಸ್ಯೆಗೆ ಕಾರಣವಾಗುತ್ತಿದೆ ಎಂದು ವಿವರಿಸಿದ್ದಾರೆ.

**ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲು ನಿರ್ಧಾರ:** ಇನ್ನೂ ಸಭೆಯಲ್ಲಿ ನಡೆದ ಚರ್ಚೆಗಳ ನಂತರ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸೇರಿದಂತೆ ಸಂಬಂಧಪಟ್ಟ ಕೇಂದ್ರ ಸಚಿವರಿಗೆ ಪತ್ರ ಬರೆದು ಸಮಸ್ಯೆ ಬಗೆಹರಿಸುವಂತೆ ಮನವಿ ಮಾಡಲು ನಿರ್ಧರಿಸಿದ್ದಾರೆ. ಇನ್ನೂ ಈ ಪತ್ರದಲ್ಲಿ ಜಿಸಿಸಿ ಮಾದರಿಯಲ್ಲಿ ಬಸ್ ಗುತ್ತಿಗೆ ಪಡೆಯುವುದರಿಂದ ಕಂಪನಿಗಳು ಅವುಗಳಿಗೆ ಖಾಸಗಿ ಚಾಲಕರನ್ನು ನಿಯೋಜಿಸುವುದರಿಂದ ಎದುರಾಗುತ್ತಿರುವ ಸಮಸ್ಯೆಗಳ ಕುರಿತು, ಇನ್ನೂ ಇದರಿಂದ ಬಿಎಂಟಿಸಿ ಸೇರಿದಂತೆ ಸಾರಿಗೆ ನಿಗಮಗಳಿಗೆ ಆಗುತ್ತಿರುವ ಸಮಸ್ಯೆಗಳ ಬಗ್ಗೆ ಪತ್ರದಲ್ಲಿ ತಿಳಿಸಲು ನಿರ್ಧರಿಸಿದ್ದಾರೆ. ಅಲ್ಲದೇ ಸದ್ಯ ಇರುವ ಜಿಸಿಸಿ ವ್ಯವಸ್ಥೆಯನ್ನು ಬದಲಿಸುವುದು ಅಥವಾ ಮುಂದೆ ಸಮಸ್ಯೆಯುಂಟಾಗುವುದನ್ನು ತಡೆಯುವಂತಹ ವ್ಯವಸ್ಥೆ ಜಾರಿಗೊಳಿಸುವಂತೆಯೂ ರಾಮಲಿಂಗಾರೆಡ್ಡಿ ಕೋರಲಿದ್ದಾರೆ ಎಂದು ತಿಳಿದುಬಂದಿದೆ.

**ಸಾರಿಗೆ ಸಚಿವ ರಾಮಲಿಂಗರೆಡ್ಡಿ ಹೇಳಿದ್ದೇನು?:** ಇನ್ನೂ ಈ ಕುರಿತು ಸಭೆಯ ಬಳಿಕ ಮಾತನಾಡಿದ ರಾಮಲಿಂಗ ರೆಡ್ಡಿ ಜಿಸಿಸಿ ಮಾದರಿಯಲ್ಲಿ ಬಸ್‌ಗಳನ್ನು ಪಡೆಯುವುದರಿಂದ ಎದುರಾಗುತ್ತಿರುವ ಸಮಸ್ಯೆಗಳ ಬಗ್ಗೆ ಕೇಂದ್ರ ಸಚಿವರಿಗೆ ತಿಳಿಸಲು ಮುಂದಾಗಿದ್ದೇನೆ. ಸಾರಿಗೆ ನಿಗಮಗಳಿಗಾಗುತ್ತಿರುವ ಸಮಸ್ಯೆಗಳು, ನಿಗಮಗಳಿಗೆ ಕೆಟ್ಟ ಹೆಸರು ಬರುತ್ತಿರುವ ಬಗ್ಗೆ ಅಂಕಿ-ಸಂಖ್ಯೆ ಸಹಿತ ವಿವರವುಳ್ಳ ಪತ್ರವನ್ನು ಕೇಂದ್ರ ಸಚಿವರಿಗೆ ಬರೆಯುತ್ತೇನೆ ಎಂದರು.

> **ಹೈಕಮಾಂಡ್ ಏಕೆ ಮೌನವಾಗಿದೆ?**
> **ರಾಜ್ಯ ಕಾಂಗ್ರೆಸ್ ನಲ್ಲಿ ನಾಯಕತ್ವ ಬದಲಾವಣೆ ಚರ್ಚೆಗೆ ಬ್ರೇಕ್ ಬಿದ್ದಿಲ್ಲ. ಆದರೆ ಇದನ್ನು ಸರಿಪಡಿಸಬೇಕಾದ ಹೈಕಮಾಂಡ್ ನಾಯಕರು ಏಕೆ ಸುಮ್ಮನಾಗಿದ್ದಾರೆ ಎಂಬ ಪ್ರಶ್ನೆಯೂ ಕಾಡುತ್ತಿದೆ. ನಾಯಕತ್ವ ಬದಲಾವಣೆ ಹಾಗೂ ಕೆಪಿಸಿಸಿ ಅಧ್ಯಕ್ಷ ಸ್ಥಾನ ವಿಚಾರವಾಗಿ ಯಾವುದೇ ಹೇಳಿಕೆ ನೀಡದಂತೆ ಎಚ್ಚರಿಕೆ ನೀಡಿತ್ತು ಹೈಕಮಾಂಡ್. ಆದರೆ ಇದೀಗ ಇಷ್ಟೊಂದು ತೀವ್ರ ಪ್ರಮಾಣದಲ್ಲಿ ಚರ್ಚೆಗಳು ನಡೆಯುತ್ತಿದ್ದರೂ ಹೈಕಮಾಂಡ್ ಏಕೆ ಮೌನವಾಗಿದೆ? ಎಂಬ ಪ್ರಶ್ನೆ ಕಾಡುತ್ತಿದೆ.**

## ಬೆಂಗಳೂರಿನ ನೃತ್ಯ ದಿಶಾ ಟ್ರಸ್ಟ್ ಕಲಾವಿದರಿಂದ ನಾದನಮನ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಪ್ರಸಿದ್ಧ ನೃತ್ಯ ಸಂಸ್ಥೆಯಾದ ನೃತ್ಯ ದಿಶಾ ಟ್ರಸ್ಟಿನ ಗುರು ಡಾ. ದರ್ಶಿನಿ ಮಂಜುನಾಥ್ ರವರು ಹಾಗೂ ಅವರ ಶಿಷ್ಯೆಯರಾದ ದಿಶಾ, ದೀಪರಾಣಿ, ನಮಿತ, ಮೈತ್ರಿ, ಪ್ರಿಯಾಂಕ, ಮೇಘ, ಸ್ಫೂರ್ತಿ, ಕೀರ್ತನ, ಮನಿಷಾ , ಜೀವಿತ, ಗಣಿಕ, ಅಪೂರ್ವ, ಹರಿಣಿ, ಗ್ರೀಷ್ಮ, ಪ್ರಿಯದರ್ಶಿನಿ, ಹನ್ಸಿಕಾ, ಲಕ್ಷಿತ, ವರ್ಷ, ದೀಕ್ಷಿತ, ಹರ್ಷಿಕ, ಚಂದನ ಈ ಎಲ್ಲಾ ಕಲಾವಿದರು ತಮ್ಮ ನೃತ್ಯ ಸೇವೆ ಮಾಡಿ ರಾಯರ ಆಶೀರ್ವಾದ ಪಡೆದು, ಕಲೆಯಿಂದ ಕಲಾರಸಿಕರ ಮನಸ್ಸನ್ನು ಸಂತೋಷಗೊಳಿಸಿದರು.

ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಪಾದಂಗಳವರು ಎಲ್ಲಾ ಕಲಾವಿದರಿಗೂ ಫಲಮಂತ್ರಾಕ್ಷತೆ, ಅನುಗ್ರಹ ಪತ್ರ ನೀಡಿ ಆಶೀರ್ವದಿಸಿದರು. ಕಾರ್ಯಕ್ರಮದ ಸಂಚಾಲಕರಾದ ಶ್ರೀ ಪದ್ಮನಾಭಾಚಾರ್ಯ ಅವರು ಕಾರ್ಯಕ್ರಮದ ವ್ಯವಸ್ಥೆಯನ್ನು ಬಹಳ ಅಚ್ಚುಕಟ್ಟಾಗಿ ನಿರ್ವಹಿಸಿದ್ದರು.

## ಕೆ ಆರ್ ಪುರದ ತ್ರಿವೇಣಿನಗರದಲ್ಲಿ ಸ್ಫೋಟ

• ಉದಯವಾಹಿನಿ, ಬೆಂಗಳೂರು

**ಅಕ್ಕ ಪಕ್ಕದ ಮನೆಗಳಿಗೆ ಹಾನಿ**

ನಗರದ ಕೆ.ಆರ್.ಪುರ ವಿಧಾನಸಭಾ ಕ್ಷೇತ್ರದ ತ್ರಿವೇಣಿನಗರದಲ್ಲಿ ಸಂಭವಿಸಿದ ದೊಡ್ಡ ಪ್ರಮಾಣದ ಸ್ಫೋಟದ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಕೇಂದ್ರ ಸಚಿವರಾದ ಕು.ಶೋಭಾ ಕರಂದ್ಲಾಜೆ ಅವರು ಒತ್ತಾಯಿಸಿದ್ದಾರೆ.

ಸ್ಫೋಟ ಸಂಭವಿಸಿದ ಸ್ಥಳ ವೀಕ್ಷಿಸಿದ ಬಳಿಕ ಶನಿವಾರ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕೆ.ಆರ್. ಪುರ ವಿಧಾನಸಭಾ ಕ್ಷೇತ್ರದ ತ್ರಿವೇಣಿನಗರದಲ್ಲಿ ಶನಿವಾರ ಬೆಳಿಗ್ಗೆ ಸ್ಫೋಟ ಸಂಭವಿಸಿ ಮಹಿಳೆಯೊಬ್ಬರು ಮೃತಪಟ್ಟಿದ್ದಾರೆ. ಮನೆ ಪೂರ್ತಿ ಹಾನಿಗೆ ಒಳಗಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ಸತ್ಯ ಹೊರಬರಲು ಅತ್ಯಂತ ಪ್ರಾಮಾಣಿಕವಾಗಿ ಫಾರೆನ್ಸಿಕ್ ವರದಿ ಲಭಿಸಬೇಕು. ಇಂಥ ಘಟನೆಗಳಿಂದ ಜನರು ಭಯಭೀತರಾಗುತ್ತಾರೆ ಎಂದು ಹೇಳಿದರು.

ಇಷ್ಟೊಂದು ದೊಡ್ಡ- ಬಲಿಷ್ಠ ಮನೆ ಕುಸಿತಕ್ಕೆ ಬಲವಾದ ಕಾರಣ ಇರಬೇಕು. ಸ್ಫೋಟಕ್ಕೆ ಗ್ಯಾಸ್ ಕಾರಣವೇ? ಬೇರೆ ಸ್ಫೋಟಕ ಕಾರಣವೇ ಎಂಬ ಬಗ್ಗೆ ತನಿಖೆ ನಡೆಸಬೇಕು ಎಂದು ಅವರು ಆಗ್ರಹಿಸಿದರು. ಮೃತರಿಗೆ ಸರಕಾರವು ತಕ್ಷಣ ಪರಿಹಾರ ಕೊಡಬೇಕು ಎಂದು ಅವರು ಒತ್ತಾಯಿಸಿದರು. ಗಾಯಾಳುಗಳಿಗೆ ಉಚಿತವಾದ ಚಿಕಿತ್ಸೆಯನ್ನು ಸರಕಾರ ಕೊಡಿಸಬೇಕು ಎಂದು ತಿಳಿಸಿದರು.

**ಸ್ಫೋಟದ ಸ್ಥಳ ವೀಕ್ಷಿಸಿ ದಿಗ್ಭ್ರಾಂತಿ ಭೈರತಿ ಬಸವರಾಜ್:** ನಗರದ ಕೆ.ಆರ್.ಪುರ ವಿಧಾನಸಭಾ ಕ್ಷೇತ್ರದ ತ್ರಿವೇಣಿನಗರದಲ್ಲಿ ಸಂಭವಿಸಿದ ದೊಡ್ಡ ಪ್ರಮಾಣದ ಸ್ಫೋಟದ ಸ್ಥಳವನ್ನು ವೀಕ್ಷಿಸಿದ ಬಳಿಕ ದಿಗ್ಭ್ರಾಂತನಾಗಿದ್ದೇನೆ ಎಂದು ಮಾಜಿ ಸಚಿವ ಮತ್ತು ಶಾಸಕ ಭೈರತಿ ಬಸವರಾಜ್ ಅವರು ತಿಳಿಸಿದ್ದಾರೆ.

ಆರ್‌ಸಿಸಿ ಮನೆ ಸ್ಫೋಟದಿಂದ ತೀವ್ರ ಹಾನಿಗೆ ಒಳಗಾಗಿದೆ. ಸ್ಫೋಟಕ್ಕೆ ಗ್ಯಾಸ್ ಸಿಲಿಂಡರ್ ಕಾರಣವೇ? ಬೇರೆ ಸ್ಫೋಟಕಗಳಿಂದ ಆಗಿದೆಯೇ ಎಂದು ನಿಖರ ಮಾಹಿತಿ ಲಭಿಸಿಲ್ಲ ನಾನು ಕೂಡ ಪೊಲೀಸ್ ಅಧಿಕಾರಿಗಳ ಜೊತೆ ಮಾತನಾಡಿದ್ದೇನೆ ಎಂದರು.

ಮೃತರ ಕುಟುಂಬಕ್ಕೆ ಶೀಘ್ರವೇ ಪರಿಹಾರ ನೀಡಬೇಕು. ಗಾಯಾಳುಗಳ ನೆರವಿಗೆ ಬರಬೇಕು. ಹಾನಿಗೆ ಒಳಗಾದ ಸಮೀಪದ ಮನೆಯವರಿಗೆ ಪರಿಹಾರ ಕೊಡಬೇಕು ಎಂದು ಒತ್ತಾಯಿಸಿದರು. ಘಟನೆಯ ಸಮಗ್ರ ತನಿಖೆ ನಡೆಸಲು ಆಗ್ರಹಿಸಿದರು.

ಪ್ರಶ್ನೆಗೆ ಉತ್ತರ ಕೊಟ್ಟ ಅವರು, ಗ್ಯಾಸ್ ಸಿಲಿಂಡರ್ ಸ್ಫೋಟದಿಂದ ಈ ರೀತಿ ಆಗಲು ಸಾಧ್ಯವೇ ಎಂದು ಅವರು ಅನುಮಾನ ವ್ಯಕ್ತಪಡಿಸಿದರು. ಅನುಮಾನ ನಿವಾರಿಸಲು ಸಮಗ್ರ ತನಿಖೆಗೆ ಒತ್ತಾಯಿಸುವುದಾಗಿ ಹೇಳಿದರು. ಸ್ಫೋಟಕ ಸಂಗ್ರಹಿಸಿ ಇಟ್ಟುಕೊಂಡಿದ್ದುದು ಸಿಡಿದು ಈ ರೀತಿ ಆಗಿದೆಯೇ ಎಂಬುದು ತನಿಖೆ ಮೂಲಕ ಗೊತ್ತಾಗಬೇಕು ಎಂದು ತಿಳಿಸಿದರು.



> **ದುರ್ಘಟನೆಯಿಂದ ಅಕ್ಕಪಕ್ಕದ ಮನೆಗಳಿಗೂ ತೊಂದರೆಯಾಗಿದೆ. ಪಕ್ಕದ ಮನೆಯವರೂ ಇವತ್ತು ಆಸ್ಪತ್ರೆಗೆ ದಾಖಲಾಗಿದ್ದಾರೆ. ಬಹಳ ಎತ್ತರದ ವರೆಗೆ ಗಾಜುಗಳು ಒಡೆದಿವೆ ಎಂದು ಕಳವಳ ಸೂಚಿಸಿದರು. ಪೊಲೀಸ್ ಅಧಿಕಾರಿಗಳು, ಅಗ್ನಿಶಾಮಕ ದಳ, ಜನರು ಬಂದು ನೆರವಾಗಿದ್ದಾರೆ, ಸ್ಫೋಟದ ಕಾರಣಕರ್ತರನ್ನು ಪತ್ತೆ ಮಾಡಬೇಕು. ಇದರ ಸಮಗ್ರ ತನಿಖೆ ಮಾಡಬೇಕು, ಅಕ್ಕಪಕ್ಕದ ಮನೆಗಳಿಗೆ ಆದ ಹಾನಿಯ ನಷ್ಟವನ್ನೂ ಭರಿಸುವಂತೆ ಅವರು ಕೋರಿದರು. ಭಾರತ್ ಪೆಟ್ರೋಲಿಯಂ ಸಿಲಿಂಡರ್ ಎಂಬ ಮಾಹಿತಿ ಸಿಕ್ಕಿದೆ. ಅವರೂ ತನಿಖೆ ನಡೆಸಬೇಕು.**
> **-ಶೋಭಾ ಕರಂದ್ಲಾಜೆ, ಕೇಂದ್ರ ಸಚಿವೆ**

## ಸಾರ್ವಜನಿಕರ ಮೇಲೆ ದರ್ಪದ ವರ್ತನೆ ಸಲ್ಲದು

• ಉದಯವಾಹಿನಿ, ಬೆಂಗಳೂರು



ಅಧಿಕಾರ ದುರುಪಯೋಗಪಡಿಸಿಕೊಂಡು ಸಾರ್ವಜನಿಕರ ಮೇಲೆ ಅನಗತ್ಯ ಬಲ ಪ್ರಯೋಗ ಮಾಡುವುದು ಅಥವಾ ದರ್ಪದಿಂದ ವರ್ತಿಸುವುದು ಇಲಾಖೆಯ ಘನತೆಗೆ ತಕ್ಕುದಾದ ನಡವಳಿಕೆಯಲ್ಲ. ನಾಗರಿಕರ ಹಕ್ಕುಗಳಿಗೆ ಗೌರವ ನೀಡುವ ಮೂಲಕ ಸಂಯಮದಿಂದ ವರ್ತಿಸಬೇಕು ಎಂದು ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ.ಸಲೀಂ ಸೂಚಿಸಿದ್ದಾರೆ. ಈ ಸಂಬಂಧ ಸುತ್ತೋಲೆ ಹೊರಡಿಸಿರುವ ಅವರು, ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚನೆ ನೀಡಿದ್ದಾರೆ.

ಇಲಾಖೆಯ ಮೇಲಿನ ಗೌರವ ಮತ್ತು ನಂಬಿಕೆಗಳು ಪ್ರತಿ ಅಧಿಕಾರಿಯು ಯಾವ ರೀತಿ ನಡೆದುಕೊಳ್ಳುತ್ತಾನೆ ಎಂಬುದರ ಮೇಲೆ ಅವಲಂಬಿತವಾಗಿದೆ ಎಂಬುದನ್ನು ಮರೆಯಬಾರದು. ಇಲಾಖೆಯ ಎಲ್ಲಾ ಅಧಿಕೃತ ವ್ಯವಹಾರಗಳು ಮತ್ತು ಕಾರ್ಯವಿಧಾನದಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳಬೇಕು. ಠಾಣೆಗೆ ಭೇಟಿ ನೀಡುವ ಯಾವುದೇ ವ್ಯಕ್ತಿಯ ಸಾಮಾಜಿಕ ಮತ್ತು ಆರ್ಥಿಕ ಹಿನ್ನೆಲೆ ಗಮನಿಸದೇ ಸಮಾನವಾಗಿ ಪರಿಗಣಿಸಬೇಕು ಎಂದು ಹೇಳಿದ್ದಾರೆ.

ವ್ಯಕ್ತಿ ಮತ್ತು ಸಂಸ್ಥೆಗಳಿಂದ ಯಾವುದೇ ಬೇಡಿಕೆ ಇಡುವುದು, ಅಕ್ರಮ ಸಹಾಯ, ಲಾಭ ಪಡೆಯಬಾರದು. ತನಿಖಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಯ್ದುಕೊಂಡು, ಪ್ರತಿ ಹಂತದಲ್ಲೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಸಂತ್ರಸ್ತರು, ಮಹಿಳೆಯರು, ಹಿರಿಯರು ಮತ್ತು ಮಕ್ಕಳೊಂದಿಗೆ ವಿಶೇಷ ಕಾಳಜಿಯಿಂದ ವರ್ತಿಸಬೇಕು ಎಂದು ತಿಳಿಸಿದ್ದಾರೆ.

ದೂರುಗಳ ಸ್ಥಿತಿ ಮತ್ತು ಬಾಕಿ ಇರುವ ಪ್ರಕರಣಗಳ ಕುರಿತು ನಾಗರಿಕರಿಗೆ ಮಾಹಿತಿ ನೀಡಬೇಕು. ನ್ಯಾಯಾಂಗ ಮತ್ತು ಆಡಳಿತಾತ್ಮಕ ಅಧಿಕಾರಿಗಳಿಗೆ ಪೂರ್ಣ ಸಹಕಾರ ನೀಡಿ, ಶೋಧ, ಬಂಧನ, ವಿಚಾರಣೆ ವೇಳೆ ಸಾರ್ವಜನಿಕರ ಖಾಸಗಿತನ, ಘನತೆಯನ್ನು ಗೌರವಿಸಬೇಕು. ಬೇರೆ ಠಾಣಾ ವ್ಯಾಪ್ತಿಯ ದೂರು ಬಂದಲ್ಲಿ ದೂರುದಾರರನ್ನು ಸಂಬಂಧಿಸಿದ ಠಾಣೆಗೆ ಹೋಗಿ ದೂರು ನೀಡುವಂತೆ ಹೇಳದೇ, ಠಾಣೆಯಲ್ಲಿ ಶೂನ್ಯ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿ, ಬಳಿಕ ವ್ಯಾಪ್ತಿಯ ಸಂಬಂಧಪಟ್ಟ ಠಾಣೆಗೆ ದೂರು ವರ್ಗಾಯಿಸುವಂತೆ ಸ್ಪಷ್ಟವಾಗಿ ಹೇಳಿದ್ದಾರೆ.

ಮಹಿಳೆಯರನ್ನು ಸಂಜೆ 6 ಗಂಟೆಯ ಬಳಿಕ ಠಾಣೆಗೆ ವಿಚಾರಣೆಗೆ ಅಥವಾ ಹೇಳಿಕೆ ಪಡೆಯಲು ಕರೆತರಬಾರದು. ಒಂದು ವೇಳೆ ಆಕೆ ಆರೋಪಿಯಾಗಿದ್ದಲ್ಲಿ ಅಥವಾ ಸಂತ್ರಸ್ತೆಯಾಗಿದ್ದಲ್ಲಿ ಮಹಿಳಾ ಪೊಲೀಸ್ ಅಧಿಕಾರಿಯ ನೆರವಿನೊಂದಿಗೆ ಮಹಿಳೆಯ ವಾಸದ ಸ್ಥಳ/ ಮನೆಯಲ್ಲಿಯೇ ವಿಚಾರಣೆ ಮಾಡಬೇಕು.

ಕ್ರಿಮಿನಲ್ ಪ್ರಕರಣಗಳಲ್ಲಿ ಅವರನ್ನು ಬಂಧಿಸಿ, ವಿಚಾರಣೆ ನಡೆಸಿದಾಗ, ಅವಮಾನಕ್ಕೆ ಒಳಗಾಗದಂತೆ ನೋಡಿಕೊಳ್ಳಬೇಕು ಮತ್ತು ಅವರನ್ನು ಠಾಣೆಯಲ್ಲಿ ಇರಿಸದೇ, ಗೃಹ ಆಶ್ರಯ ತಾಣಗಳಲ್ಲಿ ಇರಿಸಬೇಕು ಎಂದಿದ್ದಾರೆ.

## ಸಾಮೂಹಿಕ ಅತ್ಯಾಚಾರ: ಆರೋಪಿಗಳ ಮೇಲೆ ಕ್ರಮಕ್ಕೆ ಒತ್ತಾಯ

• ಉದಯವಾಹಿನಿ, ಬೆಂಗಳೂರು


ಪಶ್ಚಿಮ ಬಂಗಾಳದ ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿದ್ದ ಆರೋಪಿಗಳನ್ನು ಬಂಧಿಸಿ, ಕಾನೂನು ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ಮಹಿಳಾ ಆಯೋಗ ಒತ್ತಾಯಿಸಿದೆ.

ಈ ಬಗ್ಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗೆ ಪತ್ರ ಬರೆದಿದ್ದು, ಬೆಂಗಳೂರು ಉತ್ತರ ತಾಲ್ಲೂಕಿನ ಗಂಗೊಂಡನಹಳ್ಳಿಯಲ್ಲಿ ನೆಲಸಿದ್ದ ಗೃಹಿಣಿಯೊಬ್ಬರ ಮೇಲೆ ಸಾಮೂಹಿಕ ಅತ್ಯಾಚಾರ ನಡೆಸಿದ ಪ್ರಕರಣವನ್ನು ಆಯೋಗವು ಗಂಭೀರವಾಗಿ ಪರಿಗಣಿಸಿದೆ. ಈ ಕೃತ್ಯ ಎಸಗಿದ ಆರೋಪಿಗಳನ್ನು ಕೂಡಲೇ ಬಂಧಿಸಿ, ಕಾನೂನು ಕ್ರಮ ಕೈಗೊಂಡಿರುವ ಬಗ್ಗೆ ಆಯೋಗಕ್ಕೆ ವರದಿ ನೀಡಬೇಕು ಎಂದು ಸೂಚಿಸಿದೆ.

## ಮತಗಳ್ಳತನ ಅಕ್ರಮದಲ್ಲಿ ಬಿಜೆಪಿ-ಚುನಾವಣಾ ಆಯೋಗ ಜಂಟಿಯಾಗಿ ಶಾಮೀಲು: ಕೃಷ್ಣ ಬೈರೇಗೌಡ ಆರೋಪ

• ಉದಯವಾಹಿನಿ, ಬೆಂಗಳೂರು

ಮತಗಳ್ಳತನ ದೇಶದಾದ್ಯಂತ ನಡೆಯುತ್ತಿದ್ದು, ಈ ಅಕ್ರಮದಲ್ಲಿ ಬಿಜೆಪಿ ಹಾಗೂ ಚುನಾವಣಾ ಆಯೋಗ ಜಂಟಿಯಾಗಿ ಶಾಮೀಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಆರೋಪಿಸಿದರು. ಮತಗಳ್ಳತನದ ವಿರುದ್ಧ ಶನಿವಾರ ತಮ್ಮ ಗೃಹ ಕಚೇರಿಯಿಂದ ಸಹಿ ಸಂಗ್ರಹ ಅಭಿಯಾನಕ್ಕೆ ಚಾಲನೆ ನೀಡಿ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ ಅವರು, ಚುನಾವಣಾ ಆಯೋಗ ಬಿಜೆಪಿಯ ಅಂಗಸಂಸ್ಥೆಯಂತೆ, ಬಿಜೆಪಿಯ ಪಕ್ಷಪಾತಿಯ ರೀತಿ ಕೆಲಸ ಮಾಡುತ್ತಿದೆ. ಪರಿಣಾಮ ಇಡೀ ದೇಶದ ಚುನಾವಣಾ ಪ್ರಕ್ರಿಯೆಯೇ ಬುಡಮೇಲಾಗಿದೆ. ಚುನಾವಣಾ ವ್ಯವಸ್ಥೆಯಲ್ಲೇ ಅಕ್ರಮ ಎಸಗಿಬಿಟ್ಟರೆ ಬಿಜೆಪಿಯ ಗೆಲುವು ಸುಲಭ. ಹೀಗಾಗಿ ಚುನಾವಣಾ ಆಯೋಗ ಮತ್ತು ಬಿಜೆಪಿ ಜಂಟಿಯಾಗಿಯೇ ಈ ಅಕ್ರಮದಲ್ಲಿ ಶಾಮೀಲಾಗಿದ್ದಾರೆ ಎಂದು ಕಿಡಿಕಾರಿದರು. ದೇಶದ ವ್ಯವಸ್ಥೆಯಲ್ಲಿ ಚುನಾವಣಾ ಆಯೋಗಕ್ಕೆ ಮಹತ್ತರವಾದ ಜವಾಬ್ದಾರಿ ಇದೆ. ಮತದಾರರ ಪಟ್ಟಿ ನಿರ್ವಹಣೆಯಲ್ಲಿ ಯಾವುದೇ ಅಕ್ರಮವಾಗದಂತೆ ನೋಡಿಕೊಳ್ಳುವುದು ಈ ಆಯೋಗದ ಮೊದಲ ಕರ್ತವ್ಯ. ಆದರೆ, ಕಲಬುರಗಿಯ ಆಳಂದ ಕ್ಷೇತ್ರದಿಂದ ಬೆಂಗಳೂರಿನ ಮಹದೇವಪುರ ಕ್ಷೇತ್ರದ ವರೆಗೆ ಮತದಾರ ಪಟ್ಟಿಯಲ್ಲೇ ಚುನಾವಣಾ ಆಯೋಗ ಎಷ್ಟು ಅಕ್ರಮ ಎಸಗಿದೆ ಎಂಬ ವಿಚಾರ ಕಣ್ಣ ಮುಂದಿದೆ ಎಂದು ವಿಷಾದಿಸಿದರು. ಮಹದೇವಪುರದಲ್ಲಿ 35,000 ಬೋಗಸ್ ಮತಗಳನ್ನು ಪಟ್ಟಿಗೆ ಸೇರಿಸಿದ್ದಾರೆ ಎಂಬುದನ್ನು ಸಾಕ್ಷಿ ಸಮೇತ ನಿರೂಪಿಸಲಾಗಿದೆ. ಆಳಂದ ಕ್ಷೇತ್ರದಲ್ಲಿ 6,000 ನೈಜ



ಮತದಾರರುಗಳ ಹೆಸರನ್ನು ಪಟ್ಟಿಯಿಂದ ಕೈಬಿಡಲಾಗಿದೆ. ಈ ಅಕ್ರಮದ ಮಾಹಿತಿ ಸೂಕ್ತ ಸಮಯಕ್ಕೆ ಶಾಸಕರಾದ ಬಿ.ಆರ್. ಪಾಟೀಲ್ ಅವರ ಗಮನಕ್ಕೆ ಬಂದ ಕಾರಣಕ್ಕೆ ಈ ಹಗರಣವನ್ನು ತಡೆಯಲಾಯಿತು. ಇಲ್ಲದಿದ್ದರೆ ಅಷ್ಟೂ ಮತಗಳು ಪಟ್ಟಿಯಿಂದ ತೆಗೆಯಲಾಗುತ್ತಿತ್ತು. ಇದು ಚುನಾವಣೆಯೊಂದರ ಫಲಿತಾಂಶದ ಮೇಲೂ ಪರಿಣಾಮ ಬೀರುತ್ತಿತ್ತು ಎಂದು ಅಭಿಪ್ರಾಯಪಟ್ಟರು. ಆಳಂದ ಕ್ಷೇತ್ರದಲ್ಲಿ ಸೈಬರ್ ಸೆಂಟರ್ ಬಳಸಿ ಹತ್ತಾರು ಫೋನ್ ನಂಬರ್ ಮೂಲಕ ಮತದಾರರ ಪಟ್ಟಿಯಿಂದ ಯಾರದ್ದೋ ಹೆಸರನ್ನು ತೆಗೆಯಲು ಇನ್ಯಾರದ್ದೋ ಹೆಸರಿನಿಂದ ಅರ್ಜಿ ಹಾಕಲಾಗಿದೆ. ಸುಮಾರು 70ಕ್ಕೂ ಹೆಚ್ಚು ನಕಲಿ ಫೋನ್ ನಂಬರ್‌ಗಳನ್ನು ಬಳಸಿರುವ ಮಾಹಿತಿ ಈಗಾಗಲೇ ತನಿಖೆಯಿಂದ ಹೊರಬಂದಿದೆ. ಈ ನಂಬರ್‌ಗಳು ಯಾರ ಹೆಸರಿನಲ್ಲಿ ಖರೀದಿಸಲಾಯಿತು? ಇವುಗಳ ಲೊಕೇಷನ್ ಎಲ್ಲಿದೆ? ಮತಗಳ್ಳತನಕ್ಕೆ ಬಳಸಿದ ಲ್ಯಾಪ್ಟಾಪ್ ಗಳ ಐಪಿ ವಿಳಾಸದ ಮಾಹಿತಿ ಸೇರಿದಂತೆ ತನಿಖೆಗೆ ಅಗತ್ಯವಿರುವ ಎಲ್ಲಾ ಮಾಹಿತಿಗಳನ್ನೂ ನೀಡಲು ಚುನಾವಣಾ ಆಯೋಗ ಹಿಂದೇಟು ಹಾಕುತ್ತಿರುವುದು ಏಕೆ? ಇವನ್ನೆಲ್ಲ ಗಮನಿಸಿದರೆ ಆಯೋಗ ಬಿಜೆಪಿಗಳ ಪಕ್ಷಪಾತಿಗಳಾಗಿದ್ದು, ಮತಗಳ್ಳತನ ಅಕ್ರಮದಲ್ಲಿ ಅವರೂ ಶಾಮೀಲಾಗಿರುವುದು ಸ್ಪಷ್ಟವಾಗುವುದಿಲ್ಲವೇ? ಎಂದರು.

**ಸಹಿ ಸಂಗ್ರಹ ಅಭಿಯಾನಕ್ಕೆ ಚಾಲನೆ**

## ನೀರಿನ ಮರುಬಳಕೆ: ರಾಷ್ಟ್ರೀಯ ಕಾರ್ಯಾಗಾರ ನ.6ರಿಂದ

• ಉದಯವಾಹಿನಿ, ಬೆಂಗಳೂರು

ಶುದ್ಧೀಕರಿಸಿದ ತ್ಯಾಜ್ಯ ನೀರಿನ ಮರುಬಳಕೆಯನ್ನು ದೇಶದಾದ್ಯಂತ ಕಡ್ಡಾಯಗೊಳಿಸುವ ಸಮಗ್ರ ರಾಷ್ಟ್ರೀಯ ಯೋಜನೆ ರೂಪಿಸುವುದಕ್ಕಾಗಿ ಕೇಂದ್ರ ನೀತಿ ಆಯೋಗವು ಬೆಂಗಳೂರು ಜಲಮಂಡಳಿ ಸಹಯೋಗದಲ್ಲಿ ನ. 6, 7 ರಂದು ಎರಡು ದಿನಗಳ ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿದೆ. ಕಾರ್ಯಾಗಾರದಲ್ಲಿ ದೇಶದ ವಿವಿಧ ರಾಜ್ಯಗಳ ಉನ್ನತ ಅಧಿಕಾರಿಗಳು, ಜಲ ತಜ್ಞರು ಮತ್ತು ಕೈಗಾರಿಕೆಗಳ ಮುಖ್ಯಸ್ಥರು ಭಾಗವಹಿಸಲಿದ್ದು, ನೀತಿ ನಿಯಮಗಳು, ಹಣಕಾಸು ಮಾದರಿಗಳು, ನೂತನ ತಂತ್ರಜ್ಞಾನದ ಅಳವಡಿಕೆ ಕುರಿತು ಚರ್ಚೆಯಾಗಲಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾರ್ಯಾಗಾರಕ್ಕೆ ಚಾಲನೆ ನೀಡುವರು. ಬ್ರಾಂಡ್ ಬೆಂಗಳೂರು ಅಭಿಯಾನದ ಅಡಿಯಲ್ಲಿ ತ್ಯಾಜ್ಯ ನೀರಿನ ಸಮರ್ಪಕ ಬಳಕೆಗೆ ಒತ್ತು ನೀಡಲಾಗಿದೆ. ತ್ಯಾಜ್ಯ ನೀರಿನ ಬಳಕೆಯನ್ನು ಸಮರ್ಪಕವಾಗಿ ಬಳಸಿಕೊಳ್ಳುವಲ್ಲಿ ಜಲಮಂಡಳಿ ಮಾದರಿಯಾಗಿದೆ ಎಂದು ಜಲಮಂಡಳಿ ಅಧ್ಯಕ್ಷ ರಾಮ್‌ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಬೆಂಗಳೂರು ನಗರದಲ್ಲಿ ಶೇ 90ರಷ್ಟು ಒಳಚರಂಡಿ ಶುದ್ಧೀಕರಣ ಸಾಮರ್ಥ್ಯವನ್ನು ಹೊಂದಿದ್ದು, 1,348 ಎಂ.ಎಲ್.ಡಿ ಯಷ್ಟು ನೀರನ್ನು ಶುದ್ಧೀಕರಿಸಲಾಗುತ್ತಿದೆ. ಈ ನೀರನ್ನು ಸಮರ್ಪಕವಾಗಿ ಬಳಸಿಕೊಂಡು ಕೆರೆ ತುಂಬಿಸಲಾಗುತ್ತಿದೆ. ಪಾರ್ಕ್ ಮತ್ತು ಉದ್ಯಾನಗಳ ನಿರ್ವಹಣೆ ಜತೆಯಲ್ಲಿಯೇ ಕೈಗಾರಿಕೆಗಳಿಗೂ ಪೂರೈಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

## ಕಿತ್ತೂರು ಚೆನ್ನಮ್ಮನ, ಬೆಳವಡಿ ಮಲ್ಲಮ್ಮ ಆದರ್ಶ ಬೆಳೆಸಿಕೊಳ್ಳಿ : ಶಂಕರ ಬಿದಿರಿ

• ಉದಯವಾಹಿನಿ, ಬೆಂಗಳೂರು

ಬೆಳವಡಿ ಮಲ್ಲಮ್ಮ ಹಾಗೂ ಕಿತ್ತೂರು ಚೆನ್ನಮ್ಮ ಈ ನಾಡಿನ ಸರ್ವಶ್ರೇಷ್ಠ ಹೋರಾಟಗಾರ್ತಿಯಾಗಿದ್ದು, ಅವರ ಬದುಕು, ಜೀವನ ಎಲ್ಲರಿಗೂ ಪ್ರೇರಣೆಯಾಗಲಿ ಎಂದು ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಶಂಕರ ಬಿದಿರಿ ಕರೆ ನೀಡಿದ್ದಾರೆ.

ಲಗ್ಗೆರೆಯಲ್ಲಿ ನೀಲೆ ಫೌಂಡೇಷನ್‌ನಲ್ಲಿ ಭಾರತಿ ದರ್ಶ್ ಫೌಂಡೇಶನ್ ನಿಂದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯ ಅಂಗವಾಗಿ ಬೆಳವಡಿ ಮಲ್ಲಮ್ಮ ಹಾಗೂ ಕಿತ್ತೂರು ಚೆನ್ನಮ್ಮ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ನಾಡಿನ ಕೆಚ್ಚೆದೆಯ ಹೋರಾಟಗಾರ್ತಿಯರ ಬದುಕು, ಹೋರಾಟವನ್ನು ಅಧ್ಯಯನ ಮಾಡಬೇಕು. ಅವರ ಆದರ್ಶ ಬೆಳೆಸಿಕೊಳ್ಳಬೇಕು. ಮುಂದಿನ ಪೀಳಿಗೆಗೆ ನಮ್ಮ ನಾಡಿನ ಭವ್ಯ ಪರಂಪರೆಯನ್ನು ತಲುಪಿಸುವ ಕೆಲಸ ಆಗಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಎಲ್.ಬಿ.ಎಸ್ ಆಟೋಮೇಷನ್ ಸಿಸ್ಟಮ್ ಮಾಲೀಕ ಬಸವರಾಜು ಎನ್.ಕೆ. ಅವರು ಭಾರತಿ ದರ್ಶ್ ಫೌಂಡೇಶನ್ ಗೆ ಆಂಬುಲೆನ್ಸ್ ಅನ್ನು ಕೊಡುಗೆ ನೀಡಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಪ್ರತಿಷ್ಠಾನದ ಶೈಲೇಂದ್ರ ಪಾಟೀಲ್, ಪ್ರಮೋದ್ ಪಾಟೀಲ್, ಉಮೇಶ್ ಬಣಕಾರ್, ಡಾ. ರಾಜಶ್ರೀಪಾಟೀಲ್ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಜಿಬಿಎ ವ್ಯಾಪ್ತಿಯಲ್ಲಿ 550 ಕಿ.ಮೀ ಉದ್ದದ ರಸ್ತೆಗೆ ಡಾಂಬರು: ಸರ್ಕಾರಕ್ಕೆ ಪ್ರಸ್ತಾವ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿ 550 ಕಿ.ಮೀ ಉದ್ದದ ಮುಖ್ಯ ಹಾಗೂ ಉಪ ಮುಖ್ಯ ರಸ್ತೆಗಳಿಗೆ ಒಂದು ಲೇಯರ್ ಡಾಂಬರು ಹಾಕಲು ಸರ್ಕಾರಕ್ಕೆ ಜಿಬಿಎ ಪ್ರಸ್ತಾವ ಸಲ್ಲಿಸಿದೆ. ಮೇಲೆ ಪದರ ಡಾಂಬರು ಹಾಕಲು ಪ್ರತಿ ಕಿ.ಮೀಗೆ 2 ಕೋಟಿ ವೆಚ್ಚವಾಗಲಿದೆ. 1,100 ಕೋಟಿ ವೆಚ್ಚದಲ್ಲಿ 550 ಕಿ.ಮೀ ಉದ್ದದ ರಸ್ತೆಗಳಿಗೆ ಡಾಂಬರು ಹಾಕಲು ಯೋಜಿಸಲಾಗಿದೆ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದರು. ಸರ್ಕಾರದಿಂದ ಅನುಮೋದನೆ ದೊರೆತ ಕೂಡಲೇ ಡಾಂಬರೀಕರಣ ಕಾಮಗಾರಿ ಆರಂಭಿಸಲಾಗುತ್ತದೆ ಎಂದರು. ನಿರ್ವಹಣಾ ಅವಧಿ ಮುಗಿದಿರುವ ಮುಖ್ಯ ಹಾಗೂ ಉಪ ಮುಖ್ಯ ರಸ್ತೆಗಳಲ್ಲಿ ಜಿಬಿಎ ವತಿಯಿಂದ ಡಾಂಬರು ಹಾಕಲಾಗುತ್ತದೆ. ನಿರ್ವಹಣಾ ಅವಧಿ ಇರುವ ರಸ್ತೆಗಳಲ್ಲಿ ಆಯಾ ಗುತ್ತಿಗೆದಾರರಿಂದಲೇ ಗುಂಡಿ ದುರಸ್ತಿ ಕಾಮಗಾರಿಗಳನ್ನು ನಡೆಸಲು ಸೂಚಿಸಲಾಗಿದೆ ಎಂದು ಹೇಳಿದರು. ವಾರ್ಡ್ ರಸ್ತೆಗಳಲ್ಲೂ ಗುಂಡಿ ಮುಚ್ಚುವ ಅಥವಾ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ನಗರ ಪಾಲಿಕೆಗಳ ವತಿಯಿಂದ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.



ಉದಯವಾಹಿನಿ ಚಿತ್ರ

ಗಾಂಧಿ ನಗರ ವಿಧಾನ ಸಭೆ ಕ್ಷೇತ್ರದಲ್ಲಿ ವೈಟ್ ಟಾಪಿಂಗ್ ಕಾಮಗಾರಿಗೆ ಅ.21ರಂದು ಚಾಲನೆ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಎಲ್ಲಾ ರಸ್ತೆಗಳಿಗೆ ಒಂದು ಲೇಯರ್ ಡಾಂಬರು ಹಾಕಿ ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರಿಗೆ ವೇದಿಕೆಯಲ್ಲೇ ಆದೇಶ ನೀಡಿದ್ದರು. ಇದಾದ ಎರಡೇ ದಿನದಲ್ಲಿ ಜಿಬಿಎ ವತಿಯಿಂದ ಸರ್ಕಾರಕ್ಕೆ ಪ್ರಸ್ತಾಪ ಸಲ್ಲಿಸಲಾಗಿದೆ.

**ಕ್ರಿಯಾ ಯೋಜನೆಗೆ ಸೂಚನೆ:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಮುಖ್ಯ ಮತ್ತು ಉಪ ಮುಖ್ಯ ರಸ್ತೆಗಳ ಅಭಿವೃದ್ಧಿಗೆ 1,100 ಕೋಟಿ, ವಾರ್ಡ್ ರಸ್ತೆ, ಚರಂಡಿ ಅಭಿವೃದ್ಧಿಗೆ 1,100 ಕೋಟಿ ವೆಚ್ಚದ ಎರಡು ಕ್ರಿಯಾಯೋಜನೆಗಳನ್ನು ಸಲ್ಲಿಸುವಂತೆ ಜಿಬಿಎಗೆ ನಗರಾಭಿವೃದ್ಧಿ ಇಲಾಖೆ ಆ.15 ರಂದು ಸೂಚಿಸಿತ್ತು.

ಮುಖ್ಯ ಮತ್ತು ಉಪಮುಖ್ಯ ರಸ್ತೆಗಳ ಅಭಿವೃದ್ಧಿಗೆ 1,100 ಕೋಟಿ ಕ್ರಿಯಾ ಯೋಜನೆಯನ್ನು ವಿಶೇಷ ಮೂಲಸೌಕರ್ಯ ಬಂಡವಾಳ ಬೆಂಬಲ ಯೋಜನೆಯಡಿ ಪ್ರಸ್ತಾವ ಸಲ್ಲಿಸಬೇಕು. ವಾರ್ಡ್‌ಗಳ ರಸ್ತೆ, ಚರಂಡಿ ಅಭಿವೃದ್ಧಿ, ನಿರ್ವಹಣೆ ಕಾಮಗಾರಿಗಳ 1,100 ಕೋಟಿ ಕ್ರಿಯಾ ಯೋಜನೆಯನ್ನು ಮುಖ್ಯಮಂತ್ರಿಯವರ ವಿವೇಚನಾ ನಿಧಿಯಲ್ಲಿ ಕೈಗೊಳ್ಳಲು ಪ್ರಸ್ತಾವ ಸಲ್ಲಿಸಬೇಕು ಎಂದು ತಿಳಿಸಲಾಗಿತ್ತು.

ಎರಡೂ ಕ್ರಿಯಾ ಯೋಜನೆಗಳನ್ನು ಐದು ನಗರ ಪಾಲಿಕೆಗಳಿಂದ ಪಡೆದು, ಪರಿಶೀಲಿಸಿ, ಕ್ರೋಡೀಕರಿಸಿ ಸರ್ಕಾರಕ್ಕೆ ಶೀಘ್ರ ಸಲ್ಲಿಸಬೇಕು ಎಂದು ಜಿಬಿಎ ಮುಖ್ಯ ಆಯುಕ್ತರಿಗೆ ಸೂಚಿಸಲಾಗಿತ್ತಾದರೂ, 500 ಕಿ.ಮೀ ಉದ್ದದ ಮುಖ್ಯ ಮತ್ತು ಉಪಮುಖ್ಯ ರಸ್ತೆಗಳಿಗೆ ಒಂದು ಲೇಯರ್ ಡಾಂಬರು ಹಾಕಲು ಮಾತ್ರ ಪ್ರಸ್ತಾವ ಸಲ್ಲಿಸಲಾಗಿದೆ.

# ಟೋಲ್ ರಸ್ತೆಯನ್ನು ತಪ್ಪಿಸಿ ಕಾಲೇಜು ವಿದ್ಯಾರ್ಥಿನಿಗೆ ಕಿರುಕುಳ

## ಏರ್‌ಪೋರ್ಟ್ ಟೋಲ್ ತಪ್ಪಿಸಿ ಬೇರೆ ದಾರಿಯಲ್ಲಿ ಹೋಗಿದ್ದನ್ನು ಪ್ರಶ್ನಿಸಿದ್ದಕ್ಕೆ ಚಾಲಕನಿಂದ ವಿದ್ಯಾರ್ಥಿನಿಯ ಮೇಲೆ ಹಲ್ಲೆ

• ಉದಯವಾಹಿನಿ, ಬೆಂಗಳೂರು:

ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ (ಕೆಐಎ) ತೆರಳುವ ಮಾರ್ಗದಲ್ಲಿ ಟೋಲ್ ರಸ್ತೆಯನ್ನು ತಪ್ಪಿಸಿದ್ದನ್ನು ಪ್ರಶ್ನಿಸಿದ್ದಕ್ಕೆ ಕ್ಯಾಬ್ ಚಾಲಕನೊಬ್ಬ ಕಾಲೇಜು ವಿದ್ಯಾರ್ಥಿನಿಯ ಮೇಲೆ ಹಲ್ಲೆ ನಡೆಸಿರುವ ಆಘಾತಕಾರಿ ಘಟನೆ ನಡೆದಿದೆ. ಈ ಘಟನೆ ಕ್ಯಾಬ್‌ಗಳಲ್ಲಿ ಒಬ್ಬಂಟಿ ಮಹಿಳೆಯರ ಪ್ರಯಾಣದ ಎಷ್ಟು ಸುರಕ್ಷಿತ ಎಂಬ ಪ್ರಶ್ನೆಯನ್ನು ಹುಟ್ಟುಹಾಕಿದೆ.

ವಾಗ್ವಾದ ನಡೆಸಿ 19 ವರ್ಷದ ಕಾಲೇಜು ವಿದ್ಯಾರ್ಥಿನಿಯ ಮೇಲೆ ಹಲ್ಲೆ ಮಾಡಿದ ಆರೋಪದ ಮೇಲೆ ಕ್ಯಾಬ್ ಚಾಲಕನನ್ನು ಪೊಲೀಸರು ಶನಿವಾರ ಬಂಧಿಸಿದ್ದಾರೆ. ಆರೋಪಿಯನ್ನು ಕೇರಳದ ತ್ರಿಶೂರ್ ಮೂಲದ 31 ವರ್ಷದ ಅಜಾಸ್ ಪಿ.ಎಸ್. ಎಂದು ಗುರುತಿಸಲಾಗಿದ್ದು, ಅಕ್ಟೋಬರ್ 20 ರಂದು ನಡೆದ ಘಟನೆಗೆ ಸಂಬಂಧಿಸಿದಂತೆ ಆತನನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ಘಟನೆ ನಡೆದಿದ್ದು ಹೇಗೆ?:** ಸಂತ್ರಸ್ತೆಯ ಚಿಕ್ಕಪ್ಪ ಸಲ್ಲಿಸಿದ ದೂರಿನ ಪ್ರಕಾರ, ಪಶ್ಚಿಮ ಬಂಗಾಳದ ವಿದ್ಯಾರ್ಥಿನಿಯು ಬೆಂಗಳೂರಿನ ಖಾಸಗಿ ವಿಶ್ವವಿದ್ಯಾಲಯದಲ್ಲಿ ಪದವಿ ವ್ಯಾಸಂಗ ಮಾಡುತ್ತಿದ್ದು,



ಉದಯವಾಹಿನಿ ಚಿತ್ರ

ವಿಮಾನ ಹಿಡಿಯಲು ಆನ್‌ಲೈನ್ ಅಗ್ರಿಗೇಟರ್ ಮೂಲಕ ಕ್ಯಾಬ್ ಬುಕ್ ಮಾಡಿದ್ದಳು. ಪ್ರಯಾಣದ ವೇಳೆ, ವಿದ್ಯಾರ್ಥಿನಿ ಟೋಲ್ ಶುಲ್ಕವನ್ನು ಪಾವತಿಸಿದ್ದರೂ, ಚಾಲಕನು ಟೋಲ್ ರಸ್ತೆಯನ್ನು ತಪ್ಪಿಸಿ ಇನ್ನೊಂದು ದಾರಿಯಲ್ಲ ಸಾಗಿದ್ದಾನೆ ಎನ್ನಲಾಗಿದೆ. ಬೆಳಿಗ್ಗೆ 6.30ರ ಸುಮಾರಿಗೆ ಬೇಗೂರು ಜಂಕ್ಷನ್ ಬಳಿ ಚಾಲಕ ಮಾರ್ಗ ಬದಲಾಗುತ್ತಿರುವುದನ್ನು ವಿದ್ಯಾರ್ಥಿನಿಸಿದ್ದಾಳೆ.ಈ ವೇಳೆ ವಿದ್ಯಾರ್ಥಿನಿಗೆ ಚಾಲಕನ ಮೇಲೆ ಅನುಮಾನ ಮೂಡಿದ್ದು, ಬೇರೆದಾರಿಯಲ್ಲಿ ತನ್ನನ್ನು ಕರೆದೊಯ್ಯುತ್ತಿರುವ ಬಗ್ಗೆ ಅನುಮಾನ ಮೂಡಿ, ತಕ್ಷಣವೇ ಎಚ್ಚೆತ್ತುಕೊಂಡ ಆಕೆ ಈ ಬಗ್ಗೆ ಕ್ಯಾಬ್ ಚಾಲಕನನ್ನು ಆಕೆ ಪ್ರಶ್ನಿಸಿದ್ದಾಳೆ. ಆತ ಸರಿಯಾದ ವಿವರಣೆ ನೀಡಲು ವಿಫಲನಾಗಿದ್ದು, ಇದರಿಂದ ವಿದ್ಯಾರ್ಥಿನಿ ವಾಹನ ನಿಲ್ಲಿಸುವಂತೆ ಕೇಳಿಕೊಂಡಿದ್ದಾಳೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

**ವಾಗ್ವಾದದ ಬಳಿಕ ವಿದ್ಯಾರ್ಥಿನಿ ಮೇಲೆ ಹಲ್ಲೆ:** ವಾಹನ ನಿಲ್ಲಿಸಿದ ನಂತರ ಇಬ್ಬರ ನಡುವೆ ತೀವ್ರ ವಾಗ್ವಾದ ನಡೆದಿದೆ. ವಿದ್ಯಾರ್ಥಿನಿ ಕೆಳಗಿಳಿದು ಮತ್ತೊಂದು ಕ್ಯಾಬ್ ಬುಕ್ ಮಾಡಲು ಮುಂದಾದಾಗ ಆರೋಪಿ ಚಾಲಕ ಆಕೆಯ ಮೇಲೆ ಹಲ್ಲೆ ನಡೆಸಿದ್ದಾನೆ ಎಂದು ಆರೋಪಿಸಲಾಗಿದೆ. ನಂತರ ವಿದ್ಯಾರ್ಥಿನಿ ತನ್ನ ಸಾಮಾನುಗಳನ್ನು ಅಲ್ಲೇ ಬಿಟ್ಟು ಸ್ಥಳದಿಂದ ತೆರಳಿದ್ದು, ಚಾಲಕ ಅಲ್ಲಿಂದ ಪರಾರಿಯಾಗಿದ್ದಾನೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

> **ಪ್ರಕರಣ ದಾಖಲು; ಆರೋಪಿ ಬಂಧನ**
> **ದೂರಿನ ಆಧಾರದ ಮೇಲೆ, ಪೊಲೀಸರು ಭಾರತೀಯ ನ್ಯಾಯ ಸಂಹಿತೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಈ ಸೆಕ್ಷನ್‌ಗಳು ಮುಖ್ಯವಾಗಿ ಸ್ವಯಂಪ್ರೇರಿತವಾಗಿ ಗಾಯಗೊಳಿಸುವುದು, ಕ್ರಿಮಿನಲ್ ಬೆದರಿಕೆ, ಮತ್ತು ತಪ್ಪು ನಿರ್ಬಂಧ ಗಳಿಗೆ ಸಂಬಂಧಿಸಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಚಾಲಕನನ್ನು ಬಂಧಿಸಲಾಗಿದೆ. ಪ್ರಾಥಮಿಕ ತನಿಖೆಯಲ್ಲಿ, ಆರೋಪಿಯು ಘಟನೆ ನಡೆಯುವ ಕೇವಲ ಎರಡು ದಿನಗಳ ಮೊದಲು ಕೇರಳದಿಂದ ಬೆಂಗಳೂರಿಗೆ ಬಂದಿದ್ದನು ಮತ್ತು ಬುಕಿಂಗ್ ಸ್ವೀಕರಿಸಿದಾಗ ಆತ ಮದ್ಯದ ಅಮಲಿನಲ್ಲಿದ್ದನು ಎಂಬ ಅಂಶ ತಿಳಿದುಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ.**

# ಸ್ನಾನಕ್ಕೆ ಹೋದ ಸಹೋದರಿಯರು ಗ್ಯಾಸ್ ಗೀಸರ್ ಸೋರಿ ದುರ್ಮರಣ

• ಉದಯವಾಹಿನಿ, ಮೈಸೂರು



ಮೈಸೂರಿನ ಪಿರಿಯಾಪಟ್ಟಣದ ತಾಲ್ಲೂಕಿನ ಬೆಟ್ಟದಪುರ ಗ್ರಾಮದಲ್ಲಿ ಗ್ಯಾಸ್ ಗೀಸರ್ ಸೋರಿ ಅಕ್ಕ-ತಂಗಿ ದುರಂತ ಅಂತ್ಯ ಕಂಡಿರುವ ಘಟನೆ ನಡೆದಿದೆ. ಗುಲ್ಭಾಮ್ (23) ಮತ್ತು ಆಕೆಯ ಸಹೋದರಿ ಸಿಮ್ರಾನ್ ತಾಜ್ (20) ಎಲ್ ಪಿಜಿ ಅನಿಲ ಸೋರಿ ಉಸಿರುಗಟ್ಟಿ ಸ್ನಾನಗೃಹದಲ್ಲಿ ಸಾವನ್ನಪ್ಪಿದ ಮೃತ ದುರ್ದೈವಿಗಳು.

**ಏನಿದು ಘಟನೆ?:** ಪಿರಿಯಾಪಟ್ಟಣದ ಜೋನಿಗೇರಿ ಬೀದಿಯಲ್ಲಿ ಅಲ್ತಾಫ್ ಪಾಷಾ ಮತ್ತು ಅವರ ಕುಟುಂದವರು ಬಾಡಿಗೆ ಮನೆಯಲ್ಲಿ ವಾಸವಾಗಿದ್ದಾರೆ. ಸಹೋದರಿಬ್ಬರು ಒಟ್ಟಿಗೆ ಸ್ನಾನಕ್ಕೆ ತೆರಳಿದ್ದಾರೆ, ಆದರೆ ಸ್ನಾನಕ್ಕೆ ಹೋದವರು ಬಹಳ ಸಮಯವಾದರೂ ಹೊರಗೆ ಬಂದಿರಲಿಲ್ಲ. ಇದರಿಂದ ಅನುಮಾನಗೊಂಡ ತಂದೆ ಅಲ್ತಾಫ್ ಬಾಗಿಲು ಬಡಿದಿದ್ದಾರೆ.

ಆಗಲೂ ಬಾಗಿಲು ತೆಗೆಯಲಿಲ್ಲ ಇದರಿಂದ ಸಂಶಯಗೊಂಡು ಬಾಗಿಲು ಹೊಡೆದು ಒಳಹೋಗಿ ನೋಡಿದಾಗ ಮಕ್ಕಳಿಬ್ಬರು ಅರೆಪ್ರಜ್ಞಾವಸ್ಥೆಯಲ್ಲಿರೋದು ಕಂಡು ಶಾಕ್ ಆಗಿದ್ದಾರೆ. ತಕ್ಷಣ ಮಕ್ಕಳನ್ನು ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದ್ದರೂ, ಆದರೆ ಆಸ್ಪತ್ರೆ ಹೋಗುವಷ್ಟರಲ್ಲೇ ಮೃತ ಪಟ್ಟಿದ್ದಾರೆಂದು ವೈದ್ಯರು ತಿಳಿಸಿದ್ದಾರೆ.

**ಕಾರ್ಬನ್ ಮೋನಾಕ್ಸೆಡ್ ಸೋರಿ ಅವಘಡ:** ಯುವತಿಯರು ಸ್ನಾನಕ್ಕೆ ಹೋದಾಗ ಗೀಸರ್ ಗ್ಯಾಸ್ ನಿಂದ ಕಾರ್ಬನ್ ಮೋನಾಕ್ಸೆಡ್ ಸೇವಿಸಿ ಉಸಿರುಗಟ್ಟಿ ಯುವತಿಯರು ಮೃತಪಟ್ಟಿರುವುದು ಮೇಲ್ನೋಟಕ್ಕೆ ಕಂಡುಬಂದಿದೆ. ಇನ್ನೂ ಶವ ಪರೀಕ್ಷೆ ನಡೆಸಿ, ವರದಿಗೆ ಕಳುಹಿಸಲಾಗಿದೆ. ಪಿರಿಯಾಪಟ್ಟಣದ ಶವಾಗಾರದಲ್ಲಿ ಇಬ್ಬರೂ ಯುವತಿಯರ ಮರಣೋತ್ತರ ಪರೀಕ್ಷೆ ನಡೆಸಿ, ನಂತರ ಬೆಟ್ಟದಪುರದ ಗ್ರಾಮದಲ್ಲಿ ಸಂಜೆ ವೇಳೆ ಅಂತ್ಯಕ್ರಿಯೆ ನೆರವೇರಿಸಲಾಗಿದೆ. ಇನ್ನೂ ಈ ಸಂಬಂಧ ಪಿರಿಯಾಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾರು ಮತ್ತು ಟಿಪ್ಪರ್ ನಡುವೆ ಭೀಕರ ಅಪಘಾತ : ಇಬ್ಬರ ದುರ್ಮರಣ

• ಉದಯವಾಹಿನಿ, ಗುಂಡ್ಲುಪೇಟೆ

ಕಾರು ಹಾಗೂ ಟಿಪ್ಪರ್ ನಡುವೆ ಭೀಕರ ಅಪಘಾತ ಸಂಭವಿಸಿ ಇಬ್ಬರು ಸ್ಥಳದಲ್ಲೇ ದುರ್ಮರಣಕ್ಕೀಡಾದರೆ ಮೂವರ ಸ್ಥಿತಿ ಚಿಂತಾಜನಕವಾಗಿರುವ ಘಟನೆ ತಾಲ್ಲೂಕಿನ ಮಾದಪಟ್ಟಣ ಬೌಂಡರಿ ಬಳಿ ಶನಿವಾರ ನಡೆದಿದೆ. ಮಾದಪಟ್ಟಣ ಬೌಂಡರಿ ಸಮೀಪ ಕೇರಳ ಮೂಲದ ಕಾರು ಹಾಗೂ ಕಲ್ಲು ಸಾಗಿಸುತ್ತಿದ್ದ ಟಿಪ್ಪರ್ ಲಾರಿ ನಡುವೆ ಸಂಭವಿಸಿದ ಮುಖಾಮುಖಿ ಡಿಕ್ಕಿಯಲ್ಲಿ ದಂಪತಿಗಳಿಬ್ಬರು ಸಾವನ್ನಪ್ಪಿದ್ದು ಚಿಂತಾಜನಕ ಸ್ಥಿತಿಯಲ್ಲಿದ್ದ ಮಗು ಸೇರಿದಂತೆ ಮೂವರನ್ನ ಮೈಸೂರಿನ ಖಾಸಗಿ ಆಸ್ಪತ್ರೆಗೆ ರವಾನಿಸಲಾಗಿದೆ. ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯ ಮಾದಪಟ್ಟಣ ಬೌಂಡರಿ ಬಳಿ ಬೆಳೆಗ್ಗೆ 11 ಗಂಟೆ ಸುಮಾರಿಗೆ ಅಪಘಾತ ಸಂಭವಿಸಿದೆ, ಸ್ಥಳದಲ್ಲಿ ಮೃತಪಟ್ಟವರಲ್ಲಿ ಕೇರಳದ ಕಲ್ಪೇಟೆಯ ಕಂಮ್ಲುಕಾಡ್ ಗ್ರಾಮದವರು ಎಂಬುದಾಗಿ ತಿಳಿದುಬಂದಿದೆ. ಬಶೀರ್ ( 53 ) ನಶೀಮಾ ( 42 ) ಸ್ಥಳದಲ್ಲೇ ಅಸುನೀಗಿದ್ದು ಮಹಮದ್ ಷರೀಫ್ (32) ಜಸೀರಾ ( 28 ) ಹಾಗೂ ಹಜೀಮ್ ಹನನ್ ( 03 ) ರನ್ನ ಮೈಸೂರಿಗೆ ರವಾನೆ ಮಾಡಲಾಯಿತು.



☛ ಉದಯವಾಹಿನಿ ಚಿತ್ರ

**ಘಟನಾ ವಿವರ:** ಮೈಸೂರು ಮಾರ್ಗವಾಗಿ ಕೇರಳಕ್ಕೆ ತೆರಳುತ್ತಿದ್ದ ಕೆ.ಎಲ್. 12 ಜಿ . 4141 ನೋಂದಣಿಯ ಸ್ವಿಫ್ಟ್ ಕಾರು ಹಾಗೂ ಗುಂಡ್ಲುಪೇಟೆಯಿಂದ ಬೇಗೂರು ಕಡೆಗೆ ಕರಿಕಲ್ಲು ಸಾಗಿಸುತ್ತಿದ್ದ ಕೆ.ಎಲ್.32 ಆರ್ 6077 ನೋಂದಣಿಯ ಟಿಪ್ಪರ್ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿದ ಭೀಕರತೆಗೆ ದಂಪತಿಗಳಿಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸದ್ಯ ಟಿಪ್ಪರ್ ಚಾಲಕ ಸ್ಥಳದಿಂದ ಪರಾರಿಯಾಗಿದ್ದು ಬೇಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಬೇಗೂರು ಪೊಲೀಸರಿಂದ ರಕ್ಷಣಾ ಕಾರ್ಯ:** ಘಟನೆ ಮಾಹಿತಿಯನ್ನರಿತು ಸ್ಥಳಕ್ಕಾಗಮಿಸಿದ ಬೇಗೂರು ಪೊಲೀಸ್ ಠಾಣೆ ಪಿಐ ಮೋಹಿತ್ ಸಹದೇವ್, ಸಬ್ ಇನ್ಸ್‌ಪೆಕ್ಟರ್ ನವೀನ್, ಎ ಎಸ್ ಐ ನಾಗೇಂದ್ರ ರಾಜ್ ಅರಸ್, ಶಿವಶಂಕರ್, ಸಿಬ್ಬಂದಿಗಳಾದ ಶಿವಕುಮಾರ್, ನಂದೀಶ್, ಶಂಕರ್ ಲಿಂಗೇಗೌಡ, ಶಿವಕುಮಾರ್, ನಂದೀಶ್ ಕಾರಿನೊಳಗೆ ಸಿಲುಕಿ ಚಿಂತಾಜನಕ ಸ್ಥಿತಿಯಲ್ಲಿದ್ದ ಮಗು ಸೇರಿದಂತೆ ಮೂವರನ್ನ ರಕ್ಷಿಸಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ರವಾನಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

# ಮಾಗಡಿ ಪುರಸಭೆ ಘನತಾಜ್ಯ ಸೋಲೂರು ಘಟಕಕ್ಕೆ

■ ಘಟಕದಿಂದ ಹರಡುವ ದುರ್ವಾಸನೆ ■ ಮಾರಕ ರೋಗ ಭಯ

• ಉದಯವಾಹಿನಿ, ಮಾಗಡಿ

ಪುರಸಭೆ ವ್ಯಾಪ್ತಿಯಲ್ಲಿ ಉತ್ಪಾದನೆಯಾಗುವ ಘನತ್ಯಾಜ್ಯವನ್ನು ಸೋಲೂರಿನ ಐಎಎಸ್‌ಪಿ ಘಟಕಕ್ಕೆ ರವಾನೆ ಮಾಡುವ ಮೂಲಕ ಕಸ ಮುಕ್ತ ಪಟ್ಟಣವಾಗಿ ಮಾರ್ಪಡುವ ನಿಟ್ಟಿನಲ್ಲಿ ಮಾಗಡಿ ಪುರಸಭೆ ಮುಂದಾಗಿದೆ.

ಅಕ್ಟೋಬರ್‌ನಿಂದ ಪ್ರತಿದಿನ ಮಾಗಡಿ ಪಟ್ಟಣದಲ್ಲಿ ಉತ್ಪಾದನೆಯಾಗುವ 10ಟನ್‌ಗೂ ಹೆಚ್ಚು ಘನ ತ್ಯಾಜ್ಯವನ್ನು ಸೋಲೂರಿಗೆ ಕಳುಹಿಸಲಾಗುತ್ತಿದೆ. ತಿರುಮಲೆ ಕಸ ಸಂಗ್ರಹ ಘಟಕಕ್ಕೆ ಇನ್ನು ಮುಂದೆ ಕಸ ಹಾಕಲಾಗುವುದಿಲ್ಲ ಸೋಲೂರಿನ ಘಟಕದಲ್ಲಿ ಈ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಬೇರ್ಪಡಿಸಿ ಗೊಬ್ಬರ ಮತ್ತು ಇತರ ಉಪಯುಕ್ತ ವಸ್ತು ತಯಾರಿಸಲಾಗುತ್ತದೆ ಎಂದು ಪುರಸಭೆ ಮುಖ್ಯಾಧಿಕಾರಿ ಶ್ರೀನಿವಾಸ್ ತಿಳಿಸಿದರು.

ತಿರುಮಲೆ ಘಟಕದಲ್ಲಿ ಈಗಾಗಲೇ ಶೇಖರಣೆಯಾಗಿರುವ ತ್ಯಾಜ್ಯವನ್ನು ವಿಂಗಡಿಸಿ, ಪ್ಲಾಸ್ಟಿಕ್ ವಸ್ತುಗಳನ್ನು ಬಿಡದಿ ಘಟಕಕ್ಕೆ ಕಳುಹಿಸಲಾಗುವುದು. ಈ ಸಂಪೂರ್ಣ ಪ್ರಕ್ರಿಯೆ ಮುಗಿಯಲು ಒಂದರಿಂದ ಎರಡು ವರ್ಷಗಳ ಕಾಲ ತೆಗೆದುಕೊಳ್ಳಬಹುದು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ತಿರುಮಲೆ ಕಸ ಸಂಗ್ರಹ ಘಟಕ ದೀರ್ಘಕಾಲದಿಂದಲೂ ಸ್ಥಳೀಯರ ವಿರೋಧಕ್ಕೆ ಕಾರಣವಾಗಿತ್ತು. ದೇವಾಲಯದ ಸಮೀಪದಲ್ಲಿದ್ದ ಈ ಘಟಕದಿಂದ ಹರಡುವ ದುರ್ವಾಸನೆ, ಮಾರಕ ರೋಗ ಭಯ ಮತ್ತು ಪರಿಸರ ಮಾಲಿನ್ಯ ಪ್ರಮುಖ ಸಮಸ್ಯೆಯಾಗಿತ್ತು. ಸ್ಥಳೀಯರು ಮತ್ತು ಪರಿಸರ ಪ್ರೇಮಿಗಳು ಹಲವು ಸಲ ಟೀಕಿಸಿದ್ದರು.

ಈ ಸಮಸ್ಯೆ ಕುರಿತು ಹಸಿರು ನ್ಯಾಯಾಲಯಕ್ಕೆ ದೂರು ನೀಡಲಾಗಿತ್ತು. ನಿವೃತ್ತ ಯೋಧ ಶಿವಲಿಂಗಯ್ಯ ನೇತೃತ್ವದಲ್ಲಿ ಹಲವು ಪ್ರತಿಭಟನೆಗಳು ನಡೆದಿದ್ದವು. ಪುರಸಭೆ ಈ ಹೊಸ ತೀರ್ಮಾನವನ್ನು ಸ್ಥಳೀಯರು ಸ್ವಾಗತಿಸಿದ್ದಾರೆ.

**ತಿರುಮಲೆ ಬಳಿ ಕಸ ಸಂಗ್ರಹ ಘಟಕಕ್ಕೆ ಕಸ ಹಾಕದಂತೆ ಎಚ್ಚರಿಕೆ ಕ್ರಮ ವಹಿಸಬೇಕು. ಈಗ ಸೋಲೂರಿಗೆ ಕಸ ಕಳುಹಿಸುತ್ತಿರುವುದು ಒಳ್ಳೆಯ ನಿರ್ಧಾರ, ತಿರುಮಲೆ ಸಂಗ್ರಹ ಘಟಕ ಶಾಶ್ವತವಾಗಿ ಮುಚ್ಚಬೇಕು.**

-ಟಿ.ಎಂ. ಶ್ರೀನಿವಾಸ್
ತಿರುಮಲೆ ನಿವಾಸಿ ಮಾಗಡಿ

☛ ಉದಯವಾಹಿನಿ ಚಿತ್ರ





**ಪರಿಸರ ಕಾಪಾಡಿ**

**ಪುರಸಭೆ ಸಾಮಾನ್ಯ ಸಭೆಯಲ್ಲಿ ತೀರ್ಮಾನ ಮಾಡಿದಂತೆ ಮಾಗಡಿ ಪಟ್ಟಣದಲ್ಲಿ ಸಂಗ್ರಹವಾಗುವ ಕಸ ಸೋಲೂರಿನ ಘಟಕಕ್ಕೆ ಪ್ರತಿದಿನ ಲಾರಿ ಮೂಲಕ ಕಳುಹಿಸಿ ಕೊಡಲಾಗುತ್ತಿದೆ. ಲಾರಿ ಸಾಗಣೆ ವೆಚ್ಚವನ್ನು ಪುರಸಭೆ ನಿಧಿಯಿಂದ ವಹಿಸಲಾಗುತ್ತದೆ. ಸಾರ್ವಜನಿಕರು ಎಲ್ಲೆಂದರಲ್ಲಿ ಕಸ ಎಸೆಯದೆ ಮನೆ ಮುಂದೆ ಬರುವ ಕಸದ ಗಾಡಿಗೆ ಹಾಕುವ ಮೂಲಕ ಪರಿಸರ ಕಾಪಾಡುವ ಕೆಲಸ ಮಾಡಬೇಕು.**

-ಶಿವರುದ್ರಮ್ಮ ,ಪುರಸಭೆ ಅಧ್ಯಕ್ಷೆ


# ಡಿಸಿಆರ್‌ಇ ಡಿವೈಎಸ್ಪಿ ವರ್ಗಾವಣೆಗೆ ಆಗ್ರಹ

• ಉದಯವಾಹಿನಿ, ರಾಮನಗರ

ರಾಮನಗರದಲ್ಲಿರುವ ಡಿಸಿಆರ್‌ಇ ಠಾಣೆಯಲ್ಲಿ ಜಾತಿ ದೌರ್ಜನ್ಯ ಸಂತ್ರಸ್ತರಿಂದ ಡಿವೈಎಸ್ಪಿ ಸಿ. ಎನ್. ರಮೇಶ್ ಅವರು ದೂರು ಪಡೆಯದೆ ನಿರ್ಲಕ್ಷಿಸುತ್ತಿದ್ದಾರೆ. ದೌರ್ಜನ್ಯ ಎಸಗಿದವರ ಪರ ವಕಾಲತ್ತು ಮಾಡುತ್ತಾ, ಸಂತ್ರಸ್ತರನ್ನು ಬೆದರಿಸುತ್ತಿದ್ದಾರೆ. ಅವರನ್ನು ಕೂಡಲೇ ವರ್ಗಾವಣೆ ಮಾಡಬೇಕು ಎಂದು ಬಿಎಸ್‌ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಸಿ. ನಾಗರಾಜ್ ಆಗ್ರಹಿಸಿದರು.

ರಾಮನಗರದ ಬಿಸಿಎಂ ಹಾಸ್ಟೆಲ್‌ನಲ್ಲಿ ಅಡುಗೆ ಕೆಲಸ ಮಾಡುವ ಮಂಜುಳಾ ಅವರ ಮೇಲೆ ಬಿಸಿಎಂ ಅಧಿಕಾರಿ ಮಧುಮಾಲ ಮತ್ತು ವಾರ್ಡನ್ ಸಾಕಮ್ಮ ಹಲ್ಲೆ ನಡೆಸಿ ಜಾತಿ ನಿಂದನೆ ಮಾಡಿದ್ದಾರೆ. ಅ. 9ರಂದು ನಡೆದ ಘಟನೆ ಕುರಿತು ಮಂಜುಳಾ ದೂರು ನೀಡಲು ಠಾಣೆಗೆ ಹೋದಾಗ ಆರಂಭದಲ್ಲಿ ರಮೇಶ್ ಸ್ವೀಕರಿಸದೆ, ಸಂತ್ರಸ್ತೆಗೆ ಬೆದರಿಕೆ ಹಾಕಿದ್ದಾರೆ' ಎಂದು ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ದೂರಿದರು.

ವಿಷಯ ತಿಳಿದು ವಿವಿಧ ಸಂಘಟನೆಗಳ ಪದಾಧಿಕಾರಿಗಳು ಅ. 18ರಂದು ಠಾಣೆಗೆ ಹೋಗಿ, ಪ್ರಕರಣ ದಾಖಲಿಸಲು ಒತ್ತಾಯಿಸಿದರು. ಆಗ ಡಿವೈಎಸ್ಪಿ ಪದಾಧಿಕಾರಿಗಳಿಗೆ ಧಮ್ಕಿ ಹಾಕಿ, ಸ್ಥಳಕ್ಕೆ ಪೊಲೀಸರನ್ನು ಕರೆಯಿಸಿ ಬೆದರಿಸಿದರು. ಒತ್ತಡಕ್ಕೆ ಮಣಿದು ಪ್ರಕರಣ ದಾಖಲಿಸಿದರೂ, ಸಂತ್ರಸ್ತೆಗೆ ನ್ಯಾಯ ಕೊಡಿಸಲು ಹೋದವರ ವಿರುದ್ಧವೇ ಠಾಣೆಯಲ್ಲಿ ಎನ್‌ಸಿಆರ್ ದಾಖಲಿಸಿದ್ದಾರೆ ಎಂದು ಕಿಡಿಕಾರಿದರು.



☛ ಉದಯವಾಹಿನಿ ಚಿತ್ರ

**'ಕೆಲಸ ಬೇಕಾ ನ್ಯಾಯ ಬೇಕಾ ಎಂದರು 'ನನ್ನ ಮೇಲಿನ ಹಲ್ಲೆ ಮತ್ತು ಜಾತಿನಿಂದನೆ ಕುರಿತು ದೂರು ಕೊಡಲು ಠಾಣೆಗೆ ಹೋದಾಗ ಪೊಲೀಸರು ನನ್ನನ್ನು ಅಲೆದಾಡಿಸಿದರು. ಡಿಸಿಆರ್‌ಇ ಡಿವೈಎಸ್ಪಿ ಅವರು ಆರಂಭದಲ್ಲಿ ಪ್ರಕರಣ ದಾಖಲಿಸಿಕೊಳ್ಳಲಿಲ್ಲ. ಬದಲಿಗೆ ನಿನಗೆ ಕೆಲಸ ಬೇಕಾ ಅಥವಾ ನ್ಯಾಯ ಬೇಕಾ ಎಂದು ಪ್ರಶ್ನಿಸಿದರು. ದೌರ್ಜನ್ಯ ಎಸಗಿದವರ ಪರ ವಕಾಲತ್ತು ಮಾಡಿ ನನಗೆ ಬೆದರಿಸಿದರು. ಕಡೆಗೆ ಸಂಘಟನೆಗಳು ನೆರವಿಗೆ ಬಂದವು. ಬಳಿಕ ಪ್ರಕರಣ ದಾಖಲಿಸಿದರು.**

- ಮಂಜುಳಾ, ಸಂತ್ರಸ್ತೆ

ದೌರ್ಜನ್ಯ ಸಂತ್ರಸ್ತರು ಠಾಣೆಗೆ ಬಂದರೆ ಡಿವೈಎಸ್ಪಿ ಪ್ರಕರಣ ದಾಖಲಿಸದೆ, ದೌರ್ಜನ್ಯ ಎಸಗಿದವರ ಪರವಾಗಿ ರಾಜಿ ಮಾಡಿಸುತ್ತಿದ್ದಾರೆ. ಅವರನ್ನು ಕೂಡಲೇ ವರ್ಗಾವಣೆ ಮಾಡಬೇಕು. ಮಹಿಳೆ ಮೇಲೆ ಹಲ್ಲೆ ನಡೆಸಿದ ಬಿಸಿಎಂ ಅಧಿಕಾರಿಯನ್ನು ಬಂಧಿಸಿ, ಕೆಲಸದಿಂದ ಅಮಾನತು ಮಾಡಬೇಕು. ಮಂಜುಳಾಗೆ ನ್ಯಾಯ ಕೊಡಿಸಿ, ಅವರ ಕೆಲಸ ಕಾಯಂಗೊಳಿಸಬೇಕು.

ಸಂಘಟನೆಗಳ ಪದಾಧಿಕಾರಿಗಳ ವಿರುದ್ಧ ದಾಖಲಿಸಿರುವ ಎನ್‌ಸಿಆರ್ ರದ್ದುಪಡಿಸಬೇಕು ಎಂದು ಆಗ್ರಹಿಸಿದರು. ರಾಷ್ಟ್ರೀಯ ಅಪರಾಧ ತಡೆ ಮತ್ತು ಮಾನವ ಹಕ್ಕುಗಳ ಭಾರತ ಪರಿಷತ್ ರಾಜ್ಯಾಧ್ಯಕ್ಷ ಡಾ. ಜಾನ್ ಜೆ. ಸ್ಯಾಮ್ಯುಯಲ್ ಮಾತನಾಡಿ, ಡಿಸಿಆರ್‌ಇ ಪೊಲೀಸರು ಸಂತ್ರಸ್ತೆಗೆ ನ್ಯಾಯ ಕೊಡಸದಿದ್ದರೆ, ನಾವು ಕಾನೂನು ಹೋರಾಟ ಮಾಡುತ್ತೇವೆ. ರಾಜ್ಯ, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗಕ್ಕೆ ದೂರು ನೀಡುತ್ತೇವೆ ಎಂದು ಎಚ್ಚರಿಕೆ ನೀಡಿದರು.

## 86 ಮಳಿಗೆ ಖಾಲಿ; ಮಾರುಕಟ್ಟೆಯಲ್ಲಿ ಮಳಿಗೆಗಳು ನಿಶ್ಯಬ್ದ

• ಉದಯವಾಹಿನಿ, ತುಮಕೂರು

ಸದಾ ಗದ್ದಲ, ಗ್ರಾಹಕರಿಂದ ತುಂಬಿರುತ್ತಿದ್ದ, ಒಂದಲ್ಲೊಂದು ಚಟುವಟಿಕೆಗಳಲ್ಲಿ ತೊಡಗಿರುತ್ತಿದ್ದ ವಾಣಿಜ್ಯ ಮಳಿಗೆಗಳು ನಿಶ್ಯಬ್ದವಾಗಿವೆ. ಹಲವರಿಗೆ ಉದ್ಯೋಗ ನೀಡಿ, ಬದುಕು ಬೆಳಗಿದ ಮಳಿಗೆಗಳಲ್ಲಿ ಈಗ ಕತ್ತಲು ಕವಿದಿದೆ.

ಆನ್‌ಲೈನ್ ವಹಿವಾಟು ಹೆಚ್ಚಳ, ಗ್ರಾಹಕರ ಕೊರತೆ, ವ್ಯಾಪಾರ ಕುಸಿತದ ಕಾರಣದಿಂದ ವಾಣಿಜ್ಯ ಮಳಿಗೆಗಳಿಗೆ ಹಲವೆಡೆ ಬೀಗ ಜಡಿಯಲಾಗಿದೆ. ನಗರದ ಬಟವಾಡಿ ಎಪಿಎಂಸಿ, ಅಂತರಸನಹಳ್ಳಿ ಮಾರುಕಟ್ಟೆ, ಮಂಡಿಪೇಟೆ, ಖಾಸಗಿ ಬಸ್ ನಿಲ್ದಾಣ, ಕೆ.ಆರ್.ಮಾರುಕಟ್ಟೆಯಲ್ಲಿ ಮಳಿಗೆಗಳು ಹಲವು ವರ್ಷಗಳಿಂದ ಖಾಲಿ ಖಾಲಿಯಾಗಿವೆ.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 230 ವಾಣಿಜ್ಯ ಮಳಿಗೆಗಳಿವೆ. ಎಸ್.ಎಸ್.ವೃತ್ತದ ಫುಡ್‌ಸ್ಟ್ರೀಟ್, ಖಾಸಗಿ ಬಸ್ ನಿಲ್ದಾಣ, ಕೋಡಿ ಬಸವೇಶ್ವರ ವೃತ್ತದ ಬಳಿಯ ಕೆ.ಆರ್.ಮಾರುಕಟ್ಟೆ, ಶಿರಾ ಗೇಟ್‌ನ ವಾಣಿಜ್ಯ ಕಟ್ಟಡ, ಎಸ್.ಎಸ್.ಪುರಂ, ಉಪ್ಪಾರಹಳ್ಳಿ ಕೆಳ ಸೇತುವೆ ಬಳಿ ಮಳಿಗೆ ನಿರ್ಮಿಸಲಾಗಿದೆ. ಇದರಲ್ಲಿ ಪ್ರಸ್ತುತ 55 ಮಳಿಗೆಗಳು ಖಾಲಿ ಉಳಿದಿವೆ. ಅಂತರಸನಹಳ್ಳಿ ಹೂವು, ಹಣ್ಣು, ತರಕಾರಿ ಮಾರುಕಟ್ಟೆಯಲ್ಲಿರುವ ವಿವಿಧ ಬಗೆಯ 336 ಮಳಿಗೆಗಳ ಪೈಕಿ 5 ಮಳಿಗೆಗೆ ಬಾಗಿಲು ಹಾಕಲಾಗಿದೆ. ಬಟವಾಡಿ ಎಪಿಎಂಸಿ ಮಾರುಕಟ್ಟೆಯಲ್ಲಿ 26 ಮಳಿಗೆ ಮುಚ್ಚಿವೆ. ತಿಂಗಳಿಗೆ 1,250ರಿಂದ 54 ಸಾವಿರದ ವರೆಗೆ ಬಾಡಿಗೆ ನಿಗದಿ ಪಡಿಸಲಾಗಿದೆ. ಬಹುತೇಕ ಕಡೆಗಳಲ್ಲಿ ವಹಿವಾಟು ಇಲ್ಲದೆ, ಬಾಡಿಗೆ ಕಟ್ಟಲಾಗದೆ ಅಂಗಡಿಗಳು ಬಂದ್ ಆಗುತ್ತಿವೆ.

☛ ಉದಯವಾಹಿನಿ ಚಿತ್ರ



ಮಾರುಕಟ್ಟೆಯಲ್ಲಿ ವ್ಯಾಪಾರ- ವಹಿವಾಟು ಕುಸಿದಿದೆ. ಕೆಲವು ಸಲ ಇಡೀ ದಿನ ಮಳಿಗೆ ತೆರೆದರೂ ಒಂದು ಅಕ್ಕಿ ಮೂಟೆಯೂ ಮಾರಾಟವಾಗುವುದಿಲ್ಲ. ಸೋಮವಾರ, ಗುರುವಾರ ಹೊರೆತುಪಡಿಸಿದರೆ ಉಳಿದ ದಿನಗಳಲ್ಲಿ ವಹಿವಾಟು ಸರಿಯಾಗಿ ಆಗುವುದಿಲ್ಲ ಎಂದು ಬಟವಾಡಿ ಎಪಿಎಂಸಿ ವರ್ತಕ ಮೋಹನ್ ಕುಮಾರ್ ವಾಸ್ತವ ಸ್ಥಿತಿಯನ್ನು ತೆರೆದಿಟ್ಟರು.

ಸೀಗೆಕಾಯಿ, ಹುಣಸೆ ಹಣ್ಣು, ರಾಗಿ ಮಾರುಕಟ್ಟೆಗೆ ಬಂದ ಸಮಯದಲ್ಲಿ ವಹಿವಾಟು ಉತ್ತಮವಾಗಿರುತ್ತದೆ. ಉಳಿದ ದಿನಗಳಲ್ಲಿ ಇಡೀ ಮಾರುಕಟ್ಟೆಯಲ್ಲಿ ಜನರ ಓಡಾಟ ಕಡಿಮೆ. ಆನ್‌ಲೈನ್‌ನಲ್ಲಿ ವ್ಯವಹಾರ ಶುರುವಾದ ನಂತರ ಮಾರುಕಟ್ಟೆಗೆ ಬಂದು ಸಾಮಗ್ರಿ ಖರೀದಿಸುವವರ ಸಂಖ್ಯೆ ಕ್ಷೀಣಿಸಿದೆ. ದಿನ ಕಳೆದಂತೆ ಇದು ಮತ್ತಷ್ಟು ಹೆಚ್ಚಾಗುತ್ತಿದೆ ಎಂದು ವರ್ತಕ ನರಸಿಂಹರಾಜು ಆತಂಕದಲ್ಲಿಯೇ ಪ್ರತಿಕ್ರಿಯಿಸಿದರು.

## ಮಿನಿ ನ್ಯೂಸ್

### ಆಪ್ತನ ಕೇಸ್ ಕಾಂಪ್ರಮೈಸ್‌ಗೆ ಸಚಿವ ಜಮೀರ್ ಒತ್ತಡ ಹೇರಿದ್ರಾ?

• ಉದಯವಾಹಿನಿ, ಚಿಕ್ಕಬಳ್ಳಾಪುರ

ವಂಚಕರ ಪರವಾಗಿ ಪಿಎಸ್‌ಐಗೆ ಕರೆ ಮಾಡಿ ಸಚಿವ ಜಮೀರ್ ಅಹಮದ್ ಪ್ರಭಾವ ಬೀರಿರುವ ಪ್ರಕರಣ ಬೆಳಕಿಗೆ ಬಂದಿದೆ. ಚಿಕ್ಕಬಳ್ಳಾಪುರದ ದಿಗೂರು ನಿವಾಸಿ, ಪಾಪ್‌ಕಾರ್ನ್ ವ್ಯಾಪಾರಿ ಡಿಎನ್ ರಾಮಕೃಷ್ಣ ಅನ್ನೋವ್ರು, ತೆಲಂಗಾಣದ ಹೈದರಾಬಾದ್ ಮೂಲಕದ ಹೆಕೆಜಿಎನ್ ಮುಸ್ಕಾನ್ ಪಾಪ್‌ಕಾರ್ನ್ ಟ್ರೇಡರ್ಸ್ ಮಾಲೀಕರಾದ ಸೈಯದ್ ಅಬ್ದುಲ್ ರಜಾಕ್, ಸೈಯದ್ ಅಬ್ದುಲ್ ಅಕ್ಬರ್‌ಪಾಷ, ನಾಸಿರ್ ಅಹಮದ್ ಎನ್ನುವ ಮೂವರು ಸಹೋದರರಿಗೆ 1.89 ಕೋಟಿ ರೂ. ಮೌಲ್ಯದ ಪಾಪ್‌ಕಾರ್ನ್ ಜೋಳವನ್ನು ಸರಬರಾಜು ಮಾಡಿದ್ದಾರೆ.

ಹೈದರಾಬಾದ್‌ನ ವ್ಯಾಪಾರಿಗಳು, ಖರೀದಿ ಮಾಡಿರುವ ಜೋಳದ ಹಣವನ್ನು ರಾಮಕೃಷ್ಣ ಅವರಿಗೆ ಕೊಟ್ಟಿಲ್ಲ. ಈ ಸಂಬಂಧ ಪೆರೇಸಂದ್ರ ಪೊಲೀಸ್ ಠಾಣೆಗೆ ರಾಮಕೃಷ್ಣ ದೂರು ನೀಡಿದ್ದರು. ಆರೋಪಿ ಸಹೋದರರಲ್ಲಿ ಸೈಯದ್ ಅಬ್ದುಲ್ ಅಕ್ಬರ್‌ಪಾಷರನ್ನು ಬಂಧಿಸಿ ಪಿಎಸ್‌ಐ ರೆಡ್ಡಿ ವಿಚಾರಣೆ ಮಾಡಿದ್ದಾರೆ.

ಅಕ್ಟೋಬರ್ 13ರಂದು ಪಿಎಸ್‌ಐಗೆ ಕರೆ ಮಾಡಿರುವ ಸಚಿವ ಜಮೀರ್, ಆರೋಪಿಗೆ ಸಹಾಯ ಮಾಡುವಂತೆ ಹಾಗೂ ಹಣ ನೀಡಲು ಸಮಯಾವಕಾಶ ಕೊಡುವಂತೆ ಪ್ರಭಾವ ಬೀರಿರುವುದು ಈಗ ವಿವಾದಕ್ಕೆ ಕಾರಣವಾಗಿದೆ.

### ಶಾಲೆಗೆ ಹೋದ ವಿದ್ಯಾರ್ಥಿನಿಯರು ನಾಪತ್ತೆ

• ಉದಯವಾಹಿನಿ, ಕೋಲಾರ

ಶಾಲೆಗೆಂದು ಹೋದ ಇಬ್ಬರು ವಿದ್ಯಾರ್ಥಿನಿಯರು ನಾಪತ್ತೆಯಾಗಿರುವ ಘಟನೆ ಕೋಲಾರದಲ್ಲಿ ನಡೆದಿದೆ. ನರಸಾಪುರ ಗ್ರಾಮದ ಶರಣ್ಯ ಹಾಗೂ ದೇವಿ ನಾಪತ್ತೆಯಾದ ವಿದ್ಯಾರ್ಥಿನಿತರು.

ಶುಕ್ರವಾರ ಬೆಳಗ್ಗೆ ಶಾಲೆಗೆಂದು ಹೋದ ಇಬ್ಬರು ವಿದ್ಯಾರ್ಥಿಗಳು ಇದುವರೆಗೂ ಪತ್ತೆಯಾಗಿಲ್ಲ. ಇತ್ತ ಶಾಲೆಗೂ ಹೋಗದೆ ಮನೆಗೂ ಬಾರದೆ ಕಣ್ಮರೆ ಆಗಿರುವುದು ಪೋಷಕರಲ್ಲಿ ಆತಂಕ ಮೂಡಿಸಿದೆ. ಇನ್ನೂ ಬೆಳಗ್ಗೆ ಶಾಲೆಗೆ ಹೋದವರು ರಾತ್ರಿಯಾದರೂ ಮನೆಗೆ ಬಾರದ ಹಿನ್ನೆಲೆ ಆತಂಕಗೊಂಡ ಪೋಷಕರು ಇಡೀ ದಿನ ಮಕ್ಕಳಿಗಾಗಿ ಹುಡಕಾಟ ನಡೆಸಿದ್ದಾರೆ.

### ನಾಯಕತ್ವ ಹೇಳಿಕೆಗೆ ಈಗಲೂ ಬದ್ಧ, ಯಾವ ಕ್ರಾಂತಿಯೂ ಇಲ್ಲ

• ಉದಯವಾಹಿನಿ, ಮೈಸೂರು

ಕಾಂಗ್ರೆಸ್‌ನಲ್ಲಿ ಮುಂದಿನ ನಾಯಕತ್ವ ಕುರಿತು ನೀಡಿರುವ ಹೇಳಿಕೆಗೆ ಈಗಲೂ ಬದ್ಧನಾಗಿದ್ದೇನೆ. ನಾನು ಹೇಳಿದ್ದರಲ್ಲಿ ತಪ್ಪೇನಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಸಮರ್ಥಿಸಿಕೊಂಡರು. ಶನಿವಾರ ಇಲ್ಲಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಅವರು ನನ್ನ ಹೇಳಿಕೆಯನ್ನು ಬೇರೆ ಬೇರೆ ರೀತಿ ಬಿಂಬಿಸುತ್ತಿದ್ದಾರೆ. ನಾನು ಏನು ಹೇಳಬೇಕೋ ಅದನ್ನು ಹೇಳಿಯಾಗಿದೆ. ಅನಗತ್ಯವಾಗಿ ಮತ್ತೆ ಅದನ್ನೇ ಮಾತನಾಡಿ ವಿವಾದ ಸೃಷ್ಟಿ ಮಾಡುವುದಿಲ್ಲ. ಮಾಧ್ಯಮದ ಮುಂದೆ ಮತ್ತೆ ಏನೂ ಮಾತನಾಡುವುದಿಲ್ಲ. ಈ ವಿಚಾರದ ಬಗ್ಗೆ ಎಲ್ಲಿ ಮಾತನಾಡಬೇಕೋ ಅಲ್ಲಿ ಮಾತನಾಡುತ್ತೇನೆ. ಪಕ್ಷದ ಆಂತರಿಕ ವಿಚಾರಗಳನ್ನು ಪಕ್ಷದ ಒಳಗೆ ಮಾತನಾಡುತ್ತೇನೆ ಎಂದರು.

ಈ ವಿಚಾರವಾಗಿ ಪಕ್ಷದಿಂದ ನೋಟಿಸ್ ಬಂದಾಗ ನೋಡಿಕೊಳ್ಳೋಣ ಬಿಡಿ. ಪಕ್ಷ ನನಗೆ ನೋಟಿಸ್ ಕೊಟ್ಟರೆ ಸೂಕ್ತ ಉತ್ತರ ಕೊಡುತ್ತೇನೆ ಎಂದು ಪ್ರತಿಕ್ರಿಯಿಸಿದರು. ಈಗಿನ ಪರಿಸ್ಥಿತಿಯಲ್ಲಿ ಸಿದ್ದರಾಮಯ್ಯನವರೇ ಐದು ವರ್ಷ ಸಿಎಂ ಆಗಿ ಮುಂದುವರೆಯುತ್ತಾರೆ. ನವೆಂಬರ್ ಕ್ರಾಂತಿ, ಡಿಸೆಂಬರ್ ಕ್ರಾಂತಿ ಯಾವುದೂ ಇಲ್ಲ. ಕೇವಲ ಊಹಾಪೋಹ ಅಷ್ಟೇ ಎಂದರು.

### ತಂತ್ರಾಂಶ ಬಳಸಿದ ಮೊದಲ ನಗರಸಭೆ

• ಉದಯವಾಹಿನಿ, ನಂಜನಗೂಡು

ನಗರಸಭಾ ವ್ಯಾಪ್ತಿಯಲ್ಲಿ ಸಾರ್ವಜನಿಕರ ಮೂಲ ಸೌಕರ್ಯ ಸೇವೆಗಳಿಗೆ ಸಂಬಂಧಪಟ್ಟ ಸಮಸ್ಯೆ, ದೂರುಗಳ ನಿರ್ವಹಣೆಗೆ ನೇರವಾಗಿ ಅಧಿಕಾರಿಗಳನ್ನು ಸಂಪರ್ಕಿಸಲು ಅನೂಕೂಲವಾಗುವಂತೆ ಅಶೋಕ ವಿಶ್ವವಿದ್ಯಾಲಯ ಮತ್ತು ಐಸಾಕ್ ಸೆಂಟರ್ ಫಾರ್ ಪಬ್ಲಿಕ್ ಪಾಲಿಸಿ ಸಹಯೋಗದೊಂದಿಗೆ ಸಿವಿಂಕ್ ಪೋರ್ಟಲ್ ಸೇವೆಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ ಹೇಳಿದರು.

ನಗರಸಭೆ ಆವರಣದಲ್ಲಿ ಡಿಜಿಟಲ್ ಸೇವೆಗೆ ಚಾಲನೆ ನೀಡಿ ಅವರು ಮಾತನಾಡಿದರು. ಮಹಾನಗರ ಪಾಲಿಕೆಗಳಲ್ಲಿ ಜನರ ಸಮಸ್ಯೆಗಳನ್ನು ಆಲಿಸಿ ಪರಿಹಾರ ನೀಡಲು ಈ ಸೇವೆ ಚಾಲ್ತಿಯಲ್ಲಿದೆ. ಆದರೆ, ನಂಜನಗೂಡು ನಗರಸಭೆ ಈ ತಂತ್ರಾಂಶ ಜನರ ಸೇವೆಗೆ ಅಳವಡಿಸಿಕೊಂಡ ದೇಶದಲ್ಲೇ ಮೊದಲ ನಗರಸಭೆಯಾಗಿದೆ. ಅಶೋಕ ವಿಶ್ವವಿದ್ಯಾಲಯ ಮತ್ತು ಐಸಾಕ್ ಸೆಂಟರ್‌ನ ಐಶ್ವರ್ಯ ಸುನಾದ್ ತಂಡ ಉಚಿತವಾಗಿ ನಗರಸಭೆಗೆ ತಂತ್ರಜ್ಞಾನವನ್ನು ಅಳವಡಿಸಿದ್ದಾರೆ.

ನಗರದ 31 ವಾರ್ಡ್‌ಗಳಲ್ಲಿ ಪ್ರತಿ ವಾರ್ಡಿನ 3 ಕಡೆ ಕ್ಯೂಆರ್ ಕೋಡ್ ಅಳವಡಿಸಲಾಗಿದ್ದು, ಜನರು ವಾರ್ಡ್ ಹಾಗೂ ನಗರಸಭೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ನೇರವಾಗಿ ದಾಖಲಿಸಬಹುದು. ಅಧಿಕಾರಿಗಳು ಸ್ಪಂದಿಸದಿದ್ದರೆ, ದೂರು ದಾಖಲಿಸಬಹುದು ಎಂದು ತಿಳಿಸಿದರು.

## 203 ಕೆರೆಗಳು ಒತ್ತುವರಿ: ಕಠಿಣ ಕ್ರಮಕ್ಕೆ ಡಿಸಿ ಸೂಚನೆ

• ಉದಯವಾಹಿನಿ, ಮಂಡ್ಯ

ಜಿಲ್ಲೆಯ ಒಟ್ಟು 962 ಕೆರೆಗಳು ಇದ್ದು ಅದರಲ್ಲಿ 203 ಕೆರೆಗಳನ್ನು ಒತ್ತುವರಿ ಮಾಡಿರುವುದು ಬೆಳಕಿಗೆ ಬಂದಿದೆ. ಒತ್ತುವರಿಗೊಂಡಿರುವ ಕೆರೆಗಳನ್ನು ತೆರವುಗೊಳಿಸುವುದು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಕುಮಾರ ಎಚ್ಚರಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಜಿಲ್ಲಾ ವ್ಯಾಪ್ತಿಯ ಕೆರೆಗಳ ಒತ್ತುವರಿ ತೆರವುಗೊಳಿಸುವ ಕುರಿತು ಶುಕ್ರವಾರ ಆಯೋಜಿಸಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೆರೆಗಳ ಸಂರಕ್ಷಣೆ ಎಲ್ಲರ ಜವಾಬ್ದಾರಿಯಾಗಿದೆ. ಕೆರೆಗಳನ್ನು ಒತ್ತುವರಿ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಿ ಎಂದು ಹೇಳಿದರು.

ಜಿಲ್ಲೆಯಲ್ಲಿ 962 ಕೆರೆಗಳಿವೆ. ಕಂದಾಯ ಇಲಾಖೆಯ ವತಿಯಿಂದ ಎಲ್ಲಾ ಕೆರೆಗಳನ್ನು ಸರ್ವೆ ನಡೆಸಿ ಸಂಬಂಧಪಟ್ಟ ಇಲಾಖೆಯ ವಶಕ್ಕೆ ಈಗಾಗಲೇ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ಮುಖ್ಯಮಂತ್ರಿಯವರು ಪ್ರತಿ ತಿಂಗಳು ಕೆರೆ ಅಭಿವೃದ್ಧಿ ಪ್ರಾಧಿಕಾರದ ಸಭೆಯನ್ನು ವಿಡಿಯೋ ಸಂವಾದದ ಮೂಲಕ ನಡೆಸಿ ಆಯಾ ಜಿಲ್ಲೆಯ ಕೆರೆಗಳ ಸರ್ವೆ ಮಾಡಬೇಕು.

ಕೆರೆಗಳು ಒತ್ತುವರಿಗೊಂಡಿದ್ದರೆ ತೆರವುಗೊಳಿಸಬೇಕು, ನಂತರ ಕೆರೆಗಳು ಒತ್ತುವರಿಯಾಗದಂತೆ ಸಂರಕ್ಷಣೆ ಮಾಡಲು ರಾಜ್ಯದ ಎಲ್ಲಾ ಡಿ.ಸಿ. ಮತ್ತು ಸಿ.ಇ.ಒ.ಗಳಿಗೆ ಸೂಚಿಸಿದ್ದಾರೆ ಎಂದರು. ಅಧಿಕಾರಿಗಳ ಹೆಚ್ಚಿನ ಮುತುವರ್ಜಿ ಮತ್ತು ಜವಾಬ್ದಾರಿಯನ್ನು ತೆಗೆದುಕೊಂಡು ಕೆರೆ ಒತ್ತುವರಿಯನ್ನು ತೆರವುಗೊಳಿಸಬೇಕು, ತೆರವುಗೊಳಿಸಿದ ಕೆರೆಗಳು ಮತ್ತೆ ಒತ್ತುವರಿ ಮಾಡದಂತೆ ಸಂರಕ್ಷಣೆ ಮಾಡಬೇಕು, ಕೆರೆ ಒತ್ತುವರಿ ಮಾಡಿದವರು ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದ ಹೇಳಿದರು. ಒತ್ತುವರಿಯಾಗಿರುವ ಕೆರೆಗಳನ್ನು ಸಂರಕ್ಷಣೆ ಮಾಡಲು ಪ್ರತಿ ತಿಂಗಳು ಶೇ 50ರಷ್ಟು ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಲು ಅಧಿಕಾರಿಗಳಿಗೆ ಗುರಿಯನ್ನು ನೀಡಬೇಕು. ತಹಶೀಲ್ದಾರ್ ಬಳಿ ಇರುವ ಅನುದಾನವನ್ನು ಬಳಸಿಕೊಂಡು ಶೀಘ್ರವಾಗಿ ಒತ್ತುವರಿಯನ್ನು ತೆರವುಗೊಳಿಸಬೇಕು ಎಂದರು.

## ಅನ್ನ, ವಿದ್ಯೆಯಲ್ಲಿ ಮಠಗಳ ಕ್ರಾಂತಿ: ಸಚಿವ ಶರಣ ಪ್ರಕಾಶ ಪಾಟೀಲ ಶ್ಲಾಘನೆ

• ಉದಯವಾಹಿನಿ, ನಾಗಮಂಗಲ

ಕರ್ನಾಟಕ ಅತ್ಯಂತ ಪಾರಂಪರಿಕ ರಾಜ್ಯವಾಗಿದ್ದು, ಮಠ ಮಾನ್ಯಗಳು ಅತ್ಯಂತ ದೊಡ್ಡ ಕೊಡುಗೆ ನೀಡುತ್ತಿವೆ. ಇದೇ ಮಾರ್ಗದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠವು ಶಿಕ್ಷಣ, ದಾಸೋಹದಲ್ಲಿ ಸಾಗುತ್ತಿದೆ ಎಂದು ಉನ್ನತ ಶಿಕ್ಷಣ ಸಚಿವ ಶರಣ ಪ್ರಕಾಶ ಪಾಟೀಲ ಶ್ಲಾಘಿಸಿದರು.

ಬಿಜಿ ನಗರದ ಬಿಜಿಎಸ್ ಸಭಾಂಗಣದಲ್ಲಿ ಆಯೋಜಿಸಿದ್ದ ಆದಿಚುಂಚನಗಿರಿ ವೈದ್ಯಕೀಯ ವಿಜ್ಞಾನ ಸಂಸ್ಥೆ 2025ನೇ ಸಾಲಿನ ವೈದ್ಯಕೀಯ ಮತ್ತು ಸಂಬಂಧಿತ ಆರೋಗ್ಯ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳಿಗೆ ಜೀವನದಲ್ಲಿ ಹೊಸ ಹೆಜ್ಜೆ ಇಡುವ ಈ ಕಾರ್ಯಕ್ರಮ ಮಹತ್ವದ್ದಾಗಿದೆ. ಈ ಶಿಕ್ಷಣ ಸಂಸ್ಥೆಯಲ್ಲಿ ಓದುವ ಅವಕಾಶ ವಿಶೇಷವಾಗಿದೆ. ಆದಿಚುಂಚನಗಿರಿ ಮಠ ರಾಜ್ಯದಲ್ಲಷ್ಟೇ ಅಲ್ಲ, ಅಂತರ, ರಾಷ್ಟ್ರೀಯ ಮಟ್ಟದಲ್ಲೂ ಪ್ರತಿಷ್ಠಿತವಾಗಿದೆ.



☛ ಉದಯವಾಹಿನಿ ಚಿತ್ರ

ಬಾಲಗಂಗಾಧರನಾಥ ಸ್ವಾಮೀಜಿ ಅವರ ದೂರದೃಷ್ಟಿಯ ಫಲವಾಗಿ ಗ್ರಾಮೀಣ ಭಾಗದಲ್ಲಿ ಉತ್ತಮ ವೈದ್ಯಕೀಯ ಕಾಲೇಜು ತಲೆ ಎತ್ತಿದೆ ಎಂದು ಸ್ಮರಿಸಿದರು.

ಕರ್ನಾಟಕದ ಜನತೆ ಸುಸಂಸ್ಕೃತರು ಅವರಿಗೆ ಮಠ ಮಾನ್ಯಗಳ ಮಾರ್ಗದರ್ಶನ ಸಿಕ್ಕಿದ್ದು, 12ನೇ ಶತಮಾನದಿಂದ ರಾಜ್ಯವನ್ನು ಮಠಗಳು ಸರಿದಾರಿಗೆ ತರುವಲ್ಲಿ ಮಹತ್ವದ ಪಾತ್ರ ನಿರ್ವಹಿಸಿವೆ. ಅನ್ನ ದಾಸೋಹದ ಜೊತೆಗೆ ವಿದ್ಯೆ ಅಳವಡಿಸಿಕೊಂಡು ಮಠಗಳು ಕ್ರಾಂತಿ ಮಾಡುತ್ತಿದೆ ಎಂದು ಅಭಿಪ್ರಾಯ ಪಟ್ಟರು.

ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ಆದಿಚುಂಚನಗಿರಿ ವೈದ್ಯಕೀಯ ಮಹಾವಿದ್ಯಾಲಯದಿಂದ ಹೊರಹೋದ ವೈದ್ಯರು ಉತ್ತಮವಾಗಿ ಕಾರ್ಯನಿರ್ವಹಿಸಿ ಹೆಸರು ಮಾಡುತ್ತಿದ್ದಾರೆ. ಗ್ರಾಮೀಣ ಕೋಟಾದಲ್ಲಿ ಶಿಕ್ಷಣ ಪಡೆಯುವ ವೈದ್ಯರು ಪದವಿ ಪಡೆದ ಕೂಡಲೆ ನಗರ ಪ್ರದೇಶಗಳತ್ತ ಮುಖ ಮಾಡುತ್ತಿರುವುದು ವಿಷಾದ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

# ಕೆಜಿಎಫ್ ನಗರಸಭೆ ಬಿಲ್ ಪಾವತಿಯಲ್ಲಿ ಅವ್ಯವಹಾರ ಆರೋಪ

● ಸಾಮಾನ್ಯ ಸಭೆಯಲ್ಲಿ ಅಧಿಕಾರಿಗಳ ವಿರುದ್ಧ ಟೀಕೆ ● ವಾರ್ಡ್‌ಗಳಲ್ಲಿ ಸೊಳ್ಳೆಗಳ ಕಾಟ ಜಾಸ್ತಿ

• ಉದಯವಾಹಿನಿ, ಕೆಜಿಎಫ್

ರಾಬರ್ಟಸನ್‌ಪೇಟೆ ನಗರಸಭೆಯಲ್ಲಿ ನಡೆದಿರುವ ಬಿಲ್ ಪಾವತಿ ವ್ಯವಹಾರಕ್ಕೆ ನಡೆದ ಚರ್ಚೆಯಲ್ಲಿ ಆರ್‌ಪಿಐ, ಸಿಪಿಎಂ, ಕಾಂಗ್ರೆಸ್ ಸದಸ್ಯರು, ನಗರಸಭೆ ಅಧ್ಯಕ್ಷೆ ಮತ್ತು ಅಧಿಕಾರಿಗಳ ವಿರುದ್ಧ ತೀವ್ರ ಟೀಕೆ ಮಾಡಿದ ಘಟನೆ ಸಾಮಾನ್ಯ ಸಭೆಯಲ್ಲಿ ನಡೆಯಿತು. ನಗರಸಭೆಯಲ್ಲಿ ನಡೆದಿರುವ ಬಹುತೇಕ ಆರ್ಥಿಕ ವ್ಯವಹಾರಗಳ ಪೈಕಿ ಹೆಚ್ಚಿನ ಬಿಲ್‌ಗಳನ್ನು ಭರತ್ ಎಂಟರ್‌ಪ್ರೈಸಸ್, ಕಿಸಾನ್ ಎಂಟರ್ ಪ್ರೈಸಸ್‌ಗಳಿಗೆ ಲಕ್ಷಾಂತರ ರೂಪಾಯಿ ನೀಡಲಾಗಿದೆ.

ಭರತ್ ಎಂಟರ್‌ಪ್ರೈಸಸ್ ಬೀದಿ ದೀಪಗಳ ನಿರ್ವಹಣೆಯನ್ನು ಸಮರ್ಪಕವಾಗಿ ಮಾಡುತ್ತಿಲ್ಲ. ಅವರು ನಗರಸಭೆಯ ನಿಯಂತ್ರಣದಲ್ಲಿ ಇಲ್ಲ. ಅವರು ನಗರಸಭೆಯನ್ನು ನಿಯಂತ್ರಿಸುತ್ತಿದ್ದಾರೆ. ವಾರ್ಡ್‌ಗಳಲ್ಲಿ ಸೊಳ್ಳೆಗಳ ಕಾಟ ಜಾಸ್ತಿಯಾಗಿದೆ. ರೋಗದಿಂದ ಸಾಯುತ್ತಿರುವವರ ಸಂಖ್ಯೆ ಕೂಡ ಹೆಚ್ಚಾಗಿದೆ. ಆದರೆ, ಸೊಳ್ಳೆ ನಿವಾರಕ ಕ್ರಮಗಳನ್ನು ಕೈಗೊಂಡಿಲ್ಲ. ಔಷಧಗಳ ಖರೀದಿ ಮಾತ್ರ ಪ್ರತಿ ತಿಂಗಳು ನಡೆಯುತ್ತಿದೆ. ನಗರಸಭೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಮಾಜಿ ಶಾಸಕ ಎಸ್.ರಾಜೇಂದ್ರನ್, ಸಿಪಿಎಂನ ಕೆ.ತಂಗರಾಜ್ ಮತ್ತು ಕಾಂಗ್ರೆಸ್‌ನ ಜಯಪಾಲ್ ಚರ್ಚೆಯಲ್ಲಿ ಆರೋಪಿಸಿದರು.

ಬೆಮೆಲ್‌ನಿಂದ ಬಂದ 14 ಕೋಟಿ ಮತ್ತು ಬಿಜಿಎಂಎಲ್‌ನಿಂದ ಬಂದ 4.9 ಕೋಟಿ ಹಣದ ಬಹುಪಾಲನ್ನು ಭರತ್ ಭರತ್ ಎಂಟರ್‌ಪ್ರೈಸಸ್‌ಗೆ ಕೊಟ್ಟಿದ್ದೀರಿ. ಅವರು ನಗರದಲ್ಲಿ ದೀಪದ ವ್ಯವಸ್ಥೆಯನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ. ಎಸ್‌ಪಿ ಕಚೇರಿಯಿಂದ ಲೋಕೋಪಯೋಗಿ ಅತಿಥಿ ಗೃಹದವರೆಗೂ ಬೀದಿ ದೀಪಗಳೇ ಇಲ್ಲ. ಮೈನಿಂಗ್ ಪ್ರದೇಶದ ಬಹುತೇಕ ಜಾಗ ಕತ್ತಲಲ್ಲಿ ಮುಳುಗಿದೆ ಎಂದು ತಂಗರಾಜ್ ದೂರಿದರು. ಹುಲ್ಲು ಮಾರುಕಟ್ಟೆಯನ್ನು ತೆರವುಗೊಳಿಸುತ್ತಿರುವ ಬಗ್ಗೆ ಸಭೆಯಲ್ಲಿ ವ್ಯಾಪಕ ಚರ್ಚೆ ನಡೆಯಿತು. ಸದಸ್ಯರ ಗಮನಕ್ಕೆ ಬಾರದೆ ತೆರವು ಕಾರ್ಯಕ್ರಮ ನಡೆಯುತ್ತಿದೆ. ಅಲ್ಲಿನ ವರ್ತಕರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಿಲ್ಲ.



☛ ಉದಯವಾಹಿನಿ ಚಿತ್ರ

**ಶಾಸಕಿ ಮೇಲೆ ಅಸಮಾಧಾನ ನಗರಸಭೆಯಲ್ಲಿ ಲೂಟಿ ನಡೆಯುತ್ತಿದೆ. ಬಹುತೇಕ ನಗರಸಭೆ ಸದಸ್ಯರು ಧ್ವನಿ ಎತ್ತುತ್ತಿಲ್ಲ. ಇಂತಹವರನ್ನು ಜನ ಮುಂದಿನ ಚುನಾವಣೆಯಲ್ಲಿ ತಿರಸ್ಕರಿಸಬೇಕು. ಈ ನಗರಸಭೆಯನ್ನು ಸೂಪರ್ ಸೀಡ್ ಮಾಡಬೇಕು. ಆದರೆ ಶಾಸಕಿ ಈ ಕೆಲಸ ಮಾಡುವುದಿಲ್ಲ. ನಗರಸಭೆಯ ಸಭೆಯನ್ನು ಲೈವ್ ಪ್ರಚಾರ ಮಾಡಬೇಕು. ಇದರಿಂದ ಜನರಿಗೆ ನಗರಸಭೆಯ ಕಾರ್ಯವೈಖರಿ ಅರ್ಥವಾಗುತ್ತದೆ. ಈ ಸಂಬಂಧ ನನ್ನ ಕೋರಿಕೆಯನ್ನು ಮಾನ್ಯಮಾಡಿಲ್ಲ .**

-ಎಸ್.ರಾಜೇಂದ್ರನ್, ಮಾಜಿ ಶಾಸಕ

ಕಟ್ಟಡ ಒಡೆದ ಮಣ್ಣನ್ನು ಕೂಡ ಮಾರಾಟ ಮಾಡಲಾಗುತ್ತಿದೆ. ಯೋಜನಾ ವರದಿಯನ್ನು ತಯಾರು ಮಾಡಲಾಗಿದೆ ಎಂದು ಹೇಳಲಾಗುತ್ತಿದೆ. ಅದರ ಮಾಹಿತಿಯನ್ನು ಕೂಡ ನಗರಸಭೆ ಸದಸ್ಯರಿಗೆ ನೀಡುತ್ತಿಲ್ಲ. ಎಲ್ಲವೂ ಕದ್ದುಮುಚ್ಚಿ ನಡೆಯುತ್ತಿದೆ ಎಂದು ಹಲವು ಸದಸ್ಯರು ದೂರಿದರು. ಸರ್ಕಾರಿ ಸ್ವತ್ತು ಕಾಪಾಡುವುದು ನಗರಸಭೆ ಕರ್ತವ್ಯ. ಸಭೆ ನಡೆಯುವುದು ಸ್ವಲ್ಪ ತಡವಾಗಿದ್ದರಿಂದ ಒತ್ತುವರಿ ತೆರವು ಮಾಡಲಾಗುತ್ತಿದೆ. ಸಾವಿರಾರು ಜನರಿಗೆ ಅನುಕೂಲವಾಗುತ್ತದೆ. ಎಲ್ಲರೂ ಸಹಕಾರ ಕೊಡಬೇಕೆಂದು ಆಯುಕ್ತ ಆಂಜನೇಯ ಮನವಿ ಮಾಡಿದರು. ಹುಲ್ಲು ಮಾರುಕಟ್ಟೆಯಲ್ಲಿ ಬೋಗಸ್ ಆಗಿದೆ. ವರ್ತಕರ ಬಳಿ ಇರುವ ಹತ್ತು ಸಾವಿರದ ರಸೀತಿ ಕೂಡ ಬೋಗಸ್ ಆಗಿದೆ. ಅಲ್ಲಿ ವರ್ತಕರು ಯಾರೂ ಇಲ್ಲ. ಪಾರ್ಕಿಂಗ್ ವ್ಯವಸ್ಥೆಗಾಗಿ ತೆರವುಗೊಳಿಸಲಾಗುತ್ತಿದೆ ಎಂದು ಸ್ಥಾಯಿ ಸಮಿತಿ ಅಧ್ಯಕ್ಷ ವಳ್ಳಲ್ ಮುನಿಸ್ವಾಮಿ ತಿಳಿಸಿದರು.

**ನಿವಾರಕ ಕ್ರಮಗಳನ್ನು ಕೈಗೊಂಡಿಲ್ಲ**

ಹಸು ಮಾಂಸ ಅಂಗಡಿ ಮುಚ್ಚಿಸಿರುವ ವಿಚಾರವಾಗಿ ಸದಸ್ಯರು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. 120 ವರ್ಷದಿಂದ ಇರುವ ಅಂಗಡಿಯನ್ನು ಮುಚ್ಚಿಸಿದರೆ ಹೇಗೆ ಎಂದು ವಾಗ್ವಾದ ನಡೆಸಿದರು. ಸದಸ್ಯರಿಗೆ ಉತ್ತರಿಸಿದ ಆಯುಕ್ತ ಹಸು ಮಾಂಸದ ಅಂಗಡಿಗಳನ್ನು ನಾವು ಮುಚ್ಚಿಸಿಲ್ಲ, ಅದು ಮುಚ್ಚುವಲ್ಲಿ ನಗರಸಭೆ ಪಾತ್ರ ಏನೂ ಇಲ್ಲ ಎಂದು ಹೇಳಿದರು.

ಅಂತರಾಳದಿಂದ.. EDITORIAL

# ಮಾಹಿತಿ ಹಕ್ಕು ಕಾಯ್ದೆ ದುರ್ಬಲ ಪ್ರಜಾಪ್ರಭುತ್ವ ಬಲವರ್ಧನೆಗೆ ಪೆಟ್ಟು




ಮಾಹಿತಿ ಹಕ್ಕು ಕಾಯ್ದೆ (ಆರ್‌ಟಿಐ)ಗೆ ಇಪ್ಪತ್ತು ವರ್ಷಗಳು ತುಂಬಿರುವ ಸಂದರ್ಭದಲ್ಲೇ, ಅದು ತನ್ನ ಬಹುತೇಕ ಸಾಮರ್ಥ್ಯವನ್ನು ಕಳೆದುಕೊಂಡಿದೆ ಹಾಗೂ ಅಸ್ತಿತ್ವನಾಶದ ಆತಂಕವನ್ನು ಎದುರಿಸುತ್ತಿದೆ. ನಾಗರಿಕರನ್ನು ಸಬಲೀಕರಣಗೊಳಿಸುವ ಹಾಗೂ ಆಡಳಿತವನ್ನು ಪಾರದರ್ಶಕಗೊಳಿಸುವ ನಿಟ್ಟಿನಲ್ಲಿ ದೊರೆತ ಶಾಸನಾತ್ಮಕ ಅಧಿಕಾರ ಎನ್ನುವ ಬಣ್ಣನೆಗೊಳಗಾಗಿದ್ದ ಆರ್‌ಟಿಐ, ಇದೀಗ ರಕ್ತ ಮಾಂಸಗಳಿಲ್ಲದ ಬೆದರುಗೊಂಬೆಯಂತೆ ಕಾಣಿಸುತ್ತಿದೆ. ಸರ್ಕಾರದ ತಿದ್ದುಪಡಿಗಳು, ಕಾಯ್ದೆಯ ಅನುಷ್ಠಾನವನ್ನು ತಡೆಯುವ ಪ್ರಯತ್ನಗಳು, ಚಟುವಟಿಕೆಗಳಿಗೆ ಅಗತ್ಯವಾದ ಸೌಕರ್ಯಗಳು ಹಾಗೂ ಸಂಪನ್ಮೂಲಗಳ ನಿರಾಕರಣೆಯಿಂದ ಆರ್‌ಟಿಐ ದುರ್ಬಲಗೊಂಡಿದೆ. ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಗೊಳಿಸುವ, ಆಡಳಿತದ ತತ್ತ್ವಗಳಿಗೆ ಹೊಂದಿಕೆ ಆಗುವಂತಹ ಸಾಮರ್ಥ್ಯ ಹೊಂದಿದ್ದ ಈ ಕಾಯ್ದೆ, ಪ್ರಗತಿಪರ ಹಾಗೂ ಪರಿವರ್ತನೆಯ ಆಯಾಮವನ್ನೂ ಒಳಗೊಂಡಿತ್ತು. ಇಂಥ ಮಹತ್ವದ ಕಾಯ್ದೆ ಎರಡು ದಶಕಗಳನ್ನು ಪೂರೈಸಿರುವ ಸಂದರ್ಭ ಪ್ರಜಾಪ್ರಭುತ್ವವಾದಿಗಳ ಸಂಭ್ರಮಾಚರಣೆಗೆ ಕಾರಣವಾಗಬೇಕಿತ್ತು. ಆದರೆ, ಈ ಸನ್ನಿವೇಶ ಅದರ ವೈಫಲ್ಯಗಳ ಅವಲೋಕನ ಹಾಗೂ ಅನಿಶ್ಚಿತ ಭವಿಷ್ಯ ಕುರಿತ ಚರ್ಚೆಯ ಸಂದರ್ಭವಾಗಿ ಬದಲಾಗಿದೆ.

**ಸರ್ಕಾರವನ್ನು ನಾಗರಿಕರಿಗೆ ಉತ್ತರದಾಯಿಯಾಗಿಸುವ 'ಆರ್‌ಟಿಐ' ಎರಡು ದಶಕಗಳ ಅವಧಿಯಲ್ಲಿ ದುರ್ಬಲಗೊಂಡಿದೆ. ಅದರ ಬೆನ್ನುಮೂಳೆಯ ಶಕ್ತಿಯನ್ನು ಸರ್ಕಾರವೇ ವ್ಯವಸ್ಥಿತವಾಗಿ ಕಸಿದುಕೊಂಡಿದೆ.**

ಅಕ್ಟೋಬರ್ 12, 2005ರಂದು 'ಮಾಹಿತಿ ಹಕ್ಕು ಕಾಯ್ದೆ' ಜಾರಿಗೆ ಬಂದಾಗ, ಸರ್ಕಾರವನ್ನು ಜನಸಾಮಾನ್ಯರಿಗೆ ಉತ್ತರದಾಯಿಯಾಗಿಸುವ ಅವಕಾಶ ದೊರೆಯಿತೆಂದು ಭಾವಿಸಲಾಗಿತ್ತು. ಆದರೆ, ಎರಡು ದಶಕಗಳ ಅವಧಿಯಲ್ಲಿ ಆ ನಿರೀಕ್ಷೆ ಸುಳ್ಳಾಗಿದೆ. ದಯನೀಯ ಸ್ಥಿತಿ ತಲಪಿರುವ 'ಕೇಂದ್ರ ಮಾಹಿತಿ ಆಯೋಗ' ಮುಖ್ಯಸ್ಥರಿಲ್ಲದೆ ಕಾರ್ಯ ನಿರ್ವಹಿಸುತ್ತಿದೆ. ಹನ್ನೊಂದು ಆಯುಕ್ತರು ಇರಬೇಕಾದ ಸ್ಥಳದಲ್ಲಿ ಕೇವಲ ಇಬ್ಬರಷ್ಟೇ ಉಳಿದುಕೊಂಡಿದ್ದಾರೆ. ದೇಶದ ವಿವಿಧ ಭಾಗಗಳಲ್ಲಿ ಬಾಕಿಯುಳಿದಿರುವ ಪ್ರಕರಣಗಳ ಸಂಖ್ಯೆ ನಾಲ್ಕು ಲಕ್ಷ ದಾಟಿದೆ. 2024ರಲ್ಲಿ ರಾಜ್ಯಮಟ್ಟದ ಆರು ಮಾಹಿತಿ ಆಯೋಗಗಳು ಕಾರ್ಯ ನಿರ್ವಹಿಸದೆ ನಿಷ್ಕ್ರಿಯವಾಗಿದ್ದವು. ಕಾನೂನಿನ ಅಡಿಯಲ್ಲಿ ಮಾಹಿತಿ ಕೋರಿದ ಪ್ರಶ್ನೆಗಳಿಗೆ ಉತ್ತರಿಸಲು ನಿರಾಕರಿಸುತ್ತಿರುವ ಉದಾಹರಣೆಗಳೂ ಹೆಚ್ಚಾಗುತ್ತಿವೆ. ಉತ್ತರಗಳನ್ನು ನೀಡಲು ಗೊತ್ತುಪಡಿಸಿದ ಗಡುವುಗಳನ್ನು ಉಲ್ಲಂಘಿಸಲಾಗುತ್ತಿದೆ ಹಾಗೂ ಆ ಲೋಪಗಳಿಗೆ ದಂಡನೆಯೂ ಆಗುತ್ತಿಲ್ಲ. ತಪ್ಪು ಉತ್ತರ ನೀಡಿಯೂ ನುಣುಚಿಕೊಳ್ಳುತ್ತಿರುವ ಅಧಿಕಾರಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ಕಾನೂನಿನಡಿಯಲ್ಲಿ ಮಾಹಿತಿ ಬಯಸುವ ನಾಗರಿಕರ ಮೇಲೆ ದಾಳಿಗಳು ನಡೆಯುತ್ತಿವೆ ಹಾಗೂ ಕೆಲವು ಮಾಹಿತಿ ಹಕ್ಕು ಕಾರ್ಯಕರ್ತರ ಕೊಲೆಗಳೂ ನಡೆದಿವೆ. ಅಧಿಕಾರಿಗಳು, ರಾಜಕಾರಣಿಗಳು ಹಾಗೂ ಸ್ವಹಿತಾಸಕ್ತಿ ಹೊಂದಿರುವ ಗುಂಪುಗಳ ದುಷ್ಟಕೂಟ, ಆರ್‌ಟಿಐ ಕಾನೂನನ್ನು ನಿಷ್ಕ್ರಿಯಗೊಳಿಸಲು ಪ್ರಯತ್ನಿಸುತ್ತಿದೆ. ಈ ದುಷ್ಟಕೂಟಕ್ಕೆ, ಸಾರ್ವಜನಿಕರಿಗೆ ಮಾಹಿತಿ ದೊರೆಯದಿರುವುದು ತನ್ನ ಹಿತಾಸಕ್ತಿಗೆ ಪೂರಕವೆಂದು ಭಾವಿಸಿರುವ ಸರ್ಕಾರಗಳ ಕುಮ್ಮಕ್ಕು ಬಲ ನೀಡುತ್ತಿದೆ. ಮಾಹಿತಿ ಹಕ್ಕು ಆಯೋಗದ ಕಾರ್ಯ ಚಟುವಟಿಕೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ನಿರ್ದೇಶನಗಳು ಕೂಡ ಫಲಕಾರಿಯಾಗಿಲ್ಲ. ಅಧಿಕಾರಿಗಳ ನೇಮಕದಲ್ಲಿ ಆಗುತ್ತಿರುವ ವಿಳಂಬ ನೀತಿಯನ್ನು ಟೀಕಿಸಿರುವ ಕೋರ್ಟ್, ಕಾಲಕ್ಕೆ ಸರಿಯಾಗಿ ನೇಮಕಾತಿ ಪ್ರಕ್ರಿಯೆ ನಡೆಸಬೇಕೆಂದು ಹೇಳಿದ್ದರೂ, ಪರಿಸ್ಥಿತಿಯಲ್ಲಿ ಯಾವ ಬದಲಾವಣೆಯೂ ಆಗಿಲ್ಲ. ಮಾಹಿತಿ ಆಯುಕ್ತರ ವೇತನ ಹಾಗೂ ಸೇವಾ ಷರತ್ತುಗಳನ್ನು ನಿರ್ಣಯಿಸುವ ಅಧಿಕಾರವನ್ನು 2019ರಲ್ಲಿ ಸರ್ಕಾರ ವಹಿಸಿಕೊಂಡ ನಂತರ, ಆಯುಕ್ತರು ನೇರವಾಗಿ ಸರ್ಕಾರದ ಅಧೀನಕ್ಕೆ ಬರುವಂತಾಯಿತು. ಸ್ವತಂತ್ರವಾಗಿ ಕಾರ್ಯ ನಿರ್ವಹಿಸುವ ಅವಕಾಶವನ್ನು ಆಯೋಗವು ಕಳೆದುಕೊಂಡ ಮೇಲೆ, ಅದು ಯಾವ ಉದ್ದೇಶಕ್ಕಾಗಿ ರೂಪುಗೊಂಡಿತೋ ಆ ಕಾರ್ಯಸಾಧನೆಯಲ್ಲಿ ಯಶಸ್ವಿಯಾಗುತ್ತದೆಂದು ಹೇಗೆ ತಾನೆ ನಿರೀಕ್ಷಿಸಲು ಸಾಧ್ಯ. 2023ರ ಡಿಜಿಟಲ್ ವೈಯಕ್ತಿಕ ದತ್ತಾಂಶಗಳ ಸಂರಕ್ಷಣಾ ಕಾಯ್ದೆಯು, ಗೋಪ್ಯತೆ ಹೆಸರಿನಲ್ಲಿ ಆರ್‌ಟಿಐಗೆ ಅಂಕುಶ ಹಾಕಲಿಕ್ಕಾಗಿಯೇ ರೂಪುಗೊಂಡಂತಿದೆ. ಸರ್ಕಾರಗಳನ್ನು ಅದರ ನೀತಿ ನಿಲುವುಗಳಿಗೆ ಉತ್ತರದಾಯಿಗಳನ್ನಾಗಿಸುವ ಉದ್ದೇಶದ ಆರ್‌ಟಿಐ ಅನ್ನು ಪ್ರಜಾಪ್ರಭುತ್ವ ಬಲಗೊಳಿಸುವ ಕಾರಣಕ್ಕಾಗಿ ರೂಪಿಸಲಾಗಿತ್ತು. ಆದರೆ, ಮಹತ್ತರ ಉದ್ದೇಶದ ಕಾನೂನಿನ ಬೆನ್ನುಮೂಳೆಯನ್ನು ವ್ಯವಸ್ಥಿತವಾಗಿ ದುರ್ಬಲಗೊಳಿಸಲಾಗಿದೆ. ನಿಧಾನವಾಗಿ ನಿಷ್ಕ್ರಿಯಗೊಳ್ಳುತ್ತಿರುವ ಮಾಹಿತಿ ಹಕ್ಕು ಕಾಯ್ದೆಯಿಂದಾಗಿ, ಪ್ರಜಾಪ್ರಭುತ್ವದ ಅಂಗಸಂಸ್ಥೆಗಳು ಮತ್ತು ಅವುಗಳ ಮೂಲಭೂತ ಚಿಂತನೆಗಳಲ್ಲಿ ಪಾರದರ್ಶಕತೆ ಇಲ್ಲವಾಗುತ್ತಿದೆ.



# ರಾಮಾಯಣ

## ಸೀತಾದೇವಿಯು ಮಾಯಾಮೃಗವನ್ನು ಬಯಸಿದ್ದು

• ಹಿಂದಿನ ಸಂಚಿಕೆಯಿಂದ **117ನೆಯ ಅಧ್ಯಾಯ**

ಎಲೈ ಲಕ್ಷ್ಮಣ, ಲೋಕದಲ್ಲಿ ಬೇಟೆಗಾಗಿ ಹೊರಡುವ ಅರಸರು ವನದಲ್ಲಿ ಮೃಗಗಳನ್ನು ಕಂಡರೆ. ಮಾಂಸಕ್ಕಾಗಿಯಾದರೂ ವಿಲಾಸಾರ್ಥವಾಗಿಯಾದರೂ ಅವುಗಳನ್ನು ಕೊಲ್ಲುವರಲ್ಲದೆ ಬಿಡುವುದಿಲ್ಲ. ಚಿನ್ನ ರತ್ನಗಳನ್ನು ಬಯಸುವವರು ವನದಲ್ಲಿರುವ ಗಣಿಗಳನ್ನು ಅಗೆದು ಅವನ್ನು ತೆಗೆದುಕೊಳ್ಳದೆ ಸಮ್ಮನಿರರು. ಈ ಮೃಗವು ಮೃಗರತ್ನವಾಗಿರುವುದರಿಂದ ಇದನ್ನು ಉಪೇಕ್ಷೆ ಮಾಡುವುದು ಸರಿಯಲ್ಲ. ತನಗೆ ಇಷ್ಟವಾದ ವಸ್ತು ಲಾಭವಾಗುವ ಕಾರ್ಯದಲ್ಲಿ ತತ್‌ಕ್ಷಣದಲ್ಲೇ ಪ್ರವರ್ತಿಸಿ ಆಮೇಲೆ ಆ ಕಾರ್ಯಕ್ಕೆ ಬರುವ ವಿಘ್ನಗಳಿಗೆ ಪ್ರತೀಕಾರವನ್ನು ಮಾಡಬೇಕು. ಈ ಮೃಗರತ್ನವನ್ನು ಕೊಂದರೂ ಇದರ ಮನೋಹರವಾದ ಚರ್ಮದ ಮೇಲೆ ಸೀತಾದೇವಿಯು ವಿಲಾಸವಾಗಿ ಕುಳಿತುಕೊಂಡಿರುವಳು. ಇದರ ಮೈಮೇಲಣ ರೋಮಗಳ ನಯನುಣುಪುಗಳನ್ನು ನೋಡು. ಮೃದುರೋಮಗಳುಳ್ಳ ಕದಳೀಮೃಗಗಳ ರೋಮಗಳೂ ಉತ್ತರದೇಶ ಕುರಜಾಂಗಲ ದೇಶಗಳ ಮೃಗಗಳ ರೋಮಗಳೂ ಈ ಮೃಗದ ರೋಮಗಳಿಗೆ ಸರಿಯಾಗಲಾರವು. ಈ ಲೋಕದಲ್ಲಿ ಅತ್ಯಂತಾಶ್ಚರ್ಯಕರವಾದ ಮೃಗವು ಇದೇ ಸರಿ. ವನದಲ್ಲಿ ಅಪರಾಧ ಮಾಡದಿರುವ ಮೃಗವನ್ನು ಕೊಲ್ಲಬಾರದಾದರೂ ನೀನು ಈ ಮೃಗವನ್ನು ಕಂಡಾಗಲೇ ಇದು ಮಾಯಾಮೃಗವೆಂದೂ ಮಾರೀಚನೇ ಈ ಆಕಾರವಾಗಿ ಬಂದನೆಂದೂ ಹೇಳಿದೆಯಾದ್ದರಿಂದ ಇದನ್ನು ಅವಶ್ಯವಾಗಿ ಕೊಲ್ಲಬೇಕು. ಪೂರ್ವದಲ್ಲಿ ವಾತಾಪಿ ಇಲ್ವಲರೆಂಬ ರಾಕ್ಷಸರು ಮಾಯೆಯಿಂದ ಬಹುಮಂದಿ ಬ್ರಾಹ್ಮಣರನ್ನು ಕೊಂದಂತೆ ಮಾರೀಚನು ಮೃಗರೂಪದಿಂದ ಬಂದು ದಂಡಕಾರಣ್ಯ ಅಲ್ಲಿದ್ದ ಅನೇಕ ಯಷಿಗಳನ್ನು ಕೊಂದನು. ಕಡೆಯಲ್ಲಿ ವಾತಾಪಿಯು ಅಗಸ್ತ್ಯಮುನಿಗೆ ಅಗೌರವವನ್ನು ಮಾಡಿ ಯಮಲೋಕವನ್ನೈದಿದಂತ್ಕ, ಮಾರೀಚನು ನಮ್ಮನ್ನು ವಂಚಿಸಿ ಮೋಸ ಮಾಡಬೇಕೆಂದು ಈ ಮೃಗರೂಪದಿಂದ ಬಂದಿರುವ ಪಕ್ಷದಲ್ಲಿ ನಮ್ಮ ಶರಹತಿಯಿಂದ ಯಮಲೋಕ ವನ್ನೈದುವನು. ಲಕ್ಷ್ಮಣ, ನೀನು ಸಾವಧಾನವಾಗಿ ಸೀತಾದೇವಿಯನ್ನು ರಕ್ಷಿಸಿಕೊಂಡಿರು. ನಾನು ಈ ಮೃಗವನ್ನು ಬೆನ್ನಟ್ಟಿ ಹೋಗಿ ಹಿಡಿದು ತರುತ್ತೇನೆ. ಅಥವಾ ಕೊಂದು ತರುತ್ತೇನೆ. ನಾನು ಹಿಡಿದು ತರುವ ಪರ್ಯಂತ ನೀನು ದೃಢವಾಗಿ ಇಲ್ಲೇ ಇರು. ಸೀತೆಗೆ ಈ ಮೃಗದ ಮೇಲೆ ಆಪೇಕ್ಷೆಯುಂಟಾಗಿರುವುದರಿಂದ ನಮಗೆ ಈ ಮೃಗದ ಚರ್ಮವೇ ಪ್ರಧಾನ, ಆದರೆ ನೀನು ಮೈಮರೆತಿರಬೇಡ. ಇದು ಮಾಯಾಮೃಗವಾಗಿದ್ದರೆ ಇಲ್ಲಿ ಬಂದದ್ದಕ್ಕೆ ಒಂದು ಕಾರಣವಿರಬೇಕು. ಆದಕಾರಣ ನೀನು ಸೀತಾದೇವಿಯನ್ನು ಎಚ್ಚರಿಕೆಯಿಂದ ನೋಡಿಕೊಂಡಿರು. ನಾನು ಈ ಮೃಗವನ್ನು ಶೀಘ್ರದಲ್ಲಿ ಹಿಡಿದು ತರುತ್ತೇನೆ. ಹಾಗಿಲ್ಲದ ಪಕ್ಷದಲ್ಲಿ ಒಂದೇ ಬಾಣದಿಂದ ಅದನ್ನು ಕೊಂದು ಅದರ ಚರ್ಮವನ್ನು ತೆಗೆದುಕೊಂಡು ಶೀಘ್ರವಾಗಿ ಬರುತ್ತೇನೆ. ಸಮೀಪದಲ್ಲಿ ಬುದ್ಧಿವಂತನಾದ ಜಟಾಯುವಿದ್ದಾನೆ. ನೀನು ಆತನನ್ನು ಸಹಾಯಮಾಡಿಕೊಂಡು ಜಾಗರೂಕನಾಗಿರು ಎಂದು ಲಕ್ಷ್ಮಣನಿಗೆ ಹೇಳಿದನು.

ಮುಂದುವರಿಯುವುದು...

# ಹಾಸನಾಂಭ ದೇವಿಯ ಸಹೋದರಿ ಕೆಂಚಾಂಬಾ ದೇವಿ



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಕೆಂಚಾಂಬಿಕಾ ದೇವಿಯ ಪಾದಕಮಲಗಳು ಪಾದಪೀಠದಲ್ಲಿ ಪ್ರಕಾಶಿಸುವುವು. ಪಾದದ ಹತ್ತು ಬೆರಳುಗಳನ್ನು ಹರಳುಗಳಿಂದ ಮಾಡಿದ ಉಂಗುರ ಪಿಲ್ಲಿಗಳು ಅಲಂಕರಿಸುವುವು. ಮೇಲು ಭಾಗದಲ್ಲಿ ಚಿನ್ನದ ಕಾಲ್ಕಡಗಗಳು ಕಾಲಿಗೆ ಸೇರಿದ್ದರಿಂದಲೇ ಅವಕ್ಕೊಂದು ಕಳೆ ಏರುವುದು. ರೇಷ್ಮೆಯ ಕೆಂಪುಸೀರೆಯನ್ನು ಧರಿಸಿದ ಶರೀರವು ಕೆಂಪುಕಾಂತಿಯನ್ನು ಪಸರಿಸುತ್ತಿದೆ. ನಡುವಿನ ಒಡ್ಯಾಣ ರವರವನೆ ಉರಿಯುತ್ತಿದೆ. ಪಯೋಧರಗಳು ವಜ್ರದ ಹಾರಗಳಿಂದಲೂ, ಹೂವುಗಳಿಂದಲೂ ಮುಚ್ಚಲ್ಪಟ್ಟು ಉಬ್ಬಿ ಕಾಣುತ್ತಿವೆ. ಚತುರ್ಭುಜ ಗಳಲ್ಲೂ ಶೂಲ ಪಾಶಾದಿ ಶಸ್ತ್ರಾಯುಧಗಳು ಕಂಗೊಳಿಸುತ್ತಿವೆ. ಹಸಿರು ರವಕೆಯಿಂದ ತೋಳುಗಳು ಧಳಧಳಿಸುತ್ತಿವೆ. ಸಪ್ತಮುಖ ಧರಿಸಿದ ಆ ಸ್ವರೂಪ ನಿಜಕ್ಕೂ ಭಯಂಕರ. ನೀಡಿದ ನಾಲಿಗೆಗಳೂ ಕೋರೆಹಲ್ಲುಗಳೂ, ಉರಿಯುವ ಕಣ್ಣುಗಳೂ ಗಂಟಿಕ್ಕಿದ ಹುಬ್ಬುಗಳೂ, ಅದ್ಭುತವಾಗಿ ಕಾಣುತ್ತಿದೆ. ಮೂಗನ್ನು ಮುತ್ತು ರತ್ನಗಳಿಂದ ಕೆತ್ತಲ್ಪಟ್ಟ ಚಂದ್ರಾಕಾರದ ಮುಕುರವು ಅಲಂಕರಿಸಿದೆ. ಪಕ್ಕದ ಎರಡು ಕರ್ಣಗಳೂ ವಜ್ರ ವೈಡೂರದ ಓಲೆಗಳಿಂದ ಸುಪ್ರಕಾಶವಾಗಿವೆ. ಶಿರೋಭಾಗನನ್ನಲಂಕರಿಸಿದ ಕಿರೀಟವು ಕೋಟಿಸೂರ ಪ್ರಕಾಶವನ್ನು ಹೀಯಾಳಿಸುತ್ತಿದೆ. ಇಂಥ ಶಕ್ತಿ ದೇವತೆಯಾದ ಕೆಂಚಾಂಬಿಕೆಯ ಸ್ವರೂಪವನ್ನೀಕ್ಷಿಸಿ ಬಂದು ಜಗುಲಿಯಲ್ಲಿ ದೇವರು ವಿಶ್ರಾಂತಿ ಪಡೆಯುವುದು. ದೇವರೊಡನೆ ಬಂದಿದ್ದ ಭಕ್ತರೂ ದರ್ಶನ ಲಾಭ ಪಡೆದು ಪಾವನರಾಗುವರು. ಈ ತೇಜೋಮೂರ್ತಿನಿಯೇ ರಕ್ತಬೀಜಾಸುರನನ್ನು ವಧಿಸಿದವಳು. ತೀರ್ಥ ಪ್ರಸಾದವನ್ನು ಸ್ವೀಕರಿಸಿ ಸನಿಹದ ಕೊಳ್ಳಕ್ಕೆ ಹೋಗಿ ತಮ್ಮ ಬುತ್ತಿಯನ್ನು ಸೇವಿಸಿ ವಿರಮಿಸುವರು.

ಈ ವೇಳೆಗೆ ಸೂರ್ಯದೇವನು ಪಡುಗಡಲನ್ನು ಸೇರುವನು. ಗುಣವಂತನ ಕೀರ್ತಿಯಂತೆ ವೃದ್ಧಿಯಾದ ಸಂಜೆ ನೆರಳು ವಿಶಾಲವಾಗಿ ವ್ಯಾಪಿಸುವುದು. ಹಕ್ಕಿಗಳು ಆಕಾಶವನಿತೆಯ ಕಂಠ ಮಾಲೆಯಂತೆ ಸಾಲಾಗಿ ಹಾರಿ ಗೂಡು ಸೇರುವುವು. ಈ ಕೆಂಚಾಂಬಿಕೆಯ ದೇವಸ್ಥಾನವು ಕರ್ನಾಟಕ ಸಾಮ್ರಾಜ್ಯದ ಚಕ್ರವರ್ತಿಯಾಗಿದ್ದ ಬುಕ್ಕರಾಯನ ಮಗ ಹರಿಹರರಾಯನಿಂದ ಕ್ರಿ.ಶ. 1383 ರಲ್ಲಿ ಕಟ್ಟಲ್ಪಟ್ಟಿರುವುದು (ಐಗೂರ ಇತಿಹಾಸ ಪುಟ 45) ಐಗೂರು ಪಾಳೆಯಗಾರರವಂಶಸ್ಥ ನರಸಿಂಹನಾಯಕನು ರಕ್ತ ಬೀಜಾಸುರನ ಅರಮನೆಯಿದ್ದಲ್ಲಿ 'ಕೆಂಚಮ್ಮನ ಹೊಸಕೋಟೆ ಎಂಬ ಹೆಸರಿನಿಂದ ಒಂದು ಕೋಟೆಯನ್ನು ಕಟ್ಟಿಸಿದನು.

ಕೆಂಚಮ್ಮ ನವರ ಉಪಾಧಿಗಾಗಿ ಬೆಂಬಳೂರು ಗ್ರಾಮವನ್ನು ನರಸಿಂಹಪುರಿ ಎಂಬ ಹೆಸರಿನಿಂದ ಉಂಬಳಿ ಮಾಡಿ ಮೊದಲಿನಂತೆ ಪ್ರತಿ ವರ್ಷ ವೈಶಾಖ ಶುಕ್ಲದ ಎರಡನೆಯ ಶನಿವಾರ ಉದ್ವಾರ್ಚನೆ, ಭಾನುವಾರ ದೊಡ್ಡ ಜಾತ್ರೆ, ಕಾರ್ತೀಕ ಶುಕ್ಲದ ಎರಡನೇ ಮಂಗಳವಾರ ಪುನರುದ್ವಾರ್ಚನೆ, ಬುಧವಾರ ಕೆಂಡದಜಾತ್ರೆ ನಡೆಯುವಂತೆ ಏರ್ಪಡಿಸಿದನು. (ಐಗೂರು ಇತಿಹಾಸ ಪುಟ 76) ಈ ಪ್ರಾಂತಕ್ಕೆ ಮಾಗನಾಡೆಂದು ಹೆಸರು. ಇಲ್ಲಿಯವರೆಲ್ಲ ವಸಂತ ಋತುವಿನಲ್ಲಿ ಸುಗ್ಗಿಯ (ಕುಣಿತ)ನ್ನಾಚರಿಸುವರು. ಈ ಸುಗ್ಗಿಯು ದೊಡ್ಡ ಜಾತ್ರೆಯೊಡನೆ ಮುಗಿಯುವುದು. ಆಕೆಯ ಮೇಲೆ ಹಲವು ಗೀತೆಗಳನ್ನು ಹಾಡುವರು. ಇಲ್ಲಿ ಅವುಗಳಲ್ಲಿ ಕೆಲವನ್ನು ಸಂಗ್ರಹಿಸುವುದು ಅನುಚಿತವೇನಲ್ಲ. ಪುರುಷನುಳ್ಳವಳಿಗೆ ಅರಿಸಿನದ ಐಭೋಗ ಪುರುಷ ನಿಲ್ಲಾದ ಅರಸೀಗೆ ಪುರುಷ ನಿಲ್ಲಾದ ಅರಸಿ ಕೆಂಚಮ್ಮಾಗೆ। ಅರಿಸಿನ ಕುಂಕುಮದ ಐಭೋಗ (ಪ್ರತಿ ಪದದ ಎರಡನೆಯ ಸಾಲನ್ನೂ ಎರಡು ಸಾರಿ ಹೇಳಿಕೊಳ್ಳುವರು) ಗಂಡನುಳ್ಳವಳೀಗೆ ಗಂಧಾದ ಐಭೋಗ ಗಂಡನಿಲ್ಲಾದ ಗರತೀಗೆ। ಕೆಂಚಮ್ಮ ಗಂಧ ಕುಂಕುಮದ ಐಭೋಗ ಒಬ್ಬಾಳ ಗುಡಿಯಲ್ಲಿ ಕಬ್ಬಿಣದುಯ್ಯಾಲೆ। ನಗ್ಗು ನಗ್ಗೆಂದ ಹರಿಹಳ್ಳಿ ಬೆಂಬಳೂರ ಹಬ್ಬಿಗೆ ಕಲ್ಲು ಜರಿದಾವು ಈ ಕೆಂಚಾಂಬಿಕೆ ನೆಲಸಿರುವ ಸ್ಥಳ ಯೋಗಭೂಮಿಯಂತೆ ಪ್ರಶಾಂತವಾಗಿರುವುದು. ಸುಬ್ಬುರಾಯನ ತಂಗಿ ಒಬ್ಬಾಳೆ ಕೆಂಚಮ್ಮ ಇಬ್ಬಾನಿ ಹುಲ್ಲ ತುಳಕೊಂಡು। ಕೆಂಚಮ್ಮ ಸದ್ದಿಲ್ಲ ತಾವ ನೆಲಸವೆ ಈ ಎಡೆಯಲ್ಲಿ, ಆಕೇಯ ಗುಡಿಯಲ್ಲಿ ಧೂಪ ಗಮ್ಮೆಂದಾವು ಆಕೆ ಕೆಂಚಮ್ಮ ಬನದಲ್ಲಿ। ಬಾಳೆಯಹಣ್ಣು ಜೋತಾಡು ತಾವೆ ಮುಗಿಲಲ್ಲಿ ಅಂಬಾರದಲ್ಲಿ ಗಂಧ ಗವೆಂದಾವು ರಂಬೆ ಕೆಂಚಮ್ಮ ಬನದಲ್ಲಿ ತೆಂಗಿನಕಾಯಿ ಇಟ್ಯಾಡು ತಾವೆ ಮುಗಿಲಲ್ಲಿ ಈ ಸ್ಥಳದಲ್ಲಿ ರಾತ್ರಿ ವೇಳೆ ಯಾರು ತಂಗುವುದಿಲ್ಲ. ಆದ್ದರಿಂದ ಹೋಗಿದ್ದ ದೇವರೂ ಜನರೂ ರಾತ್ರಿ 9–10 ಘಂಟೆಗೆ ಹಿಂತಿರುಗುವರು. ಆಗ ಸೋದರ ಸೋದರಿಯರು ಹೀಗೆಂದು ಕೊಳ್ಳುವರು.


**ಯಾಲಕ್ಕಿ ವೆಂಕಟರಮಣ ನಿನ್ಯಾವಾಗ ಬರುವೇಯೋ**
**ತುಲಸೀಯ ಮಾಲೆ ಬರುವಾಗ ಅಕ್ಕಯ್ಯ**
**ನಾ ಬಂದು ಕೈಯ್ಯ ಮುಗಿವೇನು**
**ಬೀಳ್ಕೊಟ್ಟಮೇಲೆ;**
**ಆಕೆ ಕೆಂಚಮ್ಮ ಗಂಧಾದ ಮರವೇರಿ**
**ಏರಿನೋಡ್ಯಾಳೆ ಪರಿಷೇಯ ಕೆಂಚಮ್ಮ**
**ದೂರಿದಲಿ ಹೋಗೊ ಪರಿಷೇಯ**



# ಮನಸು ಪುಟಿಯುತಿದೆ



ಹೆಚ್.ಎಸ್. ಪ್ರತಿಮಾ
• ಉದಯವಾಹಿನಿ, ವಿಶೇಷ



ಮೌನಕ್ಕೂ ನೋವಿದೆ
ಮಾತು ಬರದಂತಾಗಿದೆ
ಮನಸು ಪುಟಿಯುತಿದೆ
ಕಣ್ಣುಗಳು ಒದ್ದೆಯಾಗುತಿದೆ....
ಅರಿತೋ ಅರೆಯದೇಯೋ
ಮೌನ ಮಾತಾಗಲು
ಸಮಯ ಬೇಡುತಿದೆ
ಬೇಕೆಂದು ಬೇಡವೆಂದು......
ನೋವು ನೀಡಿಹುದು
ಅದರೊಳಗಿಂದ ಹೊರಬರಲು
ನೆನಪುಗಳು ಕಾಡುತಿದೆ
ಅರೆ ಕ್ಷಣದ ಮೌನವಿರಲಿ.......
ಅರಿವಿನ ಪ್ರೀತಿ ಬರಲಿ
ಬದುಕು ನಂಬಿಕೆಗೆ ಹೆಸರಾಗಲಿ
ಸದಾ ಮೌನವೇ ಬಾಳಾಗದಿರಲಿ
ಎನ್ನುತ ಜೀವನ ಸಾಗುತಿದೆ.......


# ಬೆಳಗ್ಗೆ ಮಾಡಿರುವ ಚಪಾತಿ ಮಧ್ಯಾಹ್ನದವರೆಗೂ ಮೃದುವಾಗಿರಲು ಇಲ್ಲಿದೆ ಸಲಹೆಗಳು

ಚಪಾತಿ ತಯಾರಿಸುವಾಗ ತುಂಬಾನೇ ಮೃದುವಾಗಿರುತ್ತದೆ. ಮಧ್ಯಾಹ್ನದ ಹೊತ್ತಿಗೆ ಚಪಾತಿ ಗಟ್ಟಿಯಾಗಲಾರಂಭಿಸುತ್ತದೆ. ಚಪಾತಿಯನ್ನು ತಯಾರಿಸುವಾಗ ಎಷ್ಟೇ ಮೃದುವಾಗಿ ಕಲಸಿದರೂ ಚಪಾತಿ ಮಧ್ಯಾಹ್ನದ ಊಟದ ಹೊತ್ತಿಗೆ ಮೃದುತ್ವವನ್ನು ಕಳೆದು ಕೊಂಡಿರುತ್ತದೆ. ಈ ರೀತಿ ಯಾಕಾಗುತ್ತದೆ. ಇದನ್ನು ಮಧ್ಯಾಹ್ನದ ವರೆಗೂ ಮೃದುವಾಗಿರುವಂತೆ ನೋಡಿಕೊಳ್ಳುವುದು ಹೇಗೆ ಎನ್ನುವುದನ್ನು ತಿಳಿಯೋಣ.



**ರೊಟ್ಟಿಯನ್ನು ಮೃದುವಾಗಿಡಲು ಟಿಪ್ಸ್:** ಊಟದ ಡಬ್ಬಿಯಲ್ಲಿ ರೊಟ್ಟಿಗಳನ್ನು ಪ್ಯಾಕ್ ಮಾಡುವಾಗ ಅವುಗಳನ್ನು ಮೃದುವಾಗಿ, ತಾಜಾವಾಗಿಡುವ ಸವಾಲು ಹೆಚ್ಚಾಗಿ ಬರುತ್ತದೆ. ಊಟದ ಸಮಯ ಬರುವ ಹೊತ್ತಿಗೆ, ಹೊಸದಾಗಿ ತಯಾರಿಸಿದ ರೊಟ್ಟಿಗಳು ಸಹ ಗಟ್ಟಿಯಾಗಿ ಅಥವಾ ಅಗಿಯಲು ಕಷ್ಟವಾಗುತ್ತದೆ. ಆದರೆ ಕೆಲವು ಸರಳ ತಂತ್ರಗಳೊಂದಿಗೆ, ನೀವು ಚಪಾತಿಯನ್ನು ಮೃದುವಾಗಿ, ಬೆಚ್ಚಗೆ ಇಡಬಹುದು.

**ಹಿಟ್ಟಿಗೆ ಹಾಲು ಅಥವಾ ಎಣ್ಣೆಯನ್ನು ಸೇರಿಸಿ:** ರೊಟ್ಟಿ ಹಿಟ್ಟಿಗೆ ಸ್ವಲ್ಪ ಹಾಲು, ಒಂದು ಟೀಚಮಚ ಎಣ್ಣೆ ಅಥವಾ ತುಪ್ಪವನ್ನು ಸೇರಿಸುವುದರಿಂದ ತೇವಾಂಶವನ್ನು ಉಳಿಸಿಕೊಳ್ಳಲು ಸಹಾಯ ಮಾಡುತ್ತದೆ. ಹಾಲು ಹಿಟ್ಟನ್ನು ಮೃದು ಆಗಿರಿಸುತ್ತದೆ, ಆದರೆ ಎಣ್ಣೆ ಅದು ಗಟ್ಟಿಯಾಗುವುದನ್ನು ತಡೆಯುತ್ತದೆ. ಈ ಸಣ್ಣ ಬದಲಾವಣೆಯು ದಿನವಿಡೀ ನಿಮ್ಮ ರೊಟ್ಟಿಗಳ ವಿನ್ಯಾಸದಲ್ಲಿ ಗಮನಾರ್ಹ ವ್ಯತ್ಯಾಸವನ್ನುಂಟು ಮಾಡುತ್ತದೆ.



**ಹಿಟ್ಟನ್ನು ವಿಶ್ರಾಂತಿಗೆ ಬಿಡಿ:** ಹಿಟ್ಟು ಕಲಸಿದ ನಂತರ ಹಿಟ್ಟನ್ನು ಒದ್ದೆಯಾದ ಬಟ್ಟೆಯಿಂದ ಮುಚ್ಚಿ 20–30 ನಿಮಿಷಗಳ ಕಾಲ ವಿಶ್ರಾಂತಿಗೆ ಬಿಡಿ. ವಿಶ್ರಾಂತಿಗೆ ಒಳಪಡುವುದರಿಂದ ಅಂಟು ಸಡಿಲಗೊಳ್ಳುತ್ತದೆ, ಹಿಟ್ಟನ್ನು ಲಟ್ಟಿಸಲು ಸುಲಭವಾಗುತ್ತದೆ. ವಿಶ್ರಾಂತಿಗೆ ಒಳಪಡುವ ಹಿಟ್ಟಿನಿಂದಾಗಿ ರೊಟ್ಟಿಗಳು ಚೆನ್ನಾಗಿ ಉಬ್ಬುತ್ತವೆ ಮತ್ತು ಹೆಚ್ಚು ಕಾಲ ಮೃದುವಾಗಿರುತ್ತವೆ.

**ಮಧ್ಯಮ-ಹೆಚ್ಚಿನ ಉರಿಯಲ್ಲಿ ಬೇಯಿಸಿ:** ಚಪಾತಿಗಳನ್ನು ಬೇಯಿಸುವ ಮೊದಲು ನಿಮ್ಮ ತವಾ, ಗ್ರಿಡಲ್ ಸರಿಯಾಗಿ ಬಿಸಿಯಾಗಿದೆಯೇ ಎಂದು ಖಚಿತಪಡಿಸಿಕೊಳ್ಳಿ. ಬಿಸಿ ಪ್ಯಾನ್ ಚಪಾತಿಯನ್ನು ಉಬ್ಬಿಸಲು ಅನುವು ಮಾಡಿಕೊಡುತ್ತದೆ ಮತ್ತು ಒಳಗೆ ಉಗಿಯನ್ನು ಹಿಡಿದಿಟ್ಟುಕೊಳ್ಳುತ್ತದೆ, ಅದು ಮೃದುವಾಗಿರುತ್ತದೆ. ಚಪಾತಿಯಲ್ಲಿ ಕಂದು ಕಲೆಗಳು ಕಾಣಿಸಿಕೊಳ್ಳುವವರೆಗೆ ಎರಡೂ ಬದಿಗಳನ್ನು ಬೇಯಿಸಿ, ಆದರೆ ಅತಿಯಾಗಿ ಬೇಯಿಸುವುದನ್ನು ತಪ್ಪಿಸಿ, ಇದು ರೋಟಿಯನ್ನು ಒಣಗಿಸಬಹುದು.

**ಹತ್ತಿ ಬಟ್ಟೆಯಲ್ಲಿ ಸುತ್ತಿ:** ಚಪಾತಿಯನ್ನು ಬೇಯಿಸಿದ ನಂತರ ಜೋಡಿಸಿ ಮತ್ತು ಅವುಗಳನ್ನು ಸ್ವಚ್ಛವಾದ ಹತ್ತಿ ಬಟ್ಟೆಯಲ್ಲಿ ಸುತ್ತಿ. ಚಪಾತಿ ಬೆಚ್ಚಗಿರುತ್ತದೆ ಮತ್ತು ಮೃದುವಾಗಿರುವಾಗ ಬಟ್ಟೆಯು ಯಾವುದೇ ಹೆಚ್ಚುವರಿ ತೇವಾಂಶವನ್ನು ಹೀರಿಕೊಳ್ಳುತ್ತದೆ. ಊಟದ ಸಮಯಕ್ಕೆ ಮುಂಚಿತವಾಗಿ ರೋಟಿಗಳು ಗಟ್ಟಿಯಾಗುವುದನ್ನು ತಡೆಯಲು ಇದು ಅತ್ಯಂತ ಪರಿಣಾಮಕಾರಿ ಮಾರ್ಗಗಳಲ್ಲಿ ಒಂದಾಗಿದೆ.

**ಗಾಳಿ-ಬಿಗಿಯಾದ ಪಾತ್ರೆಯಲ್ಲಿ ಸಂಗ್ರಹಿಸಿ:** ಒಮ್ಮೆ ಸುತ್ತಿದ ನಂತರ, ತೇವಾಂಶವನ್ನು ಲಾಕ್ ಮಾಡಲು ತಯಾರಾದ ಚಪಾತಿಗಳನ್ನು ಗಾಳಿಯಾಡದ ಪಾತ್ರೆಯಲ್ಲಿ ಇರಿಸಿ. ಚಪಾತಿ ಒಣಗಲು ಕಾರಣವಾಗುವ ತೆರೆದ ಪಾತ್ರೆಗಳಲ್ಲಿ ಅಥವಾ ಕಾಗದದ ಚೀಲಗಳಲ್ಲಿ ಅವುಗಳನ್ನು ಸಂಗ್ರಹಿಸುವುದನ್ನು ತಪ್ಪಿಸಿ. ಗಾಳಿಯಾಡದ ಶೇಖರಣೆಯು ರೋಟಿಗಳು ತಿನ್ನುವವರೆಗೂ ತಾಜಾವಾಗಿರುತ್ತದೆ.

# ಸ್ತನದಲ್ಲಿ ಊತ ನೋವು ಬರುತ್ತಿದೆಯಾ? ಬ್ರೆಸ್ಟ್ ಕ್ಯಾನ್ಸರ್ ಇರಬಹುದು

ವಿಶ್ವಾದ್ಯಂತ ಸ್ತನ ಕ್ಯಾನ್ಸರ್ ಪ್ರಕರಣಗಳು ವೇಗವಾಗಿ ಹೆಚ್ಚುತ್ತಿವೆ.ನಮಗೆಲ್ಲಾ ಗೊತ್ತೇ ಇರುವ ಹಾಗೆ ಕ್ಯಾನ್ಸರ್ ನಲ್ಲಿಯೂ ಕೂಡ ವಿವಿ ಬಗೆ ಇದ್ದು, ಇದರಲ್ಲಿ ಬ್ರೆಸ್ಟ್ ಕ್ಯಾನ್ಸರ್ ಅಥವಾ ಸ್ತನ ಕ್ಯಾನ್ಸರ್ ಕೂಡ ಒಂದು. ಈಗಾಗಲೇ ಬಹುತೇಕ ಮಹಿಳೆಯರು ಈ ಸ್ತನಕ್ಯಾನ್ಸರ್ ಗೆ ಗುರಿಯಾಗಿ ತಮ್ಮ ಪ್ರಾಣವನ್ನು ಕಳೆದುಕೊಳ್ಳುತ್ತಿದ್ದಾರೆ.


ಡಬ್ಲ್ಯೂಎಚ್‌ಒ ವರದಿಯ ಪ್ರಕಾರ, 2050ರ ವೇಳೆಗೆ ಪ್ರತಿ ವರ್ಷ ಸುಮಾರು 3.2 ಮಿಲಿಯನ್ ಸ್ತನ ಕ್ಯಾನ್ಸರ್ ಪ್ರಕರಣಗಳು ರೋಗನಿರ್ಣಯವಾಗುವ ನಿರೀಕ್ಷೆಯಿದೆ ಎನ್ನಲಾಗುತ್ತಿದೆ. ನಿಜಕ್ಕೂ ಇದು ಆತಂಕಕಾರಿ ವಿಚಾರ ಆದ್ದರಿಂದ, ಮಹಿಳೆಯರು ಅದರ ಆರಂಭಿಕ ಲಕ್ಷಣಗಳನ್ನು ಮೊದಲೇ ಗುರುತಿಸುವುದು ಬಹಳ ಮುಖ್ಯ.

**ಸ್ತನ ಕ್ಯಾನ್ಸರ್ ಎನ್ನುವುದು:** ಹಿಂದೆಲ್ಲಾ ಸ್ತನ ಕ್ಯಾನ್ಸರ್ ಎನ್ನುವುದು ವಯಸ್ಸಾಗುತ್ತಾ ಬರುತ್ತಿದ್ದಂತೆ ಅಂದರೆ 50 ವರ್ಷ ದಾಟಿದ ಮಹಿಳೆಯರಲ್ಲಿ ಹೆಚ್ಚಾಗಿ ಕಂಡುಬರುತ್ತಿತ್ತು. ಆದರೆ ಇಂದಿನ ದಿನಗಳಲ್ಲಿ ಸಣ್ಣ ವಯಸ್ಸಿಗೆ ಅಂದರೆ 30 ರಿಂದ 45 ವರ್ಷದ ಒಳಗಿನ ಮಹಿಳೆಯರಲ್ಲಿಯೂ ಕೂಡ ಸ್ತನ ಕ್ಯಾನ್ಸರ್ ಕಾಣಿಸಿಕೊಳ್ಳುತ್ತಿ ರುವುದು ನಿಜಕ್ಕೂ ಆತಂಕಪಡುವ ವಿಚಾರ ಇದಕ್ಕೆಲ್ಲಾ ಪ್ರಮುಖ ಕಾರಣಗಳೇನು ಅನಾರೋಗ್ಯ ಜೀವನಶೈಲಿ ಆಹಾರಪದ್ಧತಿ ಹಾಗೂ ಅನುವಂಶೀಯ ಅಂದ್ರೆ ಕೌಟುಂಬಿಕ ಇತಿಹಾಸ ಇರುವವರಲ್ಲಿಯೂ ಕೂಡ ಕಾರಣವಾಗುತ್ತದೆ ಎನ್ನಲಾಗುತ್ತದೆ.

ಹಾಗಾಗಿ ಪ್ರತಿಯೊಬ್ಬ ಮಹಿಳೆಯೂ ಕೂಡ 30 ವರ್ಷ ದಾಟಿದ ಬಳಿಕ ಸ್ತನ ಕ್ಯಾನ್ಸರ್‌ಗೆ ಸಂಬಂಧಪಟ್ಟ ಮ್ಯಾಮೊಗ್ರಾಮ್ ಸ್ತನಗಳ ಪರೀಕ್ಷೆ ಮಾಡಿಸಿ ಕೊಳ್ಳುವುದು ಒಳ್ಳೆಯದು ಎನ್ನುತ್ತಾರೆ ಆರೋಗ್ಯ ತಜ್ಞರು.

**ಸ್ತನಗಳಲ್ಲಿ ಬದಲಾವಣೆಗಳು:** ಸ್ತನ ಕ್ಯಾನ್ಸರ್ ಲಕ್ಷಣಗಳು ಕಾಣಿಸಿಕೊಂಡಾಗ ಸ್ತನಗಳ ಗಾತ್ರದಲ್ಲಿ ಬದಲಾವಣೆಗಳು, ಇದ್ದಕ್ಕಿದಂತೆ ಸ್ತನಗಳಲ್ಲಿ ನೋವು, ಸ್ತನದ ನಿಪ್ಪಲ್‌ನಲ್ಲಿ ಬದಲಾವಣೆ ಅಥವಾ ಸ್ತನ ನಿಪ್ಪಲ್ ನಿಂದ ರಕ್ತ ಸ್ರಾವ ಆಗುವುದು ಹೀಗೆಲ್ಲಾ ಸಮಸ್ಯೆಗಳು ಕಾಣಿಸಿಕೊಳ್ಳಲು ಶುರುವಾಗುತ್ತದೆ!

ಒಂದು ವೇಳೆ ಈ ರೀತಿ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡರೆ ಅದನ್ನು ಡಾಕ್ಟರ್ ಬಳಿ ತೋರಿಸಿ, ಸಂಬಂಧಪಟ್ಟ ಪರೀಕ್ಷೆಗೆ ಒಳಗಾಗಿ ಸೂಕ್ತ ಸಮಯಕ್ಕೆ ಚಿಕಿತ್ಸೆ ಪಡೆದುಕೊಳ್ಳುವುದು ಒಳ್ಳೆಯದು ಎನ್ನುತ್ತಾರೆ ತಜ್ಞರು. ಇನ್ನು ಆತಂಕದ ವಿಚಾರ ಏನೆಂದರೆ ಭಾರತದಲ್ಲಿ, ಈ ರೋಗವು ಮಹಿಳೆಯರಲ್ಲಿ ಅತ್ಯಂತ ಸಾಮಾನ್ಯವಾದ ಕ್ಯಾನ್ಸರ್ ಆಗಿ ಹೊರಹೊಮ್ಮುತ್ತಿದೆ. ಆದ್ದರಿಂದ, ಮಹಿಳೆಯರು ಇದರ ಆರಂಭಿಕ ಲಕ್ಷಣಗಳನ್ನು ಮೊದಲೇ ಗುರುತಿಸುವುದು ಬಹಳ ಮುಖ್ಯ. ಕೇವಲ 2 ನಿಮಿಷಗಳ ಸ್ವಯಂ ಪರೀಕ್ಷೆಯಿಂದ ಮಹಿಳೆಯರು ಮನೆಯಲ್ಲಿಯೇ ಸ್ತನ ಕ್ಯಾನ್ಸರ್ ಅನ್ನು ಹೇಗೆ ಪತ್ತೆ ಮಾಡಬಹುದು ಅದು ಹೇಗೆ ಎನ್ನುವುದರ ಬಗ್ಗೆ ನೋಡೋಣ.





**ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್:** ಭಾರತದಲ್ಲಿ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಅತ್ಯಂತ ಸಾಮಾನ್ಯವಾದ ಕ್ಯಾನ್ಸರ್ ಆಗಿದೆ. ತಜ್ಞರ ಪ್ರಕಾರ, ಸ್ತನ ಕ್ಯಾನ್ಸರ್ ಅತ್ಯಧಿಕ ಮರಣ ಪ್ರಮಾಣವನ್ನು ಹೊಂದಿದೆ. ಆದ್ದರಿಂದ, ಪ್ರತಿಯೊಬ್ಬ ಮಹಿಳೆ ತಿಂಗಳಿಗೊಮ್ಮೆ ಸ್ತನ ಕ್ಯಾನ್ಸರ್‌ಗೆ ಸ್ವಯಂ ತಪಾಸಣೆ ಮಾಡಿಕೊಳ್ಳುವ ಅಭ್ಯಾಸವನ್ನು ಮಾಡಿಕೊಳ್ಳಬೇಕು.

ನೀವು 35 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದರೆ, ನಿಮ್ಮ ಋತುಚಕ್ರ ಮುಗಿದ ನಂತರ ಪ್ರತಿ ತಿಂಗಳು ಇದನ್ನು ಮಾಡಿ. ಈ ಸಮಯದಲ್ಲಿ ಸ್ತನ ಅಂಗಾಂಶವು ಮೃದುವಾಗಿರುತ್ತದೆ, ಯಾವುದೇ ಗಡ್ಡೆಗಳು ಅಥವಾ ಬದಲಾವಣೆ ಗಳನ್ನು ಗುರುತಿಸುವುದು ಸುಲಭವಾಗುತ್ತದೆ.

**ಕನ್ನಡಿಯ ಮುಂದೆ ನಿಂತು ಪರೀಕ್ಷಿಸಿ:** ಮನೆಯಲ್ಲಿ ಸ್ತನ ಕ್ಯಾನ್ಸರ್ ಪರೀಕ್ಷಿಸಲು, ಕನ್ನಡಿಯ ಮುಂದೆ ನಿಂತು ನಿಮ್ಮ ಸ್ತನಗಳನ್ನು ಎಚ್ಚರಿಕೆಯಿಂದ ಪರೀಕ್ಷಿಸಿ. ನಿಮ್ಮ ಸ್ತನಗಳ ಆಕಾರ ಅಥವಾ ಗಾತ್ರದಲ್ಲಿ ಯಾವುದೇ ಬದಲಾವಣೆಗಳು, ಚರ್ಮವು ಹಿಗ್ಗುವ ಅಥವಾ ಕುಗ್ಗುವ ಯಾವುದೇ ಚಿಹ್ನೆಗಳನ್ನು ಗಮನಿಸಿ. ಅಲ್ಲದೆ, ಸ್ತನದ ಚರ್ಮದ ಮೇಲೆ ಒಳಮುಖವಾಗಿ ತಿರುಗುವ ಮೊಲೆತೊಟ್ಟುಗಳು ಅಥವಾ ಕಿತ್ತಳೆ ಸಿಪ್ಪೆಯ ರಚನೆಯನ್ನು ಪರಿಶೀಲಿಸಿ. ಇವೆಲ್ಲವೂ ಸ್ತನ ಕ್ಯಾನ್ಸರ್‌ನ ಚಿಹ್ನೆಗಳಾಗಿರಬಹುದು.

**ಸ್ತನದಲ್ಲಿ ಗಡ್ಡೆ, ಊತ ಅಥವಾ ನೋವು ಕಂಡುಬಂದರೆ:** ಸ್ತನ ಕ್ಯಾನ್ಸರ್ ಪರೀಕ್ಷಿಸಲು, ನಿಮ್ಮ ಬೆರಳ ತುದಿಯಿಂದ ವೃತ್ತಾಕಾರದ ಚಲನೆಯಲ್ಲಿ ಸ್ತನವನ್ನು ಸ್ಪರ್ಶಿಸಿ, ಸೌಮ್ಯವಾದ ಒತ್ತಡವನ್ನು ಅನ್ವಯಿಸಿ. ನಿಮ್ಮ ಸ್ತನದಲ್ಲಿ ಗಡ್ಡೆ, ಊತ ಅಥವಾ ನೋವು ಕಂಡುಬಂದರೆ, ತಕ್ಷಣ ವೈದ್ಯರನ್ನು ಸಂಪರ್ಕಿಸಿ.

**ಸ್ನಾನ ಮಾಡುವಾಗ:** ಸ್ನಾನ ಮಾಡುವಾಗ ಸ್ತನ ಕ್ಯಾನ್ಸರ್ ಇದೆಯೇ ಎಂದು ಸುಲಭವಾಗಿ ಪರಿಶೀಲಿಸ ಬಹುದು. ಸ್ನಾನ ಮಾಡುವಾಗ, ನಿಮ್ಮ ಕೈಗಳಿಂದ ಸ್ತನಗಳಲ್ಲಿ ಗಡ್ಡೆಗಳು ಅಥವಾ ಅಸಾಮಾನ್ಯ ಬೆಳವಣಿಗೆಗಳನ್ನು ನೀವು ಅನುಭವಿಸಬಹುದು. ನಿಮ್ಮ ಸ್ತನ ಅಥವಾ ಕಂಕುಳಲ್ಲಿ ಮೊಲೆತೊಟ್ಟುಗಳಿಂದ ಯಾವುದೇ ಗಡ್ಡೆಗಳು, ಊತ, ನೋವು ಅಥವಾ ಸ್ರಾವ ಕಂಡುಬಂದರೆ, ಅದನ್ನು ಹಗುರವಾಗಿ ಪರಿಗಣಿಸಬೇಡಿ. ಇವು ಸ್ತನ ಕ್ಯಾನ್ಸರ್‌ನ ಆರಂಭಿಕ ಲಕ್ಷಣಗಳಾಗಿರಬಹುದು.

ನೆನಪಿಡಿ ಸ್ತನದಲ್ಲಿ ಯಾವುದೇ ರೀತಿಯ ಬದಲಾವಣೆಗಳನ್ನು ಗಮನಿಸಿ ದರೆ, ತಕ್ಷಣ ವೈದ್ಯರನ್ನು ಸಂಪರ್ಕಿಸಿ ಏಕೆಂದರೆ ಸ್ತನ ಕ್ಯಾನ್ಸರ್ ಅನ್ನು ಆರಂಭಿಕ ಪತ್ತೆಯಿಂದ ಮಾತ್ರ ತಡೆಯಬಹುದು.

# ಈ ಎಣ್ಣೆ ಕೂದಲಿಗೆ ಹಚ್ಚೋದ್ರಿಂದ ಡ್ಯಾಂಡ್ರಫ್ ಸಮಸ್ಯೆ ನಿವಾರಣೆಯಾಗುತ್ತಂತೆ



ಆಯುರ್ವೇದದಲ್ಲಿ ಬ್ರಾಹ್ಮಿಯನ್ನು ಬೋಳುತನಕ್ಕೆ ಚಿಕಿತ್ಸೆ ನೀಡಲು ಪರಿಣಾಮಕಾರಿ ಗಿಡಮೂಲಿಕೆ ಎಂದು ಪರಿಗಣಿಸಲಾಗಿದೆ. ಜನರು ಇದನ್ನು ಎಣ್ಣೆಯಾಗಿ ಬಳಸಿ ಕೂದಲಿಗೆ ಹಚ್ಚುತ್ತಾರೆ. ಬ್ರಾಹ್ಮಿ ಎಣ್ಣೆ ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ಇದು ಕೂದಲಿನ ಕಿರುಚೀಲಗಳನ್ನು ಒಳಗಿನಿಂದ ಸ್ವಚ್ಛಗೊಳಿಸುತ್ತದೆ ಮತ್ತು ಮುಚ್ಚುತ್ತದೆ, ಕೂದಲನ್ನು ಪೋಷಿಸುತ್ತದೆ ಮತ್ತು ಬಲವಾದ, ದಪ್ಪವಾದ ಕೂದಲಿಗೆ ಸಹಕಾರಿಯಾಗಿದೆ.

**ಬ್ರಾಹ್ಮಿ ಎಣ್ಣೆ ಕೂದಲು ಮತ್ತೆ ಬೆಳೆಯುವುದನ್ನು ಉತ್ತೇಜಿಸುತ್ತದೆ:** ಬ್ರಾಹ್ಮಿ ಕೂದಲನ್ನು ಪೋಷಿಸುತ್ತದೆ, ಬಲಪಡಿಸುತ್ತದೆ. ಇದು ಕಿರುಚೀಲಗಳು ಮತ್ತು ಬೇರುಗಳನ್ನು ಬಲಪಡಿಸುತ್ತದೆ, ದಪ್ಪವಾದ, ಆರೋಗ್ಯಕರ ಕೂದಲಿನ ಬೆಳವಣಿಗೆಯನ್ನು ಉತ್ತೇಜಿಸುತ್ತದೆ. ಇದು ಕೂದಲು ಉದುರುವಿಕೆಯನ್ನು ತಡೆಯುತ್ತದೆ, ಕೂದಲು ಬೋಳಾಗಿರುವ ಜಾಗಕ್ಕೆ ಪರಿಣಾಮಕಾರಿಯಾಗಿದೆ.




**ದಪ್ಪ ಕೂದಲಿಗೆ ಬ್ರಾಹ್ಮಿ ಎಣ್ಣೆಯನ್ನು ಹಚ್ಚಿ:** ಕೂದಲಿಗೆ ಬ್ರಾಹ್ಮಿಎಣ್ಣೆ ಬೇರುಗಳನ್ನು ಪೋಷಿಸಲು ಸಹಾಯ ಮಾಡುತ್ತದೆ, ಬೇರುಗಳನ್ನು ದಪ್ಪವಾಗಿಸುವ ಮೂಲಕ ಕೂದಲಿನ ಬೆಳವಣಿಗೆಯನ್ನು ವೇಗಗೊಳಿಸುತ್ತದೆ. ಬ್ರಾಹ್ಮಿ ನೆತ್ತಿಯನ್ನು ತಂಪಾಗಿಸಲು, ಕೂದಲನ್ನು ದಪ್ಪವಾಗಿಸಲು ಸಹಾಯ ಮಾಡುತ್ತದೆ.

**ವಿಭಜಿತ ತುದಿಗಳಿಗೆ ಪ್ರಯೋಜನಕಾರಿ:** ಬ್ರಾಹ್ಮಿ ಎಣ್ಣೆ ವಿಭಜಿತ ತುದಿಗಳಿಗೆ ತುಂಬಾ ಪರಿಣಾಮಕಾರಿಯಾಗಿದೆ. ಇದು ಒಣ ಮತ್ತು ನಿರ್ಜೀವ ಕೂದಲನ್ನು ತೇವಗೊಳಿಸುತ್ತದೆ ಮತ್ತು ಅದರ ವಿನ್ಯಾಸವನ್ನು ಸುಧಾರಿಸುತ್ತದೆ, ವಿಭಜಿತ ತುದಿಗಳ ಸಮಸ್ಯೆಯನ್ನು ಕಡಿಮೆ ಮಾಡುತ್ತದೆ.

**ತಲೆಹೊಟ್ಟು ನಿವಾರಣೆಗೆ ಪರಿಣಾಮಕಾರಿ:** ಬ್ರಾಹ್ಮಿ ಎಣ್ಣೆ ತಲೆಹೊಟ್ಟಿಗೆ ತುಂಬಾ ಪ್ರಯೋಜನಕಾರಿಯಾಗಿದೆ. ತಲೆಹೊಟ್ಟು ಹೆಚ್ಚಾಗಿ ಶಿಲೀಂಧ್ರ ಸೋಂಕಿನಿಂದ ಉಂಟಾಗುತ್ತದೆ ಅಂತಹ ಸಂದರ್ಭಗಳಲ್ಲಿ, ಇದು ತಲೆಹೊಟ್ಟು ಕಡಿಮೆ ಮಾಡುತ್ತದೆ ಮತ್ತು ನೆತ್ತಿಯನ್ನು ಸ್ವಚ್ಛಗೊಳಿಸುತ್ತದೆ. ಇದು ಮೇದೋಗ್ರಂಥಿಗಳ ಸ್ರಾವದ ಮಟ್ಟವನ್ನು ಸಮತೋಲನಗೊಳಿಸುತ್ತದೆ. ಬ್ರಾಹ್ಮಿಎಣ್ಣೆಯನ್ನು ಕೂದಲಿಗೆ ಹಚ್ಚೋದ್ರಿಂದ ತಲೆಹೊಟ್ಟು ನಿವಾರಣೆಯಾಗುತ್ತದೆ.



### ಶಿಕ್ಷಣದ ಉದ್ದೇಶವು ಜ್ಞಾನ ಗಳಿಸುವುದಷ್ಟೇ ಅಲ್ಲ, ಮಾನವೀಯತೆ ಮತ್ತು ಆತ್ಮವಿಶ್ವಾಸವನ್ನು ಬೆಳೆಸುವುದು

# ವಿವೇಕಾನಂದರ ಆದರ್ಶ ಅಳವಡಿಸಿಕೊಳ್ಳಿ: ಥಾವರಚಂದ ಗೆಹಲೋತ್

• ಉದಯವಾಹಿನಿ ಧಾರವಾಡ

ಯುವಜನರು ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ಜೀವನ ಮಂತ್ರವಾಗಿಸಿಕೊಳ್ಳಬೇಕು. ಆತ್ಮವಿಶ್ವಾಸ, ಸೇವಾ ಮನೋಭಾವ ಮೈಗೂಡಿಸಿಕೊಂಡು ರಾಷ್ಟ್ರದ ಅಭಿವೃದ್ಧಿಗೆ ಶ್ರಮಿಸಬೇಕು' ಎಂದು ರಾಜ್ಯಪಾಲ ಥಾವರಚಂದ ಗೆಹಲೋತ್ ಹೇಳಿದರು.

ನಗರದ ರಾಮಕೃಷ್ಣ ವಿವೇಕಾನಂದ ಆಶ್ರಮ ವತಿಯಿಂದ ಲಿಂಗಾಯತ ಭವನದಲ್ಲಿ ನಡೆದ ಕರ್ನಾಟಕ ರಾಮಕೃಷ್ಣ ವಿವೇಕಾನಂದ ಭಾವಪ್ರಚಾರ ಪರಿಷತ್ತಿನ 11ನೇ ವಾರ್ಷಿಕ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಸ್ವಾಮಿ ವಿವೇಕಾನಂದರು ಯುವಜನರಿಗೆ ಸ್ಫೂರ್ತಿಯಾಗಿದ್ದಾರೆ. ಚಿಕಾಗೊದಲ್ಲಿ ನಡೆದ ವಿಶ್ವಧರ್ಮ ಸಮ್ಮೇಳನದಲ್ಲಿ ಅವರು ಮಾಡಿದ ಭಾಷಣವು ಜಗತ್ತಿಗೆ ಭಾರತದ ಶ್ರೇಷ್ಠತೆಯನ್ನು ತಿಳಿಸಿತು. ಜೀವನದ ನಿಜವಾದ ಮಾರ್ಗವನ್ನು ತೋರಿಸಿತು' ಎಂದರು.

ಶಿಕ್ಷಣದ ಉದ್ದೇಶವು ಜ್ಞಾನ ಗಳಿಸುವುದಷ್ಟೇ ಅಲ್ಲ, ಮಾನವೀಯತೆ ಮತ್ತು ಆತ್ಮವಿಶ್ವಾಸವನ್ನು ಬೆಳೆಸುವುದು. ಶಕ್ತಿಯೇ ಜೀವನ, ದೌರ್ಬಲ್ಯವೇ ಮರಣ ಎಂದು ಸ್ವಾಮಿ ವಿವೇಕಾನಂದ ಹೇಳಿದ್ದರು. ಯುವಜನರು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು.

> ರಾಮಕೃಷ್ಣ-ವಿವೇಕಾನಂದ ಭಾವಪ್ರಚಾರ ಪರಿಷತ್ತು ಸಮಾಜ ಪರಿವರ್ತನೆಗೆ ರಾಮಕೃಷ್ಣ ವಿವೇಕಾನಂದ ಅವರ ಜೀವನ ಸಂದೇಶಗಳನ್ನು ಜನಮನದಲ್ಲಿ ಬಿತ್ತುವ ಕೆಲಸ ಮಾಡುತ್ತಿದೆ. ಉತ್ತಮ ಚಾರಿತ್ರ್ಯ ಬೆಳೆಸುವ ಶಿಕ್ಷಣ ನೀಡಬೇಕು. ಧರ್ಮ ಕರ್ಮಗಳ ಅಂತರ ಹೋಗಲಾಡಿಸಬೇಕು.
> -ಮುಕ್ತಿದಾನಂದ ಸ್ವಾಮೀಜಿ, ಅಧ್ಯಕ್ಷ ರಾಮಕೃಷ್ಣ ಆಶ್ರಮ ಮೈಸೂರು

ಶಿಸ್ತು ರೂಢಿಸಿಕೊಳ್ಳಬೇಕು. ಸಮಾಜದಲ್ಲಿ ಭೌತಿಕ ಪ್ರಗತಿಯ ಜತೆಗೆ ಮಾನಸಿಕ ಅಶಾಂತಿ ಹೆಚ್ಚುತ್ತಿರುವ ಈ ಸಂದರ್ಭದಲ್ಲಿ ಮಹನೀಯರ ಸಂದೇಶಗಳು ಮಾರ್ಗದರ್ಶನ ನೀಡುತ್ತವೆ' ಎಂದು ಹೇಳಿದರು.

'ಸಂತ ಕಬೀರ, ಗುರುನಾನಕ್, ತುಳಸೀದಾಸ, ಮೀರಾಬಾಯಿ, ಬಸವೇಶ್ವರ, ಪುರಂದರ ದಾಸ, ಕನಕದಾಸ ಮತ್ತು ಅಕ್ಕ ಮಹಾದೇವಿಯಂಥ ಮಹನೀಯರು ಸಮಾಜದಲ್ಲಿ ಪ್ರೀತಿ, ಸಮಾನತೆ ಮತ್ತು ಏಕತೆಯ ಸಂದೇಶ ಹರಡಿದರು. ಪ್ರೇಮ, ಕರುಣೆ ಮತ್ತು ಸತ್ಯ ಸರ್ವಧರ್ಮಗಳ ಸಾರವಾಗಿದೆ' ಎಂದರು.



ಉದಯವಾಹಿನಿ ಚಿತ್ರ

**ರಾಷ್ಟ್ರದ ಅಭಿವೃದ್ಧಿಗೆ ಶ್ರಮಿಸಬೇಕು**

'ಈ ಸಮ್ಮೇಳನವು ಆಧುನಿಕ ಭಾರತದ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಜೀವನಕ್ಕೆ ಹೊಸ ದಿಕ್ಕನ್ನು ನೀಡಿದ ರಾಮಕೃಷ್ಣ ಪರಮಹಂಸ, ಶಾರದಾ ದೇವಿ ಮತ್ತು ಸ್ವಾಮಿ ವಿವೇಕಾನಂದ ಅವರ ಆದರ್ಶಗಳಿಗೆ ಸಮರ್ಪಿತವಾಗಿದೆ. ಸಮ್ಮೇಳನಗಳ ಈ ಮಹನೀಯರ ಜೀವನ, ಚಿಂತನೆಗಳು ಮತ್ತು ಆದರ್ಶಗಳನ್ನು ಪ್ರಚಾರ ಮಾಡುತ್ತಿರುವುದು ಒಳ್ಳೆಯದು ಎಂದರು.

ಧಾರವಾಡದ ರಾಮಕೃಷ್ಣ ವಿವೇಕಾನಂದ ಆಶ್ರಮದ ವಿಜಯಾನಂದ ಸರಸ್ವತಿ ಸ್ವಾಮೀಜಿ, ರಾಣೆಬೆನ್ನೂರಿನ ಆಶ್ರಮದ ಅಧ್ಯಕ್ಷ ಪ್ರಕಾಶಾನಂದ ಸ್ವಾಮೀಜಿ, ಹುಬ್ಬಳ್ಳಿ ಮೂರುಸಾವಿರ ಮಠದ ಗುರುಸಿದ್ದ ರಾಜಯೋಗೀಂದ್ರ ಸ್ವಾಮೀಜಿ, ಅನುಪಮಾನಂದ ಸ್ವಾಮೀಜಿ, ತ್ಯಾಗೀಶ್ವರಾನಂದ ಸ್ವಾಮೀಜಿ, ಗದಗ ಶಾಸಕ ಡಿ.ಆರ್.ಪಾಟೀಲ, ಮೇಯರ್ ಜ್ಯೋತಿಪಾಟೀಲ, ಕೇಂದ್ರ ಗಾಂಧೀ ಸ್ಮಾರಕ ನಿಧಿ ಟ್ರಸ್ಟಿ ಡಬ್ಲ್ಯು.ಪಿ.ಕೃಷ್ಣ ಇದ್ದರು.

> ಒಳ್ಳೆಯ ವ್ಯಕ್ತಿಯಾಗಿ ರೂಪುಗೊಳ್ಳಲು ಅಧ್ಯಾತ್ಮ ಸಹಕಾರಿ. ಮನಸ್ಸು ಶಕ್ತಿಯನ್ನು ಜಾಗೃತಗೊಳಿಸಿ ಸನ್ಮಾನಗದಲ್ಲಿ ನಡೆಯಬೇಕು. ರಾಮಕೃಷ್ಣ ವಿವೇಕಾನಂದ ಆಶ್ರಮದ ಯಾತ್ರಿ ಭವನ ನಿರ್ಮಾಣಕ್ಕೆ ಶಾಸಕರ ಅನುದಾನದಲ್ಲಿ ರೂ.10 ಲಕ್ಷ ಒದಗಿಸುತ್ತೇನೆ.
> -ಅರವಿಂದ ಬೆಲ್ಲದ, ಶಾಸಕ

> ಭವಿಷ್ಯ ಸುಂದರವಾಗಬೇಕಾದರೆ ವರ್ತಮಾನದ ಎಚ್ಚರ ಇರಬೇಕು. ನಮ್ಮ ದಿಕ್ಕು ಮತ್ತು ಹೆಜ್ಜೆಗಳ ಪ್ರಜ್ಞೆ ಇರಬೇಕು. ಮೌಲ್ಯಗಳನ್ನು ಮೈಗೂಡಿಸಿಕೊಳ್ಳಬೇಕು.
> -ನಿರ್ಭಯಾನಂದ ಸರಸ್ವತಿ ಸ್ವಾಮೀಜಿ, ಅಧ್ಯಕ್ಷ ರಾಮಕೃಷ್ಣ ವಿವೇಕಾನಂದ ಆಶ್ರಮ ಗದಗ- ವಿಜಯಪುರ

> ರಾಮಕೃಷ್ಣ ಪರಮಹಂಸ ಅವರಿಗೆ ಅಧ್ಯಾತ್ಮದ ಬಗ್ಗೆ ಅಪಾರ ಒಲವು ಇತ್ತು. ಅವರು ಸ್ವಾಮಿ ವಿವೇಕಾನಂದರ ಮೂಲಕ ಜಗತ್ತಿಗೆ ಅಧ್ಯಾತ್ಮದ ಶಕ್ತಿ ಪಸರಿಸುವ ಕಾಯಕ ಮಾಡಿದರು. ಧರ್ಮ ಎಂದರೆ ಪೂಜಾ ಪದ್ಧತಿ ಅಲ್ಲ ಎಂದು ನಿರೂಪಿಸಿದವರು ಸ್ವಾಮಿ ವಿವೇಕಾನಂದರು.
> -ಪ್ರಲ್ಹಾದ ಜೋಶಿ, ಕೇಂದ್ರ ಆಹಾರ ಸಚಿವ



## ಮಿನಿ ನ್ಯೂಸ್

### ಅರಣ್ಯ ಇಲಾಖೆ ಕಿರುಕುಳ: ಪ್ರತಿಭಟನೆ

• ಉದಯವಾಹಿನಿ ಗಂಗಾವತಿ

ತಾಲ್ಲೂಕಿನ ಆನೆಗೊಂದಿ ಭಾಗದ ರೈತರಿಗೆ ಕಿರುಕುಳ ನೀಡುತ್ತಿರುವ ಅರಣ್ಯ ಇಲಾಖೆ ಕ್ರಮ ಖಂಡಿಸಿ ಅಖಿಲ ಭಾರತ ಕಿಸಾನ್ ಸಭಾ ತಾಲ್ಲೂಕು ಸಮಿತಿ ಸದಸ್ಯರು ಶನಿವಾರ ನಗರದ ಅರಣ್ಯ ಇಲಾಖೆ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು. ಜಿಲ್ಲಾಧ್ಯಕ್ಷ ಎ.ಹುಲುಗಪ್ಪ ಮಾತನಾಡಿ, ತಾಲ್ಲೂಕಿನ ಆನೆಗೊಂದಿ, ಸಾಣಾಪುರ, ರಾಂಪುರ, ತಿರುಮಲಾಪುರ ಗ್ರಾಮ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದ ರೈತರು ಭೂಮಿ ಸಾಗುವಳಿ ಮಾಡಿಕೊಂಡು, ಉಪಜೀವನ ನಡೆಸುತ್ತಾ ಬರುತ್ತಿದ್ದಾರೆ. ಈಚೆಗೆ ಇದೇ ನೆಪದಲ್ಲಿ ಅರಣ್ಯಾಧಿಕಾರಿಗಳು ರೈತರನ್ನ ಒಕ್ಕಲೆಬ್ಬಿಸುವ ಕೆಲಸ ಮಾಡುತ್ತಿರುವುದು ಖಂಡನೀಯ ಎಂದರು.

ಪ್ರಭಾವಿಗಳು, ರೆಸಾರ್ಟ್‌ಗಳ ಮಾಲಿಕರು ಅರಣ್ಯ ಭೂಮಿ ಒತ್ತುವರಿ ಮಾಡಿಕೊಂಡು ಬೃಹತ್ ಕಟ್ಟಡಗಳನ್ನು ನಿರ್ಮಿಸಿದರೂ, ಅರಣ್ಯ ಇಲಾಖೆ ಸಿಬ್ಬಂದಿ ಕಿಂಚಿತ್ತೂ ಕ್ರಮ ಜರುಗಿಸಲ್ಲ. ಆದರೆ ಬಡ ರೈತರ ವಿರುದ್ಧ ಕ್ರಮಕ್ಕೆ ಮುಂದಾಗುತ್ತಿದ್ದಾರೆ. ಇದು ಸರಿಯಲ್ಲ ಕೂಡಲೇ ರೈತರಿಗೆ ಕಿರುಕುಳ ನೀಡುವುದನ್ನು ನಿಲ್ಲಿಸಬೇಕು' ಎಂದು ಒತ್ತಾಯಿಸಿ ಕಚೇರಿ ಸಹಾಯಕ ಸಿಬ್ಬಂದಿಗೆ ಮನವಿ ಸಲ್ಲಿಸಿದರು.

### ಪಡಿತರ ಅಕ್ಕಿ ಸಾಗಣೆ: ನಾಲ್ವರ ಬಂಧನ

• ಉದಯವಾಹಿನಿ ಭಟ್ಕಳ

ಭಟ್ಕಳದಲ್ಲಿ ಪಡಿತರದ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಿಸಿ ಸಾಗಣೆ ಮಾಡುತ್ತಿದ್ದ ಏಳು ಮಂದಿಯನ್ನು ಭಟ್ಕಳ ಗ್ರಾಮೀಣ ಪೊಲೀಸರು ಬಂಧಿಸಿದ್ದಾರೆ. ಭಟ್ಕಳ ಗಣೇಶ ನಗರ ಮುಗಳಿಹೊಂಡ ನಿವಾಸಿಗಳಾದ ಸಮೀರ ಮೊಹಮ್ಮದ ಬಾಷಾ (27), ಸಬೀಲ್ ಮಹಮ್ಮದ ಬಾಷಾ (25), ರಾಮನಗರ ಜಿಲ್ಲೆ ರಂಗೇನಹಳ್ಳಿ ನಿವಾಸಿ ಮಲ್ಲಿಕಾರ್ಜುನ್ ಆರ್. (23), ತುಮಕೂರು ಜಿಲ್ಲೆ ಕುಣಿಗಲ್ ನಿವಾಸಿ ನಿತಿನ್ ಎಚ್.ಎಸ್. ಬಂಧಿತರು. ಅಕ್ಕಿ ಸಾಗಿಸಲು ಬಳಸಲಾಗಿದ್ದ 3 ವಾಹನಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಗ್ರಾಮೀಣ ಠಾಣೆಯ ಸಿಪಿಐ ಮಂಜುನಾಥ ಲಿಂಗಾರೆಡ್ಡಿ ನೇತೃತ್ವದ ತಂಡ ಹಾಗೂ ಆಹಾರ ನಿರೀಕ್ಷಕ ಉದಯ ತಳವಾರ ಅವರ ಸಹಯೋಗದಲ್ಲಿ ನಡೆಸಿದ ದಾಳಿಯಲ್ಲಿ ಅಂದಾಜು ರೂ.3.87 ಲಕ್ಷ ಮೌಲ್ಯದ 11,400 ಕ್ವಿಂಟಲ್ ಪಡಿತರ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ.

### ಬಸ್ ತಡೆದು ವಿದ್ಯಾರ್ಥಿಗಳಿಂದ ಪ್ರತಿಭಟನೆ

• ಉದಯವಾಹಿನಿ ಬೇಲೂರು

ಬಸ್ ನಿಲ್ದಾಣಕ್ಕೆ ಸಾರಿಗೆ ಬಸ್‌ಗಳು ಸಮಯಕ್ಕೆ ಸರಿಯಾಗಿ ಬಾರದ ಕಾರಣ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ ಎಂದು ಆರೋಪಿಸಿ ವಿದ್ಯಾರ್ಥಿಗಳು ಬಸ್ ನಿಲ್ದಾಣದಲ್ಲಿ ಬಸ್‌ಗಳನ್ನು ತಡೆದು ಪ್ರತಿಭಟನೆ ನಡೆಸಿದರು. ಬೇಲೂರಿನಲ್ಲಿ ಬಸ್ ಡಿಪೊ ಇದ್ದರೂ ಸಮಯಕ್ಕೆ ಸರಿಯಾಗಿ ಬಸ್‌ಗಳಿಲ್ಲ. ಹಾಸನ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಿಗೆ ಉನ್ನತ ವ್ಯಾಸಂಗ ಮಾಡಲು ಸುಮಾರು 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದು, ಬೆಳಿಗ್ಗೆ 7 ರಿಂದ 8 ಗಂಟೆ ಸಮಯದವರೆಗೆ ಸರಿಯಾದ ಬಸ್ ವ್ಯವಸ್ಥೆ ಇಲ್ಲದೆ ವಿದ್ಯಾರ್ಥಿಗಳು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ.

ವಿಭಾಗೀಯ ಅಧಿಕಾರಿಗಳು ನಮಗೆ ಬಸ್ ಕೊರತೆ ಇದೆ ನಿಮಗೆ ಬೇಕಾದ ಸಮಯದಲ್ಲಿ ಬಸ್ ಗಳನ್ನು ನೀಡಲು ಅವಕಾಶ ಇಲ್ಲ ಎಂದು ಉಡಾಫೆಯಿಂದ ವರ್ತಿಸುವುದರ ಜೊತೆಗೆ ಕೆಲ ಬಸ್‌ಗಳಲ್ಲಿ ಬಸ್ ಪಾಸ್ ಇರುವ ವಿದ್ಯಾರ್ಥಿಗಳನ್ನು ಕೆಳಗೆ ಇಳಿಸಿರುವ ಹಲವಾರು ಉದಾಹರಣೆಗಳಿವೆ. ನಮ್ಮ ತೊಂದರೆಗಳನ್ನು ಕೇಳುವರು ಯಾರು ಇಲ್ಲ. ಇದು ಒಂದು ದಿನದ ಗೋಳಲ್ಲ. ಇದು ಪ್ರತಿನಿತ್ಯದ ಗೋಳಾಗಿದೆ' ಎಂದು ವಿದ್ಯಾರ್ಥಿಗಳಾದ ಹೇಮಂತ್, ವೇದಮೂರ್ತಿ, ವಿಕಾಸ್ ಆಕ್ರೋಶ ವ್ಯಕ್ತಪಡಿಸಿದರು.

### ಸರ್ಕಾರಿ ಆಸ್ಪತ್ರೆಯಲ್ಲಿ ಕೈಕೊಟ್ಟ ವಿದ್ಯುತ್

• ಉದಯವಾಹಿನಿ ಬಾದಾಮಿ

ಪಟ್ಟಣದಲ್ಲಿರುವ ತಾಲ್ಲೂಕು ಮಟ್ಟದ ಸರ್ಕಾರಿ ಆಸ್ಪತ್ರೆಯಲ್ಲಿ ರಾತ್ರಿ ಕತ್ತಲು ಆವರಿಸಿದ್ದರಿಂದ ತಾಲ್ಲೂಕು ಘಟಕದ ಬಿಜೆಪಿ ಪ್ರಧಾನ ಕಾರ್ಯದರ್ಶಿ ಬೇಲೂರಪ್ಪ ವಡ್ಡರ ಮತ್ತು ಯುವಕರು ಸರ್ಕಾರಿ ಆಸ್ಪತ್ರೆಯ ಅಧಿಕಾರಿಗಳ ವಿರುದ್ಧ ಪ್ರತಿಭಟಿಸಿ ಧರಣಿ ಕೈಗೊಂಡರು. ಸರ್ಕಾರಿ ಆಸ್ಪತ್ರೆಯಲ್ಲಿ ವಿದ್ಯುತ್ ಪೂರೈಕೆ ಇಲ್ಲ. ಸಂಪೂರ್ಣವಾಗಿ ಕತ್ತಲಾಗಿದೆ ಎಂದು ರೋಗಿಯ ಸಂಬಂಧಿಕರೊಬ್ಬರು ಕರೆ ಮಾಡಿದಾಗ ಅಲ್ಲಿಗೆ ತೆರಳಿದಾಗ ಆಸ್ಪತ್ರೆಯಲ್ಲಿ ಬೆಳಕಿಲ್ಲದ್ದು ಕಂಡು ಬಂದಿತು ಎಂದು ಬೇಲೂರಪ್ಪ ಪ್ರತಿಕ್ರಿಯಿಸಿದರು.

ಆಸ್ಪತ್ರೆಯಲ್ಲಿ ರಾತ್ರಿ ಕರ್ತವ್ಯದ ವೈದ್ಯರೂ ಸಹ ಇರಲಿಲ್ಲ. ಫೋನ್ ಮಾಡಿ ಕರೆಸಿದಾಗ ವೈದ್ಯರು ಬಂದರು. ಕತ್ತಲಿನಲ್ಲಿ ರೋಗಿಗಳು ಪರದಾಡಬೇಕಾಯಿತು. ಆಸ್ಪತ್ರೆಗೆ ಸೂಕ್ತ ಬೆಳಕಿನ ವ್ಯವಸ್ಥೆ ಮಾಡಬೇಕು ಎಂದು ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿಗೆ ಒತ್ತಾಯಿಸಿದರು. ಎರಡು ದಿನಗಳಿಂದ ಕರೆಂಟ್ ಇರಲಿಲ್ಲ. ಕತ್ತಲಲ್ಲಿಯೇ ಪರದಡಬೇಕಾಯಿತು. ಇಂದು ಬೆಳಿಗ್ಗೆ ಬಂದಿದೆ. ರೋಗಿಗಳಿಗೆ ಬಿಸಿ ನೀರಿನ ವ್ಯವಸ್ಥೆಯ ಇಲ್ಲ. ಬಿಸಿ ನೀರಿಗೆ ಹೊರಗೆ ಹೋಗಬೇಕು ಎಂದು ಆಸ್ಪತ್ರೆಯ ರೋಗಿಗಳು ಹೇಳಿದರು.

## ಕನ್ನಡ ನಾಡು ನುಡಿಗಾಗಿ ತಾಯಿ ಭುವನೇಶ್ವರಿಯ ಹಬ್ಬವನ್ನು ಸಡಗರದಿಂದ ಆಚರಿಸೋಣ: ಎಸ್ ಎಂ ಮ್ಯಾಗೇರಿ

• ಉದಯವಾಹಿನಿ ಕೊಲ್ಹಾರ

ಕನ್ನಡ ನಾಡು ನುಡಿಗಾಗಿ ನವಂಬರ್ -1ರಂದು ಕರ್ನಾಟಕ ರಾಜ್ಯೋತ್ಸವವನ್ನು ಸರ್ಕಾರದ ಆದೇಶದ ಶಿಷ್ಟಾಚಾರದ ಪ್ರಕಾರ ತಾಯಿ ಭುವನೇಶ್ವರಿ ಮಾತೆಯ ಹಬ್ಬವನ್ನು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸೋಣ ಎಂದು ತಾಲ್ಲೂಕು ದಂಡಾಧಿಕಾರಿ ಎಸ್ ಎಂ ಮ್ಯಾಗೇರಿ ಹೇಳಿದರು.

ಪಟ್ಟಣದ ತಾಲ್ಲೂಕು ಪಂಚಾಯತ್ ಕಾರ್ಯಾಲಯದಲ್ಲಿ 70 ನೇ ಕರ್ನಾಟಕದ ರಾಜ್ಯೋತ್ಸವದ ಕುರಿತು ಪೂರ್ವಭಾವಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದವರು, ಬೆಳಗ್ಗೆ ಶಾಲಾ ಕಾಲೇಜು ಮತ್ತು ಇತರೆ ಸ್ಥಳಗಳಲ್ಲಿ ತಾಯಿ ಭುವನೇಶ್ವರಿಗೆ ಪುಷ್ಪಾರ್ಚನೆ, ಧ್ವಜಾರೋಹಣ ನೆರವಹಿಸಿ, ನಂತರ ಪಟ್ಟಣದಾದ್ಯಂತ ಮಕ್ಕಳೊಂದಿಗೆ ಮೆರವಣಿಗೆ ಬಳಿಕ ಪಟ್ಟಣದ ಎಂಪಿಎಸ್ ಶಾಲಾ ಅವರಣದಲ್ಲಿ ಬೆಳಗ್ಗೆ 9 ಗಂಟೆಗೆ ತಾಯಿ ಭುವನೇಶ್ವರಿ ಪಾದುಗೆ ಪೂಜೆ ಸಲ್ಲಿಸಿ ಬಳಿಕ ಧ್ವಜಾರೋಹಣ ನೆರವೇರಿಸುವುದು, ನಂತರ ಮಕ್ಕಳ ಸಂಸ್ಕೃತಿಕ, ವೇಷ ಭೂಷಣ ಕಾರ್ಯಕ್ರಮ ಹಾಗೂ ವಿಶೇಷ ಅಹವಾನಿತರಿಗೆ ಸನ್ಮಾನ, ಕನ್ನಡ ನಾಡಿನ ಕುರಿತು ಸಂಗೀತ ಹಾಡು ನಡೆಸಲಾಗುವುದು. ಸರ್ಕಾರದ ಶಿಷ್ಟಾಚಾರದಂತೆ ತಾಲ್ಲೂಕುದಾದ್ಯಂತ ವಿವಿಧ


ಉದಯವಾಹಿನಿ ಚಿತ್ರ

ಇಲಾಖೆ ಅಧಿಕಾರಿಗಳು ಮತ್ತು ಶಾಲಾ ಶಿಕ್ಷಕರು ಗುರುಮಾತೆಯರು ಆಹ್ವಾನಿಸಬೇಕು ಕಾರ್ಯಕ್ರಮಕ್ಕೆ ಬರದೇ ಇದ್ದಲ್ಲಿ ಅವರಿಗೆ ನೋಟಿಸ್ ನೀಡಲಾಗುವುದು ಎಂದು ಕಟ್ಟೆಚ್ಚರವಾಗಿ ತಿಳಿಸಿದರು. ವಿವಿಧ ಇಲಾಖೆ ಅಧಿಕಾರಿಗಳಿಗೆ ವಿದ್ಯುತ್ ವ್ಯತಯವಾಗದಂತೆ ನೋಡಿಕೊಳ್ಳಬೇಕು ಮತ್ತು ಸಾರ್ವಜನಿಕರಿಗೆ, ಮಕ್ಕಳಿಗೆ ಕುಳಿತುಕೊಳ್ಳಲು ಆಸನದ ವ್ಯವಸ್ಥೆ, ಶಾಮಿಯಾನ್ ನೆರಳು ವ್ಯವಸ್ಥೆ, ಕುಡಿಯಲು ನೀರು ಉಪಹಾರ ವ್ಯವಸ್ಥೆ ಕಲ್ಪಿಸಬೇಕು. ಅಧಿಕಾರಿಗಳಿಗೆ ಕೆಲಸ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಎಂದರು. ಶಾಲಾ ಮಕ್ಕಳಿಗೆ ಮತ್ತು ಗಣ್ಯರು ಆಗಮಿಸಿರುವುದರಿಂದ ಪೋಲಿಸ್ ಇಲಾಖೆ ಸೂಕ್ತ ಭದ್ರತೆ ಒದಗಿಸಬೇಕೆಂದರು. ಈ ಪೂರ್ವಭಾವಿ

> ಸಭೆಯಲ್ಲಿ ಪ್ರತಿ ವರ್ಷದಂತೆ ತಾಯಿ ಭುವನೇಶರಿ, ಕನ್ನಡದ ಅಭಿಮಾನದಿಂದ ಪಟ್ಟಣವನ್ನು ಕಂಗೊಳಿಸಲು ತಾಯಿಯ ಧ್ವಜ,ಶಾಲು,ಪರಪರಿಯೊಂದಿಗೆ ಅಲಂಕರಿಸುತ್ತೇವೆ. ಸಾಮಾಜಿಕ ವೇಷ ಭೂಷಣ ಕಲಾತಂಡ, ಡೊಳ್ಳು ಕುಣಿತ ಏರ್ಪಡಿಸಲು ತಾಲ್ಲೂಕು ಆಡಳಿತಕ್ಕೆ ಕನ್ನಡ ಪರ ಹೋರಾಟಗಾರ, ಕರ್ನಾಟಕ ರಕ್ಷಣಾ ವೇದಿಕೆ ಪ್ರ.ಬಣ ತಾಲ್ಲೂಕು ಅಧ್ಯಕ್ಷ ರವಿ ಗೂಳಸಂಗಿ ವಿನಂತಿಸಿಕೊಂಡರು.

ಸಭೆಯಲ್ಲಿ ಪಟ್ಟಣ ಪಂಚಾಯಿತಿ ಅಧ್ಯಕ್ಷ ಚನ್ನಮಲ್ಲಪ್ಪ ಗಿಡ್ಡಪ್ಪಗೋಳ, ಪಿಎಸ್ಐ ಅಶೋಕ್, ಶಿಕ್ಷಣ ಇಲಾಖೆ ವಿ ಎಚ್ ಪುರೋಹಿತ್, ಮುರ್ತುಜೀ ವಾಲಿಕರ್ ಮಾಂತೇಶ್ ಗಿಡ್ಡಪ್ಪಗೋಳ, ಬಾಬು ಭಜಂತ್ರಿ, ದಶರಥ ಈಟಿ,ಸಿದ್ದು ಗಣಿ, ಬೋರಮ್ಮ ಪಂತಗಿ ವಿವಿಧ ಇಲಾಖೆ ಅಧಿಕಾರಿಗಳು,ಸಂಘಟನೆಯ ಪದಾಧಿಕಾರಿಗಳು , ಶಿಕ್ಷಕರು, ಗುರುಮಾತೆಯರು ಇತರರು ಉಪಸ್ಥಿತರಿದ್ದರು.

## ನಲಿಕಲಿ ಮಕ್ಕಳಿಗೆ ದಿನಕ್ಕೊಂದು ರೂಪಾಯಿ
## ದಾಖಲಾತಿ ಹೆಚ್ಚಳಕ್ಕೆ ಶಿಕ್ಷಕನ ಪ್ರಯತ್ನ

• ಉದಯವಾಹಿನಿ ರಟ್ಟಿಹಳ್ಳಿ

ತಾಲ್ಲೂಕಿನ ಲಿಂಗದೇವರಕೊಪ್ಪ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆಯಲ್ಲಿ 'ನಲಿ ಕಲಿ' ಶಿಕ್ಷಣದ ಮಕ್ಕಳಿಗೆ ದಿನಕ್ಕೆ ರೂ. 1 ನೀಡಲು ಮುಖ್ಯ ಶಿಕ್ಷಕ ಎಂ.ಕೆ. ಹೊಳಜೋಗಿ ತೀರ್ಮಾನಿಸಿದ್ದು, ದಾಖಲಾತಿ ಹೆಚ್ಚಿಸಲು ಪ್ರಯತ್ನಿಸುತ್ತಿದ್ದಾರೆ. ಶಾಲೆಯಲ್ಲಿ 1ರಿಂದ 3ನೇ ತರಗತಿಯವರೆಗೆ ನಲಿ-ಕಲಿ ಶಿಕ್ಷಣ ಕ್ರಮವಿದೆ. 1, 2ನೇ ತರಗತಿಯಲ್ಲಿ 7 ಮಕ್ಕಳಿದ್ದಾರೆ. 3ನೇ ತರಗತಿಯಲ್ಲಿ ಮಕ್ಕಳಿಲ್ಲ. ಹೀಗಾಗಿ, ದಾಖಲಾತಿ ಹೆಚ್ಚಳಕ್ಕಾಗಿ ಹೊಳಜೋಗಿ ಅವರು ದಿನಕ್ಕೆ ರೂ. 1 ಯೋಜನೆ ರೂಪಿಸಿದ್ದಾರೆ.

ಸರ್ಕಾರಿ ಕನ್ನಡ ಶಾಲೆಗೆ ದಾಖಲಾಗುವ ಮಕ್ಕಳ ಹೆಸರಿನಲ್ಲಿ ಸದ್ಯ 1,111 ಠೇವಣಿ ಇರಿಸಿರುವ ಹೊಳಜೋಗಿ, ಅದರ ಜೊತೆಗೆ ದಿನಕ್ಕೆ ರೂ. 1 ನೀಡುವುದಾಗಿ ಘೋಷಿಸಿದ್ದಾರೆ.

2025ನೇ ಶೈಕ್ಷಣಿಕ ವರ್ಷದಲ್ಲಿ ಜೂನ್ ತಿಂಗಳಲ್ಲಿ 1ನೇ ತರಗತಿಗೆ ನಾಲ್ವರು ವಿದ್ಯಾರ್ಥಿಗಳು ದಾಖಲಾಗಿದ್ದಾರೆ. ಅವರ ಹೆಸರಿನಲ್ಲಿ ತಲಾ ರೂ. 1,111 ಠೇವಣಿ ಇರಿಸಲಾಗಿದೆ. ಈಗ ನವೆಂಬರ್‌ನಿಂದ 2026ರ ಏಪ್ರಿಲ್‌ವರೆಗೂ 7 ಮಕ್ಕಳಿಗೆ ದಿನಕ್ಕೆ ರೂ. 1 ನೀಡಲು ತೀರ್ಮಾನಿಸಲಾಗಿದೆ' ಎಂದು


ಉದಯವಾಹಿನಿ ಚಿತ್ರ

ಎಂ.ಕೆ.ಹೊಳ ಜೋಗಿ ತಿಳಿಸಿದರು. ಮಕ್ಕಳ ಹೆಸರಿನಲ್ಲಿ ಪೋಷಕರು ಈಗಾಗಲೇ ಬ್ಯಾಂಕ್ ಖಾತೆ ತೆರೆದಿದ್ದಾರೆ. ಅದೇ ಖಾತೆಗೆ ದಿನದ ಲೆಕ್ಕದಲ್ಲಿ ಪ್ರತಿ ತಿಂಗಳೂ ಹಣ ಜಮೆ ಮಾಡುತ್ತೇನೆ. ಮಕ್ಕಳು ಸರ್ಕಾರಿ ಶಾಲೆಗೆ ಬರಲಿ ಎಂಬ ಕಾರಣಕ್ಕೆ ಈ ಕ್ರಮವಹಿಸಿದ್ದೇನೆ. ಜೊತೆಗೆ, ಹಣ ಉಳಿತಾಯದ ಬಗ್ಗೆಯೂ ಮಕ್ಕಳಲ್ಲಿ ಜಾಗೃತಿ ಮೂಡುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಪೋಷಕರಾದ ಮಂಜಪ್ಪ ಲಮಾಣಿ ಅವರು,' ಮುಖ್ಯ ಶಿಕ್ಷಕ ಎಂ.ಕೆ. ಹೊಳಜೋಗಿ ಅವರ ಕೆಲಸ ಮೆಚ್ಚುವಂಥದ್ದು. ನನ್ನ ಮಗ ಹಾಗೂ ನನ್ನ ಅಣ್ಣನ ಮಗಳ ಖಾತೆಗೆ ಈಗಾಗಲೇ ತಲಾ ರೂ.1,111 ಠೇವಣಿ ಜಮೆ ಮಾಡಿದ್ದಾರೆ ಎಂದರು.

## ದೇಹಾರೋಗ್ಯಕ್ಕೆ ಮಾನಸಿಕ ನೆಮ್ಮದಿ ಅಗತ್ಯ

• ಉದಯವಾಹಿನಿ ದಾವಣಗೆರೆ

ದೇಹ ಮತ್ತು ಮನಸ್ಸು ಒಂದೇ ನಾಣ್ಯದ ಎರಡು ಮುಖಗಳು. ದೈಹಿಕ ಕಾಯಿಲೆ ಮಾನಸಿಕ ನೆಮ್ಮದಿಯನ್ನು ಕೆಡಿಸಿದರೆ, ಮಾನಸಿಕ ಸಮಸ್ಯೆ ದೇಹದ ಆರೋಗ್ಯವನ್ನು ಹಾಳು ಮಾಡಬಲ್ಲದು ಎಂದು ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಅಧ್ಯಕ್ಷರೂ ಆಗಿರುವ ನ್ಯಾಯಾಧೀಶ ಮಂಜಪ್ಪ ಹನುಮಂತಪ್ಪ ಅಣ್ಣಯ್ಯನವರ ಅಭಿಪ್ರಾಯಪಟ್ಟರು.

ಇಲ್ಲಿನ ಚಿಗಟೇರಿ ಜಿಲ್ಲಾ ಆಸ್ಪತ್ರೆಯಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಪುನರ್ ವಿಮರ್ಶಾ ಮಂಡಳಿಯ ಕಚೇರಿ ಉದ್ಘಾಟಿಸಿ ಅವರು ಮಾತನಾಡಿದರು. ಒಬ್ಬ ಮಾನಸಿಕ ರೋಗಿ ಇದ್ದರೆ ಕುಟುಂಬದ ಪರಿಸ್ಥಿತಿ ಹದಗೆಡುತ್ತದೆ. ಮನೆಯ ಇತರ ಸದಸ್ಯರ ದುಡಿಮೆಯ ಮೇಲೂ ಪರಿಣಾಮ ಬೀರುತ್ತದೆ. ಕುಟುಂಬದ ನೆಮ್ಮದಿ ಹಾಳಾಗುತ್ತದೆ. ಮೌನವಾಗಿ ಹಲವು ಸಂಕಟಗಳಿಗೆ ತುತ್ತಾಗುತ್ತಾರೆ. ಇದರಿಂದ ಇಡಿ ಸಮಾಜ ನೋವಿಗೆ ಒಳಗಾಗುತ್ತದೆ' ಎಂದು ಹೇಳಿದರು. 'ಆರೋಗ್ಯವಂತರು ಇದ್ದಾಗ ಸಮಾಜವೂ ಚೆನ್ನಾಗಿರುತ್ತದೆ. ಸ್ವಾವಲಂಬಿ, ಸಂತೋಷ, ತೃಪ್ತಿಕರವಾಗಿರುವುದೇ ಮಾನಸಿಕ ಆರೋಗ್ಯ.


ಉದಯವಾಹಿನಿ ಚಿತ್ರ

ಮನಸ್ಸು ಸ್ವಚ್ಛವಾಗಿದ್ದರೆ ಆರೋಗ್ಯವಂತರಾಗಿರಲು ಸಾಧ್ಯ ಎಂದರು. ಮಾನಸಿಕ ಅಸ್ವಸ್ಥತೆವುಳ್ಳ ವ್ಯಕ್ತಿ ತಿರುಗಾಡುತ್ತಿದ್ದರೆ ರಕ್ಷಣೆಗಾಗಿ ಅವರನ್ನು ಪೊಲೀಸರು ವಶಕ್ಕೆ ತೆಗೆದುಕೊಳ್ಳಬೇಕು. ಈ ಮಾಹಿತಿಯನ್ನು ಆ ವ್ಯಕ್ತಿಗೆ ಅಥವಾ ಮಂಡಳಿಯ ಪ್ರತಿನಿಧಿಗೆ ನೀಡಬೇಕು. ರಕ್ಷಣೆ ಮಾಡಿದ ವ್ಯಕ್ತಿಯನ್ನು ಪೊಲೀಸ್ ಲಾಕ್‌ಆಪ್ ಅಥವಾ ಜೈಲಿನಲ್ಲಿ ಇಡಬಾರದು' ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ್ ಕರೆಣ್ಣನವರ ಹೇಳಿದರು.

## ಮೆಕ್ಕೆಜೋಳ ದರ ಕುಸಿತ, ಕಂಗಾಲಾದ ರೈತ

• ಉದಯವಾಹಿನಿ ಯಲಬುರ್ಗಾ

ಕಳೆದ ಮುಂಗಾರಿನಲ್ಲಿ ಅತಿವೃಷ್ಟಿಯಿಂದಾಗಿ ಹೆಸರು ಬೆಳೆ ಸಂಪೂರ್ಣ ಹಾಳಾಗಿದೆ. ಅಲ್ಪಸ್ವಲ್ಪ ಮೆಕ್ಕೆ ಜೋಳದ ಫಸಲು ರೈತರ ಕೈ ಸೇರಿದೆ. ಆದರೆ ರೈತರ ಫಸಲು ಮಾರುಕಟ್ಟೆ ಪ್ರವೇಶಿಸುತ್ತಿದ್ದಂತೆ ಬೆಲೆ ಕುಸಿತ ಕಂಡಿರುವುದು ರೈತರನ್ನು ಸಂಕಷ್ಟಕ್ಕೆ ದೂಡಿದೆ. ತಾಲ್ಲೂಕಿನಲ್ಲಿ ಕಳೆದ ತಿಂಗಳಿಂದ ಮೆಕ್ಕೆಜೋಳ ಕಟಾವು ಮಾಡಿರುವ ರೈತರು ಮುಧೋಳ ಗ್ರಾಮದ ಹೊಲದಲ್ಲಿರುವ ಖಣ, ಮತ್ತು ವಿವಿಧ ದೇವಸ್ಥಾನ ಮುಂದೆ ಹಾಗೂ ತಾಲ್ಲೂಕಿನ ಹಿರೇಮ್ಯಾಗೇರಿ ಹೊಸೂರ್ ಸೋಂಪುರ ಸಂಕನೂರ್

- ಖರೀದಿ ಕೇಂದ್ರ ಆರಂಭಿಸಲು ಒತ್ತಾಯ
- ಮೊದಲು ಪ್ರತಿ ಕ್ವಿಂಟಲ್‌ಗೆ ರೂ.1700ಕ್ಕೆ ಕುಸಿದ ಬೆಲೆ
- ಬೆಂಬಲ ಬೆಲೆಯಲ್ಲಿ ಖರೀದಿಗೆ ಸರ್ಕಾರಕ್ಕೆ ಪತ್ರ ಬರೆದಿರುವ ಜಿಲ್ಲಾಡಳಿತ

ಸಿರಗುಂಪಿ. ಸಂಗನಾಳ ರಾಜುರು. ಸೇರಿದಂತೆ ಇತರೆ ಗ್ರಾಮಗಳಲ್ಲಿ ಸಿಸಿ, ಡಾಂಬರೀಕರಣ ರಸ್ತೆಗಳಲ್ಲಿ ಒಣಗಿಸುತ್ತಿರುವುದು ಕಂಡುಬಂದಿದೆ. ಮೊದಲೇ ಬೆಲೆ ಕುಸಿತದಿಂದ ಸಂಕಷ್ಟಕ್ಕೆ ಸಿಲುಕಿರುವ ಮೆಕ್ಕೆಜೋಳ ರೈತರು ಈಗ ದಿನದಿಂದ ದಿನಕ್ಕೆ ಮಳೆಯ ಕಾಟದಿಂದ ಫಸಲು ಒಣಗಿಸಲು ಸಾಧ್ಯವಾಗದೇ ಪರದಾಡುವಂತ


ಉದಯವಾಹಿನಿ ಚಿತ್ರ

> ತಾಲ್ಲೂಕಿನಲ್ಲಿ ಪ್ರಮುಖ ಬೆಳೆಗಳಲ್ಲಿ ಒಂದಾದ ಮೆಕ್ಕೆಜೋಳಕ್ಕೆ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಸಿಗದೇ ರೈತರು ಸಂಕಷ್ಟ ಎದುರಿಸುವಂತಾಗಿದ್ದು, ಅತಿವೃಷ್ಟಿ, ನೆರೆ ಹೊಡೆತದ ನಡುವೆಯೂ ಬೆಳೆದ ಮೆಕ್ಕೆಜೋಳಕ್ಕೆ ಉತ್ತಮ ದರ ಇಲ್ಲದ್ದರಿಂದ ರೈತರನ್ನು ಚಿಂತೆಗೀಡು ಮಾಡಿದೆ ಈ ಮೆಕ್ಕೆಜೋಳ ಬೆಳೆದ ರೈತರ ಪರಿಸ್ಥಿತಿ ದೇವರೇ ಬಲ್ಲ ಎನ್ನುವಂತಾಗಿದೆ, ಸರ್ಕಾರ ಬೆಂಬಲ ಬೆಲೆ ನೀಡಿ ಸಂಕಷ್ಟಕ್ಕೆ ಸ್ಪಂದಿಸಬೇಕು.
> -ಬಸವರಾಜ ಹಳ್ಳಿ, ಕನ್ನಡ ಪರ ಸಂಘಟನೆಗಳ ಜಿಲ್ಲಾಧ್ಯಕ್ಷ

ಪರಿಣಾಮ ಫಸಲು ಹಾಳಾಗುತ್ತಿದೆ. ಮಳೆಯಾಗಿ

> ಜಿಲ್ಲೆಯಲ್ಲಿ ಅತಿಹೆಚ್ಚು ಪ್ರದೇಶದಲ್ಲಿ ಮೆಕ್ಕೆಜೋಳ ಬೆಳೆದ ರೈತರು ದರ ಏರಿಕೆ ನಿರೀಕ್ಷೆಯಲ್ಲಿ ಮಾರಾಟ ಮಾಡದೆ ಸಂಗ್ರಹಿಸಿದ್ದರು. ಆದರೆ, ಕ್ವಿಂಟಲ್‌ಗೆ 2000 ರೂ. ಆಸುಪಾಸು ಮಾರಾಟವಾಗುತ್ತಿದ್ದ ಮೆಕ್ಕೆಜೋಳದ ಬೆಲೆ ಈಗ 1600-1700 ರೂ. ಸಮೀಪಕ್ಕೆ ಬಂದಿದೆ. ಇದರಿಂದ ಕಂಗಾಲಾದ ರೈತರು ಸರಕಾರ ಮೆಕ್ಕೆಜೋಳ ಖರೀದಿ ಕೇಂದ್ರ ತೆರೆದು ರೈತರ ಸಂಕಷ್ಟಕ್ಕೆ ಸ್ಪಂದಿಸುತ್ತದೆ ಎಂಬ ಆಸೆಯಿಂದ ಕಾಯುತ್ತಿದ್ದಾರೆರಾಜ್ಯ ಸರ್ಕಾರ ಜಿಲ್ಲಾವಾರು ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ತೆರೆಯಬೇಕು, ರೈತರ ಹಿತ ಕಾಯಬೇಕು.
> -ಹಾಲಪ್ಪ ಆಚಾರ್ ಮಾಜಿ ಸಚಿವರು

ಉತ್ತಮ ಫಸಲು ಬಂದಿದ್ದಕ್ಕೆ ಖುಷಿ ಪಟ್ಟಿದ್ದ ರೈತರು ಈಗ ಅದೇ ಮಳೆಯಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಪಂಪ್‌ಸೆಟ್ ಹಾಗೂ ಮಳೆಯಾಶ್ರಿತ ರೈತರು ಬೆಳೆದ ಅನೇಕ ಬೆಳೆಗಳಲ್ಲಿ ಮೆಕ್ಕೆಜೋಳದ ಫಸಲು ಕೈಸೇರಿದೆ. ಆದರೆ ರೈತರ ಫಸಲು ಮಾರುಕಟ್ಟೆ ಪ್ರವೇಶಿಸುತ್ತಿದ್ದಂತೆ ಬೆಲೆ ಕುಸಿತ ಕಂಡಿದೆ.

## ಮಹಾನಗರ ಯೋಜನೆ ಅಕ್ರಮ: ಕ್ರಮಕ್ಕೆ ಆಗ್ರಹ

• ಉದಯವಾಹಿನಿ ಕುಮಟಾ

ಹಿಂದೆ ಕುಮಟಾ ಪಟ್ಟಣದ ಮಹಾನಗರ ಯೋಜನೆಯ ವಿನ್ಯಾಸ ನಕ್ಷೆ ತಯಾರಿಸಲು ಟೆಂಡರ್ ಪಡೆದ ದೆಹಲಿ ಮೂಲದ ಸಿ.ಎಫ್.ಐ.ಎಸ್.ಡಿ.ಇ.ಆರ್ ಕಂಪನಿ ಕೆಲಸ ಮಾಡದಿದ್ದರೂ ಅದಕ್ಕೆ ರೂ. 5.48 ಲಕ್ಷ ಮೊತ್ತ ಪಾವತಿ ಮಾಡಿರುವುದು ಅಕ್ರಮವಾಗಿದೆ. ಅದರ ವಸೂಲಿ ಬಗ್ಗೆ ತಕ್ಷಣ ಕಾನೂನು ಕ್ರಮ ಕೈಕೊಳ್ಳಬೇಕು ಎಂದು ನಡೆದ ಪುರಸಭೆ ಸಾಮಾನ್ಯ ಸಭೆಯಲ್ಲಿ ಸದಸ್ಯ ಸಂತೋಷ ನಾಯ್ಕ ಒತ್ತಾಯಿಸಿದರು. ಒಟ್ಟೂ 8.71 ಲಕ್ಷ ಮೊತ್ತದ ಟೆಂಡರ್ ಅನ್ನು ಮ್ಯಾನ್ಯುಅಲ್ ಮೂಲಕ ಕರೆದಿರುವುದೂ ತಪ್ಪು. ರೂ. 5 ಲಕ್ಷಕ್ಕಿಂತ ಹೆಚ್ಚಿನ ಮೊತ್ತದ ಕಾಮಗಾರಿಯನ್ನು ಇ ಟೆಂಡರ್ ಮೂಲಕವೇ ಕರೆಯಬೇಕು ಎನ್ನುವ ನಿಯಮ ಗಾಳಿಗೆ ತೂರಲಾಗಿದೆ' ಎಂದರು.


ಉದಯವಾಹಿನಿ ಚಿತ್ರ

ಉಪಾಧ್ಯಕ್ಷ ಮಹೇಶ ನಾಯ್ಕ ಮಾತನಾಡಿ, 'ಮಹಾನಗರ ವಿನ್ಯಾಸ ಯೋಜನೆ ಸಿದ್ಧಪಡಿಸುವ ಕಾಮಗಾರಿಗೆ ಸ್ಥಳೀಯ ಜಿಲ್ಲಾ ಪತ್ರಿಕೆಯೊಂದರಲ್ಲಿ ಕರೆದ ಟೆಂಡರ್‌ನಲ್ಲಿ ದೆಹಲಿ ಮೂಲದ ಕಂಪನಿ ಹೇಗೆ ಭಾಗವಹಿಸುತ್ತದೆ ಸ್ಥಳೀಯ ಕಂಪನಿಗಳು ಟೆಂಡರ್‌ನಲ್ಲಿ ಪಾಲ್ಗೊಂಡಿದ್ದರೆ ಅವುಗಳನ್ನು ಸಂಪರ್ಕಿಸಬಹುದಿತ್ತು. ಈ ಬಗ್ಗೆ ರಾಜ್ಯ ಹಾಗೂ ಅಕೌಂಟೆಂಟ್ ಜನರಲ್ ಕಚೇರಿಯಿಂದ ನಡೆದ ಲೆಕ್ಕ ಪರಿಶೋಧನೆಯಲ್ಲೂ ಆಕ್ಷೇಪಿಸದಿರುವುದು ಗಮನಾರ್ಹ ಎಂದರು. ಮುಖ್ಯಾಧಿಕಾರಿ ಎಂ.ಆರ್. ಸ್ವಾಮಿ ಮಾತನಾಡಿ, 'ಮಹಾನಗರ ಯೋಜನೆಯ ವಿನ್ಯಾಸ ನಕ್ಷೆ ತಯಾರಿಸುವ ಟೆಂಡರ್ ಪ್ರಕ್ರಿಯೆ ನಿರ್ವಹಿಸಿ ಸಂಬಂಧಿಸಿದ ಕಂಪನಿಗೆ ಹಣ ಸಂದಾಯ ಮಾಡುವ ಸಂದರ್ಭದಲ್ಲಿ ಕುಮಟಾ ಪುರಸಭೆಯಲ್ಲಿ ಕೆಲಸ ಮಾಡಿದ್ದ ಸಿಬ್ಬಂದಿಗೆ ನೋಟೀಸ್ ನೀಡಲಾಗುವುದು' ಎಂದರು. 'ಹಗಲು ಹೊತ್ತಿನಲ್ಲಿ ಉರಿಯುವ ಪಟ್ಟಣದ ಕೆಲ ಭಾಗದ ಬೀದಿ ದೀಪಗಳು ರಾತ್ರಿ ಹೊತ್ತಿನಲ್ಲಿ ಉರಿಯದಿರುವ ಬಗ್ಗೆ ಸಾರ್ವಜನಿಕರಿಂದ ತೀವ್ರ ಆಕ್ಷೇಪ ವ್ಯಕ್ತವಾಗುತ್ತಿದೆ. ಬೀದಿ ದೀಪ ನಿರ್ವಹಣೆ ಮಾಡುವ ಗುತ್ತಿಗೆದಾರರು ಸಂಪರ್ಕಕ್ಕೆ ಸಿಗುತ್ತಿಲ್ಲ' ಎಂದು ಸದಸ್ಯ ಎಂ.ಟಿ. ನಾಯ್ಕ ಆಕ್ಷೇಪಿಸಿದರು. ಅದಕ್ಕೆ ಅಧ್ಯಕ್ಷೆ ಸುಮತಿ ಭಟ್ಟ, 'ಬೀದಿ ದೀಪ ನಿರ್ವಹಣೆಯನ್ನು ಬೇರೆ ಗುತ್ತಿಗೆದಾರರಿಗೆ ನೀಡುವ ಬದಲು ಪುರಸಭೆ ಸಿಬ್ಬಂದಿಗೆ ನೀಡಿದರೆ ವಿದ್ಯುತ್ ವ್ಯರ್ಥವಾಗುವುದು ತಪ್ಪುತ್ತದೆ. ಪುರಸಭೆಯ ಸಾಮಾನ್ಯ ಸಭೆಯಲ್ಲಿ ಇನ್ನು ಮುಂದಾದರೂ ಪಟ್ಟಣದ ಸಮಸ್ಯೆಗಳ ಬಗ್ಗೆ ಚರ್ಚಿಸುವ ಕಳಕಳಿ ತೋರಿಸೋಣ. ಪ್ರತಿಯೊಬ್ಬರ ಸದಸ್ಯರೂ ತಮ್ಮ ಭಾಗದ ಸಮಸ್ಯೆ ಹೇಳಿಕೊಳ್ಳಲು ಅವಕಾಶ ನೀಡುವಂಥ ಅರ್ಥಪೂರ್ಣ ಚರ್ಚೆಗೆ ಸಾಮಾನ್ಯ ಸಭೆ ಸಾಕ್ಷಿಯಾಗುವಂತೆ ನೋಡಿಕೊಳ್ಳೋಣ' ಎಂದರು.

# ಗ್ಯಾರಂಟಿಗಳು ಸೂಕ್ತವಾಗಿ ಜನರಿಗೆ ತಲುಪಲಿ: ಅಮೃತರಾವ ಚಿಮಕೋಡೆ

### • ಅನ್ನಭಾಗ್ಯ ಯೋಜನೆಯಡಿಯಲ್ಲಿ 13,13,305 ಫಲಾನುಭವಿಗಳಿದ್ದು, 333.28 ಕೋಟಿ ರೂಪಾಯಿ ಅನುದಾನ ಬಳಕೆ

• ಉದಯವಾಹಿನಿ ಬೀದರ,

ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಪಂಚ ಗ್ಯಾರಂಟಿಗಳು ಸೂಕ್ತವಾಗಿ ಜನರಿಗೆ ತಲುಪಲಿ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅಮೃತರಾವ ಚಿಮಕೋಡೆ ಅವರು ತಿಳಿಸಿದರು. ಅವರು ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಡೆದ ಜಿಲ್ಲಾ ಪಂಚ ಗ್ಯಾರಂಟಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಒಟ್ಟು ಕುಟುಂಬದ ಮಹಿಳಾ ಮುಖ್ಯಸ್ಥೆಯ ಹೆಸರಿನಲ್ಲಿರುವ ಪಡಿತರ ಚೀಟಿಗಳ ಸಂಖ್ಯೆ 381970 ಇವರಲ್ಲಿ ಗೃಹಲಕ್ಷ್ಮೀ ಯೋಜನೆಯಡಿಯಲ್ಲಿ ಆಗಸ್ಟ್ ಅಂತ್ಯಕ್ಕೆ 355304 ಫಲನುಭವಿಗಳು ನೊಂದಾಣಿಯಾಗಿರುತ್ತಾರೆ ಮತ್ತು ಮಾಹೆಕ್ಕೆ 2000 ರೂ ಅಂತೆ 1382.49 ಕೋಟಿ ಹಣವನ್ನು ಡಿಬಿಟಿ ಮೂಲಕ ವರ್ಗಾಯಿಸಲಾಗುತ್ತಿದೆ ಹಾಗೂ ಐಟಿ ಜಿ.ಸ್.ಟಿ ಸಮಸ್ಯೆ ನಿವಾರಣೆ ಆದವರು ಮತ್ತೆ ಅರ್ಜಿ ಸಲ್ಲಿಸಲು ತಿಳಿಸಬೇಕು ಎಂದರು.

ಅನ್ನಭಾಗ್ಯ ಯೋಜನೆಯಡಿಯಲ್ಲಿ 13,13,305 ಫಲಾನುಭವಿಗಳಿದ್ದು, 333.28 ಕೋಟಿ ರೂಪಾಯಿ ಅನುದಾನ ಬಳಕೆಯಾಗಿದೆ. ಜುಲೈ 2023 ರಿಂದ ಜನವರಿ 2025 ರವರಿಗೆ 5 ಕೆಜಿ ಅಕ್ಕಿ ಮತ್ತು ಉಳಿದ 5 ಕೆಜಿ ಅಕ್ಕಿಯ ಮೊತ್ತವನ್ನು ಡಿಬಿಟಿ ಮೂಲಕ ಹಣ ವರ್ಗಾಯಿಸಲಾಗಿತ್ತು ಆದರೆ ಫೆಬ್ರವರಿ 2025 ರಿಂದ 10ಕೆಜಿ ಅಕ್ಕಿ ನೀಡಲಾಗುತ್ತಿದ್ದು, ಜುಲೈಯಿಂದ ಅಕ್ಕಿ ಜೊತೆಗೆ ಜೋಳ ಸೇರಿಸಿ ಒಟ್ಟು 10 ಕೆಜಿ ಆಹಾರಧಾನ್ಯ ನೀಡಲಾಗುತ್ತದೆ. ಪಡಿತರ ಅಕ್ಕಿಯು ಕಾಳಸಂತೆಯಲ್ಲಿ ಮಾರಾಟ ಆಗದಂತೆ ನೋಡಿಕೊಳ್ಳಬೇಕು

**ಹೆಚ್ಚಿನ ರೀತಿಯಲ್ಲಿ ಪ್ರಚಾರ**

ಯುವನಿಧಿ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ ಒಟ್ಟು 12196 ನೊಂದಣಿಯಾಗಿದ್ದು ಅದರಲ್ಲಿ 11900 ಪದವಿ ಅಭ್ಯರ್ಥಿಗಳು ಮತ್ತು 296 ಡಿಪ್ಲೋಮಾ ಅಭ್ಯರ್ಥಿಗಳು ಫಲಾನುಭವಿಗಳಿಗೆ 26.90 ಕೋಟಿ ರೂಪಾಯಿ ಅನುದಾನ ಬಳಕೆಯಾಗಿದೆ. ಯುವನಿಧಿ ಯೋಜನೆ ಬಗ್ಗೆ ಅಧಿಕಾರಿಗಳು ಹೆಚ್ಚಿನ ರೀತಿಯಲ್ಲಿ ಪ್ರಚಾರ ಮತ್ತು ತಾಲ್ಲೂಕು ಮಟ್ಟದಲ್ಲೂ ಕೂಡ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಯುವನಿಧಿ ಪ್ಲಸ್ ಕಾರ್ಯಕ್ರಮ ಅಡಿ ತರಬೇತಿ ನೀಡಲು ಹೆಚ್ಚಿನ ಕ್ರಮ ಕೈಗೊಳ್ಳಬೇಕು ಹಾಗೂ ಪದವಿ ಮತ್ತು ಡಿಪ್ಲೊಮಾ ಕೋರ್ಸ್ ಮುಗಿಸಿದವರ ಪಟ್ಟಿ ಪಡೆದು ಯುವನಿಧಿ ಯೋಜನೆಯಡಿ ನೋಂದಣಿಯಾಗುವಂತೆ ಕ್ರಮ ವಹಿಸಬೇಕೆಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಮತ್ತು ಕೆಲವು ಹಳ್ಳಿ ಮತ್ತು ತಾಂಡಗಳಲ್ಲಿ ನ್ಯಾಯ ಬೆಲೆ ಅಂಗಡಿ ಇಲ್ಲ ಬೇರೆ ಗ್ರಾಮಕ್ಕೆ ಹೋಗಿ ತರಬೇಕಾಗಿದೆ, ಜನರಿಗೆ ಇಂತಹ ತೊಂದರೆಯಾಗದಂತೆ ರೇಷನ್ ಉಪ ಕೇಂದ್ರ ಸ್ಥಾಪಿಸಿ, ರೇಷನ್ ನೀಡಬೇಕು ಹಾಗೂ ತಂಬ್ (ಬಯೋಮೆಟ್ರಿಕ್) ತೆಗೆದುಕೊಂಡ ಕೂಡಲೇ ರೇಷನ್ ನೀಡಬೇಕು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಗೃಹ ಜ್ಯೋತಿ ಯೋಜನೆಯಡಿಯಲ್ಲಿ ಒಟ್ಟು 3,53,011 ಫಲಾನುಭವಿಗಳಿದ್ದು 410.52 ಕೋಟಿ ಹಣವನ್ನು ಬಳಕೆಯಾಗಿದೆ. ಶಕ್ತಿ ಯೋಜನೆಯಡಿಯಲ್ಲಿ ಜಿಲ್ಲೆಯಲ್ಲಿ 11-06-2023 ರಿಂದ 12-10-2025 ರವರಿಗೆ ಮಹಿಳಾ ಮತ್ತು ಬಾಲಕಿಯರು ಒಟ್ಟು ಸೇರಿ 9.74 ಕೋಟಿ ಫಲಾನುಭವಿಗಳು ಸೌಲಭ್ಯ ಪಡೆದಿದ್ದಾರೆ ಹಾಗೂ ವಿಭಾಗದ ವಾಹನದಲ್ಲಿ ಪ್ರತಿ ದಿನ ಸರಾಸರಿ 1.14 ಲಕ್ಷ ಮಹಿಳೆಯರು ಪ್ರಯಾಣಿಸುತ್ತಿದ್ದಾರೆ ಇದಕ್ಕೆ 283.84 ಕೋಟಿ ಸಂದಾಯವಾಗಿದೆ ಮತ್ತು ಪ್ರತಿ ದಿನ ಪ್ರಯಾಣಿಕರಿಂದ ಸರಾಸರಿ 33.24 ಲಕ್ಷ ಸಾರಿಗೆ ಆದಾಯವಾಗುತ್ತಿದೆ ಹಾಗೂ ಕಳೆದ ಸಭೆಯ ಬೇಡಿಕೆಯಂತೆ ಬಸ್ ಸಮಸ್ಯೆ ಇರುವ ಕಡೆಗೆ ಬಸ್ಸಿನ ವ್ಯವಸ್ಥೆ ಮಾಡಲಾಗಿದೆ ಎಂದರು.

> ಕೆಲವು ಕಡೆ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಬಸ್ ನಲ್ಲಿಸುತ್ತಿಲ್ಲ ಎಂಬ ಆರೋಪ ಕೇಳಿ ಬರುತ್ತಿದ್ದು, ಸಮಸ್ಯೆಯನ್ನು ತಕ್ಷಣ ಪರಿಹರಿಸಬೇಕು ಮತ್ತು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ನೋಡಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಗ್ಯಾರಂಟಿ ಯೋಜನೆಗಳಿಗೆ ಸಂಬಂಧಪಟ್ಟ ಸಮಸ್ಯೆಗಳ ಬಗ್ಗೆ ಅಧಿಕಾರಿಗಳಿಗೆ ಲಿಖಿತ ರೂಪದಲ್ಲಿ ದೂರ ಸಲ್ಲಿಸಿ, ಒಂದು ವೇಳೆ ಅವರು ಸಮಸ್ಯೆಗೆ ಸ್ಪಂದಿಸದಿದ್ದರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಪ್ರಾಮಾಣಿಕವಾಗಿ ಜನರಿಗೆ ಪಂಚ ಗ್ಯಾರಂಟಿಗಳು ತಲುಪಿಸುವ ಕೆಲಸ ಹಾಗೂ ಇವುಗಳ ಬಗ್ಗೆ ಜನರಿಗೆ ಅರಿವು ಮೂಡಿಸುವ ಕಾರ್ಯ ಸಂಬಂಧಪಟ್ಟ ಅಧಿಕಾರಿಗಳು ಮಾಡಬೇಕು.
> -ಅಮೃತರಾವ ಚಿಮಕೋಡೆ

**ಪ್ರಗತಿ ಪರಿಶೀಲನಾ ಸಭೆ**

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಗಿರೀಶ್ ಬದೋಲೆ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಕಿಶೋರಕುಮಾರ ದುಬೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀಧರ್ ಎಮ್.ಎಚ್, ಜೆಸ್ಕಾಂ ಅಧಿಕಾರಿಗಳು, ಕೆ.ಕೆ.ಆರ್.ಟಿ.ಸಿ ವಿಭಾಗಿಯ ನಿಯಂತ್ರಣಾಧಿಕಾರಿ ಆರ್.ಬಿ. ಜಾಧವ, ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿ ವಿ. ಪ್ರಭಾಕರ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಾಯಂಕಾಲ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:30 |

**ಮೇಷ:** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ, ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ.

**ವೃಷಭ:** ನಿಮ್ಮ ಸಂಗಾತಿಯ ಬೇಡಿಕೆಗಳು ಸ್ವಲ್ಪ ಒತ್ತಡವುಂಟುಮಾಡಬಹುದು. ನಿರುದ್ಯೋಗಿಗಳಿಗೆ ಇಂದು ಉದ್ಯೋಗ ಸಿಗುವುದು ಕಷ್ಟವಾಗಬಹುದು. ನೀವು ನಿಮ್ಮ ಪ್ರಯತ್ನಗಳನ್ನು ಹೆಚ್ಚಿಸುವ ಅಗತ್ಯವಿದೆ.

**ಮಿಥುನ:** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ನೀವು ದೀರ್ಘಕಾಲದ ಆಧಾರದ ಮೇಲೆ ಹೂಡಿಕೆ ಮಾಡಿದಲ್ಲಿ ಗಣನೀಯ ಲಾಭ ಮಾಡುತ್ತೀರಿ.

**ಕರ್ಕಾಟಕ:** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಸಿಂಹ:** ಸ್ನೇಹಿತರೊಂದಿಗಿನ ಸಂಜೆ ಆಹ್ಲಾದಕರವಾಗಿದ್ದರೂ ವಿಪರೀತ ತಿನ್ನುವುದು ಮತ್ತು ಹಾರ್ಡ್ ಡ್ರಿಂಕ್‌ಗಳ ಬಗ್ಗೆ ಎಚ್ಚರಿಕೆಯಿಂದಿರಿ. ಸಂಶಯಾಸ್ಪದ ಹಣಕಾಸು ವ್ಯವಹಾರಗಳಲ್ಲಿ ಸಿಲುಕಿಕೊಳ್ಳದಂತೆ ಎಚ್ಚರಿಕೆ ವಹಿಸಿ.

**ಕನ್ಯಾ:** ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಸಂತೋಷ ತರುತ್ತದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

**ತುಲಾ:** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ.

**ವೃಶ್ಚಿಕ:** ಗರ್ಭಿಣಿಯರಿಗೆ ಉತ್ತಮ ದಿನವಲ್ಲ. ನೀವು ನಡೆಯುವಾಗ ಹೆಚ್ಚು ಜಾಗರೂಕರಾಗಿರಬೇಕು. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು.

**ಧನಸ್ಸು:** ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು.

**ಮಕರ:** ನಿಮ್ಮ ಮುಖದಲ್ಲಿ ನಿರಂತರವಾದ ನಗುವಿರುವ ಮತ್ತು ಅಪರಿಚಿತರೂ ಪರಿಚಿತರಂತೆ ತೋರುವ ಒಂದು ದಿನ. ನೀವು ಒಳ್ಳೆಯ ಹಣ ಮಾಡುತ್ತೀರಿ, ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ.

**ಕುಂಭ:** ಈ ದಿನ ನಿಮ್ಮ ಪ್ರೀತಿ ಜೀವನದ ವಿಚಾರದಲ್ಲಿ ಅಸಾಧಾರಣವಾಗಿದೆ. ಪ್ರೀತಿ ಮಾಡುತ್ತೀರಿ. ಯಾವುದೇ ಹೊಸ ಕೆಲಸವನ್ನು ಪ್ರಾರಂಭಿಸುವ ಮೊದಲು ಅದರ ಬಗ್ಗೆ ಅನುಭವಿ ಜನರೊಂದಿಗೆ ಮಾತನಾಡಬೇಕು.

**ಮೀನ:** ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ.

### • 14 ಪಾಯಿಂಟ್‌ಗಳ ನೀರಿನ ಪರೀಕ್ಷೆ • ಹಾವೇರಿ-ರಾಣೆಬೆನ್ನೂರಿಗೆ ನೀರಿನ ಆಧಾರ

# 'ಸಿ' ಕೆಟಗೇರಿಯಲ್ಲಿ ತುಂಗಭದ್ರಾ: ನೇರ ಕುಡಿಯಲು ಯೋಗ್ಯವಲ್ಲದ ನೀರು

• **ಉದಯವಾಹಿನಿ ಹಾವೇರಿ**

ಜಿಲ್ಲೆಯ ಹಾವೇರಿ, ರಾಣೆಬೆನ್ನೂರು ಹಾಗೂ ಹಲವು ಪ್ರದೇಶಗಳಿಗೆ ಕುಡಿಯುವ ನೀರು ಒದಗಿಸುತ್ತಿರುವ ತುಂಗಭದ್ರಾ ನದಿಯು ಇತ್ತೀಚಿನ ದಿನಗಳಲ್ಲಿ ಕಲುಷಿತವಾಗುತ್ತಿರುವ ಸಂಗತಿ ಪತ್ತೆಯಾಗಿದೆ. ತುಂಗಭದ್ರಾ ನದಿಯ 14 ಪಾಯಿಂಟ್‌ಗಳ ನೀರಿನ ಪರೀಕ್ಷೆ ನಡೆಸಿದ್ದ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಪಿಸಿಬಿ) ಅಧಿಕಾರಿಗಳು, 'ನೇರವಾಗಿ ಕುಡಿಯಲು ಹಾಗೂ ಬಳಸಲು ನದಿ ನೀರು ಯೋಗ್ಯವಲ್ಲ' ಎಂದು ವರದಿ ನೀಡಿದ್ದಾರೆ.

ದಾವಣಗೆರೆ ಜಿಲ್ಲೆಯ ಹೊನ್ನಾಳಿಯಿಂದ ಹಾವೇರಿ ಜಿಲ್ಲೆ ಮಾರ್ಗವಾಗಿ ವಿಜಯನಗರ ಜಿಲ್ಲೆಯ ಮೈಲಾರದವರೆಗೂ ಹರಿಯುತ್ತಿರುವ ತುಂಗಭದ್ರಾ ನದಿಯ 14 ಪಾಯಿಂಟ್‌ಗಳ ನೀರು ಸಂಗ್ರಹಿಸಿ ಪ್ರತಿ ತಿಂಗಳು ಪರೀಕ್ಷೆ ನಡೆಸಲಾಗುತ್ತಿದೆ. ಸೆಪ್ಟೆಂಬರ್ ತಿಂಗಳ ಪರೀಕ್ಷಾ ವರದಿ ಬಹಿರಂಗಗೊಂಡಿದ್ದು, ಈ ಮೂಲಕ ತುಂಗಭದ್ರಾ ನದಿಯ ನೀರು ನೇರವಾಗಿ ಕುಡಿಯಲು ಸುರಕ್ಷಿತವಲ್ಲ ಎಂಬುದು ಗೊತ್ತಾಗಿದೆ. ಹಾವೇರಿ ಹಾಗೂ ರಾಣೆಬೆನ್ನೂರು ಪಟ್ಟಣದ ಜನರಿಗೆ ತುಂಗಭದ್ರಾ ನದಿಯಿಂದಲೇ ಕುಡಿಯಲು ನೀರು ಪೂರೈಕೆ ಮಾಡಲಾಗುತ್ತಿದೆ. ಈಗ ತುಂಗಭದ್ರಾ ನದಿ ನೀರಿನ ಗುಣಮಟ್ಟದ ವರದಿ ಬಂದಿರುವುದರಿಂದ, ಎರಡೂ ನಗರಗಳ ಜನರು



☛ ಉದಯವಾಹಿನಿ ಚಿತ್ರ

ಆತಂಕ ವ್ಯಕ್ತಪಡಿಸಿದ್ದಾರೆ. ಸಂಸ್ಕರಣೆ ಮಾಡಿಯೇ ಜನರಿಗೆ ಕುಡಿಯುವ ನೀರು ನೀಡಬೇಕು ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದ್ದು, ಅದರಂತೆ ಸ್ಥಳೀಯ ಆಡಳಿತ ಸಂಸ್ಥೆಗಳು ನೀರಿನ ಸಂಸ್ಕರಣೆಗೆ ಹೆಚ್ಚಿನ ಆದ್ಯತೆ ನೀಡುವಂತೆಯೂ ಜನರು ಒತ್ತಾಯಿಸುತ್ತಿದ್ದಾರೆ.

**ಎರಡೂ ನಗರಗಳ ಜನರು ಆತಂಕ**

**ಕಂಚಾರಗಟ್ಟಿ ಮೂಲಕ ಸರಬರಾಜು:** ತುಂಗಭದ್ರಾ ನದಿ ಹರಿಯುತ್ತಿರುವ ಕಂಚಾರಗಟ್ಟಿ ಬಳಿಯಿಂದ ಹಾವೇರಿ ನಗರಕ್ಕೆ ನೀರು ಪೂರೈಕೆ ಮಾಡಲಾಗುತ್ತಿದೆ. ಇದರ ಜೊತೆಯಲ್ಲಿ ಹೆಗ್ಗೇರಿ ಕೆರೆಯ ನೀರನ್ನೂ ಜನರ ಬಳಕೆಗೆ ಮೀಸಲಿಡಲಾಗಿದೆ. ನಗರಕ್ಕೆ ಕುಡಿಯಲು ಬರುವ ಬಹುತೇಕ ನೀರು, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿದೆ. ನದಿಯಿಂದ ಬರುವ ನೀರನ್ನು ಜಿಲ್ಲಾ ಕ್ರೀಡಾಂಗಣ ಬಳಿ ಇರುವ ಸಂಸ್ಕರಣಾ ಘಟಕದಲ್ಲಿ ಸಂಸ್ಕರಣೆ ಮಾಡಲಾಗುತ್ತಿದೆ. ಸಂಸ್ಕರಣಾ ಘಟಕದಲ್ಲೂ ಆಗಾಗ ಸಮಸ್ಯೆಗಳು ಕಾಣಿಸುತ್ತಿದ್ದು, ಕೆಲವು ಬಾರಿ ಸಂಸ್ಕರಣೆ ನಡೆಸದೆಯೇ ನೀರು ಸರಬರಾಜು ಮಾಡುತ್ತಿರುವ ಆರೋಪಗಳೂ ಇವೆ. ಸಂಸ್ಕರಣಾ ಘಟಕವನ್ನು ನಗರಸಭೆ ಅಧಿಕಾರಿಗಳು ನಿರ್ವಹಣೆ ಮಾಡುತ್ತಿದ್ದಾರೆ. ಸಂಸ್ಕರಣೆ ಕೆಲಸದಲ್ಲಿ ಸ್ವಲ್ಪ ವ್ಯತ್ಯಾಸವಾದರೂ ಕಲುಷಿತ ನೀರು ಜನರ ಮನೆ ತಲುಪಲಿದೆ. ಇದರಿಂದಾಗಿ ವಿವಿಧ ಕಾಯಿಲೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇರುವುದಾಗಿ ಜನರು ಆತಂಕ

> **ತುಂಗಭದ್ರಾ ನದಿ ನೀರನ್ನು ಪ್ರತಿ ತಿಂಗಳು ಪರೀಕ್ಷೆ ಮಾಡುತ್ತಿದ್ದೇವೆ. ನೇರವಾಗಿ ಕುಡಿಯಲು ಯೋಗ್ಯವಲ್ಲವೆಂಬುದು ಗೊತ್ತಾಗಿದೆ. ಸಂಸ್ಕರಣೆ ಮಾಡಿಯೇ ಜನರು ನೀರು ಕುಡಿಯುವುದು ಸುರಕ್ಷಿತ.**
> **-ರಾಜಶೇಖರ್ ಪುರಾಣಿಕ, ಕೆಪಿಸಿಬಿ ಹಾವೇರಿಯ ಪರಿಸರ ಅಧಿಕಾರಿ**

ವ್ಯಕ್ತಪಡಿಸುತ್ತಿದ್ದಾರೆ. 'ನಗರದಲ್ಲಿ ಈಗ 10ರಿಂದ 15 ದಿನಕ್ಕೊಮ್ಮೆ ನೀರು ಸರಬರಾಜು ಮಾಡಲಾಗುತ್ತಿದೆ. ನೀರಿನ ಗುಣಮಟ್ಟ ನೋಡಿದರೆ, ಕುಡಿಯಲು ಹೆದರಿಕೆ ಆಗುತ್ತದೆ. ಸಂಸ್ಕರಣೆ ಆಗುತ್ತದೆಯೋ ಇಲ್ಲವೋ ಎಂಬ ಅನುಮಾನ ಹುಟ್ಟುತ್ತಿದೆ' ಎಂದು ಶಿವಬಸವನಗರದ ನಿವಾಸಿ ಮಲ್ಲಿಕಾರ್ಜುನ ಹೇಳಿದರು.

ತುಂಗಭದ್ರಾ ನದಿ ನೀರು ಸಹ ನೇರವಾಗಿ ಕುಡಿಯಲು ಯೋಗ್ಯವಲ್ಲವೆಂದು ವರದಿ ಬಂದಿದೆ. ಇದನ್ನು ನೋಡಿದರೆ, ಮುಂದಿನ ದಿನಗಳಲ್ಲಿ ನೀರು ಕುಡಿಯುವುದು ಹೇಗೆ ಎಂಬ ಭಯ ಶುರುವಾಗಿದೆ. ಹಾವೇರಿ ನಗರಕ್ಕೆ ನೀರು ಸರಬರಾಜು ಮಾಡುವ ಶುದ್ಧೀಕರಣ ಘಟಕ ಆಗಾಗ ದುರಸ್ತಿಗೆ ಬರುತ್ತದೆ. ಅಲಂ ಇದ್ದರೆ, ಬ್ಲಿಚಿಂಗ್ ಪೌಡರ್ ಇರುವುದಿಲ್ಲ, ಇವೆರಡು ಇದ್ದರೆ ಕ್ಲೋರಿನ ಯಂತ್ರ ಸರಿ ಇರುವುದಿಲ್ಲ. ಹೀಗಾಗಿ, ನಗರಸಭೆ ಯಾವ ರೀತಿ ನೀರು ಸರಬರಾಜು ಮಾಡುತ್ತದೆ ಎಂಬುದೇ ಗೊತ್ತಾಗುತ್ತಿಲ್ಲ' ಎಂದು ತಿಳಿಸಿದರು. ರಾಣೆಬೆನ್ನೂರು ನಗರಕ್ಕೂ ತುಂಗಭದ್ರಾ ನದಿಯಿಂದ ನೀರು ಸರಬರಾಜು ಮಾಡಲಾಗುತ್ತಿದೆ. ಹಾವೇರಿಯಲ್ಲಿಯೂ ನಿರಂತರ ನೀರು ಯೋಜನೆ ಮೂಲಕ ಮನೆಗಳಿಗೆ ತುಂಗಭದ್ರಾ ನೀರು ಕೊಡುವ ಕೆಲಸ ನಡೆಯುತ್ತಿದೆ.

**ಜಾನುವಾರುಗಳಿಗೂ ಇದೇ ನೀರು ಆಸರೆ**

**ಜಿಲ್ಲೆಯ ಜನರಿಗೆ ಮಾತ್ರವಲ್ಲದೇ ಜಾನುವಾರುಗಳಿಗೂ ತುಂಗಭದ್ರಾ ನದಿ ನೀರೇ ಆಸರೆಯಾಗಿದೆ. ಹಾವೇರಿ ರಾಣೆಬೆನ್ನೂರು ಬ್ಯಾಡಗಿ ಹಿರೇಕೆರೂರು ತಾಲ್ಲೂಕಿನ ಹಲವು ಗ್ರಾಮಗಳು ನದಿ ಪಾತ್ರದಲ್ಲಿವೆ. ಅದೇ ಗ್ರಾಮದ ಜನರು ಜಾನುವಾರುಗಳಿಗೆ ನದಿಯಲ್ಲಿ ನೀರು ಕುಡಿಸುತ್ತಿದ್ದಾರೆ. ವರದಿಯಿಂದಾಗಿ ಜಾನುವಾರುಗಳ ಮಾಲೀಕರಲ್ಲೂ ಆತಂಕ ಶುರುವಾಗಿದೆ.**

## ಬಂಜಾರ ಸಮಾಜದ ಕಟ್ಟಾಕಡೆಯ ವ್ಯಕ್ತಿಗೂ ನ್ಯಾಯ ಒದಗಿಸುವ ಸಂಘದ ಉದ್ದೇಶ: ಮಾಜಿ ಸಂಸದ ಡಾ.ಉಮೇಶ ಜಾಧವ

• **ಉದಯವಾಹಿನಿ,ಚಿಂಚೋಳಿ**



☛ ಉದಯವಾಹಿನಿ ಚಿತ್ರ

**ಡಾ.ಉಮೇಶ ಜಾಧವ ಕಿವಿಮಾತು**

ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘದ ಪದಾಧಿಕಾರಿಗಳು ಬಂಜಾರ ಸಮಾಜ ಸೇರಿದಂತೆ ಇತರೆ ಸಮಾಜದ ಕಟ್ಟಾಕಡೆಯ ವ್ಯಕ್ತಿಗೂ ನ್ಯಾಯ ಒದಗಿಸುವುದೆ ಸಂಘದ ಉದ್ದೇಶವಾಗಿದ್ದು ಪದಾಧಿಕಾರಿಗಳು ಈ ನಿಟ್ಟಿನಲ್ಲಿ ಕೆಲಸ ಮಾಡಬೇಕು ಎಂದು ಮಾಜಿ ಸಂಸದ ಡಾ.ಉಮೇಶ ಜಾಧವ ಕಿವಿಮಾತು ಹೇಳಿದರು.

ಪಟ್ಟಣದ ಚಂದಾಪೂರದ ಬಂಜಾರ ಭವನದಲ್ಲಿ ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘ ಹಾಗೂ ಜಿಲ್ಲಾ ಘಟಕದಿಂದ ಆಯೋಜಿಸಿದ್ದ ತಾಲ್ಲೂಕಾ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಂಜಾರ ಸಮಾಜ ವೇಷಭೂಷಣ, ಕಲೆ, ಸಂಸ್ಕೃತಿಯು ದೇಶದಲ್ಲಿ ಹೆಮ್ಮೆಯ ಸಂಗತಿಯಾಗಿದೆ. ತಾಲ್ಲೂಕಿನಲ್ಲಿ ಬಂಜಾರ ಸಮಾಜದ ಸಮಸ್ಯೆಗಳನ್ನು ಆಲಿಸಲು ಪ್ರತಿಯೊಂದು ತಾಂಡಾಗಳಿಗೆ ಭೇಟಿನೀಡಿ ಅವರ ಸಮಸ್ಯೆಗಳು ಸ್ಥಳದಲ್ಲಿಯೆ ಆಲಿಸಿ ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘವು ಸಂಘಟನೆ ಮಾಡಬೇಕು. ಶ್ರಮಪಟ್ಟು ಪ್ರಯತ್ನ ಮಾಡಬೇಕು ಅದರ ಪ್ರತಿಫಲ ಸಿಕ್ಕೆಸಿಗುತ್ತದೆ, 2013ರ ಹಿಂದೆ ನಮ್ಮ ಸಮಾಜದವರು ಬಹಳಷ್ಟು ಕಷ್ಟದುಃಖ ಅನುಭವಿಸಿದ್ದಾರೆ, 2014ರ ನಂತರ ನಾನು ಶಾಸಕನಾಗಿ ಸಂಸದನಾದ ಮೇಲೆ ಬಂಜಾರ ಸಮಾಜದ ಬಹಳಷ್ಟು ಸಮಸ್ಯೆಗಳು ಪರಿಹರಿಸಿದ್ದೇನೆ ಪದಾಧಿಕಾರಿಗಳು ಸಮಾಜದ ಏಳಿಗೆಗಾಗಿ ಹಗಲಿರುಳು ಶ್ರಮಿಸಬೇಕು ಎಂದರು.

**ಪದಾಧಿಕಾರಿಗಳು ಪದಗ್ರಹಣ ನೇಮಕಾತಿ ಪತ್ರ ವಿತರಣೆ:-** ಗೌರವಧ್ಯಕ್ಷರಾಗಿ ಅಶೋಕ ಚವ್ಹಾಣ, ಅಧ್ಯಕ್ಷರಾಗಿ ಪ್ರೇಮಸಿಂಗ್ ಜಾಧವ, ಉಪಾಧ್ಯಕ್ಷರಾಗಿ ರಾಜು ಪವ್ಹಾರ, ಖಜಾಂಚಿ ರಮೇಶ ರಾಠೋಡ, ಪ್ರಧಾನ ಕಾರ್ಯದರ್ಶಿ ಗೋಪಾಲ ಜಾಧವ ಸೇರಿದಂತೆ ಅನೇಕರಿಗೆ ಸನ್ಮಾನಿಸಿ ಗೌರವಿಸಿ ಪದಗ್ರಹಣ ನೇಮಕಾತಿ ಪತ್ರವನ್ನು ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿದ್ದನಾಯಕ ಹಾಗೂ ಜಿಲ್ಲಾಧ್ಯಕ್ಷ ಬಿ.ಬಿ.ನಾಯಕ ವಿತರಿಸಿದರು.

ಕರ್ನಾಟಕ ಪ್ರದೇಶ ಬಂಜಾರ ಸೇವಾ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿದ್ದನಾಯಕ ಹಾಗೂ ಜಿಲ್ಲಾಧ್ಯಕ್ಷ ಬಿ.ಬಿ.ನಾಯಕ, ಸೋಮು, ಗೋಪಾಲಸಿಂಗ್, ಆನಂದ, ಲಕ್ಷ್ಮಣ ಚವ್ಹಾಣ ಮಾತನಾಡಿದರು. ನೂತನ ಅಧ್ಯಕ್ಷ ಪ್ರೇಮಸಿಂಗ್ ಜಾಧವ ಸ್ವಾಗತಿಸಿದರು, ಗೋಪಾಲ ಜಾಧವ ನಿರೂಪಿಸಿದರು, ಶಾಮರಾವ ಮಾಸ್ಟರ್ ವಂದಿಸಿದರು.

## ಹವಾಮಾನ ವೈಪರಿತ್ಯ: ಶುಂಠಿಗೆ ಎಲೆಚುಕ್ಕಿ ವ್ಯಾಪಕ

• **ಉದಯವಾಹಿನಿ ಶಿರಸಿ**

ಶುಂಠಿ ಬೆಳೆಗೆ ಎಲೆಚುಕ್ಕಿ ರೋಗ ಈಗಾಗಲೇ ಬಾಧಿಸುತ್ತಿದ್ದು, ಪ್ರಸ್ತುತ ಬೀಳುತ್ತಿರುವ ಮಳೆಯ ವಾತಾವರಣದಲ್ಲಿ ಹೆಚ್ಚಿರುವ ತೇವಾಂಶದ ಕಾರಣಕ್ಕೆ ರೋಗಬಾಧೆ ಶುಂಠಿ ಕ್ಷೇತ್ರದ ತುಂಬ ಆವರಿಸಿ ರೈತರ ಆತಂಕಕ್ಕೆ ಕಾರಣವಾಗಿದೆ. ತಾಲ್ಲೂಕಿನಲ್ಲಿ ಸಾವಿರಾರು ಹೆಕ್ಟೇರ್ ಪ್ರದೇಶದಲ್ಲಿ ಪ್ರಸಕ್ತ ವರ್ಷ ಶುಂಠಿ ನಾಟಿ ಮಾಡಲಾಗಿದೆ. ಇದೇ ಮೊದಲ ಬಾರಿಗೆ ಬನವಾಸಿ ಹೋಬಳಿಯ ಬನವಾಸಿ, ತಿಗಣಿ, ಗುಡ್ನಾಪುರ, ಭಾಶಿ, ದಾಸನಕೊಪ್ಪ, ಅಜ್ಜರಣಿ, ನವಣಗೇರಿ ಸೇರಿ ಹಲವು ಕಡೆ ಶುಂಠಿ ಬೆಳೆಗೆ ಎಲೆಚುಕ್ಕಿ ರೋಗ ಬಾಧಿಸುತ್ತಿದೆ. ರೈತರು ರೋಗ ನಿಯಂತ್ರಣಕ್ಕಾಗಿ ವಿವಿಧ ರೀತಿಯ ಔಷಧಗಳನ್ನು ಸಿಂಪಡಿಸುತ್ತಿದ್ದರೂ ಹೆಚ್ಚಿನ ಪ್ರಯೋಜನ ಸಿಗುತ್ತಿಲ್ಲ. ಆಗಾಗ ಬರುವ ಮಳೆ, ವಾತಾವರಣದ ತೇವಾಂಶದ ಕಾರಣ ರೋಗ ಉಲ್ಬಣಿಸುತ್ತಿದ್ದು. ಶುಂಠಿ ಗದ್ದೆಗಳು ಹಳದಿ ಬಣ್ಣಕ್ಕೆ ತಿರುಗುತ್ತಿವೆ. ಇದು ರೈತರ ನಿದ್ದೆಗೆಡಿಸಿದೆ.

ಶುಂಠಿ ಎಲೆಗಳ ಮೇಲೆ ಕಾಣಿಸಿಕೊಂಡ ಕಂದು ಮಿಶ್ರಿತ ಬಿಳಿ ಚುಕ್ಕಿಗಳು ಕ್ರಮೇಣ ಎಲ್ಲಾ ಎಲೆಗಳಿಗೂ ಹಬ್ಬುತ್ತಿವೆ. ರೋಗ ಬಾಧಿತ ಶುಂಠಿಯ ದಂಟುಗಳಲ್ಲಿ ಚಿಕ್ಕ ಚಿಕ್ಕ ಕಪ್ಪು ಕಲೆಗಳು ನಿರ್ಮಾಣಗೊಂಡು ಶುಂಠಿ



☛ ಉದಯವಾಹಿನಿ ಚಿತ್ರ

ಬೆಳವಣಿಗೆ ನಿಯಂತ್ರಿಸಿ, ಬೆಳೆಯನ್ನು ಕೃಶಗೊಳಿಸುತ್ತಿವೆ. 'ಆರಂಭದಲ್ಲಿ ಕೆಲವು ಶುಂಠಿ ಗಿಡಗಳಲ್ಲಿ ಮಾತ್ರ ಕಾಣಿಸಿಕೊಂಡಿದ್ದ ರೋಗ ಕೆಲವೇ ದಿನಗಳಲ್ಲಿ ಬೆಳೆ ಪ್ರದೇಶದ ತುಂಬೆಲ್ಲ ವೇಗವಾಗಿ ಆವರಿಸಿಕೊಂಡು ಬಾಧಿಸುತ್ತಿದೆ' ಎನ್ನುತ್ತಾರೆ ಬನವಾಸಿಯ ಶುಂಠಿ ಕೃಷಿಕ ನವೀನ ನಾಯ್ಕ. 'ಅನೇಕ ಬಾರಿ ಔಷಧ ಸಿಂಪಡಣೆ ನಡುವೆಯೂ ರೋಗ ಹೋಗಿಲ್ಲ. ಹೊಲ ಪೂರ್ತಿ ಕೆಂಪು ಬಣ್ಣಕ್ಕೆ ತಿರುಗಿದೆ. ಶುಂಠಿ ಕೀಳೋಣ ಎಂದರೆ ಇನ್ನೂ ಎಳೆಯದಾಗಿದ್ದು, ಕೊಳ್ಳುವವರು ಇಲ್ಲ. ಹಾಗೇ ಬಿಟ್ಟರೆ ಬೆಳೆ ಸಂಪೂರ್ಣ ಕೊಳೆಯುತ್ತದೆ. ಹಾಕಿದ ಹಣ ಸಹ ಸಿಗುವುದು ಸಹ ಅನುಮಾನ' ಎನ್ನುತ್ತಾರೆ ಅವರು.

## ಕಲಬುರ್ಗಿ-ಯಾದಗಿರಿ ಡಿಸಿಸಿ ಬ್ಯಾಂಕ್ ಚುನಾವಣಾ ನಿರ್ದೇಶಕ ಸ್ಥಾನಕ್ಕೆ ಸ್ಪರ್ಧಿಸಲು ಅವಕಾಶ ಕೊಡಿ: ಮುಕುಂದ ದೇಶಪಾಂಡೆ

• **ಉದಯವಾಹಿನಿ, ಚಿಂಚೋಳಿ**

ನವ್ಹೆಂಬರ್ 9 ರಂದು ನಡೆಯುವ ಕಲಬುರಗಿ - ಯಾದಗಿರಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಚುನಾವಣೆಯಲ್ಲಿ ಚಿಂಚೋಳಿ ತಾಲ್ಲೂಕಿನಿಂದ ನಿರ್ದೇಶಕರ ಚುನಾವಣೆಗೆ ಸ್ಪರ್ಧಿಸಲು ಅವಕಾಶ ನೀಡಬೇಕು ಎಂದು ನಿಡಗುಂದಾ ಪಿಕೆಪಿಎಸ್ ಸಂಘದ ಅಧ್ಯಕ್ಷ ಹಾಗೂ ಟಿಎಪಿಸಿಎಂಎಸ್ ನಿರ್ದೇಶಕರಾದ ಮುಕುಂದರಾವ ದೇಶಪಾಂಡೆ ಬಿಜೆಪಿ ಹೈಕಮಾಂಡನವರಿಗೆ ಮನವಿ ಮಾಡಿದ್ದಾರೆ.

ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು, ಕಳೆದ 25ವರ್ಷಗಳಿಂದ ಬಿಜೆಪಿ ಪಕ್ಷದಲ್ಲಿ ನಿಷ್ಠಾವಂತ ಕಾರ್ಯಕರ್ತನಾಗಿ ಪಕ್ಷಕ್ಕಾಗಿ ದುಡಿದ್ದೇನೆ ಹಾಗೂ 2004-06ವರೆಗೆ ಚಿಂಚೋಳಿ ಮಂಡಲ ಬಿಜೆಪಿ ಪಕ್ಷದ ಪ್ರಧಾನ ಕಾರ್ಯದರ್ಶಿ ಮತ್ತು 2008-10ರ ವರೆಗೆ ಸೇಡಂ ಮಂಡಲ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸೇವೆ ಸಲ್ಲಿಸಿದ್ದೇನೆ, ಪಕ್ಷ ಯಾವುದೇ ಜವಾಬ್ದಾರಿ ನೀಡಿದರೆ ಅದಕ್ಕೆ ನಿಷ್ಠಾವಂತನಾಗಿ ನಿಭಾಯಿಸಿದ್ದೆನೆ, ಲೋಕಸಭಾ, ವಿಧಾನಸಭಾ, ವಿಧಾನ ಪರಿಷತ್ತು, ಜಿಪಂ. ತಾಪಂ. ಗ್ರಾಪಂ ಮತ್ತು ವಿಎಸ್‌ಎಸ್‌ಎನ್ ಮತ್ತು ಇತರ ಸುಮಾರು ಚುನಾವಣೆಯಲ್ಲಿ ಸಕ್ರಿಯವಾಗಿ ಕೆಲಸ ಮಾಡಿದ್ದೇನೆ, ರಾಜಕೀಯ ಬಂದು ಹಿಡಿದು ಇಲ್ಲಿಯವರೆಗೆ ನಾನು ಬಿಜೆಪಿ ಪಕ್ಷದಲ್ಲಿಯೇ ಇದ್ದಿನಿ, ಪಕ್ಷ ಕೊಟ್ಟ ಜವಾಬ್ದಾರಿಯನ್ನು ನಿಭಾಯಿಸಿದ್ದೇನೆ ಇದರಿಂದ ಚಿಂಚೋಳಿ ತಾಲ್ಲೂಕಿನಿಂದ ನಡೆಯುವ ಡಿಸಿಸಿ ಬ್ಯಾಂಕ್ ನಿರ್ದೇಶಕರ ಚುನಾವಣೆಗೆ ಸ್ಪರ್ಧಿಸಲು ನನಗೆ ಬಿಜೆಪಿ ಹೈಕಮಾಂಡ್ ಅವಕಾಶ ನೀಡಬೇಕು. ನಿಡಗುಂದಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಅಧ್ಯಕ್ಷನಾಗಿ ಸಾರ್ವಜನಿಕ ರೈತರ ಪರವಾಗಿ ಅನೇಕ ಕೆಲಸ ಮಾಡಿದ್ದೇನೆ.



ಈ ಭಾಗದ ಜನರಿಗೆ ಅನುಕೂಲಕ್ಕಾಗಿ ನಿಡಗುಂದಾ ಸೂಸೈಟಿಯಲ್ಲಿ ಇ ಸ್ಟಾಂಪಿಂಗ್ ಸೇವೆ ಆರಂಭ ಮಾಡಿದ್ದೇನೆ ಇದರಿಂದ ಜನರಿಗೆ ಸೇಡಂ ಚಿಂಚೋಳಿ ಕಲಬುರಗಿ ಪಟ್ಟಣಕ್ಕೆ ಅಲೆದಾಡುವುದು ತಪ್ಪಿದೆ, ನಾನು ಅಧ್ಯಕ್ಷ ಸ್ಥಾನ ಸ್ವಿಕರಿಸದ ನಂತರ ಡಿಸಿಸಿ ಬ್ಯಾಂಕ್‌ನಿಂದ ಸುಮಾರು 2.65 ಕೋಟಿ ರೈತರಿಗೆ ಸಾಲ ನೀಡಲಾಗಿದೆ, ಹಳೆ ಸಾಲ ಶೇ.50% ರಷ್ಟು ಸಾಲ ವಸೂಲಾತಿ ಮಾಡಿಲಾಗಿದೆ. ರೈತರಿಗೋಸ್ಕರ ತೊಗರಿ ಖರೀದಿ ಕೇಂದ್ರ ಆರಂಭಿಸಿದ್ದೆನೆ ಹಾಗೂ ಟಿಎಪಿಎಂಎಸ್ ಚಿಂಚೋಳಿಯ ನಿರ್ದೇಶಕನಾಗಿ ಆಯ್ಕೆಯಾಗಿದ್ದೇನೆ ಎಂದು ಮನವಿ ಮಾಡಿದ್ದಾರೆ.

## ಡಿಜಿಟಲ್ ಅರೆಸ್ಟ್ ಕರೆ: 42 ಲಕ್ಷ ರು. ಕಳಕೊಂಡ ಮಹಿಳೆ

• **ಉದಯವಾಹಿನಿ ಮಂಗಳೂರು**

ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ಮಹಿಳೆಗೆ ಕರೆ ಮಾಡಿ 42,00,150 ರು. ವರ್ಗಾಯಿಸಿಕೊಂಡು ವಂಚನೆ ಮಾಡಿರುವ ಕುರಿತಂತೆ ಸೆನ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ದೂರುದಾರ ಮಹಿಳೆಗೆ ಅ.7ರಂದು ಸಂಜೆ ಅಪರಿಚಿತ ಮೊಬೈಲ್ ಸಂಖ್ಯೆಯಿಂದ ಕರೆ ಬಂದಿದೆ. ಕರೆ ಮಾಡಿದ ವ್ಯಕ್ತಿ ಮುಂಬಯಿ ಕೊಲಾಬ ಪೊಲೀಸ್ ಠಾಣೆಯಿಂದ ಕರೆ ಮಾಡುವುದಾಗಿ ತಿಳಿಸಿದ್ದಾನೆ.

ನಿಮ್ಮ ಹೆಸರಿನಲ್ಲಿ ಐಡಿ ಕಾರ್ಡ್‌ನಲ್ಲಿ ಸಿಮ್ ಖರೀದಿಸಿ ಅದರಿಂದ ವಂಚನೆಯ ಕರೆ ಸಾರ್ವಜನಿಕರಿಗೆ ಅನುಮಾನಾಸ್ಪದ ಲಿಂಕ್ ಗಳನ್ನು ಕಳುಹಿಸಲಾಗಿದೆ. ಕೂಡಲೇ ಮುಂಬಯಿಗೆ ಬರಬೇಕು ಎಂದು ತಿಳಿಸಿದ್ದಾನೆ. ಮುಂಬಯಿಗೆ ಬರಲು ಆಗುವುದಿಲ್ಲ ಎಂದು ತಿಳಿಸಿದಾಗ ಅವರಿಂದ ಲೆಟರ್ ಬರೆಯಿಸಿಕೊಂಡು ಅದನ್ನು ವಾಟ್ಸ್‌ಆ್ಯಪ್ ಮೂಲಕ ಇನ್ನೊಂದು ಸಂಖ್ಯೆಗೆ ಕಳುಹಿಸುವಂತೆ ಸೂಚಿಸಿದ್ದಾನೆ.

ಅನಂತರ ವಾಟ್ಸ್‌ಆ್ಯಪ್‌ನಲ್ಲಿ ವಿಡಿಯೋ ಕರೆಯೊಂದು ಬಂದಿದ್ದು, ಅದನ್ನು ಕಾನ್ಫರೆನ್ಸ್ ಮೂಲಕ ಸಿ.ಬಿ.ಐ, ಐಪಿಎಸ್ ಆಫೀಸರ್, ಆರ್ ಬಿ ಐ ಮತ್ತು ಸುಪ್ರಿಂ ಕೋರ್ಟ್ ಜಡ್ಜ್‌ಗೆ ಎನ್ನುವ ವ್ಯಕ್ತಿಗಳಿಗೆ ಸಂಪರ್ಕಿಸಿದ್ದಾರೆ. ಅದರಲ್ಲಿದ್ದ ವ್ಯಕ್ತಿಗಳು ವೈಯಕ್ತಿಕ ವಿವರ, ಬ್ಯಾಂಕ್ ವಿವರ, ಬಾಕಿ ಮೊತ್ತ ಎಲ್ಲವನ್ನು ವಿಚಾರಿಸಿದ್ದಾರೆ. ಮರುದಿನ ಕರೆ ಮಾಡಿದ ವ್ಯಕ್ತಿ ಬ್ಯಾಂಕ್ ಖಾತೆಗಳನ್ನು ಪರಿಶೀಲಿಸಬೇಕು ಎಂದು ತಿಳಿಸಿ, ಎಲ್ಲಾ ಹಣ ವರ್ಗಾಯಿಸುವಂತೆ ಹಾಗೂ ಅದನ್ನು ವಾಪಾಸು ಕಳುಹಿಸುವುದಾಗಿ ತಿಳಿಸಿದ್ದಾನೆ.

ಹಾಗೂ ಈ ವಿಚಾರವನ್ನು ಯಾರಿಗೂ ತಿಳಿಸಬಾರದೆಂದು ಭಯ ಹುಟ್ಟಿಸಿದ್ದಾನೆ. ಇದರಿಂದ ಭಯಪಟ್ಟ ದೂರುದಾರ ಮಹಿಳೆ ಯಾರಿಗೂ ವಿಚಾರ ತಿಳಿಸಿಲ್ಲ. ಅ.8 ರಿಂದ 17ರ ವರೆಗೆ ತನ್ನ ಬ್ಯಾಂಕ್ ಖಾತೆಗಳಿಂದ ಹಂತ ಹಂತವಾಗಿ ಒಟ್ಟು 42,00,150 ರು.ವನ್ನು ಅಪರಿಚಿತ ವ್ಯಕ್ತಿ ನೀಡಿದ ಬೇರೆ ಬೇರೆ ಬ್ಯಾಂಕ್ ಖಾತೆಗಳಿಗೆ ಆರ್ ಟಿಜಿಎಸ್ ಮೂಲಕ ವರ್ಗಾವಣೆ ಮಾಡಿದ್ದಾರೆ. ಅನಂತರ ಇನ್ನು ಹೆಚ್ಚಿನ ಹಣವನ್ನು ವರ್ಗಾಯಿಸುವಂತೆ ಒತ್ತಾಯಿಸಿದ್ದಾಗ ನಡೆದ ಸಂಗತಿಯನ್ನು ಮಕ್ಕಳಿಗೆ ಹಾಗೂ ತಂಗಿಗೆ ತಿಳಿಸಿದ್ದು, ಆಗ ಅವರಿಗೆ ತಾನು ಮೋಸ ಹೋಗಿರುವುದು ತಿಳಿದು ಬಂದಿದೆ.

## ಮಲ್ಲಿಗವಾಡ ಗ್ರಾಮ/ಗ್ರಾಪಂ ಅಣ್ಣಿಗೇರಿ ತಾಲ್ಲೂಕಿಗೆ ಸೇರಿಸಲು ಡಿಸಿ, ಸಿಇಒ ಮನವಿ

• **ಉದಯವಾಹಿನಿ ಹುಬ್ಬಳ್ಳಿ**

ತಾಲ್ಲೂಕಿನ ಮಲ್ಲಿಗವಾಡ ಗ್ರಾಮ ಮತ್ತು ಮಲ್ಲಿಗವಾಡ ಗ್ರಾಮ ಪಂಚಾಯತಿಯನ್ನು ಅಣ್ಣಿಗೇರಿ ತಾಲ್ಲೂಕಿಗೆ ಸೇರಿಸುವಂತೆ ಧಾರವಾಡ ಡಿಸಿ, ಸಿಇಒ ಅವರಿಗೆ ಮನವಿಯನ್ನು ಗ್ರಾಮಸ್ಥರ ಪರವಾಗಿ ಸಾಮಾಜಿಕ ಕಾರ್ಯಕರ್ತ ವೀರೇಶ ಧೂಪದಮಠ ಸಲ್ಲಿಸಿದ್ದಾರೆ.

ಕಳೆದ ಎರಡು ವರ್ಷಗಳಿಂದ ಸತತ ಬೇಡಿಕೆಯಲ್ಲಿರುವ ಅಣ್ಣಿಗೇರಿ ತಾಲ್ಲೂಕಿಗೆ ಮಲ್ಲಿಗವಾಡ ಗ್ರಾಮ ಮತ್ತು ಮಲ್ಲಿಗವಾಡ ಗ್ರಾಮ ಪಂಚಾಯತ್ ಸೇರಿಸುವ ಪ್ರಕ್ರಿಯೆ ಇದುವರೆಗು ಕಾರ್ಯರೂಪಕ್ಕೆ ಬರದೇ, ತಾತ್ಕಾಲಿಕ ಮುಂದೂಡಿಕೆಯಾಗಿದೆ. ಮಲ್ಲಿಗವಾಡ ಗ್ರಾಮ, ಮಲ್ಲಿಗವಾಡ ಗ್ರಾಮ ಪಂಚಾಯಿತಿಯನ್ನು ಅಣ್ಣಿಗೇರಿ ತಾಲ್ಲೂಕಿಗೆ ಸೇರಿಸುವಂತೆ ಹುಬ್ಬಳ್ಳಿ ಗ್ರಾಮೀಣ ತಹಶೀಲ್ದಾರ್ ಅವರ ವರದಿ ಮತ್ತು ಕರ್ನಾಟಕ ಸರಕಾರ ಮತ್ತು ಕಂದಾಯ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅವರು ಆದೇಶ ಹೊರಡಿಸಿದ್ದಾರೆ. ಈ ಆದೇಶ ಅನ್ವಯ ಮಲ್ಲಿಗವಾಡ ಗ್ರಾಮ ಜೊತೆಗೆ ಮಲ್ಲಿಗವಾಡ ಗ್ರಾಮ ಪಂಚಾಯತ್ ಸೇರಿಸಬೇಕು ಎಂದು ಧಾರವಾಡ ಡಿಸಿ, ಸಿಇಒ ಅವರಿಗೆ ವಿನಂತಿಸಲಾಗಿದೆ.

## ಅನುದಾನ ಸದ್ಬಳಕೆಗೆ ಸೂಚನೆ

• **ಉದಯವಾಹಿನಿ, ಹಾನಗಲ್**

ತಾಲ್ಲೂಕಿಗೆ ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಅನುದಾನದಡಿ ಮಂಜೂರಿಯಾಗಿರುವ 50 ಕೋಟಿ ರೂ. ಅನುದಾನದ ಪೈಕಿ 7.60 ಕೋಟಿ ರೂ. ಹಾನಗಲ್ ಪುರಸಭೆ ವ್ಯಾಪ್ತಿಯಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಬಿಡುಗಡೆಗೊಳಿಸಲಾಗಿದ್ದು, ಅನುದಾನ ಸದ್ಬಳಕೆ ಮಾಡಿಕೊಳ್ಳುವಂತೆ ಶಾಸಕ ಶ್ರೀನಿವಾಸ ಮಾನೆ ಅವರು ಪುರಸಭೆ ಮುಖ್ಯಾಧಿಕಾರಿ ವೈ.ಕೆ.ಜಗದೀಶ ಅವರಿಗೆ ಸೂಚಿಸಿದರು. ಇಲ್ಲಿ ಪುರಸಭೆ ಮುಖ್ಯಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು ಅಗತ್ಯ ಮೂಲಭೂತ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಜನರ ಬೇಡಿಕೆ ಇರುವ ಪ್ರದೇಶಗಳಲ್ಲಿ ಅನುದಾನ ದೊರಕಿಸುವಲ್ಲಿ ಕಾಳಜಿ ವಹಿಸಿ. ಅನುಷ್ಠಾನ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕಾಮಗಾರಿ ಆರಂಭಿಸಲು ಕ್ರಮ ಕೈಗೊಳ್ಳಿ ಎಂದು ಸೂಚಿಸಿದರು. ನಿವೇಶನ ರಹಿತರಿಗೆ ನಿವೇಶನ ಹಂಚಲು ಸರ್ಕಾರಿ ಜಾಗ ಗುರುತಿಸಿ. ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳೊಂದಿಗೆ ಮಾತನಾಡಿ, ನಿವೇಶನ ರಹಿತರಿಗೆ ಹಂಚಿಕೆ ಮಾಡಲು ಗಮನ ನೀಡಬೇಕು. ಪ್ರತಿಯೊಂದು ವಾರ್ಡುಗಳಲ್ಲಿ ಸ್ವಚ್ಛತೆ, ಕಸ ಸಂಗ್ರಹಣೆ, ಬೀದಿ ದೀಪಗಳ ನಿರ್ವಹಣೆ ಕುರಿತು ಆದ್ಯತೆ ನೀಡಿ ಎಂದು ಸೂಚಿಸಿದರು.

## ಮಳೆ: ತುಂಬಿ ಹರಿದ ಹಳ್ಳಕೊಳ್ಳಗಳು

• **ಉದಯವಾಹಿನಿ ಸಿರುಗುಪ್ಪ**

ತಾಲ್ಲೂಕಿನ ಎಚ್ ಹೊಸಳ್ಳಿ ಹತ್ತಿರ ಹರಿಯುತ್ತಿರುವ ಹಿರೇಹಳ್ಳದ ಸೇತುವೆ ಮೇಲೆ ಮಳೆ ನೀರು ಹರಿಯುತ್ತಿದ್ದು, ಬಸ್ ಮತ್ತು ಲಾರಿಗಳ ಓಡಾಟಕ್ಕೆ ಅನಾನುಕೂಲವಾಗಿದೆ. ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿದೆ.

ತಾಲ್ಲೂಕಿನ ಮೇಲ್ಭಾಗದಲ್ಲಿ ಉತ್ತಮ ಮಳೆ ಸುರಿದಿದ್ದರಿಂದ ಹಳ್ಳದಲ್ಲಿ ನೀರು ಹೆಚ್ಚಾಗಿ ಸೇತುವೆ ಮೇಲೆ ಹರಿಯುತ್ತಿದೆ. ಸೇತುವೆ ಮೇಲೆ ನೀರು ಹರಿದು ಬರುತ್ತಿದ್ದು, ಕಾರ್ಮಿಕರು ಮತ್ತು ರೈತರು ತಮ್ಮ ಕೆಲಸ ಕಾರ್ಯಗಳಿಗೆ ತೆರಳಲು ಅಡಚಣೆ ಉಂಟಾಯಿತು. ಇದೇ ಸೇತುವೆಯ ಮೇಲೆ ವಿವಿಧ ಗ್ರಾಮಗಳಿಗೆ ಸಂಚರಿಸುತ್ತಿದ್ದ ವಾಹನಗಳು ಪರ್ಯಾಯ ಮಾರ್ಗದಲ್ಲಿ ಸಂಚರಿಸಿದವು. ಸೇತುವೆ ಮೇಲೆ ಸಂಚಾರ ನಿರ್ಬಂಧಿಸಿ ತಾಲ್ಲೂಕು ಆಡಳಿತ ಸೂಕ್ತ ಬಂದೋಬಸ್ತ್ ಒದಗಿಸಿತ್ತು.

# ಜೀವ ಕೈಯಲ್ಲಿ ಹಿಡಿದು ಬ್ರಿಡ್ಜ್ ದಾಟುತ್ತಿರುವ ಶಾಲಾ ಮಕ್ಕಳು

## ರೈತರಿಗೆ ಮನವೊಲಿಸಿ ರಸ್ತೆ ಸಂಪರ್ಕ ಕೆಲಸ ಮಾಡದೆ, ನಿರ್ಲಕ್ಷ್ಯ ವಹಿಸುತ್ತಿರುವುದು ಗ್ರಾಮಸ್ಥರ ಕೆಂಗಣ್ಣಿಗೆ ಗುರಿ

• **ಉದಯವಾಹಿನಿ ಅಫಜಲಪುರ**

ತಾಲ್ಲೂಕಿನ ಚಿನಮಳ್ಳಿ ಮತ್ತು ಜೇವರ್ಗಿ ತಾಲ್ಲೂಕಿನ ಕಲ್ಲೂರ ಮದ್ಯ ನಿರ್ಮಿಸಿದ ಸೇತುವೆ(ಬ್ರಿಡ್ಜ್) ಬ್ಯಾರೇಜ್ ಇತ್ತೀಚೆಗೆ ಅತಿಯಾದ ಮಳೆ ಬಂದು ಮಹಾರಾಷ್ಟ್ರ ರಾಜ್ಯದ ಉಜನಿ ಜಲಾಶಯದಿಂದ ಅಪಾರವಾದ ನೀರು ಭೀಮಾ ನದಿಗೆ ಹರಿ ಬಿಟ್ಟಿರುವ ಕಾರಣದಿಂದ ಪ್ರವಾಹಕ್ಕೆ ಚಿನಮಳ್ಳಿ ಭಾಗದ ಎಡದಂಡೆಯ ರಸ್ತೆ ಸಂಪೂರ್ಣ ನೀರಿನಲ್ಲಿ ಕೊಚ್ಚಿಕೊಂಡು ಹೋಗಿರುವುದರಿಂದ ಚಿನಮಳ್ಳಿ ಗ್ರಾಮದಿಂದ ಜೇವರ್ಗಿ ತಾಲ್ಲೂಕಿನ ಮಂದೇವಾಲ ಹಾಗೂ ನೆಲೋಗಿ ಗ್ರಾಮಕ್ಕೆ ತೆರಳುವ ರಸ್ತೆ ಖಡಿತಗೊಂಡು ಶಾಲೆಗಳಿಗೆ ಕೈಯಲ್ಲಿ ಜೀವ ಹಿಡಿದುಕೊಂಡು ಸೇತುವೆ ದಾಟುತ್ತಿರುವ ಚಿನಮಳ್ಳಿ ಗ್ರಾಮದ ಸಣ್ಣ, ಸಣ್ಣ ಮಕ್ಕಳು.

**ಅಧಿಕಾರಿಗಳು ರಸ್ತೆ ದುರಸ್ತಿ ಮಾಡದೆ, ಕಾಲ ಹರಣ**

ಪ್ರವಾಹ ಕಡಿಮೆ ಆಗಿ ಸುಮಾರು ಎರಡು ತಿಂಗಳು ಕಳೆದರೂ ಕೂಡ ಕೆಬಿಜಿಎನ್ ಎಲ್ ಅಧಿಕಾರಿಗಳು ರಸ್ತೆ ದುರಸ್ತಿ ಮಾಡದೆ, ಕಾಲ ಹರಣ ಮಾಡುತ್ತಿರುವುದು ಯಾವ ಕಾರಣಕ್ಕೆ ಅನ್ನೋದು ಗೊತ್ತಾಗ್ತಿಲ್ಲ. ಒಂದೆರಡು ಬಾರಿ ಕೆಬಿಎನ್‌ಎಲ್ ಅಧಿಕಾರಿಗಳು ಬ್ರಿಡ್ಜ್ ಕಂ. ಬ್ಯಾರೇಜ್ ಭೇಟಿ ನೀಡಿದ್ದರು. ಆ ಸಂದರ್ಭದಲ್ಲಿ ಪ್ರವಾಹಕ್ಕೆ ನೀರಿನಲ್ಲಿ ಕೊಚ್ಚಿಕೊಂಡು ಹೋಗಿರುವ ಜಮೀನಿನ ಮಾಲೀಕರು ತಾತ್ಕಾಲಿಕ ರಸ್ತೆ ಸಂಪರ್ಕ ಕಲ್ಪಿಸುವ ಕಾರ್ಯಕ್ಕೆ ಅಡ್ಡಿ ಪಡಿಸುತ್ತಿದ್ದಾರೆ ಎಂದು ಅಧಿಕಾರಿಗಳು ಕುಂಟು ನೆಪ ಹೇಳುತ್ತಿದ್ದಾರೆ ಹೊರತು ರೈತರಿಗೆ ಮನವೊಲಿಸಿ ರಸ್ತೆ ಸಂಪರ್ಕ ಕೆಲಸ ಮಾಡದೆ, ನಿರ್ಲಕ್ಷ್ಯ ವಹಿಸುತ್ತಿರುವುದು ಗ್ರಾಮಸ್ಥರ ಕೆಂಗಣ್ಣಿಗೆ ಗುರಿಯಾಗಿದ್ದಾರೆ.

ಶಾಲೆಗಳು ಅರ್ಧ ವಾರ್ಷಿಕ ರಜೆ ಮುಗಿದು ಪುನರ್ ಪ್ರಾರಂಭವಾಗಿರುವುದರಿಂದ ಚಿನಮಳ್ಳಿ ಗ್ರಾಮದ ಬಹುತೇಕ ಮಕ್ಕಳು ಜೇವರ್ಗಿ ತಾಲ್ಲೂಕಿನ ಮಂದೇವಾಲ ಗ್ರಾಮದಲ್ಲಿರುವ ಸುಸಜ್ಜಿತವಾದ ಖಾಸಗಿ ಶಾಲೆಗೆ ಪ್ರವೇಶ ಪಡೆದಿದ್ದಾರೆ. ಚಿನಮಳ್ಳಿ ಗ್ರಾಮದಿಂದ ಮಂದೇವಾಲ ಹಾಗೂ ಮಾಜಿ ಸಿಎಂ ದಿ.ಧರ್ಮಸಿಂಗ್ ಅವರ ಗ್ರಾಮ ನೆಲೋಗಿಗೆ ತೆರಳಬೇಕಾದರೆ ಇರೋದು ಒಂದೇ ಮಾರ್ಗ ಅದುವೇ ಬ್ರಿಡ್ಜ್ (ಸೇತುವೆ) ಮೂಲಕ ತಲುಪಬಹುದು.

ಜನಪ್ರತಿನಿಧಿಗಳು ಮತ್ತು ಸಂಬಂಧಿಸಿದ ಕೆಬಿಜಿಎನ್ ಎಲ್ ಮೇಲಾಧಿಕಾರಿಗಳು ಹಲವಾರು ಬಾರಿ ಭೇಟಿ ನೀಡಿದ್ದಾರೆ ಹೊರತು ರಸ್ತೆ ಸಂಪರ್ಕ ಸರಿಪಡಿಸುವ ಮನಸ್ಸು ಮಾಡ್ತಿಲ್ಲ ಅನ್ನೋದು ಗ್ರಾಮಸ್ಥರ ಬೇಸರ ತಂದಿದೆ. ದಿನಾಲು ಇದೇ ಮಾರ್ಗದ ಮೂಲಕ ಶಾಲೆಗೆ ತೆರಳುವ ಶಾಲಾ ಮಕ್ಕಳು ಮತ್ತು ಸಾರ್ವಜನಿಕರು ತಮ್ಮ ದೈನಂದಿನ ಕೆಲಸಕ್ಕೆ ಹೋಗುವುದು ಅನಿವಾರ್ಯ ಪರಿಸ್ಥಿತಿ ಎದುರಾಗಿದೆ.



☛ ಉದಯವಾಹಿನಿ ಚಿತ್ರ

> **ಈಗಾಗಲೇ ಸ್ಥಳಕ್ಕೆ ಭೇಟಿ ನೀಡಿ ಇಲಾಖೆ ಅಧಿಕಾರಿಗಳಿಗೆ ರಸ್ತೆ ದುರಸ್ತಿಗೆ ಮಾಡಲು ಆದೇಶ ಮಾಡಿರುವೆ. ಅಧಿಕಾರಿಗಳು ಸಹ ಎರಡ್ಮೂರು ಬಾರಿ ಬ್ರಿಡ್ಜ್ ಬೇಟಿ ನೀಡಿ ರಸ್ತೆ ಕಾಮಗಾರಿ ಪ್ರಾರಂಭಿಸಲು ಸಿದ್ದತೆ ನಡೆಸಿದ್ದರು. ಆದರೆ, ಪ್ರವಾಹದಿಂದ ಜಮೀನು ಕಳೆದುಕೊಂಡ ರೈತರು ರಸ್ತೆ ಕಾಮಗಾರಿ ಮಾಡಲು ಬಿಡುವುದಿಲ್ಲ. ನಮಗೆ ಸರ್ಕಾರದ ವತಿಯಿಂದ ಪರಿಹಾರ ಕೊಡಿಸಿದ ಮೇಲೆ ರಸ್ತೆ ಕೆಲಸ ಪ್ರಾರಂಭ ಮಾಡಿ ಎಂದು ಹೇಳುತ್ತಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇನ್ನೊಮ್ಮೆ ನಾನೆ ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ರೈತರಿಗೆ ಅನ್ಯಾಯವಾಗದಂತೆ ಸರ್ಕಾರದ ವತಿಯಿಂದ ಏನ್ ಸಿಗಬೇಕಾಗಿದೆ ಪರಿಹಾರ ಕೊಡಿಸುವ ಜವಾಬ್ದಾರಿ ನಮ್ಮದು ಎಂದು ಅವರಿಗೆ ಮನವೊಲಿಸಿ ರಸ್ತೆ ಸಂಪರ್ಕ ಕೆಲಸ ಮಾಡಲು ಅವಕಾಶ ಮಾಡಿಕೊಡಿ ಎಂದು ಗ್ರಾಮಸ್ಥರಿಗೆ ಮನವೊಲಿಸಿ ಕೆಲಸ ಪ್ರಾರಂಭ ಮಾಡಿಸುತ್ತೇನೆ. -ಎಂ.ವೈ.ಪಾಟೀಲ ಶಾಸಕರು, ಅಫಜಲಪುರ.**

> **ಪ್ರವಾಹ ಇಳಿಮುಖದ ಆದಮೇಲೆ ಸ್ಥಳಕ್ಕೆ ಭೇಟಿ ನೀಡಿ ಕ್ರಿಯಾಯೋಜನೆ ರೂಪಿಸಿ ಸುಮಾರು 20 ಲಕ್ಷ ರೂಪಾಯಿ ಕೆಬಿಜಿಎನ್‌ಎಲ್ ಇಲಾಖೆಯ ವತಿಯಿಂದ ರಸ್ತೆ ದುರಸ್ತಿ ಕಾಮಗಾರಿ ಕೈಗೆತ್ತಿಕೊಳ್ಳಲು ಕ್ರಮ ಜರುಗಿಸಲಾಗಿದೆ. ಒಂದು ವಾರದಲ್ಲಿ ಕಾಮಗಾರಿ ಟೆಂಡರ್ ಕರೆಯುವ ಮೂಲಕ ಆದಷ್ಟು ಬೇಗ ರಸ್ತೆ ಕಾಮಗಾರಿ ಪ್ರಾರಂಭಿಸಲಾಗುವುದು. ಪ್ರವಾಹದಿಂದ ಜಮೀನು ಹಾಳಾಗಿರುವ ರೈತರ ಜಮೀನನ್ನು ಭೂಸ್ವಾಧೀನ ಪಡಿಸುಕೊಳ್ಳುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ. ಯಾವುದೇ ರೀತಿಯ ಜಮೀನು ಕಳೆದುಕೊಂಡ ರೈತರಿಗೆ ಅನ್ಯಾಯವಾಗುವುದಿಲ್ಲ.**
> **-ಯು.ಪಿ.ಸೋನಾವಣೆ, ಪ್ರಭಾರಿ ಕಾರ್ಯಪಾಲಕ ಅಭಿಯಂತರರು, ಕೆಬಿಜಿಎನ್ ಎಲ್ ಇಲಾಖೆ, ರಾಂಪೂರ.**

## ಸೇಂದಿ ಅಕ್ರಮ ಸಾಗಣೆ: ಒಬ್ಬ ವ್ಯಕ್ತಿ ಬಂಧನ

• **ಉದಯವಾಹಿನಿ ಬೀದರ್**

ಅಕ್ರಮವಾಗಿ ಸೇಂದಿ ಸಾಗಾಣಿಕೆ ಮಾಡುತ್ತಿದ್ದ ಭಾಲ್ಕಿ ನಗರದ ಜ್ಯೋತಿ ಗಲ್ಲಿಯ ವ್ಯಕ್ತಿಯನ್ನು ಬೀದರ ರೈಲ್ವೆ ನಿಲ್ದಾಣದ ವೇದಿಕೆ ನಂ. 1ರಲ್ಲಿ ಆತನನ್ನು ವಶಕ್ಕೆ ಪಡೆದು, ಆತನಿಂದ 02 ಬ್ಯಾಗಗಳಲ್ಲಿ ಅಕ್ರಮವಾಗಿ 25 ಲೀಟರ ಸೇಂದಿಯನ್ನು ಅಮಾನತ್ತು ಪಡಿಸಿಕೊಂಡು (1250 ರೂ.) ಆತನ ವಿರುದ್ಧ ಬೀದರ ರೈಲ್ವೆ ಪೊಲೀಸ್ ಠಾಣೆ ಮೊ. ಸಂಖ್ಯೆ 29/2024 ಕಲಂ 32,34 ಕೆ.ಇ. ಆಕ್ಟ್. ಮತ್ತು ಕಲಂ 286 ಬಿ.ಎನ್.ಎಸ್. ಕಾಯ್ದೆ ಅಡಿಯಲ್ಲಿ ಪ್ರಕರಣದ ದಾಖಲಿಸಿಕೊಂಡು ಆರೋಪಿತನನ್ನು ದಸ್ತಗಿರಿ ಮಾಡಿ ಆಪಾದಿತನ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಲಾಗಿದೆ. ಅನಂಜನಮೂರ್ತಿ ಎ.ಎಸ್.ಐ. ಪ್ರಭಾರಿ ಕ್ರೈಮ್ ಪಿ.ಎಸ್.ಐ. ಮತ್ತು ಸಿಬ್ಬಂದಿಗಳು ಸಹಯೋಗದೊಂದಿಗೆ ವಿಶೇಷ ಕಾರ್ಯಾಚರಣೆ ಕೈಕೊಂಡು ಈ ದಾಳಿ ನಡೆಸಲಾಗಿದೆ.



☛ ಉದಯವಾಹಿನಿ ಚಿತ್ರ

ಉದಯ ವಾಹಿನಿ
ದೇಶ/ವಿದೇಶ
ಭಾನುವಾರ 26 ಅಕ್ಟೋಬರ್ 2025


● ಪಾಕಿಸ್ತಾನದ ರಣಹೇಡಿತನದ ಸ್ಫೋಟಕ ಮಾಹಿತಿ ಬಿಚ್ಚಿಟ್ಟ ಅಮೆರಿಕದ ಮಾಜಿ ಸಿಐಎ ಅಧಿಕಾರಿ

# ಪೆಂಟಗನ್ ಪಾಕ್ ಪರಮಾಣು ಶಸ್ತ್ರಾಗಾರ ನಿಯಂತ್ರಿಸುತ್ತಿತ್ತು

**ಹೊಸದಿಲ್ಲಿ:** ಪಾಕಿಸ್ತಾನದ ಮಾಜಿ ಅಧ್ಯಕ್ಷ ಪರ್ವೇಜ್ ಮುಷರಫ್ ಆಡಳಿತಾವಧಿಯಲ್ಲಿ ಆ ರಾಷ್ಟ್ರದ ಪರಮಾಣು ಶಸ್ತ್ರಾಗಾರವು ಅಮೆರಿಕದ ಪೆಂಟಗನ್ ನಿಯಂತ್ರಣದಲ್ಲಿತ್ತು ಎಂದು ಹೇಳುವ ಮೂಲಕ ಮಾಜಿ ಸಿಐಎ ಅಧಿಕಾರಿ ಜಾನ್ ಕಿರಿಯಾಕೌ ಬಾಂಬ್ ಸಿಡಿಸಿದ್ದಾರೆ. ಅಮೆರಿಕದ ಮಾಜಿ ಅಧಿಕಾರಿ ಹೇಳಿಕೆ, ತನ್ನ ಪರಮಾಣು ಶಸ್ತ್ರಾಗಾರಗಳನ್ನು ನಿಯಂತ್ರಿಸುವಲ್ಲಿ ಸುದ್ದಿ ಸಂಸ್ಥೆಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಜಾನ್ ಕಿರಿಯಾಕೌ, 2002ರಲ್ಲಿ ಪಾಕಿಸ್ತಾನದ ಅಧ್ಯಕ್ಷರಾಗಿದ್ದ ಪರ್ವೇಜ್ ಮುಷರಫ್ ಅವರ ಸಹಕಾರವನ್ನು ಖರೀದಿಸಲು, ಅಮೆರಿಕವು ಪಾಕಿಸ್ತಾನಕ್ಕೆ ಲಕ್ಷಾಂತರ ಡಾಲರ್‌ಗಳನ್ನು ಒದಗಿಸಿತ್ತು. ಮುಷರಫ್ ಕೂಡ ಅಮೆರಿಕ ಹೇಳಿದಂತೆ ಕೇಳುತ್ತಿದ್ದರಲ್ಲದೇ, ತಮ್ಮ ಪರಮಾಣು ಶಸ್ತ್ರಾಗಾರಗಳ ನಿಯಂತ್ರಣವನ್ನು ಪೆಂಟಗನ್‌ಗೆ ಒಪ್ಪಿಸಿದ್ದರು ಎಂದು ಸ್ಫೋಟಕ ಹೇಳಿಕೆ ನೀಡಿದ್ದಾರೆ.

- ಪಾಕಿಸ್ತಾನದ ರಣಹೇಡಿತನದ ಸ್ಫೋಟಕ ಮಾಹಿತಿ ಬಿಚ್ಚಿಟ್ಟ ಅಮೆರಿಕದ ಮಾಜಿ ಸಿಐಎ ಅಧಿಕಾರಿ.
- ಪರ್ವೇಜ್ ಮುಷರಫ್ ಆಡಳಿತದಲ್ಲಿ ಪಾಕಿಸ್ತಾನದ ಪರಮಾಣು ಶಸ್ತ್ರಾಗಾರ ನಿಯಂತ್ರಣ ಪೆಂಟಗನ್ ಕೈಯಲ್ಲಿ.
- ಪರಮಾಣು ನಿಯಂತ್ರಣವನ್ನೇ ಅಮೆರಿಕಕ್ಕೆ ಕೊಟ್ಟು ಲಕ್ಷಾಂತರ ಡಾಲರ್ ಎಣಿಸುತ್ತಿದ್ದ ಪರ್ವೇಜ್ ಮುಷರಫ್.
- ಪಾಕಿಸ್ತಾನಕ್ಕೆ ಪರಮಾಣು ಕಾರ್ಯಕ್ರಮ ನಿಯಂತ್ರಿಸುವ ಸಾಮರ್ಥ್ಯವಿಲ್ಲ ಎಂಬ ಭಾರತದ ವಾದಕ್ಕೆ ಜಯ.

ನಾನು 2002ರಲ್ಲಿ ಪಾಕಿಸ್ತನಾದಲ್ಲಿ ಕರ್ತವ್ಯನಿರತನಾಗಿದ್ದಾಗ, ಪೆಂಟಗನ್ ಪಾಕಿಸ್ತಾನದ ಪರಮಾಣು ಶಸ್ತ್ರಾಗಾರವನ್ನು ನಿಯಂತ್ರಿಸುತ್ತದೆ ಎಂಬ ಮಾಹಿತಿಯನ್ನು ನನಗೆ ಅನಧಿಕೃತವಾಗಿ ತಿಳಿಸಲಾಯಿತು. ಪಾಕಿಸ್ತಾನದ ಪರಮಾಣು ಕಾರ್ಯಕ್ರಮಗಳು ಭಯೋತ್ಪಾದಕರ ಕೈ ಸೇರಬಾರದು ಎಂಬ ಕಾರಣಕ್ಕೆ, ಪರ್ವೇಜ್ ಮುಷರಫ್ ಇಂತದ್ದೊಂದು ನಿರ್ಧಾರ ತೆಗೆದುಕೊಂಡಿದ್ದರು ಎಂಬ ಸಂಗತಿ ನನ್ನ ಅರಿವಿಗೆ ಬಂದಿತು ಎಂದು ಮಾಜಿ ಸಿಐಎ ಅಧಿಕಾರಿ ಹೇಳಿದ್ದಾರೆ.



**ಎಕ್ಯೂ ಖಾನ್ ಬಚಾವ್ ಆಗಿದ್ದೇಗೆ?**

ಪಾಕಿಸ್ತಾನದ ಪರಮಾಣು ಪಿತಾಮಹ ಡಾ. ಅಬ್ದುಲ್ ಖಾದೀರ್ ಖಾನ್ ಅವರು, ಪರಮಾಣು ಜ್ಞಾನವನ್ನು ಜಗತ್ತಿನ ಎಲ್ಲಾ ಮುಸ್ಲಿಂ ರಾಷ್ಟ್ರಗಳೊಂದಿಗೆ ಹಂಚಿಕೊಳ್ಳಲು ಬಯಸಿದ್ದರು. ಇರಾನ್ ಈ ನಿಟ್ಟಿನಲ್ಲಿ ಖಾದೀರ್ ಅವರ ನಂಬಿಕೆಯನ್ನೂ ಗಳಿಸಿತ್ತು. ಇದನ್ನು ಗುರುತಿಸಿದ ಅಮೆರಿಕ ಆಗಿನ ಪಾಕ್ ಅಧ್ಯಕ್ಷ ಪರ್ವೇಜ್ ಮುಷರಫ್ ಅವರನ್ನು ಓಲೈಸಿ, ಇಂತಹ ಪ್ರಯತ್ನಗಳಿಗೆ ಕಡಿವಾಣ ಹಾಕಿತು ಎಂದು ಜಾನ್ ಕರಿಯಾಕೌ ಇತಿಹಾಸವನ್ನು ನೆನೆದಿದ್ದಾರೆ.

ಮುಂದುವರೆದು, ಅಬ್ದುಲ್ ಖಾದೀರ್ ಖಾನ್ ಅವರನ್ನು ಗುರಿಯಾಗಿಸಿಕೊಳ್ಳಬೇಕು ಎಂದು ಅಮೆರಿಕ ಬಯಸಿತ್ತಾದರೂ, ಸೌದಿ ಅರೇಬಿಯಾದ ಹಸ್ತಕ್ಷೇಪದಿಂದಾಗಿ ಅದು ತಪ್ಪಿತು. ಆದರೆ ನನ್ನ ಸಹೋದ್ಯೋಗಿಯೊಬ್ಬ ಎಕ್ಯೂ ಖಾನ್ ಚಲನವಲನಗಳ ಮೇಲೆ ನಿರಂತರವಾಗಿ ಕಣ್ಣಿಟ್ಟಿದ್ದ. ನಮ್ಮ ಸರ್ಕಾರ ಬಯಸಿದ್ದರೆ ನಾವು ಆತನನ್ನು ಸುಲಭವಾಗಿ ಕೊಲ್ಲಬಹುದಾಗಿತ್ತು. ಆದರೆ ಸೌದಿ ಅರೇಬಿಯಾದ ಒತ್ತಡದಿಂದಾಗಿ ಅಮೆರಿಕ ಸರ್ಕಾರ ನಮಗೆ ಇಂತದ್ದೊಂದು ಆದೇಶವನ್ನು ನೀಡಲಿಲ್ಲ ಎಂದು ಜಾನ್ ಕರಿಯಾಕೌ ಅಂದಿನ ಘಟನಾವಳಿಗಳನ್ನು ಬಿಚ್ಚಿಟ್ಟಿದ್ದಾರೆ.

ಸೌದಿ ಅರೇಬಿಯಾದ ಒತ್ತಡಕ್ಕೆ ಮಣಿದಿದ್ದು, ಅಮೆರಿಕದ ರಾಜತಾಂತ್ರಿ ವೈಫಲ್ಯ ಎಂದಿರುವ ಸಿಐಎ ಮಾಜಿ ಅಧಿಕಾರಿ, ಎಕ್ಯೂ ಖಾನ್ ಅವರನ್ನು ನಾವು ನಿಭಾಯಿಸುವ ಅವಕಾಶವನ್ನು ಕಳೆದುಕೊಂಡೆವು ಎಂದು ಸೂಚ್ಯವಾಗಿ ಹೇಳಿದ್ದಾರೆ. ಮುಂದೆ ಪರ್ವೇಜ್ ಮುಷರಫ್ ಆಡಳಿತವು ಅಮೆರಿಕದ ಒತ್ತಡದಿಂದಾಗಿ ಎಕ್ಯೂ ಖಾನ್ ಅವರನ್ನು ಗೃಹಬಂಧನದಲ್ಲಿಟ್ಟಿದ್ದನ್ನು ಇಲ್ಲಿ ಸ್ಮರಿಸಬಹುದು.

2001ರಲ್ಲಿ ನಡೆದ ಭಾರತದ ಸಂಸತ್ತಿನ ಮೇಲೆ ಭಯೋತ್ಪಾದಕ ದಾಳಿ ಮತ್ತು 2008ರಲ್ಲಿ ಮುಂಬೈ ನಗರದ ಮೇಲೆ ನಡೆದ ಭಯೋತ್ಪಾದಕ ದಾಳಿಗಳ ಸಂದರ್ಭದಲ್ಲಿ, ಭಾರತವು ಪಾಕಿಸ್ತಾನದ ವಿರುದ್ಧ ದಾಳಿ ಮಾಡಬಹುದು ಎಂದು ಅಮೆರಿಕ ನಿರೀಕ್ಷಿಸಿತ್ತು. ಆದರೆ ಭಾರತವು ಎರಡೂ ಸಂದರ್ಭಗಳಲ್ಲಿ ಮಿಲಿಟರಿ ಕಾರ್ಯಾಚರಣೆ ಕೈಗೊಳ್ಳದಿರುವ ನಿರ್ಧಾರ ಮಾಡಿತ್ತು. ನಾವು ಭಾರತದ ಈ ನೀತಿಯನ್ನು ಕಾರ್ಯತಂತ್ರದ ತಾಳ್ಮೆ ಎಂದು ಬಣ್ಣಿಸಿದೆವು ಎಂದು ಜಾನ್ ಜಾನ್ ಕಿರಿಯಾಕೌ ಆಗಿನ ಪರಿಸ್ಥಿತಿಗಳನ್ನು ಅವಲೋಕಿಸಿದ್ದಾರೆ.

**ಭಾರತದ ಪ್ರಬುದ್ಧ ವಿದೇಶಾಂಗ ಕಾರ್ಯತಂತ್ರ:** 2001 ಮತ್ತು 2008ರಲ್ಲಿ ಪಾಕಿಸ್ತಾನದ ವಿರುದ್ಧ ಮಿಲಿಟರಿ ಕ್ರಮ ಕೈಗೊಳ್ಳುವುದು ಭಾರತದ ಹಕ್ಕಾಗಿತ್ತು. ಅಮೆರಿಕವೂ ಸೇರಿದಂತೆ ಯಾರೂ ಕೂಡ ಇದನ್ನು ಪ್ರಶ್ನಿಸುತ್ತಿರಲಿಲ್ಲ, ಆದರೆ ಆಗಿನ ಭಾರತೀಯ ಆಡಳಿತಗಾರರು ಪ್ರಬುದ್ಧ ವಿದೇಶಾಂಗ ನೀತಿಯನ್ನು ಪ್ರದರ್ಶಿಸಿ, ಜಗತ್ತನ್ನು ಪರಮಾಣು ಯುದ್ಧದ ಆತಂಕದಿಂದ ದೂರ ಮಾಡಿದರು ಎಂದು ಸಿಐಎ ಮಾಜಿ ಅಧಿಕಾರಿ ಮೆಚ್ಚುಗೆಯ ಮಾತುಗಳನ್ನಾಡಿದ್ದಾರೆ. ಇತ್ತೀಚಿಗೆ ಕಾಂಗ್ರೆಸ್ ನಾಯಕ ಮತ್ತು 2008ರ ಮುಂಬೈ ದಾಳಿ ಸಂದರ್ಭದಲ್ಲಿ ಭಾರತದ ಗೃಹ ಸಚಿವರಾಗಿದ್ದ ಪಿ. ಚಿದಂಬರಂ ಅವರು ಮಾಧ್ಯಮ ಸಂದರ್ಶನವೊಂದರಲ್ಲಿ ಮಾತನಾಡುತ್ತಾ, ಮುಂಬೈ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳಲು ಅಮೆರಿಕ ಬಿಡಲಿಲ್ಲ ಎಂದು ಹೇಳುವ ಮೂಲಕ ವಿವಾದ ಸೃಷ್ಟಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

ಅದೇ ರೀತಿ ಭಯೋತ್ಪಾದನೆ ನಿಗ್ರಹದಲ್ಲಿ ಅಮೆರಿಕದೊಂದಿಗೆ ಸಹಕರಿಸುವುದಾಗಿ ನಾಟಕವಾಡುತ್ತಿದ್ದ ಪರ್ವೇಜ್ ಮುಷರಫ್, ಅಮೆರಿಕದ ಮಿಲಿಟರಿ ಬೆಂಬಲವನ್ನು ಉಳಿಸಿಕೊಳ್ಳುವಲ್ಲಿ ಸಫಲರಾದರು.

### ಮುಷರಫ್ ಆಟಗಳು

ಪರ್ವೇಜ್ ಮುಷರಫ್ ಆಡಳಿತಾವಧಿಯಲ್ಲಿ ಅಮೆರಿಕ ಮತ್ತು ಪಾಕಿಸ್ತಾನ ಸರ್ಕಾರಗಳ ನಡುವಿನ ಸಂಬಂಧ ತುಂಬಾ ಚೆನ್ನಾಗಿತ್ತು. ಅಮೆರಿಕದಿಂದ ಲಕ್ಷಾಂತರ ಡಾಲರ್‌ಗಳನ್ನು ಸುಲಭವಾಗಿ ಪಡೆಯಬಹುದು ಎಂಬುದನ್ನು ಅರಿತ ಮುಷರಫ್ ಕೂಡ, ಪಾಕಿಸ್ತಾನದ ಪರಮಾಣು ಶಸ್ತ್ರಾಗಾರಗಳನ್ನು ಪೆಂಟಗನ್ ನಿಯಂತ್ರಣಕ್ಕೆ ಕೊಡಲು ಸಿದ್ಧರಾದರು. ಈ ಸಮಯದಲ್ಲಿ ಪಾಕ್ ಸರ್ಕಾರ ತನ್ನ ಜನರಿಗೆ ಉತ್ತರದಾಯಿಯೇ ಅಲ್ಲವೇನೋ ಎಂಬಂತೆ ವರ್ತಿಸಿತ್ತು ಎಂದು ಜಾನ್ ಕಿರಿಯಾಕೌ ಹೇಳಿದ್ದಾರೆ. ಮುಂದುವರೆದು, ಅಮೆರಿಕವು ಸರ್ವಾಧಿಕಾರಿಗಳೊಂದಿಗೆ ಕೆಲಸ ಮಾಡಲು ಇಷ್ಟಪಡುತ್ತದೆ. ಏಕೆಂದರೆ ನಾವು ಆ ರಾಷ್ಟ್ರದ ಸಾರ್ವಜನಿಕ ಅಭಿಪ್ರಾಯದ ಬಗ್ಗೆ ಚಿಂತಿಸಬೇಕಿಲ್ಲ. ಅದೇ ರೀತಿ ಪರ್ವೇಜ್ ಮುಷರಫ್ ಕೂಡ ಅಮೆರಿಕಕ್ಕೆ ಪಾಕಿಸ್ತಾನದಲ್ಲಿ ಮುಕ್ತವಾಗಿ ಕೆಲಸ ಮಾಡಲು ಅವಕಾಶ ಮಾಡಿಕೊಟ್ಟರು. ಸಿಐಎ ಅಧಿಕಾರಿಗಳು ಮುಷರಫ್ ಅವರನ್ನು ವಾರಕ್ಕೆ ಹಲವು ಬಾರಿ ಭೇಟಿ ಮಾಡಿ ಚರ್ಚಿಸುವಂತ ಸೌಹಾರ್ದಯುತ ಪರಿಸ್ಥಿತಿಗಳು ನಿರ್ಮಾಣವಾಗಿದ್ದವು ಎಂದು ಜಾನ್ ಕಿರಿಯಾಕೌ, ಪಾಕಿಸ್ತಾನದ ಶರಣಾಗತಿ ವ್ಯಕ್ತಿತ್ವವನ್ನು ಜಗತ್ತಿನ ಮುಂದೆ ಬಿಚ್ಚಿಟ್ಟಿದ್ದಾರೆ.

### ಪಾಕ್‌ಗೆ ಪರಮಾಣು ಹುಚ್ಚು

2001ರಲ್ಲಿ ಭಾರತದ ಮೇಲೆ ಪರಮಾಣು ದಾಳಿ ಮಾಡುವ ಯೋಜನೆ ಹಾಕಲಾರಂಭಿಸಿದ್ದ ಪಾಕಿಸ್ತಾನ, ಅಮೆರಿಕದ ಸ್ನೇಹ ಸಂಪಾದಿಸಿದ್ದರ ಹುಮ್ಮಸ್ಸಿನಲ್ಲಿತ್ತು. ಆದರೆ ಅಮೆರಿಕಕ್ಕೆ ಪಾಕಿಸ್ತಾನದ ಪರಮಾಣು ಕಾರ್ಯಕ್ರಮಗಳನ್ನು ನಿಯಂತ್ರಿಸುವ ಉದ್ದೇಶ ಮಾತ್ರವಿತ್ತು. ಹೀಗಾಗಿ ಈ ಪ್ರದೇಶದಲ್ಲಿ ಯಾವುದೇ ಪರಮಾಣು ಯುದ್ಧಗಳಿಗೆ ಆಸ್ಪದ ಕೊಡದಿರಲು ಅಮೆರಿಕ ನಿರ್ಧರಿಸಿತು ಎಂದು ಜಾನ್ ಜಾನ್ ಕಿರಿಯಾಕೌ ತಿಳಿಸಿದ್ದಾರೆ.

ಪೊಲೀಸ್ ಅಧಿಕಾರಿಯಿಂದ 4 ಬಾರಿ ಅತ್ಯಾಚಾರ

## ವೈದ್ಯೆ ಡೆತ್‌ನೋಟ್‌ನಲ್ಲಿ ಬಹಿರಂಗ

**ಮುಂಬೈ:** ಮಹಾರಾಷ್ಟ್ರದ ಸತಾರಾದಲ್ಲಿ ಆತ್ಮಹತ್ಯೆ ಮಾಡಿಕೊಂಡ ವೈದ್ಯೆ, ಪೊಲೀಸ್ ಅಧಿಕಾರಿಯೊಬ್ಬರು ನಾಲ್ಕು ಬಾರಿ ಅತ್ಯಾಚಾರ ಎಸಗಿದ ಆರೋಪ ಮಾಡಿದ ನಾಲ್ಕು ಪುಟಗಳ ಆತ್ಮಹತ್ಯೆ ಪತ್ರವನ್ನು ಸಹ ಬಿಟ್ಟು ಹೋಗಿದ್ದಾರೆ. ಅದರಲ್ಲಿ ಪೊಲೀಸ್ ಪ್ರಕರಣಗಳಲ್ಲಿ ಆರೋಪಿಗಳಿಗೆ ನಕಲಿ ಫಿಟ್ನೆಸ್ ಪ್ರಮಾಣಪತ್ರಗಳನ್ನು ನೀಡುವಂತೆ ಒತ್ತಡ ಹೇರಲಾಗಿದೆ ಮತ್ತು ವೈದ್ಯೆ ನಿರಾಕರಿಸಿದಾಗ ಕಿರುಕುಳಕ್ಕೊಳಗಾಗಿದ್ದಾರೆ ಎಂದು ಈಗ ತಿಳಿದುಬಂದಿದೆ . ಈ ಒತ್ತಡವನ್ನು ಪೊಲೀಸ್ ಅಧಿಕಾರಿಗಳು ಮಾತ್ರವಲ್ಲದೆ, ಒಂದು ಪ್ರಕರಣದಲ್ಲಿ ಸಂಸತ್ ಸದಸ್ಯರು ಮತ್ತು ಅವರ ಇಬ್ಬರು ವೈಯಕ್ತಿಕ ಸಹಾಯಕರು ಸಹ ಹೇಳಿದ್ದಾರೆ ಎಂದು ಅವರು ತಮ್ಮ ಪತ್ರದಲ್ಲಿ ಹೇಳಿದ್ದಾರೆ.

ಸತಾರಾದ ಫಾಲ್ಟಾನ್ ಉಪ ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯಕೀಯ ಅಧಿಕಾರಿಯಾಗಿ ಕೆಲಸ ಮಾಡುತ್ತಿದ್ದ 26 ವರ್ಷದ ಯುವತಿ, ಸಬ್ ಇನ್ಸ್‌ಪೆಕ್ಟರ್ ಗೋಪಾಲ್ ಬದ್ನೆ ಅವರು ನಾಲ್ಕು ಬಾರಿ ಅತ್ಯಾಚಾರ ಎಸಗಿದ್ದಾರೆ ಮತ್ತು ಐದು ತಿಂಗಳ ಕಾಲ ಮಾನಸಿಕ ಮತ್ತು ದೈಹಿಕ ಕಿರುಕುಳ ನೀಡಿದ್ದಾರೆ ಎಂದು ತನ್ನ ಅಂಗೈಯಲ್ಲಿ ಬರೆದಿದ್ದರು. ಮಹಿಳೆ 23 ತಿಂಗಳುಗಳಿಂದ ಆಸ್ಪತ್ರೆಯಲ್ಲಿ ಸೇವೆ ಸಲ್ಲಿಸುತ್ತಿದ್ದರು ಮತ್ತು ತನ್ನ ಬಾಂಡ್ ಅವಧಿಯನ್ನು ಪೂರ್ಣಗೊಳಿಸಲು ಕೇವಲ ಒಂದು ತಿಂಗಳ ದೂರದಲ್ಲಿದ್ದರು. ಗ್ರಾಮೀಣ ಪ್ರದೇಶದಲ್ಲಿ ಸೇವೆಯ ಅಗತ್ಯವಿತ್ತು ನಂತರ ಆಕೆ ಸ್ನಾತಕೋತ್ತರ ಪದವಿಯನ್ನು ಪಡೆಯಲು ಉದ್ದೇಶಿಸಿದ್ದರು ಎಂದು ಹೇಳಲಾಗಿದೆ. ಅವರು ಸಂಸದರಿಗೆ ಕರೆ ಮಾಡಿ ಮಾತನಾಡುವಂತೆ ಮಾಡಿದ್ದರು ಮತ್ತು ಅವರು ಪರೋಕ್ಷವಾಗಿ ಬೆದರಿಕೆ ಹಾಕಿದ್ದರು.ವೈದ್ಯಕೀಯ ಪ್ರಮಾಣಪತ್ರಗಳನ್ನು ಸುಳ್ಳು ಮಾಡಲು ವೈದ್ಯರನ್ನು ದುರುಪಯೋಗ ಮಾಡಿಕೊಳ್ಳಲಾಗುತ್ತಿದೆ ಎಂಬ ಬಗ್ಗೆ ಆಕೆಯ ಸೋದರ ಸಂಬಂಧಿ ಕೂಡ ಇದೇ ರೀತಿಯ ಆರೋಪಗಳನ್ನು ಮಾಡಿದ್ದಾರೆ.



''ವೈದ್ಯರು ಎರಡು ಮೂರು ಸಂದರ್ಭಗಳಲ್ಲಿ ದೂರು ನೀಡಿದ್ದಾರೆ. ಪೊಲೀಸ್ ವರಿಷ್ಠಾಧಿಕಾರಿ (ಎಸ್ ಪಿ) ಮತ್ತು ಉಪ ಪೊಲೀಸ್ ವರಿಷ್ಠಾಧಿಕಾರಿ (ಡಿಎಸ್ ಪಿ) ಅವರಿಗೆ ಪತ್ರ ಬರೆದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅವರು ತಿಳಿಸಿದ್ದಾರೆ. ತನ್ನ ಮನೆ ಮಾಲೀಕ ಪ್ರಶಾಂತ್ ಬಂಕರ್ ಅವರಿಂದಲೂ ಕಿರುಕುಳ ಎದುರಿಸಿದೆ ಎಂದು ವೈದ್ಯರು ತಮ್ಮ ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

### ಕೊಲೆ ಆರೋಪಿಗಳಿಗೆ ಫಿಟ್ನೆಸ್ ಪ್ರಮಾಣಪತ್ರ ನೀಡಲು ಒತ್ತಾಯ

4 ಪುಟಗಳ ಪತ್ರದಲ್ಲಿ ಆರೋಪಿಗಳಿಗೆ ನಕಲಿ ಫಿಟ್ನೆಸ್ ಪ್ರಮಾಣಪತ್ರಗಳನ್ನು ನೀಡುವಂತೆ ಪೊಲೀಸ್ ಅಧಿಕಾರಿಗಳು ಒತ್ತಡ ಹೇರಿದ್ದಾರೆ. ಅವರಲ್ಲಿ ಅನೇಕರನ್ನು ವೈದ್ಯಕೀಯ ಪರೀಕ್ಷೆಗೆ ಸಹ ಕರೆತರಲಾಗುವುದಿಲ್ಲ ಎಂದು ಅವರು ಹೇಳಿದ್ದಾರೆ. ಇದಕ್ಕೆ ವೈದ್ಯೆ ನಿರಾಕರಿಸಿದಾಗ ಅವರು ಕಿರುಕುಳ ನೀಡಿದ್ದಾರೆ. ಒಂದು ನಿರ್ದಿಷ್ಟ ಘಟನೆಯನ್ನು ವಿವರಿಸಿದ ಅವರು, ತಾನು ಪ್ರಮಾಣಪತ್ರ ನೀಡಲು ನಿರಾಕರಿಸಿದ್ದೇನೆ, ಸಂಸತ್ ಸದಸ್ಯರ ಇಬ್ಬರು ವೈಯಕ್ತಿಕ ಸಹಾಯಕರು ಆಸ್ಪತ್ರೆಗೆ ಕಾಲಿಟ್ಟಿದ್ದರು ಎಂದು ಹೇಳಿದ್ದಾರೆ.


## ಕನ್ಯತ್ವ ಪ್ರಮಾಣಪತ್ರ ಕೇಳಿದ ಮದರಸಾ

**ಲಖನೌ:** ಉತ್ತರ ಪ್ರದೇಶದ ಮೊರಾದಾಬಾದ್‌ನಲ್ಲಿರುವ ಮದರಸಾ ಆಡಳಿತ ಮಂಡಳಿಯು ಏಳನೇ ತರಗತಿಯ ವಿದ್ಯಾರ್ಥಿನಿಯೊಬ್ಬಳಿಂದ ಕನ್ಯತ್ವ ಪ್ರಮಾಣಪತ್ರವನ್ನು ಕೇಳಿದ್ದು, ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ವಿದ್ಯಾರ್ಥಿನಿಯ ತಂದೆ ಹೇಳುವಂತೆ, ತನ್ನ ಮಗಳು ಕನ್ಯತ್ವ ಪ್ರಮಾಣಪತ್ರ ನೀಡದಿದ್ದರೆ ಆಕೆಯನ್ನು ಹೊರಹಾಕಿ, ವರ್ಗಾವಣೆ ಪ್ರಮಾಣಪತ್ರವನ್ನು ನೀಡುವುದಾಗಿ ಸಂಸ್ಥೆಯ ಆಡಳಿತ ಮಂಡಳಿ ಬೆದರಿಕೆ ಹಾಕಿದೆ.

ಈ ಸಂಬಂಧ ವಿದ್ಯಾರ್ಥಿನಿಯ ಕುಟುಂಬ ದೂರು ನೀಡಿದ್ದು, ತನಿಖೆ ನಡೆಯುತ್ತಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಆದಾಗ್ಯೂ, ದೂರು ಸಲ್ಲಿಸಿದ ನಂತರ, ವಿದ್ಯಾರ್ಥಿನಿಯ ಕುಟುಂಬ ಸದಸ್ಯರು ತನಿಖೆಯಲ್ಲಿ ಬಾಗಿಯಾಗಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಮೂಲಗಳ ಪ್ರಕಾರ, ಸಂತ್ರಸ್ತೆ ಚಂಡೀಗಢದವರಾಗಿದ್ದು, ಮೊರಾದಾಬಾದ್ ನಗರದ ಪಕ್ಬರಾ ಪ್ರದೇಶದಲ್ಲಿರುವ ಜಾಮಿಯಾ ಅಸಾನುಲ್ ಬನಾತ್ ಬಾಲಕಿಯರ ಕಾಲೇಜಿನಲ್ಲಿ(ಮದರಸಾ) ಅಧ್ಯಯನ ಮಾಡುತ್ತಿದ್ದಾರೆ.



ಮದರಸಾ ಆಡಳಿತ ಮಂಡಳಿಯ ವಿರುದ್ಧ ವಿದ್ಯಾರ್ಥಿನಿಯ ತಂದೆ ಅಕ್ಟೋಬರ್ 14 ರಂದು ಪೊಲೀಸರಿಗೆ ದೂರು ನೀಡಿದ್ದಾರೆ. ಮದರಸಾ ಆಡಳಿತ ಮಂಡಳಿಯು ತಮ್ಮ ಮಗಳ ಚಾರಿತ್ರ್ಯಕ್ಕೆ ಅವಮಾನ ಮಾಡಿದೆ ಎಂದು ವಿದ್ಯಾರ್ಥಿನಿಯ ಕುಟುಂಬ ಪೊಲೀಸರಿಗೆ ತಿಳಿಸಿದೆ. ನೊಂದ ತಂದೆ ಪೊಲೀಸರು ಈ ಬಗ್ಗೆ ತನಿಖೆ ನಡೆಸಬೇಕು ಮತ್ತು ಸಂಸ್ಥೆಯ ಆಡಳಿತ ಮಂಡಳಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ವಿದ್ಯಾರ್ಥಿಯನ್ನು 8ನೇ ತರಗತಿಗೆ ಬಡ್ತಿ ನೀಡಲು ಕುಟುಂಬವು ಮದರಸಾವನ್ನು ಸಂಪರ್ಕಿಸಿದಾಗ, ಆಡಳಿತ ಮಂಡಳಿಯು ಹುಡುಗಿಯ ಕನ್ಯತ್ವ ಪ್ರಮಾಣಪತ್ರವನ್ನು ಸಲ್ಲಿಸುವಂತೆ ಸೂಚಿಸಿದೆ.

ಈ ಘಟನೆಯಿಂದ ನೊಂದ ಕುಟುಂಬವು ಮಗುವಿನೊಂದಿಗೆ ಮನೆಗೆ ಮರಳಿದ್ದು, ನಂತರ, ಮಗುವಿನ ತಂದೆ, ಚಂಡೀಗಢ ನಿವಾಸಿ ಮೊಹಮ್ಮದ್ ಯೂಸುಫ್ ಪೊಲೀಸರಿಗೆ ದೂರು ನೀಡಿದ್ದಾರೆ. ಅಲ್ಲದೆ ಶಾಲೆಯು ನನ್ನ ಮಗಳಿಗೆ ವೈದ್ಯಕೀಯ ಪರೀಕ್ಷೆಯ ಷರತ್ತು ವಿಧಿಸಿದೆ.

## ತಮಿಳುನಾಡಿನಲ್ಲಿ ಶೀಘ್ರವೇ SIR - ಮದ್ರಾಸ್ ಹೈಕೋರ್ಟ್‌ಗೆ ಚುನಾವಣಾ ಆಯೋಗ ಮಾಹಿತಿ

**ಚೆನ್ನೈ:** ಮುಂಬರುವ ವಿಧಾನಸಭಾ ಚುನಾವಣೆ ಸಿದ್ಧತೆಯಾಗಿ ತಮಿಳುನಾಡಿನಲ್ಲಿ ಶೀಘ್ರದಲ್ಲೇ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ನಡೆಸಲಾಗುವುದು ಎಂದು ಚುನಾವಣಾ ಆಯೋಗ ಮದ್ರಾಸ್ ಹೈಕೋರ್ಟ್‌ಗೆ ತಿಳಿಸಿದೆ. ಪರಿಷ್ಕರಣೆ ಪ್ರಕ್ರಿಯೆಯು ಮುಂದಿನ ವಾರ ಪ್ರಾರಂಭವಾಗುವ ಸಾಧ್ಯತೆ ಇದೆ. ಇದಲ್ಲದೆ, ಚುನಾವಣೆ ಎದುರಿಸುತ್ತಿರುವ ಇತರ ಹಲವಾರು ರಾಜ್ಯಗಳು ಸಹ ಬಿಹಾರದ ಮಾದರಿಯಲ್ಲಿ ಇದೇ ರೀತಿಯ ವ್ಯಾಯಾಮಗಳನ್ನು ಕೈಗೊಳ್ಳಲಿದ್ದೇವೆ ಎಂದು ಚುನಾವಣಾ ಆಯೋಗ ಮುಖ್ಯ ನ್ಯಾಯಮೂರ್ತಿ ಮಣೀಂದ್ರ ಮೋಹನ್ ಶ್ರೀವಾಸ್ತವ ಮತ್ತು ನ್ಯಾಯಮೂರ್ತಿ ಜಿ.ಅರುಳ್ ಮುರುಗನ್ ಅವರ ಪೀಠದ ಮುಂದೆ ತಿಳಿಸಿದೆ.

ಎಐಎಡಿಎಂಕೆ ಮಾಜಿ ಶಾಸಕ ಬಿ. ಸತ್ಯನಾರಾಯಣನ್ ಅವರು ಟಿ.ನಗರ ವಿಧಾನಸಭಾ ಕ್ಷೇತ್ರದ 229 ಮತಗಟ್ಟೆಗಳಲ್ಲಿ ಸಂಪೂರ್ಣ ಮತ್ತು ಪಾರದರ್ಶಕ ಮರು ಪರಿಶೀಲನೆ ನಡೆಸಲು ಚುನಾವಣಾ ಆಯೋಗಕ್ಕೆ ನಿರ್ದೇಶನ ಕೋರಿ ಅರ್ಜಿ ಸಲ್ಲಿಸಿದ್ದರು.




ಚೆನ್ನೈನ ಟಿ ನಗರ ಕ್ಷೇತ್ರದ ಅಧಿಕಾರಿಗಳು ಆಡಳಿತಾರೂಢ ಡಿಎಂಕೆಗೆ ಲಾಭ ಮಾಡಿಕೊಡಲು ಉದ್ದೇಶಪೂರ್ವಕವಾಗಿ ಸುಮಾರು 13,000 ಎಐಎಡಿಎಂಕೆ ಬೆಂಬಲಿಗರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಿದ್ದಾರೆ ಎಂದು ಆರೋಪಿಸಿದ್ದರು. ಈ ಅರ್ಜಿಯ ವಿಚಾರಣೆ ವೇಳೆ ಆಯೋಗ ಹೈಕೋರ್ಟ್‌ಗೆ ಈ ಮಾಹಿತಿ ನೀಡಿದೆ.

## ಸಿಂಗಾಪುರದಲ್ಲಿ ಭಾರತೀಯ ಮೂಲದ ನರ್ಸ್ ಜೈಲುಪಾಲು

**ಸಿಂಗಾಪುರ:** ಸಿಂಗಾಪುರದ ಪ್ರತಿಷ್ಠಿತ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಆಗಿ ಕೆಲಸ ಮಾಡುತ್ತಿರುವ ಭಾರತೀಯ ಪ್ರಜೆಯೊಬ್ಬ ಲೈಂಗಿಕ ಕಿರುಕುಳ ಆರೋಪದಲ್ಲಿ ತಪ್ಪೊಪ್ಪಿಕೊಂಡ ಘಟನೆಯಲ್ಲಿ ಒಂದು ವರ್ಷ ಜೈಲು ಶಿಕ್ಷೆ ಮತ್ತು ಎರಡು ಬೆತ್ತದ ಏಟುಗಳನ್ನು ಶಿಕ್ಷೆಯಾಗಿ ವಿಧಿಸಿ ಆದೇಶಿಸಲಾಗಿದೆ.

ಎಲಿಪೆ ಶಿವಾ ನಾಗು ಎಂಬ 34 ವರ್ಷದ ಭಾರತೀಯ ಮೂಲದ ವ್ಯಕ್ತಿ ಸಿಂಗಾಪುರದ ರಾಫೆಲ್ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಆಗಿ ಕೆಲಸ ಮಾಡುತ್ತಿದ್ದ. ಜೂನ್ ನಾರ್ತ್ ಬ್ರಿಡ್ಜ್ ರಸ್ತೆಯಲ್ಲಿರುವ ಆಸ್ಪತ್ರೆಯಲ್ಲಿ ತನ್ನ ಅಜ್ಜನನ್ನು ಭೇಟಿ ಮಾಡಲು ಬಂದಿದ್ದ ವೇಳೆ ಆಸ್ಪತ್ರೆಯಲ್ಲಿ ಸ್ಟಾಫ್ ನರ್ಸ್ ಆಗಿದ್ದ ಇಲಿಪಿ ಶಿವ ನಾಗು ಆ ವ್ಯಕ್ತಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ.

**ಏನಿದು ಘಟನೆ?:** ಇನ್ನೂ ಈ ಕುರಿತು ಮಾಹಿತಿ ನೀಡಿರುವ ಡೆಪ್ಯೂಟಿ ಪಬ್ಲಿಕ್ ಪ್ರಾಸಿಕ್ಯೂಟರ್ ಯುಜೀನ್ ಫುವಾ ಮಾತನಾಡಿ ಜೂನ್ 18ರ ರಾತ್ರಿ 7.30ರ ಸುಮಾರಿಗೆ ಸಂತ್ರಸ್ತ ರೋಗಿಯ ಶೌಚಾಲಯಕ್ಕೆ ಹೋಗಿದ್ದ. ಆತ ಶೌಚಾಲಯವನ್ನು ಬಳಸುತ್ತಿದ್ದಾಗಲೇ ಆರೋಪಿ ಇಲಿಪಿ ಬಗ್ಗಿ ನೋಡಿದ್ದಾನೆ. ಸಂತ್ರಸ್ತನನ್ನು ಸೋಂಕುರಹಿತ ಮಾಡುವ ನೆಪದಲ್ಲಿ, ಎಲಿಪೆ ಅವನ ಕೈಗೆ ಸೋಪು ಹಚ್ಚಿ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ಈ ಅನಿರೀಕ್ಷಿತ ಘಟನೆಯಿಂದ ಆತ ಶಾಕ್‌ಗೆ ಒಳಗಾಗಿದ್ದು, ಸ್ತಬ್ಧನಾಗಿದ್ದ. ನಂತರ ಆತ ತನ್ನ ಅಜ್ಜ ಇದ್ದ ಬೆಡ್ ಪಕ್ಕಕ್ಕೆ ಹಿಂದಿರುಗಿದ್ದ. ಬಳಿಕ ಜೂನ್ 21 ರಂದು ಈ ಕುರಿತು ಪ್ರಕರಣ ದಾಖಲಿಸಲಾಗಿತ್ತು. ಎರಡು ದಿನಗಳ ನಂತರ ಎಲಿಪೆಯನ್ನು ಬಂಧಿಸಲಾಗಿದೆ ಹಾಗೂ ನಂತರ ನರ್ಸಿಂಗ್ ಕರ್ತವ್ಯದಿಂದ ಆತನನ್ನು ಅಮಾನತುಗೊಳಿಸಲಾಯಿತು ಎಂದು ಡಿಪಿಪಿ ಫುವಾ ಹೇಳಿದ್ದಾರೆ. ಇನ್ನೂ ಈ ಕುರಿತು ವಿಚಾರಣೆ ನಡೆಸಿದ ಆರೋಪಿ ತನ್ನ ತಪ್ಪನ್ನು ಒಪ್ಪಿಕೊಂಡಿದ್ದು, ನಂತರ ನ್ಯಾಯಾಲಯ ಎಲಿಪೆ ಶಿವಾ ನಾಗು ಎಂಬ ಆರೋಪಿಗೆ ಒಂದು ವರ್ಷ 2ತಿಂಗಳು ಕಾಲ ಜೈಲು ಶಿಕ್ಷೆ ಹಾಗೂ 2 ಬೆತ್ತದ ಏಟುಗಳನ್ನು ಶಿಕ್ಷೆಯಾಗಿ ನೀಡಿ ಆದೇಶಿಸಿದೆ.



- ಸಿಂಗಾಪುರದಲ್ಲಿ ನರ್ಸ್ ಆಗಿ ಕೆಲಸ ಮಾಡುತ್ತಿದ್ದ ಭಾರತೀಯ ಮೂಲದ ವ್ಯಕ್ತಿಗೆ ಲೈಂಗಿಕ ದೌರ್ಜನ್ಯದ ಆರೋಪದ ಮೇಲೆ ಶಿಕ್ಷೆ
- ಆಸ್ಪತ್ರೆಗೆ ಅಜ್ಜನನ್ನು ನೋಡಲು ಬಂದಿದ್ದ ವ್ಯಕ್ತಿ ಮೇಲೆ ದೌರ್ಜನ್ಯವೆಸಗಿರುವ ಆರೋಪ
- ಒಂದು ವರ್ಷ ಜೈಲು ಶಿಕ್ಷೆ ಮತ್ತು ಎರಡು ಬೆತ್ತದ ಏಟು ನೀಡಿ ಶಿಕ್ಷೆಗೆ ಆದೇಶ

## ಮಿನಿ ನ್ಯೂಸ್

### ಕಾರು ಅಪಘಾತ : ಪ್ರಾಣಾಪಾಯದಿಂದ ಪಾರಾದ ಉತ್ತರ ಪ್ರದೇಶದ ಸಚಿವೆ

**ಲಕ್ನೋ:** ಆಗ್ರಾ-ಲಕ್ನೋ ಎಕ್ಸ್‌ಪ್ರೆಸ್‌ವೇಯಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಉತ್ತರ ಪ್ರದೇಶದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಬೇಬಿ ರಾಣಿಮೌರ್ಯ ಅವರು ಕೂದಲೆಳೆ ಅಂತರದಲ್ಲಿ ಪಾರಾಗಿದ್ದಾರೆ.

ನಿನ್ನೆ ರಾತ್ರಿ ಲಕ್ನೋಗೆ ತೆರಳುತ್ತಿದ್ದಾಗ ಸಚಿವರ ಕಾರಿನ ಮುಂದೆ ಸಾಗುತ್ತಿದ್ದ ಟ್ರಕ್‌ನ ಒಂದು ಟೈರು ಇದ್ದಕ್ಕಿದ್ದಂತೆ ಸಿಡಿದಿದೆ. ಬಳಿಕ ನಿಯಂತ್ರಣ ತಪ್ಪಿ ಸಚಿವರ ಕಾರಿಗೆ ಡಿಕ್ಕಿ ಹೊಡೆದಿದೆ. ಕೂಡಲೇ ಚಾಲಕ ಕಾರನ್ನು ರಸ್ತೆ ಬದಿಗೆ ತಂದಿದ್ದರಿಂದ ಭಾರೀ ಅನಾಹುತ ತಪ್ಪಿದಂತಾಗಿದೆ. ಅಪಘಾತದಲ್ಲಿ ಕಾರಿಗೆ ಭಾರಿ ಹಾನಿಯಾಗಿದ್ದು, ಸಚಿವರು ಯಾವುದೇ ಅಪಾಯವಿಲ್ಲದೆ ಪಾರಾಗಿದ್ದಾರೆ.


ಅತ್ರಾಸ್ ಜಿಲ್ಲೆಯ ಹಲವೆಡೆ ಆಯೋಜಿಸಿದ್ದ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಅವರು ಲಕ್ನೋಗೆ ವಾಪಸಾಗುತ್ತಿದ್ದಾಗ ಈ ಘಟನೆ ಸಂಭವಿಸಿದೆ. ಸಚಿವರನ್ನು ಅಧಿಕಾರಿಗಳು ಮತ್ತೊಂದು ಕಾರಿನಲ್ಲಿ ಲಕ್ನೋಗೆ ಕಳುಹಿಸಿದ್ದಾರೆ. ಎಕ್ಸ್‌ಪ್ರೆಸ್‌ವೇನಲ್ಲಿ ಅಪಘಾತಗಳನ್ನು ತಡೆಗಟ್ಟಲು ಕಠಿಣಕ್ರಮಗಳನ್ನು ತೆಗೆದುಕೊಳ್ಳುವಂತೆ ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

### ನ.1ರಿಂದ ಬ್ಯಾಂಕ್‌ಗಳ ನಾಮಿನಿ ನಿಯಮದಲ್ಲಿ ಬದಲಾವಣೆ

**ನವದೆಹಲಿ:** ಬರುವ ನವಂಬರ್ ಒಂದರಿಂದ ಬ್ಯಾಂಕ್‌ಗಳ ನಾಮಿನಿ ನಿಯಮದಲ್ಲಿ ಭಾರಿ ಬದಲಾವಣೆ ಮಾಡಲಾಗಿದೆ. ನವೆಂಬರ್ 1ರಿಂದ ಬ್ಯಾಂಕ್‌ಗಳ ನಾಮಿನಿ ನಿಯಮದಲ್ಲಿ ಬದಲಾವಣೆ ಆಗಲಿದ್ದು, ಬ್ಯಾಂಕ್ ಅಕೌಂಟ್, ಲಾಕರ್‌ಗಳಿಗೆ ಒಂದಕ್ಕಿಂತ ಹೆಚ್ಚು ನಾಮಿನಿಗಳನ್ನು ಮಾಡಬಹುದು ಎಂದು ಕೇಂದ್ರ ಹಣಕಾಸು ಇಲಾಖೆ ಮಾಹಿತಿ ನೀಡಿದೆ. ಇದುವರೆಗೆ ಒಂದು ಬ್ಯಾಂಕ್ ಖಾತೆ ಅಥವಾ ಲಾಕರ್‌ಗಳಿಗೆ ಇದ್ದ ಒಬ್ಬರು ನಾಮಿನಿ ಬದಲಿಗೆ ನಾಲ್ವರು ನಾಮಿನಿಗಳಿಗೆ ಅವಕಾಶ ಮಾಡಿಕೊಡಲಾಗಿದೆ. ಈ ಮೂಲಕ ಕ್ಲೈಮ್ ಸೆಟಲ್‌ಮೆಂಟ್‌ಗಳು ಸುಲಭವಾಗಲಿದೆ. ಠೇವಣಿ ಸಂದರ್ಭದಲ್ಲೇ ಖಾತೆದಾರರು 4 ನಾಮಿನಿಗಳನ್ನು ಆಯ್ಕೆ ಮಾಡಬಹುದಾಗಿದೆ.

ಠೇವಣಿದಾರರು ಮೃತರಾದ ನಂತರ ಇದರಲ್ಲಿ ಕ್ರಮಸಂಖ್ಯೆಗೆ ಅನುಗುಣವಾಗಿ ಖಾತೆದಾರರ ಹಣಕಾಸಿಗೆ ಉತ್ತರಾಧಿಕಾರಿಗಳಾಗಲಿದ್ದಾರೆ. ಇದರಿಂದಾಗಿ ಯಾವುದೆ ತೊಂದರೆ ಇಲ್ಲದೇ ನಿಗದಿತ ಹಣಕಾಸಿನ ಭಾಗವು ಆ ನಾಮಿನಿಗಳಿಗೆ ನೇರವಾಗಿ ವರ್ಗಾವಣೆ ಮಾಡಲು ಅವಕಾಶ ಕಲ್ಪಿಸಿಕೊಡಲಿದೆ. ಬ್ಯಾಂಕಿಂಗ್ ಕಾನೂನುಗಳು (ತಿದ್ದುಪಡಿ) ಕಾಯಿದೆ-2025 ನವೆಂಬರ್ 1ರಿಂದ ಜಾರಿಗೆ ಬರಲಿದೆ ಅಂತ ಕೇಂದ್ರ ಹಣಕಾಸು ಇಲಾಖೆ ಹೇಳಿದೆ.

### ನೇಪಾಳದಲ್ಲಿ ಕಂದಕಕ್ಕೆ ಉರುಳಿದ ಜೀಪ್: ಎಂಟು ಮಂದಿ ಸಾವು



**ಕಠ್ಮಂಡು:** ನೇಪಾಳದ ಕರ್ನಾಲಿ ಪ್ರಾಂತ್ಯದಲ್ಲಿ 18 ಪ್ರಯಾಣಿಕರಿದ್ದ ಜೀಪ್ 700 ಅಡಿಗಳಷ್ಟು ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ ಎಂಟು ಮಂದಿ ಸಾವನ್ನಪ್ಪಿದ್ದು, 10 ಮಂದಿ ಗಾಯಗೊಂಡಿದ್ದಾರೆ ಎಂದು ಪೊಲೀಸರು ಶನಿವಾರ ತಿಳಿಸಿದ್ದಾರೆ. ಕಠ್ಮಂಡುವಿನ ಪಶ್ಚಿಮಕ್ಕೆ ಸುಮಾರು 500 ಕಿಮೀ ದೂರದಲ್ಲಿರುವ ರುಕುಮ್ ಪಶ್ಚಿಮ ಜಿಲ್ಲೆಯ ಬಾಫಿಕೋಟ್‌ನ ಝುರ್ಮಾರೆ ಪ್ರದೇಶದಲ್ಲಿ ರಾತ್ರಿ ಈ ದುರ್ಘಟನೆ ಸಂಭವಿಸಿದೆ.

ಜೀಪ್ ಮುಸಿಕೋಟ್‌ನ ಖಲಂಗಾದಿಂದ ಅಥ್ಬಿಸ್ಕಟ್ ಪುರಸಭೆಯ ಸೈಲಿಖಾಡಿ ಪ್ರದೇಶದ ಕಡೆಗೆ ಹೋಗುತ್ತಿದ್ದಾಗ ಅಪಘಾತ ಸಂಭವಿಸಿದೆ. ಅತಿವೇಗದ ಚಾಲನೆಯಿಂದ ಅಪಘಾತ ಸಂಭವಿಸಿದೆ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಯಲ್ಲಿ ಏಳು ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಒಬ್ಬರು ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಮೃತಪಟ್ಟಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಮೃತರೆಲ್ಲರೂ 15 ರಿಂದ 30 ವರ್ಷದ ಯುವಕರಾಗಿದ್ದಾರೆ.

## ರಾಜ್ಯಸಭಾ ಚುನಾವಣೆಯಲ್ಲಿ ಬಿಜೆಪಿ ಅಚ್ಚರಿಯ ಗೆಲುವು

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ನಾಲ್ಕು ರಾಜ್ಯಸಭಾ ಸ್ಥಾನಗಳಿಗೆ ಶುಕ್ರವಾರ ನಡೆದ ಚುನಾವಣೆಯ ಫಲಿತಾಂಶ ಪ್ರಕಟವಾಗಿದ್ದು, ಬಿಜೆಪಿ ಅಡ್ಡ ಮತದಾನದ ಮೂಲಕ ಒಂದು ಸ್ಥಾನವನ್ನು ಗೆದ್ದು ಅಚ್ಚರಿ ಮೂಡಿಸಿದೆ. ಆಡಳಿತಾರೂಢ ಎನ್‌ಸಿ ಉಳಿದ ಮೂರು ಸ್ಥಾನಗಳನ್ನು ಗೆದ್ದು ಬೀಗಿದೆ.

370ನೇ ವಿಧಿ ರದ್ದುಪಡಿಸಿದ ನಂತರ, 2021ರಿಂದ ಖಾಲಿ ಇದ್ದ ಜಮ್ಮು ಮತ್ತು ಕಾಶ್ಮೀರದ ನಾಲ್ಕು ರಾಜ್ಯಸಭಾ ಸ್ಥಾನಗಳನ್ನು ಭರ್ತಿ ಮಾಡಲು ವಾರ್ಷಿಕ ಚುನಾವಣೆ ನಡೆಯಿತು. ಶಾಸಕರು ಬೆಳಗ್ಗೆ 9 ರಿಂದ ಸಂಜೆ 4 ರವರೆಗೆ ವಿಧಾನಸಭೆ ಸಂಕೀರ್ಣದಲ್ಲಿರುವ ಮೂರು ಪ್ರತ್ಯೇಕ ಮತಗಟ್ಟೆಗಳಲ್ಲಿ ತಮ್ಮ ಮತ ಚಲಾಯಿಸಿದರು. 90 ಸದಸ್ಯರನ್ನು ಹೊಂದಿರುವ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯಲ್ಲಿ, 89 ಶಾಸಕರು ಮತ ಚಲಾಯಿಸಿದರೆ, ಪೀಪಲ್ಸ್ ಕಾನ್ಫರೆನ್ಸ್ ಅಧ್ಯಕ್ಷ ಮತ್ತು ಶಾಸಕ ಸಜದ್ ಗನಿ ಲೋನ್ ಮತದಾನದಿಂದ ದೂರ ಉಳಿದರು. ಪಿಎಸ್‌ಎ ಅಡಿಯಲ್ಲಿ ಬಂಧಿತರಾಗಿ ಕಥುವಾ ಜೈಲಿನಲ್ಲಿರುವ ದೋಡಾದ ಎಎಪಿ ಶಾಸಕ ಮೆಹ್ರಾಜ್ ಮಲಿಕ್ ಅಂಚೆ ಮತಪತ್ರದ ಮೂಲಕ ಮತ ಚಲಾಯಿಸಿದರು.



ಎನ್‌ಸಿ ನಾಲ್ಕು ಅಭ್ಯರ್ಥಿಗಳನ್ನು - ಚೌಧರಿ ಮುಹಮ್ಮದ್ ರಂಜಾನ್, ಶಮ್ಮಿ ಒಬೆರಾಯ್, ಸಜಾದ್ ಕಿಚ್ಲೂ ಮತ್ತು ಇಮ್ರಾನ್ ನಬಿ ದಾರ್ - ಕಣಕ್ಕಿಳಿಸಿತ್ತು. ಬಿಜೆಪಿ ಮೂರು ಸ್ಥಾನಗಳಿಗೆ ಅಲಿ ಮೊಹಮ್ಮದ್ ಮಿರ್, ರಾಕೇಶ್ ಮಹಾಜನ್ ಮತ್ತು ಜಮ್ಮು ಮತ್ತು ಕಾಶ್ಮೀರ ಬಿಜೆಪಿ ಅಧ್ಯಕ್ಷ ಸತ್ ಶರ್ಮಾ ಅವರನ್ನು ಕಣಕ್ಕಿಳಿಸಿತ್ತು.

ಮೂರು ಸ್ಥಾನಗಳನ್ನು ಖಚಿತವಾಗಿ ಗೆಲ್ಲುವ ಸಾಮರ್ಥ್ಯ ಹೊಂದಿದ್ದ ಎನ್‌ಸಿ ಅವುಗಳನ್ನು ಪಡೆದುಕೊಂಡಿತು. ಆದರೆ ಬಿಜೆಪಿಯ ಸತ್ ಶರ್ಮಾ ನಾಲ್ಕನೇ ಸ್ಥಾನವನ್ನು ಗೆದ್ದರು. ಇದರಲ್ಲಿ ಅಡ್ಡ ಮತದಾನ ಮಾಡಿರುವುದು ಕಂಡುಬಂದಿತು.

## ಉಕ್ರೇನ್ ಮೇಲೆ ರಷ್ಯಾ ದಾಳಿ: ನಾಲ್ವರ ಸಾವು

**ಕೀವ್:** ಉಕ್ರೇನ್ ಮೇಲೆ ಶನಿವಾರ ಮುಂಜಾನೆವರೆಗೂ ಕ್ಷಿಪಣಿ ಮತ್ತು ಡ್ರೋನ್‌ಗಳನ್ನು ಬಳಸಿ ರಷ್ಯಾ ನಡೆಸಿದ ವಾಯುದಾಳಿಯಲ್ಲಿ ಕನಿಷ್ಠ 4 ಮಂದಿ ಮೃತಪಟ್ಟು, 16 ಮಂದಿ ಗಾಯಗೊಂಡಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.

ರಾಜಧಾನಿ ಕೀವ್‌ನಲ್ಲಿ ಇಬ್ಬರು ಸಾವಿಗೀಡಾಗಿದ್ದು, ಒಂಭತ್ತು ಮಂದಿ ಗಾಯಗೊಂಡಿದ್ದಾರೆ. ಹಲವು ಕಟ್ಟಡಗಳಿಗೆ ಭಾರಿ ಹಾನಿಯಾಗಿದೆ ಎಂದು ನಗರ ಸೇನಾ ಆಡಳಿತದ ಮುಖ್ಯಸ್ಥ ತೈಮುರ್ ಕಾಚೆಂಕೊ ತಿಳಿಸಿದ್ದಾರೆ.

ನಿಪ್ರೊಪೆಟ್ರೋವ್ ಪ್ರಾಂತ್ಯದಲ್ಲಿ ಇಬ್ಬರು ಮೃತಪಟ್ಟು, ಏಳು ಮಂದಿ ಗಾಯಗೊಂಡಿದ್ದಾರೆ. ಅಪಾರ್ಟ್‌ಮೆಂಟ್ ಸೇರಿ ಹಲವು ಕಟ್ಟಡ ಮತ್ತು ವಾಹನಗಳಿಗೂ ಹಾನಿಯಾಗಿದೆ ಎಂದು ಸ್ಥಳೀಯ ಗವರ್ನರ್ ಬ್ಲಾಡಿಸ್ಲಾವ್ ಹೈವನಿಂಕೊ ತಿಳಿಸಿದ್ದಾರೆ. ರಷ್ಯಾ 9 ಕ್ಷಿಪಣಿ ಮತ್ತು 62 ಡ್ರೋನ್‌ಗಳನ್ನು ಬಳಸಿತ್ತು. 4 ಕ್ಷಿಪಣಿ ಮತ್ತು 50 ಡ್ರೋನ್‌ಗಳನ್ನು ಹೊಡೆದುರುಳಿಸಿದ್ದೇವೆ ಎಂದು ಉಕ್ರೇನ್ ವಾಯುಪಡೆ ಹೇಳಿದೆ. ಮತ್ತೊಂದೆಡೆ ಉಕ್ರೇನ್‌ನ 121 ಡ್ರೋನ್‌ಗಳನ್ನು ಹೊಡೆದುರುಳಿಸಿದ್ದಾಗಿ ರಷ್ಯಾ ರಕ್ಷಣಾ ಇಲಾಖೆ ಹೇಳಿಕೊಂಡಿದೆ.

ಸಮಸ್ತೀಪುರ ಚುನಾವಣಾ ಪ್ರಚಾರದಲ್ಲಿ ನಿತೀಶ್ ಕುಮಾರ್ ಅವರನ್ನು ಹಾಡಿ ಹೊಗಳಿದ ಪ್ರಧಾನಿ

# ಬಿಹಾರದಲ್ಲಿ ಎನ್‌ಡಿಎ ಗೆಲುವು ಸಾಧಿಸಲಿದೆ: ಮೋದಿ

**ಸಮಸ್ತೀಪುರ:** ಬಿಹಾರ ವಿಧಾನಸಭಾ ಚುನಾವಣಾ ಪ್ರಚಾರಕ್ಕೆ ಅಧಿಕೃತವಾಗಿ ಧುಮುಕಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ, ಸಮಸ್ತೀಪುರದಲ್ಲಿ ಭರ್ಜರಿ ಚುನಾವಣಾ ಪ್ರಚಾರ ನಡೆಸಿದ್ದಾರೆ. ತಮ್ಮ ಭಾಷಣದಲ್ಲಿ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನು ಹಾಡಿ ಹೊಗಳಿರುವ ಪ್ರಧಾನಿ ಮೋದಿ, ನಿತೀಶ್ ಕುಮಾರ್ ಅವರನ್ನು ಸುಶಾಸನ್ ಬಾಬು (ಉತ್ತಮ ಆಡಳಿತಗಾರ) ಎಂದು ಕರೆದಿದ್ದಾರೆ.

ನಿತೀಶ್ ಕುಮಾರ್ ನೇತೃತ್ವದಲ್ಲಿ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ)ವು, ಈ ಹಿಂದಿನ ಎಲ್ಲಾ ದಾಖಲೆಗಳನ್ನು ಮುರಿದು ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಗೆಲುವು ಸಾಧಿಸಲಿದೆ. ಇಡೀ ಬಿಹಾರ 'ಫಿರ್ ಏಕ್ ಬಾರ್ ಎನ್‌ಡಿಎ ಸರ್ಕಾರ್, ಫಿರ್ ಏಕ್ ಬಾರ್ ಸುಶಾಸನ್ ಸರ್ಕಾರ್' (ಮತ್ತೊಮ್ಮೆ ಎನ್‌ಡಿಎ ಸರ್ಕಾರ, ಮತ್ತೊಮ್ಮೆ ಸುಶಾಸನ ಸರ್ಕಾರ) ಎಂದು ಕೂಗುತ್ತಿದೆ ಎಂದು ಪ್ರಧಾನಿ ಹೇಳಿದರು.


ಬಿಹಾರಕ್ಕೆ ಕಾನೂನು ಆಡಳಿತದ ಅವಶ್ಯಕತೆ ಇದೆ. ಕೇಂದ್ರದಲ್ಲೂ ಎನ್‌ಡಿಎ ಸರ್ಕಾರವಿದ್ದು, ಬಿಹಾರದಲ್ಲೂ ಎನ್‌ಡಿಎ ಸರ್ಕಾರವೇ ಮುಂದುವರೆದರೆ, ಡಬಲ್ ಎಂಜಿನ್ ಸರ್ಕಾರವು ಅಭಿವೃದ್ಧಿಗೆ ವೇಗ ನೀಡುತ್ತದೆ ಎಂದು ಪ್ರಧಾನಿ ಮೋದಿ ಮತದಾರರಿಗೆ ಮನವರಿಕೆ ಮಾಡಿದರು. ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಗೆಲುವು ಸಾಧಿಸುವ ಮೂಲಕ, ಬಿಜೆಪಿ-ಜೆಡಿಯು ನೇತೃತ್ವದ ಎನ್‌ಡಿಎ ಅಧಿಕಾರ ಉಳಿಸಿಕೊಂಡರೆ, ನಿತೀಶ್ ಕುಮಾರ್ ಅವರೇ ಮುಖ್ಯಮಂತ್ರಿಯಾಗುತ್ತಾರಾ ಎಂಬ ಪ್ರಶ್ನೆಗೆ ಇದುವರೆಗೂ ಸ್ಪಷ್ಟ ಉತ್ತರ ಸಿಕ್ಕಿಲ್ಲ. ಆದರೆ ಪ್ರಧಾನಿ ಮೋದಿ ಅವರು ತಮ್ಮ ಭಾಷಣದಲ್ಲಿ, ಬಿಹಾರದಲ್ಲಿ ಎನ್‌ಡಿಎ ಪ್ರಚಾರದ ಮುಖವಾಗಿ ನಿತೀಶ್ ಕುಮಾರ್ ಅವರನ್ನು ಉಲ್ಲೇಖಿಸಿರುವುದು ಕುತೂಹಲ ಕೆರಳಿಸಿದೆ.

### ಸಿಎಂ ಅಭ್ಯರ್ಥಿ ಸುಳಿವು

ಬಿಜೆಪಿ ಮುಖ್ಯಮಂತ್ರಿ ಅಭ್ಯರ್ಥಿಯನ್ನು ಹೆಸರಿಸಲು ಹಿಂಜರಿಯುತ್ತಿರುವ ಬಗ್ಗೆ ಮಹಾಘಟಬಂಧನ್ ಮೈತ್ರಿಕೂಟದ ತೀವ್ರ ಟೀಕೆ ಮಾಡುತ್ತಿದೆ. ಏಕೆಂದರೆ ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಮಹಾಘಟಬಂಧನ್ ಸಿಎಂ ಅಭ್ಯರ್ಥಿ ಎಂದು ಘೋಷಿಸಲಾಗಿದೆ.

ಆದರೆ ವಿಪಕ್ಷ ಮೈತ್ರಿಕೂಟದ ನಿರಂತರ ಟೀಕೆಗಳ ಹೊರತಾಗಿಯೂ, ಆಡಳಿತಾರೂಢ ಎನ್‌ಡಿಎ ಮೈತ್ರಿಕೂಟ ಇದುವರೆಗೂ ತನ್ನ ಸಿಎಂ ಅಭ್ಯರ್ಥಿಯನ್ನು ಘೋಷಿಸಿಲ್ಲ. ಆದರೆ ಎನ್‌ಡಿಎ ಅಂಗಪಕ್ಷ ಜೆಡಿಯು ಮಾತ್ರ, ನಿತೀಶ್ ಕುಮಾರ್ ಅವರೇ 2030ರವರೆಗೆ ಬಿಹಾರದ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ ಎಂದು ಅತ್ಯಂತ ಭರವಸೆಯಿಂದ ಹೇಳುತ್ತಿದೆ. ಆದರೆ ನಿತೀಶ್ ಕುಮಾರ್ ಅವರ ವಯಸ್ಸು ಮತ್ತು ಆರೋಗ್ಯವನ್ನು ಗಮನಿಸಿದರೆ, ಅವರು ಈ ಬಾರಿಯೂ ಮುಖ್ಯಮಂತ್ರಿಯಾಗಲಿದ್ದಾರಾ ಎಂಬ ಅನುಮಾನಗಳು ಮೂಡುತ್ತವೆ.

ಅಷ್ಟೇ ಅಲ್ಲದೇ ಸಾರ್ವಜನಿಕ ವೇದಿಕೆಗಳಲ್ಲಿ ನಿತೀಶ್ ಕುಮಾರ್ ವಿಚಿತ್ರ ವರ್ತನೆ, ಅವರ ಮಾನಸಿಕ ಸ್ಥಿತಿಗತಿ ಬಗ್ಗೆಯೂ ಬಿಹಾರದ ಜನ ಮಾತನಾಡಿಕೊಳ್ಳಲು ಅವಕಾಶ ಒದಗಿಸಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿ ಮೋದಿ ಅವರು ತಮ್ಮ ಇಂದಿನ ಭಾಷಣದಲ್ಲಿ, ನಿತೀಶ್ ಕುಮಾರ್ ಅವರನ್ನು ಹಾಡಿಹೊಗಳಿರುವುದು ತೀವ್ರ ಕುತೂಹಲ ಕೆರಳಿಸಿದೆ.



### ಅಡ್ಡಗೋಡೆಯ ಮೇಲೆ ದೀಪ

ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಎನ್‌ಡಿಎ ಪ್ರಮುಖ ನಾಯಕರು, ಈ ಬಾರಿಯ ಬಿಹಾರ ವಿಧಾನಸಭೆ ಚುನಾವಣೆಯನ್ನು ನಿತೀಶ್ ಕುಮಾರ್ ನೇತೃತ್ವದಲ್ಲೇ ಎದುರಿಸಲಾಗುವುದು ಎಂದು ಹೇಳುತ್ತಿದ್ದಾರೆ. ಆದರೆ ಎನ್‌ಡಿಎ ಚುನಾವಣೆಯಲ್ಲಿ ಗೆಲುವು ಸಾಧಿಸಿದರೆ, ನಿತೀಶ್ ಕುಮಾರ್ ಅವರೇ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರಾ ಎಂಬ ಪ್ರಶ್ನೆಗೆ, ಎಲ್ಲರೂ ಅಡ್ಡಗೋಡೆಯ ಮೇಲೆ ದೀಪವಿಟ್ಟಂತೆ ಮಾತನಾಡುತ್ತಿದ್ದಾರೆ.

- ಸಮಸ್ತೀಪುರ ಚುನಾವಣಾ ಪ್ರಚಾರದಲ್ಲಿ ನಿತೀಶ್ ಕುಮಾರ್ ಅವರನ್ನು ಹಾಡಿ ಹೊಗಳಿದ ಪ್ರಧಾನಿ ಮೋದಿ.
- ನಿತೀಶ್ ಕುಮಾರ್ ನೇತೃತ್ವದಲ್ಲಿ ಬಿಹಾರದಲ್ಲಿ ಎನ್‌ಡಿಎ ಗೆಲುವು ಸಾಧಿಸಲಿದೆ ಎಂದ ಪ್ರಧಾನಿ ಮೋದಿ.
- ಬಿಹಾರದಲ್ಲಿ ಎನ್‌ಡಿಎ ಗೆದ್ದರೆ ನಿತೀಶ್ ಕುಮಾರ್ ಅವರೇ ಮುಖ್ಯಮಂತ್ರಿಯಾಗುತ್ತಾರಾ?



ರೊಮ್ಯಾಂಟಿಕ್ ಕಾಮಿಡಿ ಸಿನಿಮಾ

# ಈ ವಾರ ಒಟಿಟಿಗೆ ಬಂದಿವೆ ಹಿಟ್ ಸಿನಿಮಾಗಳು


ಚಿತ್ರಮಂದಿರಗಳಲ್ಲಿ 'ಕಾಂತಾರ: ಚಾಪ್ಟರ್ 1' ಸಿನಿಮಾ ಇನ್ನೂ ಅಬ್ಬರಿಸುತ್ತಿದೆ. ತಮಿಳಿನ 'ಡ್ಯೂಡ್', ರಶ್ಮಿಕಾ ನಟನೆಯ ಹಿಂದಿಯ 'ಥಮ' ಸಿನಿಮಾ ಸಹ ಚಿತ್ರಮಂದಿರಗಳಲ್ಲಿ ಪ್ರದರ್ಶನ ಕಾಣುತ್ತಿದೆ. ಈ ವಾರ ಒಟಿಟಿ ವೀಕ್ಷಕರಿಗೂ ನಿರಾಸೆ ಇಲ್ಲ, ಕೆಲ ಹಿಟ್ ಸಿನಿಮಾಗಳು ಒಟಿಟಿಗೆ ಬಂದಿವೆ. ಎಂಡಿ ಶ್ರೀಧರ್ ನಿರ್ದೇಶನ ಮಾಡಿದ್ದ ಕನ್ನಡ ಸಿನಿಮಾ 'ಜಂಭೂ ಸರ್ಕಸ್' ಕೆಲ ವಾರಗಳ ಹಿಂದೆ ಚಿತ್ರಮಂದಿರಗಳಲ್ಲಿ ಬಿಡುಗಡೆ ಆಗಿತ್ತು. ಪ್ರವೀಣ್ ತೇಜ್, ಅಂಜಲಿ, ಅಚ್ಯುತ್ ಕುಮಾರ್, ಅವಿನಾಶ್ ನಟಿಸಿದ್ದ ಈ ಸಿನಿಮಾ ಇದೀಗ ಈ ಸಿನಿಮಾ ಸನ್ ನೆಕ್ಸ್ಟ್‌ನಲ್ಲಿ ಬಿಡುಗಡೆ ಆಗಿದೆ. ಪವನ್ ಕಲ್ಯಾಣ್ ನಟನೆಯ 'ಓಜಿ' ಸಿನಿಮಾ ಈ ವಾರ ಒಟಿಟಿಗೆ ಕಾಲಿಟ್ಟಿದೆ. ಕೆಲ ವಾರಗಳ ಹಿಂದೆ ಚಿತ್ರಮಂದಿರಗಳಲ್ಲಿ ಬಿಡುಗಡೆ ಆಗಿದ್ದ ಈ ಸಿನಿಮಾ ಭರ್ಜರಿ ಕಲೆಕ್ಷನ್ ಮಾಡಿತ್ತು. ಪವನ್ ಕಲ್ಯಾಣ್ ಅವರ ಮಾಸ್ ಅವತಾರ ಪ್ರೇಕ್ಷಕರಿಗೆ ಇಷ್ಟವಾಗಿತ್ತು, ಈ ವಾರ ಈ ಸಿನಿಮಾ ನೆಟ್‌ಫ್ಲಿಕ್ಸ್‌ನಲ್ಲಿ ಬಿಡುಗಡೆ ಆಗಿದೆ. ರಾಜಕೀಯ ದಲ್ಲಾಳಿಯೊಬ್ಬನ ಕತೆಯನ್ನು ಈ ಸಿನಿಮಾ ಒಳಗೊಂಡಿದೆ.

ಕಿಟ್ಟು ಹೆಸರಿನ ಬ್ರೋಕರ್ ಹೇಗೆ ರೆಬಲ್ ಆಗಿ ಭ್ರಷ್ಟ ರಾಜಕಾರಣಿಗಳ ಎದುರು ನಿಲ್ಲುತ್ತಾನೆ ಜೊತೆಗೆ ತನ್ನ ತಾಯಿಯ ಕೊಲೆ ಮಾಡಿದವರ ವಿರುದ್ಧ ಸೇಡು ತೀರಿಸಿಕೊಳ್ಳುತ್ತಾನೆ ಎಂಬುದು ಸಿನಿಮಾದ ಕತೆ. ಸಿನಿಮಾ ನೆಟ್‌ಫ್ಲಿಕ್ಸ್‌ನಲ್ಲಿ ಬಿಡುಗಡೆ ಆಗಿದೆ.

ಜಾನ್ವವಿ ಕಪೂರ್, ಸಿದ್ಧಾರ್ಥ್ ಮಲ್ಹೋತ್ರಾ ಒಟ್ಟಿಗೆ ನಟಿಸಿದ್ದ ರೊಮ್ಯಾಂಟಿಕ್ ಕಾಮಿಡಿ ಸಿನಿಮಾ 'ಪರಮ ಸುಂದರಿ'. ಹಿಂದಿ ಯುವಕನೊಬ್ಬ ಮಲಯಾಳಿ ಯುವತಿಯೊಟ್ಟಿಗೆ ಪ್ರೀತಿಯಲ್ಲಿ ಬೀಳುವ ಕತೆಯನ್ನು 'ಪರಮ ಸುಂದರಿ' ಒಳಗೊಂಡಿತ್ತು. ಸಿನಿಮಾ ದೊಡ್ಡ ಕಲೆಕ್ಷನ್ ಮಾಡಲಿಲ್ಲ. ಇದೀಗ ಈ ಸಿನಿಮಾ ಅಮೆಜಾನ್ ಪ್ರೈಂನಲ್ಲಿ ವೀಕ್ಷಣೆಗೆ ಲಭ್ಯವಿದೆ.

ಪಿಚ್ ಟು ರಿಚ್ ಒಂದು ರಿಯಾಲಿಟಿ ಶೋ. ಇದೊಂದು ಫ್ಯಾಷನ್ ರಿಯಾಲಿಟಿ ಶೋ ಆಗಿದ್ದು ಫ್ಯಾಷನ್ ಬ್ರ್ಯಾಂಡ್‌ಗಳು 40 ಕೋಟಿ ರೂಪಾಯಿ ಹೂಡಿಕೆ ಪಡೆಯಲು ಕರಣ್ ಜೋಹರ್, ಮನೀಶ್ ಮಲ್ಹೋತ್ರಾ ಮತ್ತು ಅಕ್ಷಯ್ ಕುಮಾರ್ ಎದುರು ಬಿಸಿನೆಸ್ ಐಡಿಯಾ ಪ್ರೆಸೆಂಟ್ ಮಾಡುತ್ತಾರೆ. ಮೂವರು ಸೆಲೆಬ್ರಿಟಿಗಳು ಅಳೆದು ತೂಗಿ ಹೂಡಿಕೆ ಮಾಡುತ್ತಾರೆ.





ಕಿರುತೆರೆ ನಟಿ ವಿರುದ್ಧ ಎಫ್‌ಐಆರ್

ಕನ್ನಡದ ಅನೇಕ ಧಾರಾವಾಹಿಗಳಲ್ಲಿ ನಟಿಸಿ ಸೈ ಎನಿಸಿಕೊಂಡಿದ್ದ ಖ್ಯಾತ ಕಿರುತೆರೆ ನಟಿ ವಿರುದ್ಧ ಈಗ ಬ್ಲ್ಯಾಕ್‌ಮೇಲ್ ಆರೋಪದ ಮೇಲೆ ಪ್ರಕರಣ ದಾಖಲಾಗಿದೆ.


# ಖಾಸಗಿ ವೀಡಿಯೋ ಕದ್ದು ಹಂಚಿ ಬ್ಲ್ಯಾಕ್‌ಮೇಲ್


ಸ್ನೇಹಿತೆಯ ಖಾಸಗಿ ವಿಡಿಯೋ ಹಾಗೂ ಫೋಟೋಗಳನ್ನ ಕದ್ದು ಹಂಚಿಕೆ ಮಾಡಿದ್ದಾರೆ ಹಾಗೂ 2 ಕೋಟಿ ರೂ.ಗೆ ಬ್ಲ್ಯಾಕ್‌ಮೇಲ್‌ಗೆ ಮಾಡಲು ಪ್ರಚೋದನೆ ನೀಡಿದ ಆರೋಪದ ಮೇಲೆ ಶೃಂಗೇರಿ ಶಾರದಾ ಪೀಠದ ಜೋಯಿಸ್ ಕುಟುಂಬ ಸದಸ್ಯೆ ಹಾಗೂ ಕಿರುತೆರೆ ನಟಿ ಆಶಾ ಜೋಯಿಸ್ ವಿರುದ್ಧ ಪ್ರಕರಣ ದಾಖಲಾಗಿದೆ.

61 ವರ್ಷದ ಪಾರ್ವತಿ ಎಂಬವವರು ನೀಡಿದ ದೂರಿನ ಮೇರೆಗೆ ಎಫ್‌ಐಆರ್ ದಾಖಲಾಗಿದೆ. ಆಶಾ 2016ರಲ್ಲಿ ಮಿಸ್ ಇಂಡಿಯಾ ಪ್ಲಾನೆಟ್ ಸ್ಪರ್ಧಿಯಾಗಿದ್ದರು. ಕೆಲ ದಿನಗಳ ಹಿಂದೆ ಪಾರ್ವತಿಗೆ ಆಶಾ ಜೋಯಿಸ್ ಪರಿಚಯವಾಗಿದೆ. ತಾನು ಶೃಂಗೇರಿ ಮಠದ ಜೋಯಿಸ್ ಕುಟುಂಬದವಳು ಹಾಗೂ ಸೀರಿಯಲ್ ನಟಿ ಅಂತ ಹೇಳಿಕೊಂಡು ಪರಿಚಯವಾಗಿದ್ದಳು. ಪಾರ್ವತಿ ತಾನು ಕೆಲಸ ಮಾಡುವ ಕಂಪನಿ ಮಾಲೀಕರನ್ನೇ ಮದುವೆಯಾಗಿದ್ದರು. ಈ ವಿಚಾರ ತಿಳಿದ ಆಶಾ ಪತಿಗೆ ಬ್ಲ್ಯಾಕ್ ಮೇಲ್ ಮಾಡಲು ಪದೇ ಪದೇ ಪ್ರಚೋದನೆ ನೀಡಿದ್ದಾಳೆ. ಎರಡು ಕೋಟಿ ಹಣಕ್ಕೆ ಬ್ಲ್ಯಾಕ್‌ಮೇಲ್ ಮಾಡಲು ಬಲವಂತ ಮಾಡ್ತಿದ್ದಳಂತೆ. ಇದನ್ನ ಪಾರ್ವತಿ ನಿರಾಕರಿಸಿದ್ದರು.

# ರಿಷಬ್ ಮನೆಯಲ್ಲಿ ಭರ್ಜರಿ ಹಬ್ಬ

'ಕಾಂತಾರ' ಚಿತ್ರ ಬಾಕ್ಸಾಫೀಸ್‌ನಲ್ಲಿ ಭರ್ಜರಿ ಗೆಲುವು ಸಾಧಿಸಿದೆ. ಸಾವಿರ ಕೋಟಿ ಕಲೆಕ್ಷನ್ ಗಡಿ ತಲುಪುವ ದಾರಿಯಲ್ಲಿದೆ. ದಸರಾದಿಂದ ದೀಪಾವಳಿವರೆಗೂ ಬಿರುಸಿನ ಪ್ರಚಾರದಲ್ಲಿ ಭಾಗಿಯಾಗಿದ್ದ ರಿಷಬ್ ಶೆಟ್ಟಿ ಹಾಗೂ ಪತ್ನಿ ಪ್ರಗತಿ ಶೆಟ್ಟಿ ಇದೀಗ ವೈಯಕ್ತಿಕ ಸಂಭ್ರಮಕ್ಕೆ ದೀಪಾವಳಿ ಹಬ್ಬದ ದಿನ ಬ್ರೇಕ್ ತೆಗೆದುಕೊಂಡಿದ್ದಾರೆ. ಕುಂದಾಪುರದ ಕೆರಾಡಿಯ ತಮ್ಮ ನಿವಾಸದಲ್ಲಿ ರಿಷಬ್ ಶೆಟ್ಟಿ ಅದ್ದೂರಿಯಾಗಿ ದೀಪಾವಳಿ ಹಬ್ಬ ಆಚರಿಸಿದ್ದಾರೆ. ಕರಾವಳಿ ಭಾಗದಲ್ಲಿ ದೀಪಾವಳಿ ಹಬ್ಬಕ್ಕೆ ಆಯುಧ





ಪೂಜೆ ಮಾಡುವ ಪದ್ಧತಿ ಇದೆ. ಅದರಂತೆ ಮನೆಯ ಅಂಗಳದಲ್ಲಿ ಸಾಲು ಸಾಲು ವಾಹನಗಳನ್ನ ಇಟ್ಟು ರಿಷಬ್ ಶೆಟ್ಟಿ ದಂಪತಿ ಪೂಜೆ ಮಾಡಿದ್ದಾರೆ. ತುಳಸಿಕಟ್ಟೆಗೆ ಪೂಜೆ ಸೇರಿದಂತೆ ಪಟಾಕಿ ಸಿಡಿಸಿ ಸಂಭ್ರಮಿಸಿದ್ದಾರೆ. ಮಕ್ಕಳ ಜೊತೆ ಸಮಯ ಕಳೆದಿದ್ದಾರೆ. ಆ ಫೋಟೋಗಳನ್ನ ಇದೀಗ ರಿಷಬ್ ದಂಪತಿ ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. 'ಬೆಳಕಿನ ಈ ಹಬ್ಬ ಪ್ರೀತಿ ಹಂಚುವ ಸುಂದರ ಕ್ಷಣಗಳು' ಎಂಬ ಸಾಲಿನೊಂದಿಗೆ ರಿಷಬ್ ಶೆಟ್ಟಿ ದೀಪಾವಳಿ ಆಚರಣೆಯ ಫೋಟೋಗಳನ್ನ ಶೇರ್ ಮಾಡಿದ್ದಾರೆ. ಈ ಬಾರಿ ಕೊಂಚ ಹೆಚ್ಚಾಗ್ಗೇ ಅದ್ದೂರಿಯಾಗಿ ಹಬ್ಬ ಆಚರಿಸಿರುವಂತೆ ಕಾಣುತ್ತಿದೆ.

ಕಾಂತಾರ ಗೆದ್ದ ಖುಷಿ

# ಶೋರೂಂ ಓಪನ್ ಮಾಡಲು ಸುದೀಪ್‌ಗೆ 50 ಲಕ್ಷ ರೂಪಾಯಿ ಆಫರ್

ಕಿಚ್ಚ ಸುದೀಪ್ ಸ್ಯಾಂಡಲ್‌ವುಡ್‌ನ ಜನಪ್ರಿಯ ಹಾಗೂ ಬ್ಯುಸಿ ನಟ. ಶೋರೂಂ ಉದ್ಘಾಟನೆಗೆ 50 ಲಕ್ಷ ರೂ. ಆಫರ್ ಬಂದರೂ, ಸುದೀಪ್ ಹಣಕ್ಕಿಂತ ಮಾನವೀಯ ಸಂಬಂಧಗಳಿಗೆ ಹೆಚ್ಚು ಬೆಲೆ ನೀಡುತ್ತಾರೆ. ಬಿಡುವಿಲ್ಲದ ವೇಳಾಪಟ್ಟಿಯ ನಡುವೆಯೂ ಹೊಸ ಸಿನಿ ತಂಡಗಳಿಗೆ ಬೆಂಬಲ ನೀಡಿ, ಪ್ರೋತ್ಸಾಹಿಸುತ್ತಾರೆ. ಅವರ ಈ ಸರಳತೆ ಮತ್ತು ಸಹಾಯ ಮನೋಭಾವ ಜನರಿಗೆ ಇಷ್ಟವಾಗಿದೆ. ಕಿಚ್ಚ ಸುದೀಪ್ ಅವರು ಸ್ಯಾಂಡಲ್‌ವುಡ್‌ನ ಬ್ಯುಸಿ ಹೀರೋ. ಅವರು ಕನ್ನಡದ ಜೊತೆಗೆ ಪರಭಾಷೆಯಲ್ಲೂ ಚಿರಪರಿಚಿತರು. ಹಿಂದಿ, ತೆಲುಗಿನಲ್ಲಿ ಅವರು ಸಿನಿಮಾ ಮಾಡಿದ್ದಾರೆ. 'ಈಗ' ಚಿತ್ರವಂತೂ ವಿಲನ್ ಆಗಿ ಸುದಿಪ್ ತುಂಬಾನೇ ಇಷ್ಟ ಆದರು. ಅವರಿಗೆ ಶೋರೂಂ ಉದ್ಘಾಟನೆ ಮಾಡಲು ಕೆಲವರು 50 ಲಕ್ಷ ರೂಪಾಯಿ ಕೊಡಲು ಕೂಡ ರೆಡಿ ಇದ್ದಾರೆ. ಆದರೆ, ಇದಕ್ಕೆ ಸುದೀಪ್ ಸೊಪ್ಪು ಹಾಕೋದಿಲ್ಲ. ಸುದೀಪ್ ಅವರು ಹೊಸ ಸಿನಿಮಾ ತಂಡಗಳ ಪೋಸ್ಟರ್ ಹಾಗೂ ಟ್ರೇಲರ್‌ಗಳನ್ನು ರಿಲೀಸ್ ಮಾಡುತ್ತಾರೆ. ತಮ್ಮ ಬ್ಯುಸಿಯಾದ ಶೆಡ್ಯೂಲ್ ಮಧ್ಯೆಯೂ ಸಮಯ ಮಾಡಿಕೊಂಡು ಅವರು ಬರುತ್ತಾರೆ ಮತ್ತು ತಂಡಕ್ಕೆ ವಿಶ್ ಮಾಡಿ ಹೋಗುತ್ತಾರೆ. ಈಗ ಸುದೀಪ್ ಅವರು ಒಂದು ಕಾರ್ ಶೋರೂಂ ಉದ್ಘಾಟನೆಗೆ ಹೋದರೆ 50 ಲಕ್ಷ ಕೊಡಲು ಕೆಲವರು ರೆಡಿ ಇದ್ದಾರಂತೆ.


ಸುದೀಪ್ ಅವರು ತಮ್ಮ ಮನಸ್ಸಿಗೆ ಯಾವುದು ಸರಿ ಎನಿಸಿತೋ ಅದನ್ನು ಮಾಡುತ್ತಾರೆ. ಅವರು ಹಣಕ್ಕಾಗಿ ಎಲ್ಲವನ್ನೂ ಮಾಡುವವರಲ್ಲ. ಆಪ್ತರು ಎನಿಸಿದರೆ ಅವರು ಫ್ರೀ ಆಗಿ ಬೇಕಿದ್ದರೂ ಕೆಲಸ ಮಾಡಿಕೊಡುತ್ತಾರೆ. ಈ ಬಗ್ಗೆ ವಿಷ್ಣುವರ್ಧನ್ ಅಭಿಮಾನಿಯಲ್ಲಿ ಒಬ್ಬರಾದ ವೀರಕಪುತ್ರ ಶ್ರೀನಿವಾಸ್ ಅವರು ಮಾತನಾಡಿದ್ದಾರೆ. ಸುದೀಪ್ ಇತ್ತೀಚೆಗೆ ಬ್ಯಾಕ್ ಟು ಬ್ಯಾಕ್ ಕಾರ್ಯಕ್ರಮಗಳಿಗೆ ತೆರಳುತ್ತಿದ್ದಾರೆ. ಇತ್ತೀಚೆಗೆ ಚಂದನ್ ಸಿನಿಮಾಗೆ ವಿಶ್ ಮಾಡಿದರು. ಆ ಬಳಿಕ ರಾಜೇಂದ್ರ ಸಿಂಗ್ ಬಾಬು ಅವರ ಚಿತ್ರರಂಗದಲ್ಲಿ 5 ದಶಕ ಕಳೆದ ಸಂಭ್ರಮ ಆಚರಿಸುವಲ್ಲಿ ಭಾಗಿ ಆದರು.



# ಭುವನ್ ಮದುವೆಯಲ್ಲಿ ಯಶ್ ಹವಾ

ಕೆಜಿಎಫ್ ಖ್ಯಾತಿಯ ಛಾಯಾಗ್ರಾಹಕ ಭುವನ್ ಗೌಡಗೆ ಕಂಕಣ ಬಲ ಕೂಡಿಬಂದಿದೆ. ನಿಖಿತಾ ಹೆಸರಿನ ಹುಡುಗಿ ಜೊತೆ ಭುವನ್ ಮದುವೆ ನಡೆದಿದೆ. ಬೆಂಗಳೂರು ಹೊರವಲಯದ ಖಾಸಗಿ ರೆಸಾರ್ಟ್‌ನಲ್ಲಿ ಮದುವೆ ನಡೆದಿದ್ದು ಯಶ್, ಶ್ರೀಲೀಲಾ, ಶ್ರೀನಿಧಿ ಶೆಟ್ಟಿ, ಗರುಡ ರಾಮ್, ಪ್ರಶಾಂತ್ ನೀಲ್ ಹಾಗೂ ನಟಿ ಆಶಾ ಭಟ್ ಸೇರಿದಂತೆ ಹಲವು ನಟ, ನಟಿಯರು ಮದುವೆಯಲ್ಲಿ ಉಪಸ್ಥಿತರಿದ್ದರು.

ಪ್ರಶಾಂತ್ ನೀಲ್ ಗರಡಿಯಲ್ಲಿ ಹೆಸರು ಮಾಡಿರುವ ಭುವನ್ ಗೌಡ ಸ್ಟಿಲ್ ಫೋಟೋಗ್ರಾಫರ್ ಆಗಿ ಸಿನಿಮಾ ಇಂಡಸ್ಟ್ರಿಗೆ ಕಾಲಿಟ್ಟವರು. ಇದೀಗ ವೃತ್ತಿಯ ಮಧ್ಯೆ ವೈಯಕ್ತಿಕ ಬದುಕಿಗೂ ಸಮಯ ಕೊಟ್ಟು ಮದುವೆಯಾಗಿದ್ದಾರೆ. ಕೆಲವೇ ಕೆಲವು ಆಪ್ತರನ್ನ ಭುವನ್ ಆಹ್ವಾನಿಸಿದ್ದರು ಎಂದು ಕೇಳಿಬಂದಿದೆ. ಪ್ರಾಥಮಿಕ ಮೂಲಗಳ ಪ್ರಕಾರ ಭುವನ್ ಕೈಹಿಡಿದ ಹುಡುಗಿ ಸಿನಿಮಾ ಇಂಡಸ್ಟ್ರಿಗೆ ಸಂಬಂಧಿಸಿದವರಲ್ಲ. ಉಗ್ರಂ ಚಿತ್ರದ ಮೂಲಕ ಪೂರ್ಣ ಪ್ರಮಾಣದ ಛಾಯಾಗ್ರಾಹಕರಾದ ಭುವನ್ ಗೌಡ ಮೊದಲ ಚಿತ್ರದಲ್ಲೇ ಸೈ ಎನ್ನಿಸಿಕೊಂಡ್ರು. ಬಳಿಕ ಕೆಜಿಎಫ್ ಸರಣಿ ಚಿತ್ರದ ಮೂಲಕ ವಿಶ್ವಮಟ್ಟದಲ್ಲಿ ಹೆಸರು ಮಾಡಿದ್ದಾರೆ. ಬಳಿಕ ಸಲಾರ್ ಇದೀಗ ಜೂ. ಎನ್‌ಟಿಆರ್ ಡ್ರಾಯಗನ್ ಚಿತ್ರಕ್ಕೂ ಇವರೇ ಛಾಯಾಗ್ರಾಹಕರು.



# ಗೆಲುವಿನೊಂದಿಗೆ ಆಸ್ಟ್ರೇಲಿಯಾಕ್ಕೆ ವಿದಾಯ ಹೇಳಿದ ರೋಹಿತ್, ಕೊಹ್ಲಿ

2-1ರಿಂದ ಕಳೆದುಕೊಂಡರೂ, ಕೊನೆಯ ಪಂದ್ಯವನ್ನು ಸಿಡ್ನಿಯಲ್ಲಿ ಗೆದ್ದುಕೊಂಡಿತು. ರೋಹಿತ್ ಶರ್ಮಾ ಶತಕ (ಅಜೇಯ) ಮತ್ತು ವಿರಾಟ್ ಕೊಹ್ಲಿ ಅರ್ಧಶತಕ (ಅಜೇಯ) ಬಾರಿಸಿ 168 ರನ್‌ಗಳ ಭರ್ಜರಿ ಜೊತೆಯಾಟವಾಡಿದರು. ಕ್ಲೀನ್ ಸ್ವೀಪ್ ಅವಮಾನದಿಂದ ಪಾರಾಗಲು ಈ ಗೆಲುವು ಭಾರತಕ್ಕೆ ಅನಿವಾರ್ಯವಾಗಿತ್ತು. ಈ ಗೆಲುವಿನೊಂದಿಗೆ ಭಾರತ ಪ್ರವಾಸವನ್ನು ಸಮಾಪ್ತಿಗೊಳಿಸಿದೆ. ಮೂರು ಪಂದ್ಯಗಳ ಏಕದಿನ ಸರಣಿಗಾಗಿ ಆಸ್ಟ್ರೇಲಿಯಾ ಪ್ರವಾಸ ಮಾಡಿದ್ದ ಭಾರತ ಏಕದಿನ ತಂಡಕ್ಕೆ ಸರಣಿ ಗೆಲ್ಲಲು ಸಾಧ್ಯವಾಗದಿದ್ದರೂ, ಸರಣಿಯ ಕೊನೆಯ ಪಂದ್ಯವನ್ನು ಗೆಲ್ಲುವ ಮೂಲಕ ಪ್ರವಾಸವನ್ನು ಅಂತ್ಯಗೊಳಿಸಿದೆ. ಮೊದಲೆರಡು ಪಂದ್ಯಗಳನ್ನು ಸೋತಿದ್ದ ಟೀಂ ಇಂಡಿಯಾ ಸರಣಿಯನ್ನು ಕಳೆದುಕೊಂಡಿತ್ತು. ಆದರೆ ಕ್ಲೀನ್ ಸ್ವೀಪ್ ಮುಜುಗರದಿಂದ ಪಾರಾಗಲು ಕೊನೆಯ ಪಂದ್ಯವನ್ನು ಗೆಲ್ಲಲೇಬೇಕಾಗಿತ್ತು. ಅದರಂತೆ ತಂಡವನ್ನು ಈ ಮುಜುಗರದಿಂದ ಪಾರು ಮಾಡುವ ಜವಾಬ್ದಾರಿ ಹೊತ್ತಿದ್ದ ಇಬ್ಬರು ಮಾಜಿ ನಾಯಕರಾದ ರೋಹಿತ್ ಶರ್ಮಾ ಹಾಗೂ ವಿರಾಟ್ ಕೊಹ್ಲಿ 168 ರನ್‌ಗಳ ಅಜೇಯ ಜೊತೆಯಾಟವನ್ನಾಡುವ ಮೂಲಕ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು. ಈ ವೇಳೆ ರೋಹಿತ್ ಅಜೇಯ ಶತಕ ಬಾರಿಸಿದರೆ, ಕೊಹ್ಲಿ ಅಜೇಯ ಅರ್ಧಶತಕದ ಇನ್ನಿಂಗ್ಸ್ ಆಡಿದರು.

ಸಿಡ್ನಿಯಲ್ಲಿ ನಡೆದ ಏಕದಿನ ಸರಣಿಯ ಕೊನೆಯ ಪಂದ್ಯದಲ್ಲಿ ಟೀಂ ಇಂಡಿಯಾ ಆಸ್ಟ್ರೇಲಿಯಾವನ್ನು 9 ವಿಕೆಟ್‌ಗಳಿಂದ ಏಕಪಕ್ಷೀಯವಾಗಿ ಸೋಲಿಸಿತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ 46.4 ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು 236 ರನ್ ಗಳಿಸಿತು.



ಆಸ್ಟ್ರೇಲಿಯಾ ವಿರುದ್ಧದ ಏಕದಿನ ಸರಣಿ

ಇದಕ್ಕೆ ಪ್ರತಿಯಾಗಿ, ರೋಹಿತ್ ಶರ್ಮಾ ಶತಕ ಮತ್ತು ಕೊಹ್ಲಿ ಅರ್ಧಶತಕ ಬಾರಿಸುವುದರ ಜೊತೆಗೆ, ಎರಡನೇ ವಿಕೆಟ್‌ಗೆ 168 ರನ್‌ಗಳ ಪಾಲುದಾರಿಕೆಯನ್ನು ಹಂಚಿಕೊಂಡರು. ಇದರ ಫಲವಾಗಿ ಭಾರತ ತಂಡವು 38.3 ಓವರ್‌ಗಳಲ್ಲಿ ಒಂದು ವಿಕೆಟ್ ಕಳೆದುಕೊಂಡು 237 ರನ್‌ಗಳ ಗುರಿ ಮುಟ್ಟಿತು. ಆದಾಗ್ಯೂ, ಆಸ್ಟ್ರೇಲಿಯಾ ಮೂರು ಪಂದ್ಯಗಳ ಸರಣಿಯನ್ನು 2-1 ರಿಂದ ಗೆದ್ದುಕೊಂಡಿತು. ಈ ಸರಣಿಯ ಆರಂಭದಿಂದಲೂ ಎಲ್ಲರ ದೃಷ್ಟಿ ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರ ಮೇಲಿತ್ತು. ಅಲ್ಲದೆ ಪ್ರತಿ ಪಂದ್ಯದಲ್ಲೂ ಅವರ ಪ್ರದರ್ಶನವು ಹೆಚ್ಚು ಚರ್ಚೆಯ ವಿಷಯವಾಗಿತ್ತು. ಪರಿಣಾಮವಾಗಿ, ಸರಣಿಯ ಫಲಿತಾಂಶಕ್ಕಿಂತ ಎರಡೂ ತಂಡಗಳ ಬ್ಯಾಟಿಂಗ್ ಪ್ರದರ್ಶನದ ಮೇಲೆ ಹೆಚ್ಚು ಗಮನವಿತ್ತು. ಅದಕ್ಕಾಗಿಯೇ, ಮೊದಲ ಎರಡು ಪಂದ್ಯಗಳಲ್ಲಿ ಸರಣಿಯ ಫಲಿತಾಂಶವನ್ನು ನಿರ್ಧರಿಸಲಾಗಿದ್ದರೂ, ಅಂತಿಮ ಪಂದ್ಯವು ಅಭಿಮಾನಿಗಳಿಗೆ ಹೆಚ್ಚಿನ ಮನರಂಜನೆಯನ್ನು ನೀಡಿತು. ಏಕೆಂದರೆ ವಿರಾಟ್ ಮತ್ತು ರೋಹಿತ್ ಶತಕದ ಜೊತೆಯಾಟ ನಡೆಸಿ ಪ್ರತಿಯೊಬ್ಬ ಅಭಿಮಾನಿಯ ಆಸೆಯನ್ನು ಈಡೇರಿಸಿದರು. ಅಂತಿಮವಾಗಿ ಆಸ್ಟ್ರೇಲಿಯಾ ಸರಣಿಯನ್ನು 2-1 ಅಂತರದಿಂದ ಗೆದ್ದಿತ್ತಾದರೂ ಅಭಿಮಾನಿಗಳು ಬಯಸಿದ್ದನ್ನು ನೀಡುವಲ್ಲಿ ರೋಹಿತ್, ಕೊಹ್ಲಿ ಯಶಸ್ವಿಯಾದರು. ಆಸ್ಟ್ರೇಲಿಯಾ ನೀಡಿದ 237 ರನ್‌ಗಳ ಗುರಿ ಬೆನ್ನಟ್ಟಿದ ಟೀಂ ಇಂಡಿಯಾಕ್ಕೆ ಈ ಬಾರಿ, ನಾಯಕ ಶುಭಮನ್ ಗಿಲ್ ಹಾಗೂ ರೋಹಿತ್ ಶರ್ಮಾ ಮೊದಲ ವಿಕೆಟ್‌ಗೆ 62 ಎಸೆತಗಳಲ್ಲಿ 69 ರನ್‌ಗಳ ಜೊತೆಯಾಟ ನೀಡಿದರು. ಗಿಲ್ ಔಟಾದ ನಂತರ, ಹಿಂದಿನ ಎರಡು ಪಂದ್ಯಗಳಲ್ಲಿ ಖಾತೆ ತೆರೆಯಲು ವಿಫಲರಾಗಿದ್ದ ವಿರಾಟ್ ಕೊಹ್ಲಿ ಕ್ರೀಸ್‌ಗೆ ಬಂದರು. ಆದರೆ ಈ ಬಾರಿ, ಕೊಹ್ಲಿ ಅದು ಸಂಭವಿಸದಂತೆ ತಡೆದು ಮೊದಲ ಎಸೆತದಲ್ಲಿ ಸಿಂಗಲ್ ತೆಗೆದುಕೊಳ್ಳುವ ಮೂಲಕ ಸಂಭ್ರಮಿಸಿದರು. ಅಲ್ಲಿಂದ, ಹಳೆಯ ದಿನಗಳನ್ನು ನೆನಪಿಸುವ ಈ ಇಬ್ಬರು ಅನುಭವಿಗಳು ಅದ್ಭುತ ಶತಕದ ಪಾಲುದಾರಿಕೆಯನ್ನು ರೂಪಿಸಿದರು.

# ಆಟಗಾರ್ತಿಯರಿಗೆ ಲೈಂಗಿಕ ಕಿರುಕುಳ

ಭಾರತದಲ್ಲಿ ನಡೆಯುತ್ತಿರುವ ಮಹಿಳಾ ವಿಶ್ವಕಪ್ ವೇಳೆ ಇಂದೋರ್‌ನಲ್ಲಿ ಆಸ್ಟ್ರೇಲಿಯಾ ಮಹಿಳಾ ಕ್ರಿಕೆಟಿಗರಿಗೆ ಲೈಂಗಿಕ ದೌರ್ಜನ್ಯ ನಡೆದಿದೆ. ಕೆಫೆಗೆ ತೆರಳುತ್ತಿದ್ದ ಇಬ್ಬರು ಆಟಗಾರ್ತಿಯರಿಗೆ ಬೈಕ್‌ನಲ್ಲಿ ಬಂದ ವ್ಯಕ್ತಿಯೊಬ್ಬ ಕಿರುಕುಳ ನೀಡಿದ್ದಾನೆ. ಕೂಡಲೇ ಎಫ್‌ಐಆರ್ ದಾಖಲಿಸಿ ಆರೋಪಿಯನ್ನು ಬಂಧಿಸಲಾಗಿದೆ. ಆಸ್ಟ್ರೇಲಿಯಾ ತಂಡಕ್ಕೆ ಭದ್ರತೆಯನ್ನು ಹೆಚ್ಚಿಸಲಾಗಿದ್ದು, ಈ ಘಟನೆಯು ವಿಶ್ವಕಪ್ ಭದ್ರತೆ ಬಗ್ಗೆ ಆತಂಕ ಮೂಡಿಸಿದೆ. ಭಾರತದಲ್ಲಿ ನಡೆಯುತ್ತಿರುವ ಮಹಿಳಾ ಏಕದಿನ ವಿಶ್ವಕಪ್‌ನಲ್ಲಿ ಅಜೇಯ ತಂಡವಾಗಿ



ಸೆಮಿಫೈನಲ್ ಪ್ರವೇಶಿಸಿರುವ ಆಸ್ಟ್ರೇಲಿಯಾ ಮಹಿಳಾ ತಂಡ ಲೀಗ್ ಸುತ್ತಿನಲ್ಲಿ ತನ್ನ ಕೊನೆಯ ಪಂದ್ಯವನ್ನು ದಕ್ಷಿಣ ಆಫ್ರಿಕಾ ವಿರುದ್ಧ ಆಡುತ್ತಿದೆ. ಆದರೆ ಆ ಪಂದ್ಯಕ್ಕೂ ಮುನ್ನ ಆಸೀಸ್ ತಂಡದ ಇಬ್ಬರು ಮಹಿಳಾ ಆಟಗಾರ್ತಿಯರ ಮೇಲೆ ಲೈಂಗಿಕ ದೌರ್ಜನ್ಯ ನಡೆದಿದೆ. ವಾಸ್ತವವಾಗಿ ಇಂದೋರ್‌ನ ಹೋಳ್ಕರ್ ಮೈದಾನದಲ್ಲಿ ತನ್ನ ಕೊನೆಯ ಲೀಗ್ ಪಂದ್ಯವನ್ನು ಆಡುವ ಸಲುವಾಗಿ ಆಸೀಸ್ ಮಹಿಳಾ ತಂಡ ಇಂದೋರ್‌ನ ಹೋಟೆಲ್‌ವೊಂದರಲ್ಲಿ ಉಳಿದುಕೊಂಡಿದೆ. ಈ ವೇಳೆ ತಂಡದ ಇಬ್ಬರು ಆಟಗಾರ್ತಿಯರು ಹೋಟೆಲ್‌ನಿಂದ ಕೆಫೆಗೆ ನಡೆದುಕೊಂಡು ಹೋಗುತ್ತಿದ್ದಾಗ, ಬೈಕ್‌ನಲ್ಲಿ ಬಂದ ವ್ಯಕ್ತಿಯೊಬ್ಬ ಅವರನ್ನು ಕೀಟಲೆ ಮಾಡಿದ್ದಲ್ಲದೆ, ಅನುಚಿತವಾಗಿ ವರ್ತಿಸಿದ್ದಾನೆ. ಇಂದೋರ್‌ನ ಹೋಟೆಲ್ ರಾಡಿಸನ್ ಬ್ಲೂನಿಂದ ಕೆಫೆಗೆ ಆಸೀಸ್ ತಂಡದ ಇಬ್ಬರು ಆಟಗಾರ್ತಿಯರು ನಡೆದುಕೊಂಡು ಹೋಗುತ್ತಿದ್ದಾಗ ಈ ಅಹಿತಕರ ಘಟನೆ ನಡೆದಿದೆ. ಈ ಘಟನೆಯಿಂದ ಭಯಭೀತರಾದ ಇಬ್ಬರೂ ಆಟಗಾರ್ತಿಯರು ಕೂಡಲೇ ಭದ್ರತಾ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಭದ್ರತಾ ಅಧಿಕಾರಿ ಡ್ಯಾನಿ ಸಿಮ್ಮನ್ಸ್ ಅವರ ದೂರಿನ ಆಧಾರದ ಮೇಲೆ, MIG ಪೊಲೀಸರು FIR ದಾಖಲಿಸಿದ್ದಾರೆ. ಗುರುವಾರ ಬೆಳಿಗ್ಗೆ 11 ಗಂಟೆ ಸುಮಾರಿಗೆ ಖಜ್ರಾನಾ ರಸ್ತೆಯಲ್ಲಿ ಈ ಘಟನೆ ನಡೆದಿದೆ.

ದೇಶವೇ ತಲೆ ತಗ್ಗಿಸುವಂತಹ ಕೆಲಸ

# ಒಂದೇ ಪಂದ್ಯದಲ್ಲಿ ಹಲವು ದಾಖಲೆ ಸೃಷ್ಟಿ

ಆಸ್ಟ್ರೇಲಿಯಾ ಪ್ರವಾಸವನ್ನು ಸತತ 2 ಸೊನ್ನೆಗಳೊಂದಿಗೆ ಆರಂಭಿಸಿದ್ದ ವಿರಾಟ್ ಕೊಹ್ಲಿ, ಸರಣಿಯ ಕೊನೆಯ ಪಂದ್ಯದಲ್ಲಿ ಖಾತೆ ತೆರೆಯುವಲ್ಲಿ ಕೊನೆಗೂ ಯಶಸ್ವಿಯಾದರು. ಮಾತ್ರವಲ್ಲದೆ ಅಜೇಯ ಅರ್ಧಶತಕದ ಇನ್ನಿಂಗ್ಸ್ ಆಡಿ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿದರು. ಈ ಪಂದ್ಯದಲ್ಲಿ 74 ರನ್ ಬಾರಿಸಿದ ಕೊಹ್ಲಿ ಹಲವು ದಾಖಲೆಗಳನ್ನು ಸೃಷ್ಟಿಸಿದರು.

ವಿರಾಟ್ ಕೊಹ್ಲಿ 82 ಶತಕ

ಮೂರನೇ ಏಕದಿನ ಪಂದ್ಯದಲ್ಲಿ ಶುಭ್‌ಮನ್ ಗಿಲ್ ಔಟಾದ ನಂತರ ವಿರಾಟ್ ಕೊಹ್ಲಿ ಮೈದಾನಕ್ಕೆ ಬಂದರು. ನಂತರ ಸಂಯಮದ ಇನ್ನಿಂಗ್ಸ್ ಆಡಿದ ಕೊಹ್ಲಿ 56 ಎಸೆತಗಳಲ್ಲಿ 4 ಬೌಂಡರಿಗಳ ಸಹಾಯದಿಂದ 50 ರನ್ ಗಳಿಸಿದರು. ಇದರೊಂದಿಗೆ, ವಿರಾಟ್ ಕೊಹ್ಲಿ ಆಸ್ಟ್ರೇಲಿಯಾ ವಿರುದ್ಧ ಏಕದಿನ ಕ್ರಿಕೆಟ್‌ನಲ್ಲಿ 2500 ರನ್‌ಗಳ ಗಡಿಯನ್ನು ತಲುಪಿದರು. ಹಾಗೆಯೇ ಈ ಅರ್ಧಶತಕ ಮೂಲಕ ವಿರಾಟ್ ಕೊಹ್ಲಿ, ಏಕದಿನ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ರನ್ ಗಳಿಸಿದ ಆಟಗಾರರ ಪಟ್ಟಿಯಲ್ಲಿ ಎರಡನೇ ಸ್ಥಾನಕ್ಕೇರಿದ್ದಾರೆ. ಇದುವರೆಗೆ ಆಡಿರುವ 293 ಪಂದ್ಯಗಳಲ್ಲಿ ಕೊಹ್ಲಿ 14235 ರನ್ ಗಳಿಸಿದ್ದಾರೆ. ಈ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿರುವ ಸಚಿನ್ ತೆಂಡೂಲ್ಕರ್ 18426 ರನ್‌ಗಳೊಂದಿಗೆ ಮೊದಲ ಸ್ಥಾನ, ಕುಮಾರ್ ಸಂಗಕ್ಕಾರ (14234) 3ನೇ ಸ್ಥಾನ, ರಿಕಿ ಪಾಂಟಿಂಗ್ (13704) 4ನೇ ಸ್ಥಾನ, ಸನತ್ ಜಯಸೂರ್ಯ (13430) ರನ್‌ಗಳೊಂದಿಗೆ ಐದನೇ ಸ್ಥಾನದಲ್ಲಿದ್ದಾರೆ.

ಏಕದಿನ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ಶತಕ ಪಾಲುದಾರಿಕೆಗಳ ಪಟ್ಟಿಯಲ್ಲಿ ವಿರಾಟ್ ಕೊಹ್ಲಿ ಎರಡನೇ ಸ್ಥಾನಕ್ಕೇರಿದ್ದಾರೆ. ಮಾಸ್ಟರ್ ಬ್ಲಾಸ್ಟರ್ ಸಚಿನ್ ತೆಂಡೂಲ್ಕರ್ 99 ಶತಕ ಪಾಲುದಾರಿಕೆಗಳೊಂದಿಗೆ ಈ ಪಟ್ಟಿಯಲ್ಲಿ ಮೊದಲ ಸ್ಥಾನದಲ್ಲಿದ್ದಾರೆ. ವಿರಾಟ್ ಕೊಹ್ಲಿ 82 ಶತಕ ಪಾಲುದಾರಿಕೆಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ. ರಿಕಿ ಪಾಂಟಿಂಗ್ 72, ರೋಹಿತ್ ಶರ್ಮಾ 68 ಮತ್ತು ಕುಮಾರ್ ಸಂಗಕ್ಕರ 67 ಶತಕ ಪಾಲುದಾರಿಕೆಗಳನ್ನು ಹಂಚಿಕೊಂಡಿದ್ದಾರೆ. ಏಕದಿನ ಕ್ರಿಕೆಟ್‌ನಲ್ಲಿ ಅತಿ ಹೆಚ್ಚು ಶತಕಗಳ ಪಾಲುದಾರಿಕೆ ಹೊಂದಿರುವವರ ಪಟ್ಟಿಯಲ್ಲಿ ರೋಹಿತ್ ಶರ್ಮಾ ಮತ್ತು ವಿರಾಟ್ ಕೊಹ್ಲಿ ಮೂರನೇ ಸ್ಥಾನ ತಲುಪಿದ್ದಾರೆ. ರೋಹಿತ್ ಮತ್ತು ವಿರಾಟ್ 101 ಪಂದ್ಯಗಳಲ್ಲಿ 19 ಶತಕಗಳ ಜೊತೆಯಾಟ ನಡೆಸಿದ್ದಾರೆ. ಸಚಿನ್ ತೆಂಡೂಲ್ಕರ್ ಮತ್ತು ಸೌರವ್ ಗಂಗೂಲಿ 176 ಏಕದಿನ ಪಂದ್ಯಗಳಲ್ಲಿ 26 ಶತಕ ಪಾಲುದಾರಿಕೆಗಳೊಂದಿಗೆ ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ.

ಸಿಡ್ನಿ ಏಕದಿನ ಪಂದ್ಯದಲ್ಲಿ ಮ್ಯಾಥ್ಯೂ ಶಾರ್ಟ್ ಕ್ಯಾಚ್ ಹಿಡಿಯುವ ಮೂಲಕ ವಿರಾಟ್ ಕೊಹ್ಲಿ ವಿಶ್ವ ದಾಖಲೆಯನ್ನು ಮುರಿದರು.



# ವಿಶೇಷ ಶತಕ ಪೂರೈಸಿದ ರೋಹಿತ್

ಸಿಡ್ನಿಯಲ್ಲಿ ನಡೆಯುತ್ತಿರುವ ಆಸ್ಟ್ರೇಲಿಯಾ ವಿರುದ್ಧದ ಮೂರನೇ ಏಕದಿನ ಪಂದ್ಯದಲ್ಲಿ ಟೀಂ ಇಂಡಿಯಾ ಮಾಜಿ ನಾಯಕ ರೋಹಿತ್ ಶರ್ಮಾ ಬ್ಯಾಟ್ ಹಿಡಿದು ಕ್ರೀಸ್‌ಗಿಳಿಯುವ ಮುನ್ನವೇ ವಿಶೇಷ ಶತಕ ಪೂರೈಸಿದ್ದಾರೆ.

ವಾಸ್ತವವಾಗಿ ರೋಹಿತ್ ಶರ್ಮಾ ಅಂತರರಾಷ್ಟ್ರೀಯ ಏಕದಿನ ಕ್ರಿಕೆಟ್‌ನಲ್ಲಿ 100 ಕ್ಯಾಚ್‌ಗಳನ್ನು ಪೂರೈಸಿದ್ದಾರೆ. ಈ ಮೂಲಕ ಈ ಸಾಧನೆ ಮಾಡಿದ ಏಳನೇ ಭಾರತೀಯ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಹಾಗೆಯೇ ರೋಹಿತ್ ಶರ್ಮಾ ಏಕದಿನ ಕ್ರಿಕೆಟ್‌ನಲ್ಲಿ 100 ಕ್ಯಾಚ್‌ಗಳನ್ನು ಪಡೆದ ವಿಶ್ವದ 34 ನೇ ಆಟಗಾರರಾಗಿದ್ದಾರೆ. ರೋಹಿತ್ ತಮ್ಮ 276 ನೇ ಏಕದಿನ ಪಂದ್ಯದಲ್ಲಿ ಕ್ಯಾಚ್‌ಗಳ ಶತಕವನ್ನು ಪೂರೈಸಿದರು.

ಸಿಡ್ನಿಯಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ ಮೂರನೇ ಏಕದಿನ ಪಂದ್ಯದಲ್ಲಿ ರೋಹಿತ್, ಸ್ಲಿಪ್‌ನಲ್ಲಿ ಮಿಚೆಲ್ ಓವನ್ ಮತ್ತು ನಾಥನ್ ಎಲಿಸ್ ಅವರ ಕ್ಯಾಚ್ ಅನ್ನು ಹಿಡಿಯುವ ಮೂಲಕ ಕ್ಯಾಚ್‌ಗಳ ಶತಕ ಪೂರೈಸಿದರು. ರೋಹಿತ್ ಶರ್ಮಾಗಿಂತ ಮೊದಲು, ಭಾರತದ ಪರ 100 ಅಥವಾ ಅದಕ್ಕಿಂತ ಹೆಚ್ಚು ಕ್ಯಾಚ್‌ಗಳನ್ನು ಪಡೆದ ದಾಖಲೆಯನ್ನು ವಿರಾಟ್ ಕೊಹ್ಲಿ, ಮೊಹಮ್ಮದ್ ಅಜರುದ್ದೀನ್, ಸಚಿನ್ ತೆಂಡೂಲ್ಕರ್, ರಾಹುಲ್ ದ್ರಾವಿಡ್, ಸುರೇಶ್ ರೈನಾ ಮತ್ತು ಸೌರವ್ ಗಂಗೂಲಿ ಹೊಂದಿದ್ದಾರೆ. ವಿರಾಟ್ ಏಕದಿನ ಕ್ರಿಕೆಟ್‌ನಲ್ಲಿ 163 ಕ್ಯಾಚ್‌ಗಳೊಂದಿಗೆ ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ.



# 4 ವಿಕೆಟ್ ಉರುಳಿಸಿದ ರಾಣಾ



ಸಿಡ್ನಿಯಲ್ಲಿ ನಡೆದ 3ನೇ ಏಕದಿನ ಪಂದ್ಯದಲ್ಲಿ ಆಸ್ಟ್ರೇಲಿಯಾ ಭಾರತಕ್ಕೆ 237 ರನ್‌ಗಳ ಗುರಿ ನೀಡಿತು. ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ 46.4 ಓವರ್‌ಗಳಲ್ಲಿ 236 ರನ್‌ಗಳಿಗೆ ಆಲೌಟ್ ಆಯಿತು. ಮ್ಯಾಟ್ ರೆನ್‌ಶಾ 56 ರನ್ ಗಳಿಸಿದರೆ, ಭಾರತದ ವೇಗಿ ಹರ್ಷಿತ್ ರಾಣಾ 4 ವಿಕೆಟ್ ಪಡೆದು ಮಿಂಚಿದರು. ಭಾರತಕ್ಕೆ 237 ರನ್ ಗಳಿಸಿದರೆ ಈ ಪಂದ್ಯ ಗೆಲ್ಲಲು ಸಾಧ್ಯ. ಹರ್ಷಿತ್ ಉತ್ತಮ ಬೌಲಿಂಗ್ ದಾಳಿಯಿಂದ ಆಸ್ಟ್ರೇಲಿಯಾ ಕಡಿಮೆ ಸ್ಕೋರ್‌ಗೆ ಆಲೌಟ್ ಆಯಿತು. ಸಿಡ್ನಿಯಲ್ಲಿ ನಡೆಯುತ್ತಿರುವ ಮೂರನೇ ಏಕದಿನ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ ಪೂರ್ಣ 50 ಓವರ್‌ಗಳನ್ನು ಆಡಲು ಸಾಧ್ಯವಾಗದೆ 46.4 ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು 236 ರನ್ ಕಲೆಹಾಕಿತು. ಆಸ್ಟ್ರೇಲಿಯಾ ಪರ ಮ್ಯಾಟ್ ರೆನ್‌ಶಾ ಅರ್ಧಶತಕ ಬಾರಿಸಿ 56 ರನ್‌ಗಳ ಗರಿಷ್ಠ ಇನ್ನಿಂಗ್ಸ್ ಆಡಿದರು. ಇತ್ತ ಭಾರತ ಪರ ವೇಗಿ ಹರ್ಷಿತ್ ರಾಣಾ ಅದ್ಭುತ ಪ್ರದರ್ಶನ ನೀಡಿ ನಾಲ್ಕು ವಿಕೆಟ್‌ಗಳನ್ನು ಕಬಳಿಸಿದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com, epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966